ಸಂಪುಟ: 22, ಸಂಚಿಕೆ: 44, ಪುಟಗಳು: 8, ಭಾನುವಾರ, 24 ನವೆಂಬರ್ 2024 RNI NO. KARKAN/2002/08054
epaper: www.sanjemugilu.com



ಸುದ್ದಿಗಳ ಹೊನಲು
# ಸಂಜೆ ಮುಗಿಲು
ಕನ್ನಡವೇ ಸತ್ಯ, ಕನ್ನಡವೇ ನಿತ್ಯ
ಕನ್ನಡ ಪ್ರಾದೇಶಿಕ ಸಂಜೆ ದಿನಪತ್ರಿಕೆ
ವೇಣು ಸಾರಥ್ಯದಲ್ಲಿ...
ಬೆಂಗಳೂರು। ಬೆಂಗಳೂರು ಗ್ರಾಮಾಂತರ। ಕೋಲಾರ। ಚಿಕ್ಕಬಳ್ಳಾಪುರ। ರಾಮನಗರ। ಮಂಡ್ಯ। ಮೈಸೂರು। ಚಾಮರಾಜನಗರ
₹3




**ಸುಭಾಷಿತ**

ಕೂಗಾಡಿದರೆ ಗೆದ್ದಂತೆ ಅಲ್ಲ, ಮೌನವಾಗಿದ್ದರೆ ಸೋತಂತೆಯೂ ಅಲ್ಲ; ಪರಿಸ್ಥಿತಿಗೆ ತಕ್ಕಂತೆ ವರ್ತಿಸುವುದು ಶ್ರೇಷ್ಟ ಗುಣ.

## ಪಂಚಾಂಗ

(ಭಾನುವಾರ 24, ನವೆಂಬರ್-2024)

- ಶ್ರೀ ಕ್ರೋಧಿನಾಮ ಸಂವತ್ಸರ,
- ಶರದ್ ಋತ್, ದಕ್ಷಿಣಾಯನ
- ಕಾರ್ತಿಕ ಮಾಸ, ಕೃಷ್ಣ ಪಕ್ಷ
- ನವಮಿ ತಿಥಿ, ಹುಬ್ಬಾ ನಕ್ಷತ್ರ
- ರಾಹುಕಾಲ : 04:24 ರಿಂದ 05:50
- ಗುಳಿಕಕಾಲ : 02:58 ರಿಂದ 04:24
- ಯಮಗಂಡಕಾಲ : 12:06 ರಿಂದ 01:32

## ಸಂಕ್ಷಿಪ್ತ ಸುದ್ದಿ

### ಬಸ್-ಆಟೋ ನಡುವೆ ಡಿಕ್ಕಿ, 7 ಮಂದಿ ಸಾವು, ಹಲವರಿಗೆ ಗಾಯ



**ಆಂಧ್ರಪ್ರದೇಶ:** ಆಂಧ್ರಪ್ರದೇಶದ ಅನಂತಪುರ ಜಿಲ್ಲೆಯಲ್ಲಿ ಆಂಧ್ರಪ್ರದೇಶ ರಾಜ್ಯ ರಸ್ತೆ ಸಾರಿಗೆ ಸಂಸ್ಥೆಯ ಬಸ್ ಆಟೋಗೆ ಡಿಕ್ಕಿ ಹೊಡೆದ ಪರಿಣಾಮ ಏಳು ಮಂದಿ ಸಾವನ್ನಪ್ಪಿದ್ದಾರೆ. ತಿಮ್ಮಂಪೇಟ ಸಮೀಪದ ಬಾಳೆ ತೋಟದಲ್ಲಿ ದಿನಗೂಲಿ ಕೆಲಸ ಮುಗಿಸಿ ವಾಪಸಾಗುತ್ತಿದ್ದ ವೇಳೆ ಗಾರ್ಲದಿನ್ನೆ ಮಂಡಲದ ತಳಗಾಸಿಪಲ್ಲಿ ಕ್ರಾಸ್ ಬಳಿ ಅಪಘಾತ ಸಂಭವಿಸಿದೆ.

ಮೃತರನ್ನು ಡಿ ನಾಗಮ್ಮ, ರಾಮಾಂಜಿನಮ್ಮ, ಬಾಲಪೆದ್ದಯ್ಯ ಮತ್ತು ಬಿ ನಾಗಮ್ಮ ಎಂದು ಗುರುತಿಸಲಾಗಿದೆ. ಗಾಯಗೊಂಡವರನ್ನು ಸಮೀಪದ ಆಸ್ಪತ್ರೆಗೆ ದಾಖಲಿಸಲಾಗಿದ್ದು, ಚಿಕಿತ್ಸೆ ನೀಡಲಾಗುತ್ತಿದೆ. ಸುಮಾರು 13 ಜನರು ಆಟೋ ರಿಕ್ಷಾದಲ್ಲಿ ಪ್ರಯಾಣಿಸುತ್ತಿದ್ದರು ಮತ್ತು ಅವರನ್ನು ಪುಟ್ಲೂರು ಮಂಡಲದ ಎಲುಟ್ಲ ಗ್ರಾಮದ ನಿವಾಸಿಗಳು ಎಂದು ಗುರುತಿಸಲಾಗಿದೆ.

ರಸ್ತೆ ಅಪಘಾತದ ಬಗ್ಗೆ ಆಘಾತ ವ್ಯಕ್ತಪಡಿಸಿರುವ ಮುಖ್ಯಮಂತ್ರಿ ಎನ್.ಚಂದ್ರಬಾಬು ನಾಯ್ಡು ಅವರು ಘಟನೆಗೆ ತೀವ್ರ ವಿಷಾದ ವ್ಯಕ್ತಪಡಿಸಿದ್ದಾರೆ. ಪುಟ 2

### ಕಾಡಾನೆ ಹಾವಳಿ ತಡೆಗೆ ಅಧಿವೇಶನದಲ್ಲಿ ಚರ್ಚಿಸಿ ಶಾಶ್ವತ ಪರಿಹಾರ



**ಚಿಕ್ಕಮಗಳೂರು:** ತಾಲೂಕಿನ ಕೆಲವೆಡೆ ಬೀಟಮ್ಮ ಗ್ಯಾಂಗಿನ ಹಾವಳಿಗೆ ಮಲೆನಾಡಿನ ಜನ ಕಂಗಾಲಾಗಿದ್ದಾರೆ. 20 ದಿನದಲ್ಲಿ ಆನೆಗಳ ಹಿಂಡಿನಿಂದ 30 ಲಕ್ಷ ರೂ. ಮೌಲ್ಯಕ್ಕೂ ಹೆಚ್ಚಿನ ಬೆಳೆಹಾನಿಯಾಗಿದೆ ಎಂದು ಅಂದಾಜಿಸಲಾಗಿದೆ.ಜನ ಮನೆಯಿಂದ ಹೊರಬರಲು ಸಹ ಹಿಂದೇಟು ಹಾಕುತ್ತಿದ್ದಾರೆ. ಮಾಲೀಕರು-ಕಾರ್ಮಿಕರು ತೋಟಗಳಿಗೂ ಹೋಗುತ್ತಿಲ್ಲ. ಪುಟ 2

## ಉಪಚುನಾವಣೆ ಫಲಿತಾಂಶ

# ಕೈ ಹಿಡಿದ ಸಿದ್ದರಾಮಯ್ಯ ತಂತ್ರ

**ಬೆಂಗಳೂರು:** ಕರ್ನಾಟಕ ಉಪಚುನಾವಣೆಯಲ್ಲಿ ಕಾಂಗ್ರೆಸ್ ಪಕ್ಷ ಕ್ಲೀನ್ ಸ್ವೀಪ್ ಮಾಡಿರುವುದು ಮುಖ್ಯಮಂತ್ರಿ ಸಿದ್ದರಾಮಯ್ಯನವರ ಕುರ್ಚಿಯನ್ನು ಭದ್ರಪಡಿಸಿದೆ! ಅವರ ರಾಜಕೀಯ ಕಾರ್ಯತಂತ್ರಗಳು, ವಿಶೇಷವಾಗಿ ಅಹಿಂದ (ಹಿಂದುಳಿದ ವರ್ಗಗಳು, ದಲಿತರು ಮತ್ತು ಅಲ್ಪಸಂಖ್ಯಾತರು) ಸಮುದಾಯವನ್ನು ಸೆಳೆಯುವಲ್ಲಿ ಅವರು ಮಾಡಿರುವ ತಂತ್ರಗಾರಿಕೆ ಈ ಯಶಸ್ಸಿನಲ್ಲಿ ನಿರ್ಣಾಯಕ ಪಾತ್ರ ವಹಿಸಿದೆ.

ಅಹಿಂದ ಸಮುದಾಯಗಳ ಬೆಂಬಲ ಪಡೆಯುವಲ್ಲಿ ಸಿದ್ದರಾಮಯ್ಯ ತಂತ್ರಗಾರಿಕೆ ಯಶಸ್ವಿಯಾಯಿತು. ಮುಡಾ ಹಗರಣ ಸಂಬಂಧ ಲೋಕಾಯುಕ್ತ ತನಿಖೆಗೆ ಹಾಜರಾಗಿರುವುದನ್ನೂ ಅವರು ತಮ್ಮ ಪರವಾಗಿ ಪರಿವರ್ತಿಸಿಕೊಂಡರು. ಇದನ್ನೇ ಮುಂದಿಟ್ಟುಕೊಂಡು ಚುನಾವಣೆ ಪ್ರಚಾರದ ಸಂದರ್ಭದಲ್ಲಿ ಸಿದ್ದರಾಮಯ್ಯ ನೇರವಾಗಿ ಅಹಿಂದ ವರ್ಗಗಳ ಮತ ಸೆಳೆಯುವ ನಿಟ್ಟಿನಲ್ಲಿ ಮಾತುಗಳನ್ನಾಡಿದರು. ತಮ್ಮನ್ನು ಸುಳ್ಳು ಪ್ರಕರಣದಲ್ಲಿ ಸಿಲುಕಿಸಲಾಗುತ್ತಿದೆ ಎಂದು ಬಿಂಬಿಸುವಲ್ಲಿ ಯಶಸ್ವಿಯಾದರು.

**ಬಿಜೆಪಿ, ಜೆಡಿಎಸ್‌ಗೆ ಹಿನ್ನಡೆಯಾದ ಟಾರ್ಗೆಟ್ ಸಿದ್ದರಾಮಯ್ಯ:** ಚುನಾವಣಾ ಪ್ರಚಾರದ ಅವಧಿಯುದ್ದಕ್ಕೂ, ಬಿಜೆಪಿ ಮತ್ತು ಜೆಡಿಎಸ್ ನಾಯಕರು ಸಿದ್ದರಾಮಯ್ಯನವರ ಮೇಲೆ ಪದೇ ಪದೇ ನೇರ ವಾಗ್ದಾಳಿ ನಡೆಸಿದರು. ಈ ಸವಾಲುಗಳ ನಡುವೆಯೂ ಸಿದ್ದರಾಮಯ್ಯ ಅವರ ರಾಜಕೀಯ ಚಾಣಾಕ್ಷತೆ ಮತ್ತು ತಂತ್ರಗಾರಿಕೆ ಮತದಾರ ಮನ ಮುಟ್ಟುವಲ್ಲಿ ಕೆಲಸ ಮಾಡಿತು.



**ಲಾಭವಾದ ಲೋಕಾಯುಕ್ತ ತನಿಖೆ:** ಚುನಾವಣಾ ಪ್ರಚಾರದ ಸಮಯದಲ್ಲೇ ಸಿದ್ದರಾಮಯ್ಯ ಲೋಕಾಯುಕ್ತ ತನಿಖೆಗೆ ಹಾಜರಾದರು. ಇದರ ಹೊರತಾಗಿಯೂ, ಅವರು ಹಿಂಜರಿಯಲಿಲ್ಲ ಮತ್ತು ತಮ್ಮ ವರ್ಚಸ್ಸಿನ ಮೇಲೆ ಯಾವುದೇ ಮಹತ್ವದ ಪರಿಣಾಮ ಬೀರದಂತೆ ನೋಡಿಕೊಂಡರು. ಶಿಗ್ಗಾಂವಿ ಹಾಗೂ ಸಂಡೂರು ಪ್ರಚಾರದ ವೇಳೆ, ತಾವು ಯಾವುದೇ ತಪ್ಪು ಮಾಡಿಲ್ಲ ಎಂದು ನಿರಂತರವಾಗಿ ಸಮರ್ಥಿಸಿಕೊಂಡಿದ್ದಲ್ಲದೆ, ತಮ್ಮ ವರ್ಚಸ್ಸನ್ನು ಉಳಿಸಿಕೊಳ್ಳುವಲ್ಲಿ ಸಫಲರಾದರು.

**ಮತದಾರರ ಭಾವನೆಗಳಿಗೆ ಮನವಿ:** ಶಿಗ್ಗಾಂವಿ ಹಾಗೂ ಸಂಡೂರು ಚುನಾವಣಾ ಪ್ರಚಾರದ ಸಮಯದಲ್ಲಿ ಸಮುದಾಯ ಸಭೆಗಳನ್ನು ಉದ್ದೇಶಿಸಿ ಮಾತನಾಡಿದಾಗಲೆಲ್ಲ ಸಿದ್ದರಾಮಯ್ಯ, ಭ್ರಷ್ಟಾಚಾರ ಮತ್ತು ಇತರ ಆಡಳಿತಾತ್ಮಕ ಸಮಸ್ಯೆಗಳ ಬಗ್ಗೆಯೇ ಚರ್ಚಿಸಿದರು. ಮುಡಾ ವಿಚಾರವಾಗಿ, ''ನಾನು ಯಾವುದೇ ತಪ್ಪು ಮಾಡಿಲ್ಲ, ಹಾಗಾಗಿ ನಾನು ಸಿಕ್ಕಿಬೀಳುವುದಿಲ್ಲ'' ಎಂದು ಪ್ರತಿಪಾದಿಸಿ ಜನರ ನಂಬಿಕೆ ಗಳಿಸುವಲ್ಲಿ ಯಶಸ್ವಿಯಾದರು. ಅವರ ಗಮನ ನೇರವಾಗಿ ಮತದಾರರನ್ನು ತಲುಪುವುದು ಮತ್ತು ಅವರ ಕಾಳಜಿಯನ್ನು ಪರಿಹರಿಸುವುದಾಗಿತ್ತು. ಇದು ಫಲಕೊಟ್ಟಿತು.

**ಹೈಕಮಾಂಡ್‌ಗೂ ಸಂದೇಶ ರವಾನೆ:** ಚುನಾವಣಾ ಫಲಿತಾಂಶಗಳು ಕರ್ನಾಟಕ ರಾಜಕೀಯದಲ್ಲಿ, ಸರ್ಕಾರದಲ್ಲಿ ಸಿದ್ದರಾಮಯ್ಯ ಸ್ಥಾನವನ್ನು ಇನ್ನಷ್ಟು ಬಲಪಡಿಸಿದೆ. ''ಜನರ ನ್ಯಾಯಾಲಯವು ಇತರ ಎಲ್ಲಾ ನ್ಯಾಯಾಲಯಗಳಿಗಿಂತ ಸರ್ವೋಚ್ಚವಾಗಿದೆ'' ಎನ್ನುವ ಮೂಲಕ ಸಿದ್ದರಾಮಯ್ಯ, ಹೈಕಮಾಂಡ್ ನಾಯಕರಿಗೂ ಸಂದೇಶ ನೀಡಿದ್ದಾರೆ. ತಮ್ಮ ವರ್ಚಸ್ಸು ಜನತೆಯ ಮುಂದೆ ಕಳಂಕ ರಹಿತವಾಗಿದೆ ಎಂಬ ಮೆಸೇಜ್ ರವಾನಿಸಿದ್ದಾರೆ.

**ಹಾಸನದಲ್ಲಿ ನಡೆಯಲಿದೆ ಬೃಹತ್ ಸಮಾವೇಶ:** ಆಡಳಿತ ನಡೆಸಲು ಶಕ್ತಿ ಕೊಡಿ ಎಂದು ಚುನಾವಣಾ ಪ್ರಚಾರದ ವೇಳೆ ಸಿದ್ದರಾಮಯ್ಯ ಜನತೆಯ ಮುಂದೆ ಕೇಳಿದ್ದರು. ಇದೀಗ ತನಗೆ ಶಕ್ತಿ ಇದೆ ಎಂಬುದನ್ನು ಮತ್ತೆ ಹೈಕಮಾಂಡ್ ಮುಂದೆ ಸಾಬೀತು ಮಾಡಲು ಹೊರಟಿದ್ದಾರೆ. ಚುನಾವಣೆ ಮುಗಿದರೂ ಸಿದ್ದರಾಮಯ್ಯ ಪರವಾಗಿ ಹಾಸನದಲ್ಲಿ ಬೃಹತ್ ಅಹಿಂದ ಸಮಾವೇಶ ನಡೆಸಲು ಕಾಂಗ್ರೆಸ್ ಮುಂದಾಗಿದೆ.

ಉಪಚುನಾವಣೆ ಫಲಿತಾಂಶವನ್ನೇ ಮುಂದಿಟ್ಟುಕೊಂಡು ಸಿದ್ದರಾಮಯ್ಯ ಅತ್ಯಾಪ್ತರು ಹಾಸನದಲ್ಲಿ ಬೃಹತ್ ಸಮಾವೇಶ ಮಾಡಲಿದ್ದಾರೆ. ಈ ಮೂಲಕ ತಮ್ಮ ಸ್ಥಾನಕ್ಕೆ ಕುಂದು ಬರದಂತೆ ಸಿದ್ದರಾಮಯ್ಯ ನೋಡಿಕೊಳ್ಳಲಿದ್ದಾರೆ ಎನ್ನಲಾಗಿದೆ.

## ಯೋಗೇಶ್ವರ್‌ಗೆ ಗೆಲುವು

### ಮದ್ದೂರಿನ ಹೊಳೆ ಆಂಜನೇಯನಿಗೆ ಹರಕೆ ತೀರಿಸಿದ ಸಿಪಿವೈ ಪತ್ನಿ



**ಮಂಡ್ಯ:** ಪ್ರತಿಷ್ಠೆಯ ಕಣವಾಗಿದ್ದ ಚನ್ನಪಟ್ಟಣದಲ್ಲಿ ಕಾಂಗ್ರೆಸ್ ಅಭ್ಯರ್ಥಿ ಭರ್ಜರಿ ಗೆಲುವು ಸಾಧಿಸಿದ ಹಿನ್ನೆಲೆಯಲ್ಲಿ ಸಿ.ಪಿ ಯೋಗೇಶ್ವರ್ ಪತ್ನಿ ಅವರಿಂದು ಮದ್ದೂರಿನ ಹೊಳೆ ಆಂಜನೇಯ ದೇಗುಲಕ್ಕೆ ಭೇಟಿ ನೀಡಿ ಹರಕೆ ತೀರಿಸಿದ್ದಾರೆ.

ಚುನಾವಣೆ ಪೂರ್ವದಲ್ಲೇ ದೇಗುಲಕ್ಕೆ ಭೇಟಿ ನೀಡಿದ್ದ ಕುಟುಂಬ ಸಿಪಿವೈ ಗೆಲುವಿಗಾಗಿ ಹರಕೆ ಕಟ್ಟಿಕೊಂಡಿತ್ತು. ಅದರಂತೆ ದೇವಸ್ಥಾನಕ್ಕೆ ಬಂದು ಹೊಳೆ ಆಂಜನೇಯನಿಗೆ ಒಂದೂಕಾಲು ರೂಪಾಯಿ ಕಟ್ಟಿ ಹರಕೆ ತೀರಿಸಿದ್ದಾರೆ. ಬಳಿಕ ದೀಪ ಹಚ್ಚಿ ವಿಶೇಷ ಪೂಜೆ ಸಲ್ಲಿಸಿದ್ದಾರೆ.

## ಅನಾಥವಾಯ್ತಾ ಯತ್ನಾಳ್ ಟೀಂ?

# ನಾಳೆಯ ವಕ್ಫ್ ಹೋರಾಟಕ್ಕೆ ಸ್ವಪಕ್ಷದವರೇ ಬರೋದು ಡೌಟ್!

**ಬೀದರ್:** ವಕ್ಫ್ ಬೋರ್ಡ್ ಆಸ್ತಿ ವಿವಾದ ರಾಜ್ಯಾದ್ಯಂತ ತೀವ್ರ ಚರ್ಚೆಗೆ ಗ್ರಾಸವಾಗಿದ್ದು, ಭಾರೀ ಸದ್ದು ಮಾಡುತ್ತಿದೆ. ಇದೀಗ ಈ ವಿವಾದ ರಾಜಕೀಯ ತಿರುವು ಪಡೆದುಕೊಂಡಿದೆ. ವಕ್ಫ್ ವಿರುದ್ಧ ಹೋರಾಟ ನಡೆಸುತ್ತಿರುವ ಬಿಜೆಪಿಯಲ್ಲಿಯೇ ಇದೀಗ ಮನೆಯೊಂದು ಎರಡು ಬಾಗಿಲು ಎಂಬಂತಾಗಿದೆ.



ಒಂದು ಕಡೆ ಬಿಜೆಪಿ ರಾಜ್ಯಾಧ್ಯಕ್ಷ ಬಿವೈ ವಿಜಯೇಂದ್ರ, ಅವರು ಮೂರು ತಂಡಗಳನ್ನು ರಚನೆ ಮಾಡಿ ರಾಜ್ಯಾದ್ಯಂತ ಪ್ರತಿಭಟನೆ ನಡೆಸುತ್ತಿದ್ದರೆ, ಮತ್ತೊಂದೆಡೆ ಯತ್ನಾಳ್ ಟೀಂ ಪ್ರತ್ಯೇಕ ಹೋರಾಟಕ್ಕೆ ಮುಂದಾಗಿದೆ. ಇದರಿಂದ ಎರಡೂ ಬಣಗಳಿಗೂ ಹಿನ್ನಡೆಯಾಗಬಹುದು ಎಂದು ಹೇಳಲಾಗುತ್ತಿದೆ.

ವಕ್ಫ್ ವಿವಾದ ಸಂಬಂಧ ರಾಜ್ಯದ ಹಲವು ಜಿಲ್ಲೆಗಳಲ್ಲಿ ಪ್ರತಿಭಟನೆಗಳು ನಡೆಯುತ್ತಿವೆ. ಬಿಜೆಪಿ ನಾಯಕರು ಕಾಂಗ್ರೆಸ್ ಆಡಳಿತದ ವಿರುದ್ಧ ಆಕ್ರೋಶ ಹೊರ ಹಾಕುತ್ತಿದ್ದಾರೆ. ಕೆಲ ಗ್ರಾಮಗಳ ರೈತರ ಜಮೀನು ವಕ್ಫ್ ಆಸ್ತಿ ಎಂದು ಪಹಣಿಯಲ್ಲಿ ಇದ್ದು, ಇದನ್ನ ಖಂಡಿಸಿ ಸರ್ಕಾರದ ವಿರುದ್ಧ ಇದೀಗ ರಾಜ್ಯಾದ್ಯಂತ ಪ್ರೊಟೆಸ್ಟ್ ನಡೆಯುತ್ತಿದೆ. ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಂದ ನಾಡಿನ ರೈತರಿಗೆ ಮೋಸ ಆಗಿದೆ ಎಂದು ಬಿಜೆಪಿ ರಾಜ್ಯಾಧ್ಯಕ್ಷ ಬಿವೈ ವಿಜಯೇಂದ್ರ ನೇತೃತ್ವದಲ್ಲಿ ರಾಜ್ಯಾದ್ಯಂತ ಹೋರಾಟ ನಡೆಸಲಾಗುತ್ತಿದೆ.

ರಾಜ್ಯದಲ್ಲಿ ಬಿಜೆಪಿ ವಕ್ಫ್ ವಿರುದ್ಧ ಹೋರಾಟ ಹಮ್ಮಿಕೊಂಡರೆ, ಯತ್ನಾಳ್ ಟೀಂ ಪ್ರತ್ಯೇಕ ಹೋರಾಟ ಹಮ್ಮಿಕೊಂಡಿದೆ. ಯತ್ನಾಳ್ ಟೀಂ ಬೀದರ್‌ನಿಂದ ಚಾಮರಾಜನಗರದವರೆಗೆ ಹೋರಾಟ ಜಾಥಾ ಹಮ್ಮಿಕೊಂಡಿದೆ. ಈ ನಡುವೆ 3 ತಂಡವಾಗಿ ವಕ್ಫ್ ವಿರುದ್ಧ ಬಿವೈ ವಿಜಯೇಂದ್ರ ತಂಡ ಜಾಗೃತಿ ಹೋರಾಟ ಹಮ್ಮಿಕೊಂಡಿದೆ. ಒಂದೇ ವಿಚಾರವಾಗಿ ಪಕ್ಷದಲ್ಲಿ ನಡೆಯುವ ಎರಡು ತಂಡಗಳ ಹೋರಾಟ ಸಾರ್ವಜನಿಕವಾಗಿ ಪಕ್ಷಕ್ಕೆ ಹಿನ್ನಡೆ ಉಂಟು ಮಾಡುವ ಸಾಧ್ಯತೆ ಇದೆ ಎಂದು ಹೇಳಲಾಗುತ್ತಿದೆ.

ನಾಳೆ ಗಡಿಜಿಲ್ಲೆ ಬೀದರ್‌ನಲ್ಲಿ ಯತ್ನಾಳ್ ನೇತೃತ್ವದಲ್ಲಿ ವಕ್ಫ್ ಹೋರಾಟ ಆರಂಭವಾಗಲಿದೆ. ಶಾಸಕ ಬಸನಗೌಡ ಪಾಟೀಲ್ ಯತ್ನಾಳ್ ಟೀಂ ಹೋರಾಟಕ್ಕೆ ಸ್ಥಳೀಯ ಬಿಜೆಪಿ ಶಾಸಕರ ಸಾಥ್ ಕೊಡೋದು ಬಹುತೇಕ ಡೌಟ್ ಎಂದು ಹೇಳಲಾಗುತ್ತಿದೆ. ಶಾಸಕರಾದ ಶರಣು ಸಲಗರ್, ಶೈಲೇಂದ್ರ ಬೆಲ್ದಾಳೆ, ಪ್ರಭು ಚೌಹಾಣ್ ಪ್ರತಿಭಟನೆಯಲ್ಲಿ ಭಾಗಿಯಾಗೋದು ಅನುಮಾನ ಅಂತಲೇ ಹೇಳಲಾಗಿದೆ. ಏಕೆಂದರೆ, ಈ ಮೂವರು ಮಾಜಿ ಸಿಎಂ ಯಡಿಯೂರಪ್ಪ, ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ ಅವರ ಆಪ್ತ ವಲಯದಲ್ಲಿ ಗುರುತಿಸಿಕೊಂಡಿದ್ದಾರೆ. ಹೀಗಾಗಿ, ಯತ್ನಾಳ್ ನೇತೃತ್ವದ ವಕ್ಫ್ ಹೋರಾಟಕ್ಕೆ ಬೆಂಬಲ ನೀಡುವುದು ಬಹುತೇಕ ಡೌಟ್ ಅಂತಲೇ ಹೇಳಲಾಗಿದೆ.

ಇದಕ್ಕೆ ಪುಷ್ಠಿ ನೀಡುವಂತೆ ಬಸವಕಲ್ಯಾಣ ಶಾಸಕ ಶರಣು ಸಲಗರ್ ಹೇಳಿಕೆ ನೀಡಿದ್ದು, ನಾವು ಈಗಾಗಲೇ ಈ ಹೋರಾಟ ಮುಗಿಸಿ ಬಂದಿದ್ದೇವೆ. ರಾಜ್ಯಾಧ್ಯಕ್ಷರಾದ ವಿಜಯೇಂದ್ರ ಅವರ ಸೂಚನೆ ಮೇರೆಗೆ ನಾನು ಹೋಗ್ತೀನಿ.

# ನಿಖಿಲ್ ಸೋತಿದ್ದಕ್ಕೆ ಆತ್ಮಹತ್ಯೆಗೆ ಯತ್ನಿಸಿದ ಅಭಿಮಾನಿ

**ರಾಮನಗರ:** ಚನ್ನಪಟ್ಟಣ ಉಪಚುನಾವಣೆಯಲ್ಲಿ ಜೆಡಿಎಸ್ ಅಭ್ಯರ್ಥಿ ನಿಖಿಲ್ ಕುಮಾರಸ್ವಾಮಿ ಸೋಲನುಭವಿಸಿದ್ದಕ್ಕೆ ಅವರ ಅಭಿಮಾನಿಯೊಬ್ಬರು ಆತ್ಮಹತ್ಯೆಗೆ ಯತ್ನಿಸಿದ್ದಾರೆ. ಸದ್ಯ ವ್ಯಕ್ತಿಗೆ ಮಂಡ್ಯದ ಆಸ್ಪತ್ರೆಯಲ್ಲಿ ಚಿಕಿತ್ಸೆ ನೀಡಲಾಗುತ್ತಿದೆ. ಚನ್ನಪಟ್ಟಣದ ಕೂಡ್ಲೂರು ಬಳಿಯ ಶ್ರೀರಾಂಪುರ ಗ್ರಾಮದ ಮಂಜುನಾಥ್ ಎಂಬ ವ್ಯಕ್ತಿಯೇ ಆತ್ಮಹತ್ಯೆಗೆ ಯತ್ನಿಸಿದವರು.



'ನಾನು ನಿಖಿಲ್ ಅಭಿಮಾನಿ, ನನ್ನ ಸಾವಿಗೆ ನಾನೇ ಕಾರಣ, ಜೈ ಜೆಡಿಎಸ್' ಎಂದು ಪತ್ರ ಬರೆದಿಟ್ಟು ಅವರು ವಿಷಸೇವನೆ ಮಾಡಿಕೊಂಡಿದ್ದಾರೆ.

ಸದ್ಯ ಪೊಲೀಸರು ಪ್ರಕರಣ ದಾಖಲಿಸಿ ತನಿಖೆ ನಡೆಸುತ್ತಿದ್ದಾರೆ. ಮಂಜುನಾಥ್ ಅವರನ್ನು ಮಂಡ್ಯದ ಆಸ್ಪತ್ರೆಗೆ ದಾಖಲಿಸಲಾಗಿದೆ.

ಕರ್ನಾಟಕದ ಮೂರು ಕ್ಷೇತ್ರಗಳಿಗೆ ನಡೆದ ಉಪಚುನಾವಣೆ ಫಲಿತಾಂಶ ಶನಿವಾರ ಪ್ರಕಟಗೊಂಡಿದ್ದು, ಮೂರೂ ಕ್ಷೇತ್ರಗಳಲ್ಲಿ ಕಾಂಗ್ರೆಸ್ ಗೆಲುವು ಸಾಧಿಸಿದೆ.

## ವಿಜಯೋತ್ಸವದ ವೇಳೆ ಅಗ್ನಿ ಅವಘಡ

# ನೂತನ ಶಾಸಕನಿಗೆ ಗಾಯ

**ಚಿಕ್ಕೋಡಿ/ಮುಂಬೈ:** ನೂತನ ಶಾಸಕನ ವಿಜಯೋತ್ಸವ ಸಂದರ್ಭದಲ್ಲಿ ಭಾರೀ ಅಗ್ನಿ ಅವಘಡ ಸಂಭವಿಸಿದ ಘಟನೆ ಮಹಾರಾಷ್ಟ್ರದ ಕೊಲ್ಲಾಪೂರ ಜಿಲ್ಲೆಯ ಮಹಗಾಂವ್ ಪಟ್ಟಣದಲ್ಲಿ ನಡೆದಿದೆ. ಚಂದಗಢ ವಿಧಾನಸಭಾ ಕ್ಷೇತ್ರದ ಬಿಜೆಪಿ ಬಂಡಾಯ ಅಭ್ಯರ್ಥಿ ಶಿವಾಜಿ ಪಾಟೀಲ್ ಅವರಿಗೆ ಅಭಿಮಾನಿಗಳು ಆರತಿ ಮಾಡುವ ಸಂದರ್ಭದಲ್ಲಿ ಈ ಅವಘಡ ಸಂಭವಿಸಿದೆ. ಆರತಿ ಮಾಡುವ ಸಂದರ್ಭದಲ್ಲಿ ಜೆಸಿಬಿ ಮೂಲಕ ಗುಲಾಲವನ್ನು (ಕೆಂಪು ಬಣ್ಣದ ಪುಡಿ) ಆರತಿ ಮೇಲೆ ಸುರಿಯಲಾಗಿದೆ. ಈ ವೇಳೆ ಏಕಾಏಕಿ ಭಾರೀ ಪ್ರಮಾಣದ ಬೆಂಕಿ ಹೊತ್ತಿದೆ.



## ನಿನ್ನ ನೋಡ್ಬೇಕು ಬಾ ಅಂತ ಕರೆಸಿ ಪ್ರಿಯತಮೆಯಿಂದ್ಲೇ

# ಪ್ರಿಯಕರನ ಕಿಡ್ನ್ಯಾಪ್

**ಬೆಂಗಳೂರು:** ಪ್ರಿಯತಮೆ ಮೀಟ್ ಮಾಡೋಕೆ ಬಂದಿದ್ದವನನ್ನ ಕಿಡ್ನ್ಯಾಪ್ ಮಾಡಿ ಸುಲಿಗೆ ಮಾಡಿ ಸಿನಿಮೀಯ ರೀತಿಯಲ್ಲಿ ತಗಲಾಕ್ಕೊಂಡ ಘಟನೆ ಬೆಂಗಳೂರಿನ ಕೋರಮಂಗಲ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ನಡೆದಿದೆ. ಪ್ರಿಯತಮೆಯೇ ಸುಲಿಗೆ ಹಿಂದಿನ ಕಿಂಗ್‌ಪಿನ್ ಎಂದು ತಿಳಿದು ಪ್ರಿಯಕರ ಬೆಚ್ಚಿಬಿದ್ದಿದ್ದಾನೆ.

» 5 ಲಕ್ಷ ಸುಲಿಗೆ!

**ಪ್ರಿಯತಮೆ ಸ್ಕೆಚ್ ಹಾಕಿದ್ದು ಹೇಗೆ?:** ಆಂಧ್ರಪ್ರದೇಶದ ನೆಲ್ಲೂರಿನಲ್ಲಿ ಶಿವ ಮತ್ತು ಮೋನಿಕಾ ಇಬ್ಬರೂ ಪರಸ್ಪರ ಪ್ರೀತಿಸುತ್ತಿದ್ದರು. ಎಲ್ಲವೂ ಚೆನ್ನಾಗಿಯೇ ಇತ್ತು. ಹೀಗಿರುವಾಗ ಶಿವನಿಗೆ ಕರೆ ಮಾಡಿ ನನ್ನ ಸ್ನೇಹಿತರು ನಿನ್ನ ನೋಡಬೇಕಂತೆ, ನಿನ್ನ ಹತ್ರ ಇರುವ ಚಿನ್ನಾಭರಣ ಹಾಕ್ಕೊಂಡು, ಇನ್ನೋವಾ ಕಾರಿನಲ್ಲಿ ಬಾ ಅಂತಾ ಫೋನ್ ಮಾಡಿದ್ಲು. ಮೋನಿಕಾ ಮಾತು ನಂಬಿದ ಪ್ರಿಯಕರ 60 ಗ್ರಾಂ ಚಿನ್ನಾಭರಣದ ಜೊತೆಗೆ ಇನ್ನೋವಾ ಕಾರಿನಲ್ಲಿ ಬಂದಿದ್ದಾನೆ.

ಈ ವೇಳೆ ಮೋನಿಕಾ ಅಂಡ್ ಗ್ಯಾಂಗ್ ಶಿವನನ್ನ ಕಿಡ್ನ್ಯಾಪ್ ಮಾಡಿ ಮೈಮೇಲಿದ್ದ ಚಿನ್ನಾಭರಣ ದೋಚಿ 10 ಲಕ್ಷ ರೂ. ಹಣಕ್ಕೆ ಬೇಡಿಕೆ ಇಟ್ಟಿದ್ದಾರೆ. ಆದ್ರೆ ಪ್ರಿಯತಮೆ ಶಿವನಿಗೆ 5 ಲಕ್ಷ ರೂ. ಕೊಡೋಕೆ ಒಪ್ಪಿಸಿದ್ದಳು. ಎಟಿಎಂ ಕಾರ್ಡ್ ಬೆಂಗಳೂರಿನ ಮೆಜೆಸ್ಟಿಕ್ ಅಡ್ರೆಸ್‌ಗೆ ಕೋರಿಯರ್ ಮಾಡಿಸಿಕೊಡು ಕೋರಮಂಗಲಕ್ಕೆ ಹಣ ಡ್ರಾ ಮಾಡಿಕೊಳ್ಳೋಕೆ ಬಂದಿದ್ದರು. ಆದ್ರೆ, ಕೋರಮಂಗಲದ ಎಟಿಎಂನಲ್ಲಿ ಹಣ ಡ್ರಾ ಮಾಡುವ ವೇಳೆ ಆರೋಪಿಗಳ ಮಧ್ಯೆ ಗಲಾಟೆ ನಡೆದಿದೆ. ಪುಟ 2



# ಅಂಬರೀಶ್ ಪುಣ್ಯಸ್ಮರಣೆ

## ಮರಳಿ ಬಂದಿದ್ದೀರಿ ಎಂದ ಸುಮಲತಾ

**ಬೆಂಗಳೂರು:** ಅಂಬರೀಶ್ ಅವರ ಪುಣ್ಯಸ್ಮರಣೆ ಇಂದು (ನವೆಂಬರ್ 24), 2018 ರ ಇದೇ ದಿನಾಂಕದಂದು ಅಂಬರೀಶ್ ಅವರು ಬೆಂಗಳೂರಿನ ವಿಕ್ರಂ ಆಸ್ಪತ್ರೆಯಲ್ಲಿ ಕೊನೆ ಉಸಿರೆಳೆದಿದ್ದರು. ಅಂಬರೀಶ್ ಅಗಲಿ ಇಂದಿಗೆ ಆರು ವರ್ಷಗಳಾಗಿದ್ದು, ಇಂದಿಗೂ ಸಹ ಅಭಿಮಾನಿಗಳು ಹಾಗೂ ಕುಟುಂಬದವರ ಮನದಲ್ಲಿ ಅಂಬರೀಶ್ ನೆಲೆಸಿದ್ದಾರೆ. ಅಂಬರೀಶ್ ಅವರ ಆರನೇ ವರ್ಷದ ಪುಣ್ಯ ಸ್ಮರಣೆ ಆದ ಇಂದು, ಪತ್ನಿ ಸುಮಲತಾ ಅವರು ಅಂಬರೀಶ್ ಅವರನ್ನು ನೆನಪು ಮಾಡಿಕೊಂಡಿದ್ದಾರೆ.

ಫೇಸ್ ಬುಕ್ ನಲ್ಲಿ ಪೋಸ್ಟ್ ಹಂಚಿಕೊಂಡಿರುವ ಸುಮಲತಾ, 'ನಿಮ್ಮ ಪ್ರೀತಿ, ನಿಮ್ಮ ಇರುವಿಕೆ ಶಾಶ್ವತ ಸದಾ ಜನರ ಮಧ್ಯೆ ಇದ್ದು ಸ್ಪಂದನೀಯ ವ್ಯಕ್ತಿತ್ವದೊಂದಿಗೆ ನಮ್ಮೊಂದಿಗಿದ್ದ ಡಾ. ಅಂಬರೀಶ್ ಅವರ ಪುಣ್ಯ ಸ್ಮರಣೆಯಂದು ಅವರನ್ನು ಗೌರವ, ಪ್ರೀತಿ, ಭಕ್ತಿಪೂರ್ವಕವಾಗಿ ಸ್ಮರಿಸುತ್ತಿದ್ದೇನೆ. ನಾಡು, ನುಡಿಗೆ ಅವರು ಸಲ್ಲಿಸಿದ ಸೇವೆಗಳು, ಅವರು ಕಲಿಸಿದ ಜೀವನ ಪಾಠಗಳು ಸದಾ ನಮ್ಮನ್ನು ಕಾಯಲಿವೆ, ಅವರಿಗೆ ಜನಮಾನಸದಲ್ಲಿ ದೊರಕುತ್ತಿರುವ ಅಭಿಮಾನ ನಮ್ಮ ಕುಟುಂಬಕ್ಕೆ ನಿರಂತರ ಆಶೀರ್ವಾದ. ಇದಕ್ಕೆ ನಾವೆಲ್ಲಾ ಚಿರಋಣಿ' ಎಂದಿದ್ದಾರೆ.



# ಇಂದು ಐಪಿಎಲ್ ಹರಾಜು

## ಪಂತ್, ರಾಹುಲ್, ಅಯ್ಯರ್‌ಗೆ ಜಾಕ್‌ಪಾಟ್?

**ಜೆಡ್ಡಾ:** 2025ರ ಐಪಿಎಲ್ ಆವೃತ್ತಿಯ ಆಟಗಾರರ ಮೆಗಾ ಹರಾಜು ಪ್ರಕ್ರಿಯೆ ಭಾನುವಾರ ಪ್ರಾರಂಭಗೊಳ್ಳಲಿದೆ. ಸೌದಿ ಅರೇಬಿಯಾದ ಜೆಡ್ಡಾ ಮತ್ತು ಅಬಾಡಿ ಅಲ್ -ಜೋಹರ್ ಅರೆನಾದಲ್ಲಿ ಇಂದು (ನ.24) ಮತ್ತು ನಾಳೆ (ನ.25) ಹರಾಜು ಪ್ರಕ್ರಿಯೆ ನಡೆಯಲಿದೆ.

ಒಂದು ಫ್ರಾಂಚೈಸಿ ಕನಿಷ್ಠ 18 ರಿಂದ 25 ಆಟಗಾರರನ್ನು ಒಳಗೊಳ್ಳಬಹುದಾಗಿದ್ದು, ಒಟ್ಟು 577 ಆಟಗಾರರು ಕಣದಲ್ಲಿದ್ದಾರೆ. 10 ಐಪಿಎಲ್ ತಂಡಗಳು ಒಟ್ಟು 641.5 ಕೋಟಿ ರೂ. ಹಣವನ್ನು ಹರಾಜಿನಲ್ಲಿ ವಿನಿಯೋಗಿಸಲಿದೆ. ಸುಮಾರು 204 ಮಂದಿ ಆಟಗಾರರು ಆರಿಸಲ್ಪಡುವ ಸಾಧ್ಯತೆ ಇದೆ. ವಿಕೆಟ್ ಕೀಪರ್ ಬ್ಯಾಟ್ಸ್‌ಮನ್‌ಗಳಾದ ರಿಷಬ್ ಪಂತ್, ಕೆ.ಎಲ್ ರಾಹುಲ್ ಮತ್ತು ಶ್ರೇಯಸ್ ಅಯ್ಯರ್ ಹೆಚ್ಚಿನ ಮೊತ್ತಕ್ಕೆ ಖರೀದಿಸಲ್ಪಡುವ ಆಟಗಾರರ ಪೈಕಿ ಮುಂಚೂಣಿಯಲ್ಲಿ ಇದ್ದಾರೆ.



ಅದರಲ್ಲಿಯೂ ಮುಖ್ಯವಾಗಿ ರಿಷಬ್ ಪಂತ್ ಅತ್ಯಧಿಕ ಮೊತ್ತವನ್ನು ಬುಟ್ಟಿಗೆ ಹಾಕಿಕೊಳ್ಳುವ ಸಾಧ್ಯತೆಯನ್ನು ಐಪಿಎಲ್ ಪರಿಣಿತರು ವ್ಯಕ್ತಪಡಿಸಿದ್ದಾರೆ. ಇತ್ತೀಚೆಗೆ ನ್ಯೂಜಿಲೆಂಡ್ ವಿರುದ್ಧದ ಟೆಸ್ಟ್ ಪಂದ್ಯದಲ್ಲಿ ಪಂತ್ ಪ್ರದರ್ಶನವೂ ಈ ಜನಪ್ರಿಯತೆಗೆ ಕಾರಣವಾಗಿದೆ. ಶತಾಯ ಗತಾಯ ಪಂತ್ ಅವರನ್ನ ಚೆನ್ನೈ ಸೂಪರ್ ಕಿಂಗ್ಸ್ ಹಾಗೂ ಕೆ.ಎಲ್ ರಾಹುಲ್‌ರನ್ನ ಆರ್‌ಸಿಬಿ ಖರೀದಿಸುವ ಪ್ರಯತ್ನ ನಡೆದಿದೆ. ಪುಟ 2

## ಹಣಬಲ, ಅಧಿಕಾರ ಬಲದಿಂದ ಕಾಂಗ್ರೆಸ್ ಮುಂದೆ ಇದೆ

**ಬೆಂಗಳೂರು:** ಉಪುಚುನಾವಣೆಯಲ್ಲಿ ಹಣಬಲ, ಅಧಿಕಾರ ಬಲದಿಂದ ಕಾಂಗ್ರೆಸ್ ಮುಂದೆ ಇದೆ ಎಂದು ವಿಪಕ್ಷ ನಾಯಕ ಆರ್.ಅಶೋಕ್ ಕಿಡಿಕಾರಿದ್ದಾರೆ.



ನಗರದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಎರಡು ಕ್ಷೇತ್ರದಲ್ಲಿ ಪ್ರಾರಂಭದಲ್ಲಿ ಫೈಟ್ ಇತ್ತು. ಆದರೆ ಈಗಿನ ಟ್ರೆಂಡ್ ಸಮಾಧಾನಕಾರ ಇಲ್ಲ. ಹಣಬಲ, ಅಧಿಕಾರ ಬಲದಿಂದ ಕಾಂಗ್ರೆಸ್ ಮುಂದೆ ಇದೆ. ಶಿಗ್ಗಾಂವಿಯಲ್ಲಿ ಗೆಲ್ಲುತ್ತೇವೆ ಎಂದುಕೊಂಡಿದ್ದೆವು. ಆದರೆ ಹಿನ್ನಡೆಯಾಗಿದೆ ಎಂದು ಅಸಮಾಧಾನ ವ್ಯಕ್ತಪಡಿಸಿದರು.

ರಾಜ್ಯದ ಉಪಚುನಾವಣೆಯಲ್ಲಿ ಬಿಜೆಪಿಗೆ ಹಿನ್ನಡೆ ವಿಚಾರವಾಗಿ ಮಾತನಾಡಿ, ಈ ಫಲಿತಾಂಶ ನಮಗೆ ಸಮಾಧಾನ ತಂದಿಲ್ಲ. ಜೆಡಿಎಸ್, ನಮ್ಮ ಕಾರ್ಯಕರ್ತರು ಒಟ್ಟಿಗೆ ಕೆಲಸ ಮಾಡಿದ್ದಾರೆ. ಆಡಳಿತ ಪಕ್ಷ ಕಾಂಗ್ರೆಸ್ ಇದ್ದರಿಂದ ಮೇಲುಗೈ ಸಾಧಿಸಿದ್ದಾರೆ. ಈ ಹಿಂದೆ ನಾವು ಉಪಚುನಾವಣೆಯಲ್ಲಿ ಗೆದ್ದಿದ್ದೆವು. ಶಿಗ್ಗಾಂವಿಯಲ್ಲಿ ಮುಸ್ಲಿಂ ವೋಟ್‌ಗಳು ಕಾಂಗ್ರೆಸ್‌ಗೆ ವರದಾನವಾಗಿದೆ. ಬೊಮ್ಮಾಯಿ ಅವರು ಮಗ ಭರತ್‌ನನ್ನು ನಿಲ್ಲಿಸಲ್ಲ ಎಂದು ಹೇಳಿದ್ದರು. ಆದರೆ ಪಕ್ಷದ ಕೇಂದ್ರ ನಾಯಕರ ಒತ್ತಾಯದ ಮೇಲೆ ಮಗನನ್ನ ನಿಲ್ಲಿಸಿದ್ದರು ಎಂದು ತಿಳಿಸಿದರು. ಮಹಾರಾಷ್ಟ್ರ, ಜಾರ್ಖಂಡ್ ಫಲಿತಾಂಶ ವಿಚಾರವಾಗಿ ಮಾತನಾಡಿ, ಮಹಾರಾಷ್ಟ್ರದಲ್ಲಿ ಕಾಂಗ್ರೆಸ್ ಗೆಲ್ಲುತ್ತದೆ ಎಂದು ಬೊಬ್ಬೆ ಹೊಡೆಯುತ್ತಿದ್ದರು. ಅಲ್ಲಿನ ಜನ ಕಾಂಗ್ರೆಸ್‌ನ್ನು ತಿರಸ್ಕಾರ ಮಾಡಿದ್ದಾರೆ. ಜಾರ್ಖಂಡ್‌ನಲ್ಲಿ ಕಾಂಗ್ರೆಸ್ ಸರ್ಕಾರವಿಲ್ಲ. ಸದ್ಯ ಬಿಜೆಪಿಗೆ ಮೇಲಗೈ ಸಿಗುತ್ತಿಲ್ಲ. ಮೋದಿಯವರ ಹವಾ ಎಲ್ಲ ಕಡೆಯಿದೆ ಎಂದರು.

## ದರ್ಶನ್ ಗ್ಯಾಂಗ್ ವಿರುದ್ಧ 1200 ಪುಟಗಳ ಹೆಚ್ಚುವರಿ ಚಾರ್ಜ್ ಶೀಟ್ ಸಲ್ಲಿಕೆ



**ಬೆಂಗಳೂರು:** ರೇಣುಕಾ ಸ್ವಾಮಿ ಕೊಲೆ ಪ್ರಕರಣಕ್ಕೆ ಸಂಬಂಧಿಸಿದಂತೆ 1300 ಪುಟಗಳ ಹೆಚ್ಚುವರಿ ಚಾರ್ಜ್ ಶೀಟ್ ಸಲ್ಲಿಕೆಯಾಗಿದೆ. ನಟ ದರ್ಶನ್ ಹಾಗೂ ಗ್ಯಾಂಗ್‌ನಿಂದ ರೇಣುಕಾಸ್ವಾಮಿ ಕೊಲೆ ಪ್ರಕರಣಕ್ಕೆ ಸಂಬಂಧಿಸಿದಂತೆ ಇಂದು ಸಿಸಿಹೆಚ್ 57 ನ್ಯಾಯಾಲಯಕ್ಕೆ ಸಲ್ಲಿಕೆಯಾಗಿದೆ. ತನಿಖಾಧಿಕಾರಿ ಎಸಿಪಿ ಚಂದನ್ ಕುಮಾರ್ ನ್ಯಾಯಾಲಯಕ್ಕೆ ಆಗಮಿಸಿ ಚಾರ್ಜ್ ಶೀಟ್ ಸಲ್ಲಿಕೆ ಮಾಡಿದರು.

ಬರೋಬ್ಬರಿ 1300 ಪುಟಗಳ ಈ ಚಾರ್ಜ್ ಶೀಟ್‌ನಲ್ಲಿ ವಿಧಿ ವಿಜ್ಞಾನ ಪ್ರಯೋಗಾಲಯದ ವರದಿ, ಕೆಲ ಸಾಕ್ಷ್ಯಗಳ ಹೇಳಿಕೆಗಳು, ಪುನೀತ್ ಮೊಬೈಲ್‌ನಿಂದ ರಿಟ್ರೀವ್ ಮಾಡಲಾದ 8 ಪೋಟೋಗಳು ಸೇರಿದಂತೆ ಮಹತ್ವದ ದಾಖಲೆಗಳನ್ನು ಸೇರಿಸಿ ಸಲ್ಲಿಕೆ ಮಾಡಲಾಗಿದೆ.

# ಯಡಿಯೂರಪ್ಪ, ಪುತ್ರ ವ್ಯಾಮೋಹದಿಂದ ಬಿಜೆಪಿ ಸೋತಿದೆ

**ಚಿಕ್ಕೋಡಿ:** ಯಡಿಯೂರಪ್ಪ ಮತ್ತು ಪುತ್ರ ವ್ಯಾಮೋಹದಿಂದ ಬಿಜೆಪಿ ಸೋತಿದೆ. ಇನ್ನಾದರೂ ಹೈಕಮಾಂಡ್ ಈ ಬಗ್ಗೆ ಗಂಭೀರ ಚರ್ಚೆ ಮಾಡಬೇಕು ಎಂದು ಬಿಜೆಪಿ ಶಾಸಕ ಬಸನಗೌಡ ಪಾಟೀಲ್ ಯತ್ನಾಳ್ ಉಪಚುನಾವಣೆ ಸೋಲಿಗೆ ಬೇಸರ ವ್ಯಕ್ತಪಡಿಸಿದರು.



ಕಬ್ಬೂರು ಗ್ರಾಮದಲ್ಲಿ ಹೇಳಿಕೆ ನೀಡಿದ ಯತ್ನಾಳ್, ಯಡಿಯೂರಪ್ಪ ಮತ್ತು ಪುತ್ರ ವ್ಯಾಮೋಹದಿಂದ ಬಿಜೆಪಿ ಸೋತಿದೆ. ಇನ್ನಾದರೂ ಹೈಕಮಾಂಡ್ ಗಂಭೀರ ಚರ್ಚೆ ಮಾಡಬೇಕು. ಹೈಕಮಾಂಡ್‌ಗೆ ಸರಿಯಾದ ಮಾಹಿತಿ ನೀಡುವ ಉಸ್ತುವಾರಿಗಳನ್ನ ಕಳಿಸಬೇಕು ಎಂದು ಸಲಹೆ ನೀಡಿದರು.

ವಿಜಯೇಂದ್ರ, ನಾಯಕತ್ವವನ್ನ ಜನ ತಿರಸ್ಕಾರ ಮಾಡಿದ್ದಾರೆ. ವಿಜಯೇಂದ್ರ ಅವರಿಗೆ ಸ್ವಾಭಿಮಾನ ಇದ್ದರೆ ಅವರೇ ರಾಜೀನಾಮೆ ನೀಡಬೇಕು. ವಿಜಯೇಂದ್ರ ನಾಚಿಕೆಗೇಡಾಗಿದ್ದರೆ ಬಿಜೆಪಿ ರಾಜ್ಯಾಧ್ಯಕ್ಷರಾಗಿ ಮುಂದುವರೆಯಲಿ ಎಂದು ಹರಿಹಾಯ್ದರು.

ಭರತ ಬೊಮ್ಮಾಯಿ ಸೋಲು ನಿಜಕ್ಕೂ ಆಘಾತ ತಂದಿದೆ. ರೌಡಿಯನ್ನ ಜನ ಆಯ್ಕೆ ಮಾಡಿದ್ದಾರೆ. ಜನರ ತೀರ್ಪು ಬಿಜೆಪಿ ನಾಯಕತ್ವ ಬದಲಾವಣೆ ಆಗಬೇಕು ಎನ್ನುವುದಿದೆ. ಹೊಸ ನಾಯಕತ್ವ ರಾಜ್ಯಕ್ಕೆ ಮತ್ತು ಬಿಜೆಪಿಗೆ ಬೇಕಿದೆ. ಕಾಂಗ್ರೆಸ್ ಪಕ್ಷಕ್ಕೆ ಸಾರ್ವತ್ರಿಕ ಚುನಾವಣೆಯಲ್ಲಿ ಜನ ಪಾಠ ಕಲಿಸುತ್ತಾರೆ ಎಂದು ಗುಡುಗಿದ್ದಾರೆ.

ನಿಖಿಲ್ ಕುಮಾರಸ್ವಾಮಿ ಸೋಲು ದುರ್ದೈವ. ಯೋಗೇಶ್ವರ ಅವರಿಗೆ ಟಿಕೆಟ್ ಕೊಡುವಂತೆ ನಾನು ಹೇಳಿದ್ದೆ. ಪಾಪ ಕೊನೆಯ ವರೆಗೂ ಯೋಗೇಶ್ವರ್ ಬಿಜೆಪಿ ಪರ ಒಲವು ತೋರಿದ್ದರು. ಜನ ಯೋಗೇಶ್ವರ್ ಕೆಲಸ ಮಾಡಿದ್ದನ್ನ ನೋಡಿ ಗೆಲ್ಲಿಸಿದ್ದಾರೆ. ಕುಮಾರಸ್ವಾಮಿ ಅವರು ಮುಂದೆ ಯೋಚನೆ ಮಾಡಿ ಪಕ್ಷ ಸಂಘಟನೆ ಮಾಡಬೇಕು. ಇನ್ನಾದರೂ ಬಿಜೆಪಿ, ಜೆ.ಪಿ.ನಡ್ಡಾ ಅವರು ಕಣ್ಣು ತೆರೆಯಬೇಕು ಎಂದು ಹೇಳಿದರು.

ವಕ್ಫ್ ಹೋರಾಟ ಈಗ ಆರಂಭವಾಗಿದೆ. ಪ್ರತಿಯೊಂದು ಜಿಲ್ಲೆಯಲ್ಲಿ ಜಾಗೃತಿ ಮೂಡಿಸುತ್ತೇವೆ. ಕಾಂಗ್ರೆಸ್ ಗೆದ್ದರೆ ಮುಂದೆ ರೈತರ ಜಮೀನು ಕೂಡ ಹೋಗುತ್ತವೆ. ಹೈಕಮಾಂಡ್ ಬಳಿ ವಿಜಯೇಂದ್ರ ವಿರುದ್ಧ ನಿಯೋಗ ತೆರಳುತ್ತಿವೆ. ಕೇವಲ ವಿಜಯೇಂದ್ರ, ಯಡಿಯೂರಪ್ಪ ಅವರಿಗೆ ಅಪಾಯಿಟ್‌ಮೆಂಟ್ ಕೊಟ್ಟರೆ ಹೀಗೆ ಆಗೋದು. ಬಿಜೆಪಿ ಹೈಕಮಾಂಡ್ ಬಳಿ ಅಪ್ಪ-ಮಕ್ಕಳ ಬಗ್ಗೆ ಹೇಳುತ್ತೇವೆ ಎಂದು ಹರಿಹಾಯ್ದರು.

## ಸಂಡೂರು ಸೋಲನ್ನ ಒಪ್ಪಿಕೊಳ್ತೇವೆ, 2028ಕ್ಕೆ ಬಂಗಾರು ಗೆಲ್ತಾರೆ

**ಬಳ್ಳಾರಿ:** ಸಂಡೂರು ಸೋಲನ್ನು ಒಪ್ಪಿಕೊಳ್ಳುತ್ತೇವೆ. ಈ ರೀತಿಯಲ್ಲಿ ಸೋಲುತ್ತೇವೆ ಎಂದು ಅಂದುಕೊಂಡಿರಲಿಲ್ಲಾ ಎಂದು ಶಾಸಕ ಜನಾರ್ದನ ರೆಡ್ಡಿ ಬೇಸರ ವ್ಯಕ್ತಪಡಿಸಿದ್ದಾರೆ.



ಸಂಡೂರು ಉಪಚುನಾವಣೆಯಲ್ಲಿ ಬಿಜೆಪಿ ಸೋಲನ್ನು ಅನುಭವಿಸಿದ ಬಳಿಕ ಸುದ್ದಿಗೋಷ್ಠಿ ನಡೆಸಿ ಮಾತನಾಡಿದ ಅವರು, 5 ಸಾವಿರ ಮತಗಳಿಂದ ನಾವು ಗೆಲ್ಲುತ್ತೇವೆ ಅಂತ ಇತ್ತು. ಆದರೆ 9 ಸಾವಿರಕ್ಕೂ ಹೆಚ್ಚು ಅಂತರದಿಂದ ಕಾಂಗ್ರೆಸ್‌ಗೆ ಗೆಲುವಾಗಿದೆ. ಸಿಎಂ ಸಿದ್ದರಾಮಯ್ಯ ಪಂಚಾಯತ್ ಲೆವಲ್‌ನಲ್ಲಿ ಪ್ರಚಾರ ಮಾಡಿದ್ದಾರೆ. 100 ಕೋಟಿಗೂ ಹೆಚ್ಚು ಹಣ ಖರ್ಚು ಮಾಡಿದ್ದಾರೆ. ಹಣ, ಅಧಿಕಾರ ದುರುಪಯೋಗ ಮಾಡಿಕೊಂಡಿದ್ದಾರೆ. ಸಂಡೂರು ಸರ್ಕಲ್ ಇನ್ಸ್‌ಪೆಕ್ಟರ್, ಮಹೇಶ್ ಗೌಡ ಸೇರಿದಂತೆ ಅನೇಕ ಪೊಲೀಸರ ದುರ್ಬಳಕೆ ಆಗಿದೆ. ಸಂಡೂರು ಜನರ 83 ಸಾವಿರ ಮತಗಳು ಬಂಗಾರು ಹನುಮಂತು ಅವರಿಗೆ ಬಂದಿವೆ ಎಂದರು.

ನಮಗೆ ಇನ್ನೂ 5 ಸಾವಿರ ಮತಗಳು ನಮಗೆ ಬೇಕಿತ್ತು. ಸಿಎಂ ಸಿದ್ದರಾಮಯ್ಯ ಅವರು ಬಂದು ಕ್ಯಾಂಪೇನ್ ಮಾಡಿದ್ದಾರೆ. ಹಣದ ಹೊಳೆ ಹಂಚಿದ್ದಾರೆ. ಅಧಿಕಾರ ದುರುಪಯೋಗ ಆಗಿದೆ. ವಾಲ್ಮೀಕಿ ಹಗರಣ, ಮುಡಾ ಹಗರಣ ಇವೆಲ್ಲವೂ ಇವತ್ತು ಕೆಲಸ ಮಾಡಿದೆ. ತುಕಾರಾಂ ಅವರಿಗೆ ಎಂಪಿ ಚುನಾವಣೆಯಲ್ಲಿ ಲೀಡ್ ಎಷ್ಟಿತ್ತು, ಈಗ ಎಷ್ಟಿದೆ ನೋಡಿ. 83 ಸಾವಿರ ಮತಗಳು ನಮಗೆ ಬಂದಿವೆ. 30-40 ಸಾವಿರ ಮತಗಳ ಅಂತರದಿಂದ ನಾವು ಸೋತಿಲ್ಲಾ. ನಮಗೆ 5,000 ಮತಗಳು ಬೇಕಿತ್ತು. ರಾಜ್ಯದಲ್ಲಿ ಮೂರು ಕಡೆ ಕಾಂಗ್ರೆಸ್ ಬಂದಿದೆ. ಅಧಿಕಾರ ದುರುಪಯೋಗ ಮಾಡಲಾಗಿದೆ. ಆಡಳಿತ ಪಕ್ಷ ಇರೋ ಸಮಯದಲ್ಲಿ ಸಹಜವಾಗಿ ಆ ಪಕ್ಷ ಗೆಲ್ಲುತ್ತದೆ ಎಂದು ಹೇಳಿದರು. ಉಪಚುನಾವಣೆಯಲ್ಲಿ ಆಡಳಿತ ಪಕ್ಷ ಹಣಬಲ, ತೋಳಬಲ ಉಪಯೋಗಿಸುವುದು ಸರ್ವೇ ಸಾಮಾನ್ಯ. ಉಪಚುನಾವಣೆ, ಜನರಲ್ ಎಲೆಕ್ಷನ್‌ಗೆ ಹೋಲಿಕೆ ಮಾಡಲು ಆಗಲ್ಲ. ಮೂರು ಕ್ಷೇತ್ರಗಳಲ್ಲಿ ಮತದಾನದ ಮುಂಚೆ ದಿನ ಗೃಹಲಕ್ಷ್ಮೀ ಯೋಜನೆಯ ಹಣ ಹಾಕಿದ್ದರು. ಗ್ಯಾರಂಟಿ ಯೋಜನೆಯ ಹಣ ರಾಜ್ಯದ ಎಲ್ಲಾ ಜಿಲ್ಲೆಗಳಿಗೆ ಹಾಕದೇ ಕೇವಲ ಮೂರು ಕ್ಷೇತ್ರಗಳಿಗೆ ಹಾಕಿದ್ದರು. ನೂರಾರು ಕೋಟಿ ಹಣ ಚೆಲ್ಲಿದ್ದಾರೆ. 2028ರಲ್ಲಿ ಬಂಗಾರು ಗೆಲ್ಲುತ್ತಾರೆ ಎಂದು ವಿಶ್ವಾಸ ವ್ಯಕ್ತಪಡಿಸಿದರು.

## ಮೂರೂ ಕ್ಷೇತ್ರಗಳ ಸೋಲಿನಿಂದ ನಮಗೆ ನಿರಾಸೆ ಆಗಿರೋದು ಸತ್ಯ

**ಬೆಂಗಳೂರು:** ಉಪಚುನಾವಣೆಯಲ್ಲಿ ಮೂರು ಕ್ಷೇತ್ರಗಳಲ್ಲೂ ಬಿಜೆಪಿ ಸೋಲನುಭವಿಸಿರುವುದಕ್ಕೆ ನಮಗೆ ನಿರಾಸೆ ಆಗಿರುವುದು ಸತ್ಯ ಎಂದು ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ಬೇಸರ ವ್ಯಕ್ತಪಡಿಸಿದರು.



ಸೋಲಿನ ಬಗ್ಗೆ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಕರ್ನಾಟಕದಲ್ಲಿ ಮೂರೂ ಕ್ಷೇತ್ರಗಳಲ್ಲೂ ನಮಗೆ ಹಿನ್ನಡೆ ಆಗಿದೆ. ಶಿಗ್ಗಾಂವಿ, ಸಂಡೂರಿನಲ್ಲಿ ಬಿಜೆಪಿ ಗೆಲ್ಲುವ ವಿಶ್ವಾಸ ಇತ್ತು. ಆದರೆ, ನಿರಾಸೆ ಆಯ್ತು ಎಂದು ತಿಳಿಸಿದರು.

ಮೂರೂ ಕ್ಷೇತ್ರಗಳ ಸೋಲಿನ ಬಗ್ಗೆ ಎರಡೂ ಪಕ್ಷಗಳ ನಾಯಕರು ಚರ್ಚೆ ಮಾಡ್ತೇವೆ. ನಮಗೆ ನಿರಾಸೆ ಆಗಿರೋದು ಸತ್ಯ. ಲೋಪಗಳೇನು ಆಯ್ತು ಅಂತ ಚರ್ಚೆ ಮಾಡ್ತೇವೆ ಎಂದರು.

ಸಂಡೂರಿನಲ್ಲಿ ಇದೇ ಮೊದಲ ಬಾರಿ 80 ಸಾವಿರ ಮತ ಬಿಜೆಪಿಗೆ ಸಿಕ್ಕಿದೆ. 8-10 ಸಾವಿರ ಮತಗಳ ಅಂತರದಲ್ಲಿ ಗೆಲ್ಲುವ ವಿಶ್ವಾಸ ಇತ್ತು. ಸಂಡೂರು ಫಲಿತಾಂಶ ಹಿನ್ನಡೆ ಅಂತ ನಾವು ಭಾವಿಸುವುದಿಲ್ಲ ಎಂದು ಹೇಳಿದರು.

ಶಿಗ್ಗಾಂವಿ ಫಲಿತಾಂಶ ಆಘಾತ ತಂದಿದೆ. ಬೊಮ್ಮಾಯಿ ಸುಪುತ್ರ ಸ್ಪರ್ಧೆ ಮಾಡಿದ್ರು, ಎಲ್ರೂ ಶ್ರಮ ಹಾಕಿದ್ವಿ. ಸೋಲಿಗೆ ಕಾರಣ ಹುಡುಕ್ತೇವೆ ಎಂದರು. ಇದೇ ವೇಳೆ, ಮಹಾರಾಷ್ಟ್ರದಲ್ಲಿ ನಮ್ಮ ನಿರೀಕ್ಷೆ ಮೀರಿ 200 ಕ್ಕೂ ಹೆಚ್ಚು ಸ್ಥಾನ ಗೆದ್ದಿದ್ದೇವೆ. ಮತ್ತೊಮ್ಮೆ ಮೋದಿಯವರ ನಾಯಕತ್ವಕ್ಕೆ ವಿಶ್ವಾಸ ಇಟ್ಟಿದ್ದಾರೆ ಜನ ಎಂದು ಸಂತಸ ವ್ಯಕ್ತಪಡಿಸಿದರು.

## ಜನರಿಗಾಗಿ ದುಡಿಯುವ ನಮ್ಮ ಸಂಕಲ್ಪಕ್ಕೆ ಚುನಾವಣಾ ಫಲಿತಾಂಶ ಇನ್ನಷ್ಟು ಬಲ ನೀಡಿದೆ

**ಬೆಂಗಳೂರು:** ವಿಧಾನಸಭಾ ಉಪಚುನಾವಣೆ ಫಲಿತಾಂಶ ಪ್ರಕಟವಾದ ಬೆನ್ನಲ್ಲೇ ಸಿಎಂ ಸಿದ್ದರಾಮಯ್ಯ ತಮ್ಮ ಎಕ್ಸ್ ಖಾತೆಯಲ್ಲಿ ಗೆಲುವಿನ ಸಂಭ್ರಮಕ್ಕೆ ಪ್ರತಿಕ್ರಿಯೆ ನೀಡಿದ್ದಾರೆ.



**ಸಿಎಂ ಪೋಸ್ಟ್‌ನಲ್ಲಿ ಏನಿದೆ?:** ವಿಧಾನಸಭಾ ಉಪಚುನಾವಣೆಯಲ್ಲಿ ಕಾಂಗ್ರೆಸ್ ಪಕ್ಷದ ಅಭ್ಯರ್ಥಿಗಳಿಗೆ ಮತನೀಡಿ, ಆಶೀರ್ವದಿಸಿದ ಶಿಗ್ಗಾಂವಿ, ಸಂಡೂರು ಹಾಗೂ ಚನ್ನಪಟ್ಟಣದ ಮತದಾರರಿಗೆ ನನ್ನ ಪ್ರೀತಿಪೂರ್ವಕ ಧನ್ಯವಾದಗಳು.

ಈ ಮೂರೂ ಕ್ಷೇತ್ರಗಳಲ್ಲಿ ಭರ್ಜರಿ ಜಯ ದಾಖಲಿಸಿ, ವಿಧಾನಸಭೆಗೆ ಪ್ರವೇಶಿಸಿರುವ ನಮ್ಮ ಅಭ್ಯರ್ಥಿಗಳಾದ ಯಾಸಿರ್ ಅಹ್ಮದ್ ಖಾನ್ ಪಠಾಣ್, ಅನ್ನಪೂರ್ಣ ತುಕಾರಾಮ್ ಹಾಗೂ ಸಿ.ಪಿ.ಯೋಗೇಶ್ವರ್ ಅವರಿಗೆ ಹೃದಯಪೂರ್ವಕ ಅಭಿನಂದನೆಗಳು. ವಿಪಕ್ಷಗಳ ನಿರಂತರ ಅಪಪ್ರಚಾರ, ಸುಳ್ಳು ಆರೋಪಗಳನ್ನು ಮೆಟ್ಟಿನಿಂತು ನಾವು ಸಾಧಿಸಿರುವ ಈ ಗೆಲುವು ದಿಗ್ವಿಜಯವಾಗಿ ಕಾಣುತ್ತಿದೆ. ಈ ಗೆಲುವಿನ ಹಿಂದಿರುವ ನಮ್ಮ ಕಾರ್ಯಕರ್ತರು ಮತ್ತು ಮುಖಂಡರ ಅಪಾರ ಶ್ರಮವನ್ನು ಇದೇ ವೇಳೆ ನೆನೆಯುತ್ತೇನೆ. ಈ ಗೆಲುವು ನಮ್ಮ ಸರ್ಕಾರದ ಮೇಲಿನ ಜವಾಬ್ದಾರಿಯನ್ನು ಮತ್ತಷ್ಟು ಹೆಚ್ಚಿಸಿದೆ. ಜನರಿಗಾಗಿ ದುಡಿಯುವ ನಮ್ಮ ಸಂಕಲ್ಪಕ್ಕೆ ಚುನಾವಣಾ ಫಲಿತಾಂಶ ಇನ್ನಷ್ಟು ಬಲ ತುಂಬಿದೆ. ತಮ್ಮೆಲ್ಲರಿಗೂ ಮತ್ತೊಮ್ಮೆ ಧನ್ಯವಾದಗಳು ಎಂದು ಬರೆದುಕೊಂಡಿದ್ದಾರೆ.

## ಮುಂದೆ ಬಿವೈವಿ ನೇತೃತ್ವದಲ್ಲಿ 135 ಸ್ಥಾನ ಗೆಲ್ತೀವಿ: ರೇಣುಕಾಚಾರ್ಯ

**ದಾವಣಗೆರೆ:** ರಾಜ್ಯದ ಮೂರು ಕ್ಷೇತ್ರಗಳಲ್ಲಿ ನಡೆದ ಉಪಚುನಾವಣೆಯಲ್ಲಿ ಕಾಂಗ್ರೆಸ್ ಭ್ರಷ್ಟಾಚಾರದ ಹಣ ಬಲ, ತೋಳ್ ಬಲ, ಅಧಿಕಾರದ ಬಲದಿಂದ ಗೆದ್ದಿದೆ ಎಂದು ಮಾಜಿ ಸಚಿವ ಎಂ.ಪಿ ರೇಣುಕಾಚಾರ್ಯ ಆರೋಪಿಸಿದ್ದಾರೆ.



ದಾವಣಗೆರೆಯಲ್ಲಿ ಸುದ್ದಿಗಾರರೊಂದಿಗೆ ಅವರು ಮಾತನಾಡಿದರು. ಈ ವೇಳೆ, ಜನಾದೇಶ ನಮ್ಮ ವಿರುದ್ಧ ಇದೆ ಎಂದು ನಾನು ಹೇಳೋದಿಲ್ಲ. ಅವರು ಲೂಟಿ ಹೊಡೆದ ಹಣ ಚೆಲ್ಲಿ ಚುನಾವಣೆ ಗೆದಿದ್ದಾರೆ. ನಮ್ಮ ಕಾರ್ಯಕರ್ತರು ಹಾಗೂ ಮುಖಂಡರು ಯಾರೂ ಕೂಡ ಮನಸ್ಸಿಗೆ ನೋವು ಮಾಡಿಕೊಳ್ಳಬಾರದು. ಸೋಲೇ ಗೆಲುವಿನ ಮೆಟ್ಟಿಲು. ರಾಜ್ಯದಲ್ಲಿ ಮುಂದೆ ವಿಜಯೇಂದ್ರ ಅವರ ನೇತೃತ್ವದಲ್ಲಿ 135 ಸ್ಥಾನ ಗೆಲ್ತೀವಿ ಎಂದು ವಿಶ್ವಾಸ ವ್ಯಕ್ತಪಡಿಸಿದ್ದಾರೆ. ಇದೇ ವೇಳೆ 2023ರ ಚುನಾವಣೆಯಲ್ಲಿ ಬಿಜೆಪಿ ಸೋತ ವಿಚಾರವಾಗಿ, ವಿಧಾನಸೌಧದ ಹೊರಗೆ ಒಳಗೆ ನಾಲಗೆ ಹರಿಬಿಟ್ಟಿದ್ರು, ಅವರೇ ಚುನಾವಣೆಯ ಸೋಲಿಗೆ ಕಾರಣ. ವಿಜಯೇಂದ್ರ ಅವರನ್ನು ನೇಮಕ ಮಾಡಿದ್ದು ಹೈಕಮಾಂಡ್. ವಿಜಯೇಂದ್ರ ಅವರನ್ನು ವಿರೋಧ ಮಾಡುವುದು ಒಂದೇ ಹೈಕಮಾಂಡ್‌ನ ವಿರುದ್ಧ ಮಾತನಾಡುವುದು ಒಂದೇ ಎಂದು ಯತ್ನಾಳ್ ವಿರುದ್ಧ ಪರೋಕ್ಷವಾಗಿ ವಾಗ್ದಾಳಿ ನಡೆಸಿದ್ದಾರೆ.

ಕಾಂಗ್ರೆಸ್ ನಿಂದ ಬಂದ ಮೂರ್ನಾಲ್ಕು ಜನ ಯಡಿಯೂರಪ್ಪ ಅವರ ಬಗ್ಗೆ ಮಾತನಾಡುತ್ತಿದ್ದಾರೆ. ಸೈಕಲ್ ತುಳಿದು ಪಕ್ಷ ಕಟ್ಟಿದ್ದರಿಂದ ಬಿಜೆಪಿ ಅಧಿಕಾರಕ್ಕೆ ಬಂತು. ನಿಮ್ಮ ಹರಕು ಬಾಯಿಯಿಂದ ವಿರೋಧ ಮಾಡುವುದು ಸರಿ ಅಲ್ಲ. ನಿಮ್ಮ ಹರಕು ಬಾಯಿಯಿಂದ ಮೂರು ಕ್ಷೇತ್ರದಲ್ಲಿ ಹಿನ್ನಡೆಯಾಗಿದೆ. ಅವರ್‍ಯಾರು ಕಾಂಗ್ರೆಸ್ ವಿರುದ್ಧ ಹೋರಾಟ ಮಾಡಿಲ್ಲ. ಕಾಂಗ್ರೆಸ್ ಜೊತೆ ಮ್ಯಾಚ್ ಫಿಕ್ಸ್ ಮಾಡಿಕೊಂಡಿದ್ದಾರೆ. ಮಂತ್ರಿ ಆಗಿಲ್ಲ ಎಂಬ ಒಂದೇ ಕಾರಣಕ್ಕೆ ಅಷ್ಟೆಲ್ಲ ಮಾತಾಡ್ತಾರೆ ಎಂದು ವಾಗ್ದಾಳಿ ನಡೆಸಿದ್ದಾರೆ.

## ಯೋಗೇಶ್ವರ್‌ಗೆ ಗೆಲುವು

ಈ ವೇಳೆ ಸಿಪಿವೈ ಪತ್ನಿ ಶೀಲಾಗೆ ಶಾಸಕ ಉದಯ್ ಪತ್ನಿ ವಿನೂತ್ ಸಾಥ್ ನೀಡಿದ್ದಾರೆ.

ಈ ವೇಳೆ ಮಾತನಾಡಿದ ಅವರು, ಕಷ್ಟದ ಸಂದರ್ಭದಲ್ಲಿ ಮಾತೃ ಪಕ್ಷ ಕೈಹಿಡಿಯಿತು. ಚನ್ನಪಟ್ಟಣ ಜನರ ಆಶೀರ್ವಾದದಿಂದ ಯೋಗೇಶ್ವರ್ ಗೆದ್ದಿದ್ದಾರೆ. ನನ್ನ ಪತಿಯ ಜನ್ಮ ಭೂಮಿ ಹಾಗೂ ಕರ್ಮ ಭೂಮಿ ಚನ್ನಪಟ್ಟಣ ಎಂದು ಭಾವುಕರಾಗಿದ್ದಾರೆ.

ನಾವು ಸಾಮಾನ್ಯ ಕುಟುಂಬದಿಂದ ಬಂದವ್ರು. ಪತಿಯ ಜನಸೇವೆ ಗುರುತಿಸಿ ಜನ ಕೈ ಹಿಡಿದಿದ್ದಾರೆ. ಎರಡು ಸರಿ ಸೋಲು ಅನುಭವಿಸಿದ್ವಿ ಈ ಬಾರಿ ಭರವಸೆ ಇತ್ತು. ಚನ್ನಪಟ್ಟಣದ ಜನ ತಮ್ಮ ಮನೆ ಮಗನನ್ನ ಗೆಲ್ಲಿಸಿದ್ದಾರೆ. ನಮ್ಮದೇ ಸರ್ಕಾರ ಇರೋದ್ರಿಂದ ಜನ ಸೇವೆ ಮಾಡಬಹುದು. ಸಾಕಷ್ಟು ಅಭಿವೃದ್ಧಿ ಬಗ್ಗೆ ಜನರ ನಿರೀಕ್ಷೆ ಇದೆ.

**ಇಂದು ಆರ್.ಅಶೋಕ್ ಮಂಡ್ಯ ಪ್ರವಾಸ:** ವಿಪಕ್ಷ ನಾಯಕ ಆರ್. ಅಶೋಕ್ ಇಂದು (ನ.24) ಮಂಡ್ಯ ಕೈಗೊಂಡಿದ್ದಾರೆ. ಬೆಳಗ್ಗೆ 11 ಗಂಟೆ ವೇಳೆಗೆ ಶ್ರೀರಂಗಪಟ್ಟಣ ವಿಧಾನಸಭಾ ಕೇತ್ರದ ತಗ್ಗಹಳ್ಳಿಯಲ್ಲಿ ನಡೆಯಲಿರುವ ಪಕ್ಷ ಸೇರ್ಪಡೆ ಕಾರ್ಯಕ್ರಮದಲ್ಲಿ ಭಾಗಿಯಾಗಲಿದ್ದಾರೆ. ಮಾಜಿ ಡಿಸಿಎಂ ಅಶ್ವಥ್ ನಾರಾಯಣ್, ಸಂಸದ ಯದುವೀರ್ ಕೃಷ್ಣದತ್ತ ಚಾಮರಾಜ ಒಡೆಯರ್ ಸಹ ಪಾಲ್ಗೊಳ್ಳಲಿದ್ದಾರೆ.

ಶ್ರೀರಂಗಪಟ್ಟಣ ಕ್ಷೇತ್ರದ ಬಿಜೆಪಿ ಮುಖಂಡ ಇಂಡುವಾಳು ಸಚ್ಚಿದಾನಂದ ನೇತೃತ್ವದಲ್ಲಿ ಕಾರ್ಯಕ್ರಮ ನಡೆಯುತ್ತಿದ್ದು, ನೂರಕ್ಕು ಹೆಚ್ಚು ಬೇರೆ ಬೇರೆ ಪಕ್ಷದ ಸ್ಥಳೀಯ ಮುಖಂಡರು, ಕಾರ್ಯಕರ್ತರು ಬಿಜೆಪಿ ಸೇರ್ಪಡೆಯಾಗಲಿದ್ದಾರೆ.

## ಬರೋದು ಡೌಟ್!

ಯಾಕಂದ್ರೆ, ನಾನು ಪಕ್ಷದ ನಿಷ್ಠಾವಂತ ಕಾರ್ಯಕರ್ತ, ಅಲ್ಲದೇ, ವಿಜಯೇಂದ್ರ ವಿರುದ್ಧದ ಯತ್ನಾಳ್ ಹೇಳಿಕೆಗೆ ಬಸವಕಲ್ಯಾಣ ಶಾಸಕ ಶರಣು ಸಲಗರ್ ಕಿಡಿಕಾರಿದ್ದಾರೆ.

ವಿಜಯೇಂದ್ರ ಮಾಡಿರೋ ಮೂರು ಟೀಂಗೆ ಅಪ್ಪ-ಅಮ್ಮ ಇಲ್ಲವೆಂಬ ಯತ್ನಾಳ್ ಟೀಂ ಹೇಳಿಕೆಗೆ ಕೌಂಟರ್ ಕೊಟ್ಟಿರುವ ಸಲಗರ್, ಬಸನಗೌಡ ಪಾಟೀಲ್ ಯತ್ನಾಳ್ ಟೀಂ ಅನಾಥವಾಗಿದೆ. ಮಾಜಿ ಎಂಎಲ್‌ಸಿ, ಮಾಜಿ ಎಂಪಿ ಹಾಗೂ ಮನೆಯಲ್ಲಿ ಕುಳಿತುಕೊಂಡವರನ್ನ ಟೀಂಗೆ ಸೇರಿಸಿದ್ದಾರೆ. ಹೀಗಾಗಿ, ಈ ತಂಡಕ್ಕೆ ತಾಯಿ-ತಂದೆ ಯಾರು ಇಲ್ಲ. ನಮ್ಮ ಟೀಂಗೆ ನಿಜವಾಗಿಯೂ ತಂದೆ-ತಾಯಿಗಳಿದ್ದಾರೆ. ಎಂದು ಪರೋಕ್ಷವಾಗಿ ಮಾಜಿ ಸಂಸದ ಪ್ರತಾಪ್ ಸಿಂಹ, ಅರವಿಂದ ಲಿಂಬಾವಳಿ ಸೇರಿ ಹಲವರ ವಿರುದ್ಧ ಕಿಡಿಕಾರಿದ್ದಾರೆ.

ಯತ್ನಾಳ್ ಅವರೇ ನಿಮ್ಮ ನಡೆ ಜನರಿಗೆ ದಾರಿ ತಪ್ಪಿಸುತ್ತಿದೆ. ಈ ರೀತಿಯ ಸಂಶಯದಿಂದಾಗಿಯೇ ಮೂರು ಕಡೆ ಸೋಲಾಗಿದೆ ಎಂದು ಬೀದರ್ ಜಿಲ್ಲೆಯ ಬಸವಕಲ್ಯಾಣದಲ್ಲಿ ಶಾಸಕ ಯತ್ನಾಳ್ ನಡೆಗೆ ಶಾಸಕ ಶರಣು ಸಲಗರ್ ಬೇಸರ ವ್ಯಕ್ತಪಡಿಸಿದರು.

## ಯತ್ನಿಸಿದ ಅಭಿಮಾನಿ

ಚನ್ನಪಟ್ಟಣದಲ್ಲಿ ಗೆದ್ದೇ ಗೆಲ್ಲುತ್ತಾರೆ ಎಂದು ಮೈತ್ರಿ ನಾಯಕರು ಭಾವಿಸಿದ್ದರೂ ನಿಖಿಲ್ ಸೋಲನುಭವಿಸಿದ್ದಾರೆ. ಇದರೊಂದಿಗೆ, ನಿಖಿಲ್ ಸತತ ಮೂರು ಚುನಾವಣೆಗಳಲ್ಲಿ ಸೋಲನುಭವಿಸಿದ್ದಾರೆ. ಇದರಿಂದ ಅವರ ಅಭಿಮಾನಿ ಮನನೊಂದಿದ್ದರು.

**ಚನ್ನಪಟ್ಟಣ ಉಪಚುನಾವಣೆ ಫಲಿತಾಂಶ:** ಚನ್ನಪಟ್ಟಣ ಉಪಚುನಾವಣೆ ಫಲಿತಾಂಶದ ಅಂಕಿಅಂಶಗಳನ್ನು ನೋಡುವುದಾದರೆ, ಕಾಂಗ್ರೆಸ್ ಅಭ್ಯರ್ಥಿ ಸಿಪಿ ಯೋಗೇಶ್ವರ್ 25,515 ಮತಗಳ ಅಂತರದಿಂದ ಗೆಲುವು ಸಾಧಿಸಿದ್ದಾರೆ. ಯೋಗೇಶ್ವರ್‌ಗೆ 1,12,642 ಮತ ದೊರೆತರೆ, ಎನ್‌ಡಿಎ ಅಭ್ಯರ್ಥಿ ನಿಖಿಲ್‌ಗೆ 87,229 ಮತಗಳು ದೊರೆತಿವೆ. ಪಕ್ಷೇತರ ಅಭ್ಯರ್ಥಿಗಳಾದ ನಿಂಗರಾಜುಗೆ 2352, ಜೆ.ಟಿ.ಪ್ರಕಾಶ್‌ಗೆ 1649 ಮತಗಳು ದೊರೆತಿವೆ.

ಕೊನೇ ಕ್ಷಣದಲ್ಲಿ ಸ್ಪರ್ಧೆ ಮಾಡಿದ್ದು, ಮತ್ತು ಕುಟುಂಬ ರಾಜಕಾರಣ ಆರೋಪಗಳು ನಿಖಿಲ್?ಗೆ ಹಿನ್ನಡೆಯಾಗಲು ಪ್ರಮುಖ ಕಾರಣಗಳು ಎಂದು ವಿಶ್ಲೇಷಿಸಲಾಗುತ್ತಿದೆ.

## ಮೊದಲನೇ ಪುಟದಿಂದ...

### ಶಾಸಕನಿಗೆ ಗಾಯ

ಅವಘಡದಲ್ಲಿ ನೂತನ ಶಾಸಕ ಸೇರಿ ಹಲವರಿಗೆ ಸಣ್ಣಪುಟ್ಟ ಗಾಯಗಳಾಗಿವೆ.

ಬೆಂಕಿ ಹೊತ್ತಿಕೊಳ್ಳುತ್ತಲೇ ಜನ ಅಲ್ಲಿಂದ ಓಡಿದ್ದಾರೆ. ಅಲ್ಲದೇ ಬೆಂಕಿ ಸಹ ಕೂಡಲೇ ನಿಯಂತ್ರಣಕ್ಕೆ ಬಂದಿದ್ದರಿಂದ ಭಾರೀ ಅವಘಡ ತಪ್ಪಿದಂತಾಗಿದೆ.

### ಐಪಿಎಲ್ ಹರಾಜು

**ಅದೃಷ್ಟ ಪರೀಕ್ಷೆಗಿಳಿದ ಕನ್ನಡಿಗರು:** ಐಪಿಎಲ್ ಮೆಗಾ ಹರಾಜಿನಲ್ಲಿ ಕರ್ನಾಟಕದ 24 ಆಟಗಾರರು ಅದೃಷ್ಟ ಪರೀಕ್ಷೆಗಿಳಿದಿದ್ದಾರೆ. ಕೆ.ಎಲ್ ರಾಹುಲ್, ದೇವದತ್ ಪಡಿಕ್ಕಲ್, ಮನೀಶ್ ಪಾಂಡೆ, ಮಯಾಂಕ್ ಅಗರ್‌ವಾಲ್, ಪ್ರಸಿದ್ಧ ಕೃಷ್ಣ, ಲುತ್ ಸಿಸೋಡಿಯಾ, ಆರ್.ಸ್ಮರಣ್, ಎಲ್. ಆರ್ ಚೇತನ್, ಮನೋಜ್ ಭಾಂಡಗೆ, ಅಭಿಲಾಷ್ ಶೆಟ್ಟಿ, ವೈಶಾಖ್ ವಿಜಯ್ ಕುಮಾರ್, ಪ್ರವೀಣ್ ದುಬೆ, ಮನ್ವಂತ್ ಕುಮಾರ್, ಕೆ.ಗೌತಮ್, ಶ್ರೇಯಸ್ ಗೋಪಾಲ್, ಹಾರ್ದಿಕ್ ರಾಜ್, ಅಭಿನವ್ ಮಹೋಹರ್, ಬಿ.ಆರ್ ಶರತ್, ಕೃಷ್ಣನ್ ಶ್ರೀಜಿತ್, ವಿದ್ವತ್ ಕಾವೇರಪ್ಪ, ದೀಪಕ್ ದೇವಾಡಿಗ, ವಿದ್ಯಾಧರ್ ಪಾಟೀಲ್, ಶುಭಾಂಗ್ ಹೆಗಡೆ, ಸಮರ್ಥ್ ನಾಗರಾಜ್ ಹರಾಜು ಪಟ್ಟಿಯಲ್ಲಿದ್ದಾರೆ.

**25 ಕೋಟಿ ರೂ. ಮೈಲಿಗಲ್ಲು:** ಎಲ್ಲಕ್ಕಿಂತ ಹೆಚ್ಚಾಗಿ ಕ್ರೀಡಾಪ್ರೇಮಿಗಳ ಕುತೂಹಲಕ್ಕೆ ಕಾರಣವಾಗಿರುವುದು ಪಂತ್, ಕೆ.ಎಲ್ ರಾಹುಲ್ 25 ಕೋಟಿ ರೂ. ಮೈಲಿಗಲ್ಲನ್ನು ದಾಟುವರೇ ಎಂಬುದು. ಈವರೆಗೆ ಯಾಬೊಬ್ಬ ಭಾರತೀಯ ಆಟಗಾರನೂ ಈ ಸಾಧನೆಗೆ ಪಾತ್ರವಾಗಿಲ್ಲ. ಈ ಬಾರಿಯ ಐಪಿಎಲ್ ಹರಾಜಿನಲ್ಲಿ ಪಂತ್ 25 ಕೋಟಿ ರೂ. ಪಡೆದ ಮೊದಲ ಭಾರತೀಯ ಆಟಗಾರ ಖ್ಯಾತಿಗೆ ಯಾರು ಪಾತ್ರರಾಗುತ್ತಾರೆ ಪಾತ್ರರಾಗುವರೇ ಎಂಬುದು ಕುತೂಹಲ ಮೂಡಿಸಿದೆ. ಕಳೆದ ಆವೃತ್ತಿಯಲ್ಲಿ ಆಸ್ಟ್ರೇಲಿಯಾದ ಮಿಚೆಲ್ ಸ್ಟಾರ್ಕ್ 24.75 ಕೋಟಿ ರೂ.ಗೆ ಕೋಲ್ಕತ್ತಾ ನೈಟ್‌ರೈಡರ್ಸ್‌ಗೆ ಬಿಕರಿಯಾಗಿದ್ದರು, ಇದು ಈವರೆಗಿನ ದಾಖಲೆ ಬೆಲೆಯಾಗಿದೆ.

### ಅಂಬರೀಶ್ ಪುಣ್ಯಸ್ಮರಣೆ

ಮುಂದುವರೆದು, 'ನೀವು ಪ್ರತಿ ಹೃದಯ ಬಡಿತದಲ್ಲಿ ನೆಲೆಸಿದ್ದೀರಿ, ಎಲ್ಲೆಲ್ಲೂ ಇದ್ದೀರಿ, ಪ್ರತಿ ಹುಟ್ಟಿನಲ್ಲೂ ಇದ್ದೀರಿ. ಈಗ ನೀವು ಮರಳಿ ಬಂದಿದ್ದೀರಿ' ಎಂದಿದ್ದಾರೆ ಸುಮಲತಾ. ಅಂದಹಾಗೆ ಅಂಬರೀಶ್ ಪುತ್ರ ಅಭಿಷೇಕ್ ಅಂಬರೀಶ್ ಇತ್ತೀಚೆಗಷ್ಟೆ ತಂದೆಯಾಗಿದ್ದು ಅವರಿಗೆ ಮುದ್ದಾದ ಗಂಡು ಮಗು ಜನಿಸಿದೆ. ಅಂಬರೀಶ್ ಅವರೇ ಮತ್ತೆ ಹುಟ್ಟಿಬಂದಿದ್ದಾರೆ ಎಂಬ ನಂಬಿಕೆಯಲ್ಲಿ ಅವರ ಕುಟುಂಬ ಇದೆ. ಇದೇ ಕಾರಣಕ್ಕೆ ಸುಮಲತಾ ಅವರು 'ಮರಳಿ ಬಂದಿದ್ದೀರಿ' ಎಂದು ಬರೆದುಕೊಂಡಿದ್ದಾರೆ.

ಅಂಬರೀಶ್ ಅವರ ಅಭಿಮಾನಿಗಳು ಅವರ ಸಮಾಧಿಗೆ ಭೇಟಿ ನೀಡಿ ವಿಶೇಷ ಪೂಜೆಯನ್ನು ಮಾಡಿದ್ದಾರೆ. ಅಂಬರೀಶ್ ಅವರು 2018 ರ ನವೆಂಬರ್ 24 ರಂದು ಹೃದಯಾಘಾತದಿಂದ ನಿಧನ ಹೊಂದಿದರು. ಅದಕ್ಕೆ ಮುಂಚೆಯೂ ಸಹ ಅಂಬರೀಶ್ ಅವರು ಉಸಿರಾಟದ ಸಮಸ್ಯೆ ಸೇರಿದಂತೆ ಕೆಲವು ಸಣ್ಣ ಪುಟ್ಟ ಆರೋಗ್ಯ ಸಮಸ್ಯೆಗಳಿಂದ ಬಳಲಿದ್ದರು. ಅಂಬರೀಶ್ ಅವರನ್ನು ಕಂಠೀರವ ಸ್ಟುಡಿಯೋನಲ್ಲಿ ಸಮಾಧಿ ಮಾಡಲಾಗಿದೆ.

ಅಂಬರೀಶ್ ಕನ್ನಡ ಚಿತ್ರರಂಗದ ಮೇರು ನಟರಲ್ಲೊಬ್ಬರು. 'ನಾಗರಹಾವು' ಸಿನಿಮಾ ಮೂಲಕ ವಿಲನ್ ಆಗಿ ಚಿತ್ರರಂಗಕ್ಕೆ ಪದಾರ್ಪಣೆ ಮಾಡಿ ಆ ನಂತರ ನಾಯಕನಾಗಿ ಕನ್ನಡ ಸಿನಿಮಾ ಪ್ರೇಕ್ಷಕರ ಮನದಲ್ಲಿ ಅಚ್ಚಳಿಯದಂತೆ ಉಳಿದಿದ್ದಾರೆ. ನಟನಾಗಿ, ರಾಜಕಾರಣಿಯಾಗಿಯೂ ಅಂಬರೀಶ್ ಸೇವೆ ಮಾಡಿದ್ದಾರೆ.

### ಪ್ರಿಯಕರನ ಕಿಡ್ನ್ಯಾಪ್

ಇದೇ ವೇಳೆ ರೌಂಡ್ಸ್‌ನಲ್ಲಿದ್ದ ಪಿಎಸ್‌ಐ ಮಾದೇಶ್ ಅನುಮಾನಗೊಂಡು ವಿಚಾರಣೆ ನಡೆಸಿದಾಗ ಕಿಡ್ನ್ಯಾಪ್ ಮತ್ತು ಸುಲಿಗೆ ಪ್ರಕರಣ ಬೆಳಕಿಗೆ ಬಂದಿದೆ.

ಪ್ರಿಯತಮೆ ಮೋನಿಕಾಳೆ ಕಿಂಗ್ ಪಿನ್ ಅನ್ನೋದನ್ನು ಕೇಳಿ ಪ್ರಿಯಕರ ಶಿವ ಶಾಕ್ ಆಗಿದ್ದಾನೆ. ಸದ್ಯ ಪ್ರಕರಣ ದಾಖಲಿಸಿಕೊಂಡಿರುವ ಕೋರಮಂಗಲ ಪೊಲೀಸರು ಆರೋಪಿಗಳಾದ ಮೋನಿಕಾ, ಹರೀಶ್, ಹರಿಕೃಷ್ಣ, ನರೇಶ್, ರಾಜ್ ಕುಮಾರ್, ನರಸಿಂಹ, ಅಂಜನೀಲ್‌ನನ್ನ ಬಂಧಿಸಿದ್ದಾರೆ. ಬಂಧಿತ ಏಳು ಮಂದಿಯೂ ಆಂಧ್ರದ ನೆಲ್ಲೂರು ಮೂಲದವರು ಎಂದು ತಿಳಿಸಿದ್ದಾರೆ.

**ಸೌತ್ ಈಸ್ಟ್ ಡಿಸಿಪಿ ಹೇಳಿದ್ದೇನು?:** ಇನ್ನೂ ಪ್ರಕರಣದ ಕುರಿತು ಮಾತನಾಡಿದ ಸೌತ್ ಈಸ್ಟ್ ಡಿಸಿಪಿ ಸಾರಾ ಫಾತಿಮಾ, ಪ್ರಕರಣದಲ್ಲಿ ಯುವತಿ ಸೇರಿ 7 ಆರೋಪಿಗಳ ಬಂಧನವಾಗಿದೆ. 7 ಜನ ಆರೋಪಿಗಳಲ್ಲಿ ಇಬ್ಬರ ಮೇಲೆ 5ಕ್ಕೂ ಹೆಚ್ಚು ಪ್ರಕರಣಗಳಿವೆ. ದೂರುದಾರ, ಆರೋಪಿ ಯುವತಿಗೆ 3-4 ವರ್ಷದಿಂದ ಪರಿಚಯದಲ್ಲಿದ್ದ, ನೆಲ್ಲೂರಿನಲ್ಲಿ ಮೆಡಿಕಲ್ ಶಾಪ್ ನಡೆಸುತ್ತಿದ್ದ. ಕೋರಮಂಗಲ ಎಸ್‌ಐ ರಾತ್ರಿ ರೌಂಡ್ಸ್‌ನಲ್ಲಿದ್ದಾ ಗ ಎಟಿಎಂ ಬಳಿ ಆರೋಪಿಗಳ ನಡುವೆ ಗಲಾಟೆ ನಡೆದಿದೆ. 3 ಜನ ಕಿತ್ತಾಡಿಕೊಳ್ಳೋದು ಕಂಡು ಬಂದಾಗ ಅದನ್ನ ಗಮನಿಸಿದ್ದಾರೆ. ಅವರ ಮೇಲೆ ಸಂದೇಹ ಬಂದು ಸ್ಟೇಷನ್‌ಗೆ ಕರೆದುಕೊಂಡು ಬಂದಿದ್ದಾರೆ. ವಿಚಾರಣೆ ಮಾಡಿದಾಗ ಕಿಡ್ನಾಪ್ ಆಗಿರೋದು ಬೆಳಕಿಗೆ ಬಂದಿದೆ. ಹಣ ಡ್ರಾ ಮಾಡ್ತಾ ಇರೋದು ಸುಲಿಗೆ ಹಣ ತಿಳಿದುಬಂದಿದೆ ಎಂದು ತಿಳಿಸಿದ್ದಾರೆ.

ಆರೋಪಿ ಮೋನಿಕಾ ಅವಳೇ ಶಿವನನ್ನ ಆಂಧ್ರದಿಂದ ಹಿಂದೂಪುರದ ಬಳಿಯ ಪೆನುಕೊಂಡ ಪಾವಗಡ ಹತ್ರ ಕರೆಸಿದ್ದಾಳೆ. ಬಳಿಕ 4 ಆರೋಪಿಗಳು ಕಿಡ್ನ್ಯಾಪ್ ಮಾಡಿ ಪಾವಗಡದ ಒಂದು ಖಾಸಗಿ ಹೋಟೇಲ್‌ನಲ್ಲಿ 3 ದಿನ ಕೂಡಿ ಹಾಕಿದ್ದಾರೆ. ಅವನ ಬಳಿ ಇರುವ ಚಿನ್ನಾಭರಣ ಪಡೆದು ಅಡವಿಟ್ಟಿದ್ದಾರೆ. ಮತ್ತೆ ಹೆಚ್ಚಿನ ಹಣಕ್ಕೆ ಬೇಡಿಕೆ ಇಟ್ಟಿದ್ದಾರೆ. ದೂರುದಾರ ತನ್ನ ಸ್ನೇಹಿತರಿಂದ ಬ್ಯಾಂಕ್‌ಗೆ 5 ಲಕ್ಷ ಹಾಕಿಸಿಕೊಂಡಿದ್ದಾನೆ. ನಂತರ ಡೆಬಿಟ್ ಕಾರ್ಡ್ ಮನೆಯಲ್ಲಿ ಬಿಟ್ಟು ಬಂದಿದ್ದೇನೆ ಅದನ್ನ ಬೆಂಗಳೂರು ಅಡ್ರೆಸ್‌ಗೆ ಕೋರಿಯರ್ ಮಾಡಿ ಎಂದು ಹೇಳಿದ್ದಾನೆ. ಹಣವನ್ನ ವಿತ್ ಡ್ರಾ ಮಾಡುವ ವೇಳೆ ಆರೋಪಿಗಳು ಸಿಕ್ಕಿ ಬಿದ್ದಿದ್ದಾರೆ. 5 ಲಕ್ಷ ರೂ. ನೀಡಿರುವುದಾಗಿ ದೂರುದಾರ ಹೇಳಿದ್ದಾನೆ, ಈ ಸಂಬಂಧ ತನಿಖೆ ನಡೆಯುತ್ತಿದೆ ಎಂದು ತಿಳಿದಿದ್ದಾರೆ.

### ಗಾಯ

ಮೃತರ ಕುಟುಂಬಗಳಿಗೆ 5 ಲಕ್ಷ ರೂಪಾಯಿ ಪರಿಹಾರವನ್ನು ಘೋಷಿಸಿದ್ದಾರೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ.

ಘಟನೆಯಲ್ಲಿ ಗಾಯಗೊಂಡವರಿಗೆ ಉತ್ತಮ ವೈದ್ಯಕೀಯ ಸೇವೆ ಸಿಗುವಂತೆ ನೋಡಿಕೊಳ್ಳಲು ಕ್ರಮಕೈಗೊಳ್ಳುವಂತೆ ನಾಯ್ಡು ಅವರು ಜಿಲ್ಲಾ ಅಧಿಕಾರಿಗಳಿಗೆ ಸೂಚಿಸಿದರು.

### ಪರಿಹಾರ

4 ಮರಿ ಆನೆ ಇರುವುದರಿಂದ ಆನೆಗಳನ್ನ ಓಡಿಸುವುದು ಅರಣ್ಯ ಇಲಾಖೆಗೆ ಕಷ್ಟವಾಗಿದೆ. ಇದರಿಂದ ಹಳ್ಳಿಗರು ಆತಂಕದಲ್ಲಿದ್ದಾರೆ. ಅಧಿಕಾರಿಗಳು ಸಹ ಸಂದಿಗ್ಧ ಸ್ಥಿತಿಯಲ್ಲಿದ್ದಾರೆ.

ಆನೆಗಳಿಂದ ಬೆಳೆ ಹಾನಿಗೊಳಗಾಗದ ಪ್ರದೇಶಗಳಿಗೆ ಚಿಕ್ಕಮಗಳೂರು ಶಾಸಕ ಹೆಚ್.ಡಿ.ತಮ್ಮಯ್ಯ ಶನಿವಾರ ಭೇಟಿ ನೀಡಿದ್ದರು. ಈ ವೇಳೆ ಮೂಗ್ತಿಹಳ್ಳಿ ಪಂಚಾಯಿತಿ ವ್ಯಾಪ್ತಿಯ ದುಂಬಗೆರೆ, ಎಂಎಂಡಿ ಹಳ್ಳಿಗಳಿಗೆ ಅರಣ್ಯ ಇಲಾಖೆ ಅಧಿಕಾರಿಗಳು ಸ್ಥಳೀಯ ಗ್ರಾಮಗಳ ಮುಖಂಡರ ಜೊತೆ ತೆರಳಿ ಬೆಳೆಹಾನಿ ಪರಿಶೀಲನೆ ನಡೆಸಿದರು. ಇದೇ ವೇಳೆ, ರೈತರ ಬೆಳೆಗಳ ಹಾನಿಗೆ ಹೆಚ್ಚುವರಿ ಪರಿಹಾರ ಕೊಡುವಂತೆ ಹಾಗೂ ಶೀಘ್ರ ಆನೆಗಳನ್ನು ಓಡಿಸುವಂತೆ ಅಧಿಕಾರಿಗಳಿಗೆ ಸೂಚನೆ ನೀಡಿದ್ದಾರೆ.

ಕಾಡಾನೆಗಳು ಬೀಡು ಬಿಟ್ಟಿರುವ ಪ್ರದೇಶಗಳ ಸುತ್ತಮುತ್ತ ಇರುವ ಗ್ರಾಮಗಳಲ್ಲಿ ವಿದ್ಯುತ್ ಸಂಪರ್ಕ ಕಡಿತಗೊಳಿಸಿರುವುದಕ್ಕೆ ಶಾಸಕ ತಮ್ಮಯ್ಯ ಮೆಸ್ಕಾಂ ಅಧಿಕಾರಿಗಳಿಗೆ ತರಾಟೆ ತೆಗೆದುಕೊಂಡರು. ಆನೆ ಹಾವಳಿಗೆ ಶಾಶ್ವತ ಪರಿಹಾರಕ್ಕೆ ಎಲ್ಲಾ ಚುನಾಯಿತ ಪ್ರತಿನಿಧಿಗಳು ಸಭೆ ನಡೆಸಿದ್ದು, ಗಂಭೀರ ಚರ್ಚೆ ಆಗಿದೆ. ಬೆಳಗಾವಿ ಅಧಿವೇಶನದಲ್ಲಿ ಹಾಗೂ ಅರಣ್ಯ ಸಚಿವರ ಜೊತೆ ಸಭೆ ನಡೆಸಿ ಆನೆ ಹಾವಳಿಗೆ ಶಾಶ್ವತ ಪರಿಹಾರ ಕೊಡಿಸುತ್ತೇವೆ ಎಂದು ಭರವಸೆ ನೀಡಿದ್ದಾರೆ.

## ನಿಖಿಲ್ ಸೋಲಿನ ಬೆನ್ನಲ್ಲೇ ಜೆಡಿಎಸ್‌ಗೆ ಶುರುವಾಯ್ತು ಹೊಸ ಆತಂಕ!

**ಬೆಂಗಳೂರು:** ಚನ್ನಪಟ್ಟಣ ಉಪಚುನಾವಣೆಯಲ್ಲಿ ನಿಖಿಲ್ ಕುಮಾರಸ್ವಾಮಿ ಗೆಲುವಿನ ನಿರೀಕ್ಷೆಯಲ್ಲಿದ್ದ ಜೆಡಿಎಸ್ ಗೆ ದೊಡ್ಡ ಆಘಾತವೇ ಎದುರಾಗಿದೆ. ಚನ್ನಪಟ್ಟಣದಲ್ಲಿ ಜೆಡಿಎಸ್ ಲೆಕ್ಕಾಚಾರ ಸಂಪೂರ್ಣ ಉಲ್ಟಾಪಲ್ಟಾ ಆಗಿದೆ. ಇದರಿಂದಾಗಿ ದಳಪತಿಗಳಿಗೆ ಆತಂಕವೂ ಹೆಚ್ಚಾಗಿದೆ. ನಿಖಿಲ್ ಸೋಲಿನಿಂದಾಗಿ ಚನ್ನಪಟ್ಟಣದಲ್ಲಿ ಜೆಡಿಎಸ್ ಗೆ ಹೊಸ ಟೆನ್ಷನ್ ಕೂಡ ಆರಂಭವಾಗಿದೆ.



ಸದ್ಯ ಉಪಚುನಾವಣೆ ಗೆಲುವಿನ ಮೂಲಕ ಜೆಡಿಎಸ್ ಭದ್ರಕೋಟೆಯಲ್ಲಿ ಡಿಕೆ ಸಹೋದರರು ಲಗ್ಗೆ ಇಟ್ಟಿದ್ದಾರೆ. ಡಿಕೆ ಶಿವಕುಮಾರ್ ಮತ್ತು ಡಿಕೆ ಸುರೇಶ್ ಸಹೋದರರ ಪ್ರವೇಶದಿಂದಾಗಿ ಒಕ್ಕಲಿಗ ಜೆಡಿಎಸ್ ನಾಯಕರನ್ನು ಕಾಂಗ್ರೆಸ್ ಗೆ ಸೆಳೆಯುವ ಆತಂಕ ದಳಪತಿಗಳಿಗೆ ಎದುರಾಗಿದೆ.

**ಕುಮಾರಸ್ವಾಮಿಗೆ ನಾಯಕರ ಹಿಡಿದಿಡುವ ಸವಾಲು:** ಜೆಡಿಎಸ್ ಹಿರಿಯ ನಾಯಕ, ಶಾಸಕ ಜಿಟಿ ದೇವೇಗೌಡ ಈಗಾಗಲೇ ಪಕ್ಷದಿಂದ ಸಾಕಷ್ಟು ಅಂತರ ಕಾಯ್ದುಕೊಂಡಿದ್ದಾರೆ. ಅವರು ಕಾಂಗ್ರೆಸ್ ಗೆ ಸೇರುವ ಸಾಧ್ಯತೆಗಳಿವೆ ಎಂಬ ಊಹಾಪೋಹಗಳೂ ಹರಿದಾಡಲು ಆರಂಭವಾಗಿದೆ. ಇಂಥ ಸಂದರ್ಭದಲ್ಲಿ ಮುಂದಿನ ದಿನಗಳಲ್ಲಿ ಜೆಡಿಎಸ್ ಮುಖಂಡರನ್ನು ಹಿಡಿದಿಟ್ಟುಕೊಳ್ಳುವ ಸವಾಲು ಕೇಂದ್ರ ಸಚಿವ ಹೆಚ್ ಡಿ ಕುಮಾರಸ್ವಾಮಿ ಮೇಲಿದೆ.

**ಗಟ್ಟಿಯಾದ ಯೋಗೇಶ್ವರ್, ಡಿಕೆ ಸಹೋದರರ ಸ್ನೇಹ:** ಮತ್ತೊಂದೆಡೆ, ಉಪಚುನಾವಣೆ ಗೆಲುವಿನಿಂದ ಸಿಪಿ ಯೋಗೇಶ್ವರ್ ಹಾಗೂ ಡಿಕೆ ಸಹೋದರರ ನಡುವಣ ಸ್ನೇಹ ಮತ್ತಷ್ಟು ಗಟ್ಟಿಯಾಗಿದೆ. ಇದರೊಂದಿಗೆ, ಜೆಡಿಎಸ್ ಭದ್ರಕೋಟೆ ಹಳೆ ಮೈಸೂರು ಭಾಗದಲ್ಲಿ ಸಂಪೂರ್ಣ ಹಿಡಿತ ಸಾಧಿಸಲು ಡಿಕೆ ಸಹೋದರರು ಯೋಜನೆ ರೂಪಿಸಿದ್ದಾರೆ. ಹೀಗಾಗಿ ಕಾರ್ಯಕರ್ತರು ಹಾಗೂ ಮುಖಂಡರು ಪಕ್ಷಾಂತರ ಮಾಡುವ ಆತಂಕ ಜೆಡಿಎಸ್‌ಗೆ ಎದುರಾಗಿದೆ.

**ಹಳೆ ಮೈಸೂರು ಭಾಗದಲ್ಲಿ ಜೆಡಿಎಸ್ ಅಸ್ತಿತ್ವದ ಪ್ರಶ್ನೆ:** ನಿಖಿಲ್ ಸೋಲಿನಿಂದ ಕುಮಾರಸ್ವಾಮಿ ರಾಮನಗರ ಜಿಲ್ಲೆಯಲ್ಲಿ ಅಧಿಕಾರದಿಂದ ದೂರ ಉಳಿದಂತಾಗಿದೆ. ಇದರಿಂದಾಗಿ ಮುಂದಿನ ದಿನಗಳಲ್ಲಿ ಹಳೆ ಮೈಸೂರು ಭಾಗದಲ್ಲಿ ಜೆಡಿಎಸ್ ಅಸ್ತಿತ್ವ ಉಳಿಸಿಕೊಳ್ಳುವ ದೊಡ್ಡ ಜವಾಬ್ದಾರಿ, ಸವಾಲು ಕುಮಾರಸ್ವಾಮಿಗೆ ಎದುರಾಗಲಿದೆ.

**ಫಲಿತಾಂಶದ ಬಗ್ಗೆ ಕುಮಾರಸ್ವಾಮಿ ಹೇಳಿದ್ದೇನು?:** ನಿನ್ನೆ ಚನ್ನಪಟ್ಟಣ ಕ್ಷೇತ್ರದ ಉಪಚುನಾವಣೆ ಫಲಿತಾಂಶ ಬಂದಿದೆ. ಈಗ ಏನು ಚರ್ಚೆ ಮಾಡಿದರೂ ಪ್ರಯೋಜನ ಇಲ್ಲ. ಫಲಿತಾಂಶವನ್ನು ಒಪ್ಪಿಕೊಳ್ಳಲೇಬೇಕು ಎಂದು ಕೇಂದ್ರ ಸಚಿವ ಹೆಚ್ ಡಿ ಕುಮಾರಸ್ವಾಮಿ ಪ್ರತಿಕ್ರಿಯಿಸಿದರು. ಬೆಂಗಳೂರಿನಲ್ಲಿ ಮಾತನಾಡಿದ ಅವರು, ಸದ್ಯಕ್ಕೆ ಫಲಿತಾಂಶ ಒಪ್ಪಿಕೊಳ್ಳಲೇಬೇಕು. ಏನೇ ಇದ್ದರೂ ಆಮೇಲೆ ಮಾತನಾಡುತ್ತೇನೆ ಎಂದರು.

## ಸಂಭಾಲ್ ಜಾಮಾ ಮಸೀದಿ ಸಮೀಕ್ಷೆ ವೇಳೆ ಕಲ್ಲು ತೂರಾಟ

**ಉತ್ತರ ಪ್ರದೇಶ:** ಉತ್ತರ ಪ್ರದೇಶದ ಸಂಭಾಲ್ ನಲ್ಲಿರುವ ಜಾಮಾ ಮಸೀದಿ ಸಮೀಕ್ಷೆಗೆ ನ್ಯಾಯಾಲಯದ ಆದೇಶದ ಮೇರೆಗೆ ಸಮೀಕ್ಷಾ ತಂಡ ಭಾನುವಾರ ಬೆಳಗ್ಗೆ ಉತ್ತರ ಪ್ರದೇಶದ ಸಂಭಾಲ್ ತಲುಪಿದೆ. ಒಳಗಡೆ ಸಮೀಕ್ಷೆ ನಡೆಯುತ್ತಿದ್ದಾಗ ಹೊರಗಡೆ ರಸ್ತೆಗಳಲ್ಲಿ ಭಾರೀ ಸಂಖ್ಯೆಯಲ್ಲಿ ಜನ ಜಮಾಯಿಸಿದ್ದರು. ಘೋಷಣೆಗಳ ನಡುವೆ ಜನರು ಕಲ್ಲು ತೂರಾಟ ಆರಂಭಿಸಿದರು. ಸ್ಥಳದಲ್ಲಿದ್ದ ಪೊಲೀಸರು ಗುಂಪು ಚದುರಿಸಲು ಲಾಠಿ ಚಾರ್ಜ್ ಮಾಡಿ ಅಶ್ರುವಾಯು ಪ್ರಯೋಗಿಸಿದರು. ಪರಿಸ್ಥಿತಿ ಉದ್ವಿಗ್ನವಾಗಿದೆ.



ಈ ಹಿಂದೆಯೂ ನವೆಂಬರ್ 19 ರಂದು ಸಮೀಕ್ಷೆ ನಡೆಸಲಾಗಿತ್ತು. ನಂತರ ಸಮೀಕ್ಷಾ ತಂಡವು ರಾತ್ರಿ ಆಗಮಿಸಿದ್ದು, ಮಸೀದಿಯ ಒಳಭಾಗವನ್ನು ಸಮೀಕ್ಷೆ ನಡೆಸಲಾಯಿತು. ಇದಾದ ಬಳಿಕ ಹೊರ ಭಾಗದ ಸಮೀಕ್ಷೆಗೆ ನ.24ರಂದು ನಿಗದಿ ಪಡಿಸಲಾಗಿತ್ತು.

ಭಾನುವಾರ ಎರಡೂ ಕಡೆಯವರ ಒಪ್ಪಿಗೆ ಮೇರೆಗೆ ತಂಡ ಮಸೀದಿ ತಲುಪಿತು.

ನಮಾಜಿಗೆ ಯಾವುದೇ ತೊಂದರೆಯಾಗದಂತೆ ಮುಂಜಾನೆ ಪ್ರಾರ್ಥನೆ ಮುಗಿಸಿ 7.30ರ ಸಮಯ ಆಯ್ಕೆ ಮಾಡಿಕೊಂಡರೂ ಸಮೀಕ್ಷೆ ವೇಳೆ ಕೆಲವರು ಗಲಾಟೆ ಸೃಷ್ಟಿಸಿದರು.

ಪೊಲೀಸರು ಕೆಲ ಯುವಕರನ್ನು ಬಂಧಿಸಿದ್ದಾರೆ. ಸದ್ಯ ಸಮೀಕ್ಷೆ ಸ್ಥಗಿತಗೊಂಡಿದೆ. ಪರಿಸ್ಥಿತಿ ಸಹಜವಾದ ನಂತರವೇ ಸಮೀಕ್ಷೆ ಆರಂಭಿಸಲಾಗುವುದು ಎಂದು ಆಡಳಿತ ಹೇಳಿದೆ. ನವೆಂಬರ್ 29ರೊಳಗೆ ಸಮೀಕ್ಷಾ ವರದಿಯನ್ನು ನ್ಯಾಯಾಲಯಕ್ಕೆ ಸಲ್ಲಿಸಬೇಕು.

### ಕೃಷಿ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಎನ್.ಚಲುವರಾಯಸ್ವಾಮಿ ಚಾಲನೆ

# ಕನ್ನಡ ಸಾಹಿತ್ಯ ಸಮ್ಮೇಳನ ವೇದಿಕೆ ನಿರ್ಮಾಣಕ್ಕೆ ಭೂಮಿ ಪೂಜೆ

**ಮಂಡ್ಯ:** 87 ನೇ ಅಖಿಲ ಭಾರತಕನ್ನಡ ಸಾಹಿತ್ಯ ಸಮ್ಮೇಳನ-2024ರ ಸಂಬಂಧ ಕಾರ್ಯಚಟುವಟಿಕೆಗಳನ್ನು ಪ್ರಾರಂಭಿಸಲು ಸಾಂಜೋಆಸ್ಪತ್ರೆ ಹಾಗೂ ಅಮರಾವತಿ ಹೋಟೆಲ್ ಹಿಂಭಾಗದಲ್ಲಿ ಕೃಷಿ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಎನ್.ಚಲುವರಾಯಸ್ವಾಮಿ ಭೂಮಿ ಪೂಜೆ ನೆರವೇರಿಸಿದರು.

ಅಖಿಲ ಭಾರತಕನ್ನಡ ಸಾಹಿತ್ಯ ಸಮ್ಮೇಳನವು ಡಿಸೆಂಬರ್ 20,21 ಹಾಗೂ 22 ರಂದು 3 ದಿನಗಳ ಕಾಲ 87ನೇ ಮಂಡ್ಯದಲ್ಲಿ ನಡೆಯಲಿದೆಎಂದು ಈಗಾಗಲೇ ತೀರ್ಮಾನವಾಗಿದೆ. ಸಮ್ಮೇಳನಕ್ಕೆ ಕೇವಲ ಒಂದು ತಿಂಗಳು ಬಾಕಿ ಇದೆ.ವೇದಿಕೆ ನಿರ್ಮಾಣಕ್ಕೆಇಂದು ಭೂಮಿ ಪೂಜೆಯುಯಾವುದೇ ವಿಘ್ನಗಳಿಲ್ಲದೆ ನೆರವೇರಿದ್ದು, ಇಂದಿನಿಂದ ವೇದಿಕೆ ನಿರ್ಮಾಣದ ಚಟುವಟಿಕೆಗಳು ಪ್ರಾರಂಭವಾಗಲಿದೆಎಂದು ಹೇಳಿದರು.

ಕನ್ನಡ ಸಾಹಿತ್ಯ ಸಮ್ಮೇಳನದ ಅಧ್ಯಕ್ಷರಾಗಿಗೊ.ರು. ಚನ್ನಬಸಪ್ಪಅವರನ್ನುಆಯ್ಕೆ ಮಾಡಲಾಗಿದ್ದು, ಸೂಕ್ತ ವ್ಯಕ್ತಿಯನ್ನುಆಯ್ಕೆ ಮಾಡಿರುವರಾಜ್ಯಾದ್ಯಂತ ಮೆಚ್ಚುಗೆ ವ್ಯಕ್ತವಾಗಿರುವುದು ಬಹಳ ಸಂತೋಷದ ವಿಷಯವಾಗಿದೆ.ಅವರಿಗೆಕೇಂದ್ರ ಸಾಹಿತ್ಯ ಪರಿಷತ್ತು, ಜಿಲ್ಲಾಡಳಿತ ಹಾಗೂ ಮಂಡ್ಯಜಿಲ್ಲೆಯ ಪರವಾಗಿಅವರಿಗೆತುಂಬು ಹೃದಯದ ಅಭಿನಂದನೆಗಳನ್ನು ತಿಳಿಸಿದರು.

ರಾಜ್ಯದ ವಿವಿಧ ಭಾಗಗಳಿಂದ ಎಲ್ಲಾ ಸಾಹಿತಿಗಳು, ಕನ್ನಡಾಭಿಮಾನಿಗಳು, ಕನ್ನಡ ಪರ ಹೋರಾಟಗಾರರು, ಕನ್ನಡ ಸಂಘಟನೆಗಳು ಹಾಗೂ ಅನೇಕ ಗಣ್ಯರು ಸಮ್ಮೇಳನಕ್ಕೆ ಆಗಮಿಸಲಿದ್ದಾರೆ. ಸಮ್ಮೇಳನದ ಜವಾಬ್ದಾರಿಯುಕೇಂದ್ರ ಸಾಹಿತ್ಯ ಪರಿಷತ್ತು, ಜಿಲ್ಲಾ ಸಾಹಿತ್ಯ ಪರಿಷತ್ತು, ಸರ್ಕಾರ, ಜಿಲ್ಲಾಡಳಿತ, ಜಿಲ್ಲೆಯಗ್ರಾಮ ಪಂಚಾಯಿತಿಅಧ್ಯಕ್ಷರು, ಜಿಲ್ಲೆಯಎಲ್ಲಾಜನಪ್ರತಿನಿಧಿಗಳು ಹಾಗೂ ಸಾರ್ವಜನಿಕರ ಮೇಲಿದ್ದು, ಕಾರ್ಯಕ್ರಮವನ್ನು ಸಂಪೂರ್ಣವಾಗಿ ಯಶಸ್ವಿಗೊಳಿಸಲು ಸಮ್ಮೇಳನಕ್ಕೆ ಸಕಲ ಸಿದ್ಧತೆ ಮಾಡಿಕೊಳ್ಳಲಾಗುತ್ತಿದೆ ಎಂದರು.

ಸಾಹಿತ್ಯ ಸಮ್ಮೇಳನಕ್ಕೆ ಸುಮಾರು 3 ಲಕ್ಷದಿಂದ 4 ಲಕ್ಷದವರೆಗೆಜನರು ಬರುತ್ತಾರೆಎಂದುಅಂದಾಜಿಸಲಾಗಿದ್ದು, ಅವರಿಗೆ ಬರುವವರಿಗೆ ಊಟ, ಪಾರ್ಕಿಂಗ್ ವ್ಯವಸ್ಥೆ, ಫೋಷ್ಕಿ, ಶೌಚಾಲಯ, ಕುಡಿಯುವ ನೀರಿನ ವ್ಯವಸ್ಥೆ ಸೇರಿದಂತೆಎಲ್ಲಾ ಮೂಲಭೂತ ಸೌಕರ್ಯಗಳನ್ನು ಕಲ್ಪಿಸಲಾಗುವುದು.ಎಲ್ಲಾ ಸಮಿತಿಗಳೊಂದಿಗೆ ಚರ್ಚಿಸಿ ವೇದಿಕೆ ನಿರ್ಮಾಣದಿಂದ ಹಿಡಿದು ಸಮ್ಮೇಳನಕ್ಕೆ ಸೂಕ್ತ ಪಾರ್ಕಿಂಗ್ ವ್ಯವಸ್ಥೆಯವರೆಗೂಕ್ರಿಯಾಯೋಜನೆಯ ಪ್ರಕಾರ ಕೆಲಸಗಳು ಜರುಗುತ್ತಿವೆ. ಸಮ್ಮೇಳನ ಬಹಳ ಅಚ್ಚುಕಟ್ಟಾಗಿ ನಡೆಯಲುಎಲ್ಲರ ಸಹಕಾರವು ಮುಖ್ಯವಾಗಿದೆಎಂದರು.

ಕಾರ್ಯಕ್ರಮದಲ್ಲಿ ವಿಧಾನ ಪರಿಷತ್ ಶಾಸಕ ಮಧು ಜಿ ಮಾದೇಗೌಡ, ಮಳವಳ್ಳಿ ವಿಧಾನಸಭಾಕ್ಷೇತ್ರದ ಶಾಸಕ ಪಿ ಎಂ ನರೇಂದ್ರಸ್ವಾಮಿ, ಮಂಡ್ಯ ವಿಧಾನ ಸಭಾಕ್ಷೇತ್ರದ ಶಾಸಕ ಪಿ ರವಿಕುಮಾರ್, ಶ್ರೀ ಚಾಮುಂಡೇಶ್ವರಿ ವಿದ್ಯುತ್ ಸರಬರಾಜು ನಿಗಮ ನಿಯಮಿತಅಧ್ಯಕ್ಷ ಹಾಗೂ ಶ್ರೀರಂಗಪಟ್ಟಣ ವಿಧಾನಸಭಾಕ್ಷೇತ್ರ ಶಾಸಕ ಎಬಿ ರಮೇಶ ಬಂಡಿಸಿದ್ದೇಗೌಡ, ಜಿಲ್ಲಾಧಿಕಾರಿಡಾಕುಮಾರ, ಜಿಲ್ಲಾ ಪಂಚಾಯತ್ ನ ಮುಖ್ಯಕಾರ್ಯ ನಿರ್ವಹಣಾಧಿಕಾರಿ ಶೇಖ್ ತನ್ವೀರ್ ಆಸಿಫ್, ಜಿಲ್ಲಾ ಪೊಲೀಸ್ ವರಿ?ಾಧಿಕಾರಿ ಮಲ್ಲಿಕಾರ್ಜುನ ಬಾಲದಂಡಿ, ಅಪರಜಿಲ್ಲಾಧಿಕಾರಿಡಾ ಹೆಚ್ಎಲ್ ನಾಗರಾಜು, ಕನ್ನಡ ಸಾಹಿತ್ಯ ಪರಿಷತ್ಅಧ್ಯಕ್ಷ ಮಹೇಶ್ ಜೋಶಿ, ಕನ್ನಡ ಸಾಹಿತ್ಯ ಪರಿಷತ್ತಿನ ಸಂಚಾಲಕಿ ಡಾ ಮೀರಾಶಿವಲಿಂಗಯ್ಯ, ನಗರಸಭೆಅಧ್ಯಕ್ಷ ಎಂ ವಿ ಪ್ರಕಾಶ್ (ನಾಗೇಶ್), ಮೈಸೂರು ಸಕ್ಕರೆ ಕಂಪನಿ ನಿಯಮಿತದಅಧ್ಯಕ್ಷ ಸಿ.ಡಿ ಗಂಗಾಧರ, ಮಂಡ್ಯ ನಗರಾಭಿವೃದ್ಧಿ ಪ್ರಾಧಿಕಾರದಅಧ್ಯಕ್ಷ ನಯೀಮ್ ಸೇರಿದಂತೆಇನ್ನಿತರರು ಉಪಸ್ಥಿತರಿದ್ದರು.



### 25 ಇಲಾಖೆಗಳ ಮಳಿಗೆಗಳು

ವಸ್ತು ಪ್ರದರ್ಶನದಲ್ಲಿಒಟ್ಟು 25 ಸರ್ಕಾರಿ ಇಲಾಖೆಗಳು ಮಳಿಗೆಗಳನ್ನು ತೆರೆಯಲಿವೆ. ಕೃಷಿ ಇಲಾಖೆಯಿಂದ ಬೆಲ್ಲತಯಾರಿಕಘಟಕದ ಮಾದರಿ, ತೋಟಗಾರಿಕೆಇಲಾಖೆಯಿಂದಕಲಾಕೃತಿ, ಎಕ್ಸೆಟಿಕ್ ಸಸಿ, ಬೋನ್ಸಾಯಿ, ಕನ್ನಡ ಭಾ? ಬಿಂಬಿಸುವ ಪ್ರದರ್ಶನ, ಮೀನುಗಾರಿಕೆ ಇಲಾಖೆ ವತಿಯಿಂದ ಸರ್ಕಾರದಯೋಜನೆ, ವಿವಿಧಜಾತಿಯ ಮೀನುಗಳು, ಗದ್ದೆಯಲ್ಲಿ ಮೀನು ಸಾಕಾಣಿಕೆ ಪ್ರದರ್ಶನ, ರೇ?ಇಲಾಖೆಯಿಂದಇಲಾಖೆಯ ಯೋಜನೆಗಳ ಬಗ್ಗೆ ಅರಿವು, ರೇ?ಚಟುವಟಿಕೆ, ತಾಂತ್ರಿಕತೆಗಳು, ಉಪ ಉತ್ಪನ್ನದ ಪ್ರದರ್ಶನ, ಪಶು ಪಾಲನ ಇಲಾಖೆಯಿಂದ ಯೋಜನೆಗಳು, ಕುರಿ/ಮೇಕೆ ಸ್ಟಾಲ್ ಫೀಡಿಂಗ್, ಅರಣ್ಯ ವಿಭಾಗದಿಂದರಂಗನತಿಟ್ಟು ಮತ್ತುಕೊಕ್ಕರೆ ಬೆಳ್ಳೂರು ಮಾದರಿ, ಕಾಡು ಪ್ರಾಣಿಗಳು, ಪಕ್ಷಿಗಳ ಹಾವಳಿ ತಪ್ಪಿಸುವ ಮಾರ್ಗೋಪಾಯಗಳ ಪ್ರದರ್ಶನ ಮತ್ತು ಮಾಹಿತಿ ಭಿತ್ತಿ ಪತ್ರಗಳು, ಕೈಗಾರಿಕೆಇಲಾಖೆಯಿಂದ ಪ್ರಸ್ತುತಚಾಲ್ತಿಯಲ್ಲಿರುವ ಕೈಗಾರಿಕೆಗಳ ಪ್ರದೇಶ ನೈಜ ಮಾದರಿ/ ಫ್ಲೆಕ್ಸ್ ಮತ್ತುಎಲ್ಇಡಿಯಲ್ಲಿ ವಿಡಿಯೋ ಪ್ರದರ್ಶನ, ಆರೋಗ್ಯ ಇಲಾಖೆ ವತಿಯಿಂದ ಹೆಣ್ಣು ಭ್ರೂಣ ಹತ್ಯೆತಡೆ ಬಗೆಗಿನ ಪ್ರದರ್ಶನ, ಪ್ರವಾಸೋದ್ಯಮಇಲಾಖೆಯಿಂದ ಪ್ರದರ್ಶನತಾಣದಕೈಪಿಡಿ ಮತ್ತುಟೂರಿಸ್ಟ್‌ರೋಡ್ ಮ್ಯಾಪ್, ಸಮಾಜಕಲ್ಯಾಣಇಲಾಖೆಯಿಂದ ಭೂಒಡೆತನಯೋಜನೆ, ಗಂಗಾ ಕಲ್ಯಾಣಯೋಜನೆ, ವಿದ್ಯಾರ್ಥಿ ನಿಲಯಗಳ ಮಾದರಿ ಹಾಗೂ ಲಿಡ್ಕರ್ ಉತ್ಪನ್ನಗಳ ಪ್ರದರ್ಶನ, ಡಾ. ಬಿ. ಆರ್. ಅಂಬೇಡ್ಕರ್‌ರವರುಕರ್ನಾಟಕಕ್ಕೆ ಭೇಟಿ ನೀಡಿದ ಸ್ಥಳಗಳ ನಕ್ಷೆ, ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ ವತಿಯಿಂದ ಬಿಸಿಯೂಟ, ಪಠ್ಯಪುಸ್ತಕ, ಸಮವಸ್ತ್ರ, ನಲಿಕಲಿ, ಕ್ಷೀರ ಭಾಗ್ಯ, ಇತ್ಯಾದಿ ಸೌಲಭ್ಯಗಳ ಪ್ಲೈವುಡ್ ನಲ್ಲಿಕಟೌಟ್ ಮತ್ತುಎಲ್ಇಡಿ ವಿಡಿಯೋ ಪ್ರದರ್ಶನ, ಕೈಮಗ್ಗ ಮತ್ತು ಜವಳಿ ಇಲಾಖೆಯಿಂದ ಸಂಘ ಸಂಸ್ಥೆಗಳಿಂದ ಕೈಮಗ್ಗ ಪ್ರದರ್ಶನ, ಕನ್ನಡ ಮತ್ತು ಸಂಸ್ಕೃತಿಇಲಾಖೆಯಿಂದಜಾನಪದ ಲೋಕ, ರಾಮನಗರದಿಂದಜಾನಪದ ಪರಿಕರಗಳ ಪ್ರದರ್ಶನ ಮಳಿಗೆ, ಚೆಸ್ಕಾಂ ವತಿಯಿಂದ ಪಿಎಂ ಕುಸುಮ್ ಯೋಜನೆ ಸೋಲಾರ್ ಮಾದರಿ, ಹಿಂದುಳಿದ ವರ್ಗಗಳ ಕಲ್ಯಾಣಇಲಾಖೆಯಿಂದ ವಿದ್ಯಾರ್ಥಿ ನಿಲಯ, ವಿದ್ಯಾಸಿರಿ ವಿದ್ಯಾರ್ಥಿವೇತನ, ಪ್ರೋತ್ಸಾಹಧನ, ಅಲೆಮಾರಿ /ಅರೆಅಲೆಮಾರಿ ವಿದ್ಯಾರ್ಥಿ ವೇತನ, ವಕೀಲರಿಗೆ ಪ್ರೋತ್ಸಾಹಧನ, ವಿದೇಶಿ ವ್ಯಾಸಂಗ ವೇತನ, ಪಿಹೆಚ್‌ಡಿ ಪ್ರೋತ್ಸಾಹ ವೇತನದ ಬಗ್ಗೆ ಅರಿವು, ಕೆಪಿಟಿಸಿಎಲ್ ಇಲಾಖೆಯಿಂದ ಶಿಂ?ಾ ಮಾದರಿ ಜಲವಿದ್ಯುತ್‌ಕೈಗಾರಿಕಾ ಮಾದರಿ, ನಬಾರ್ಡ್ ನಿಂದಎಫ್ ಪಿ ಓ ಗಳು, ಆರ್ ಎ ಡಿ ಎಫ್, ಡೈರಿಇಫ್ರಾಸ್ಟಕ್ಚರ್‌ಡೆವಲಪ್ಮೆಂಟ್ ಫಂಡ್, ಕೃಷಿ ಮೂಲ ಸೌಕರ್ಯದ ಬಗ್ಗೆ ಪ್ರದರ್ಶನ ಮಳಿಗೆಯನ್ನು ತೆರೆಯುವ ಬಗ್ಗೆ ಯೋಜನೆ ಹಾಕಿಕೊಳ್ಳಲಾಗಿದೆ ಎಂದುಇಲಾಖೆಯ ಅಧಿಕಾರಿಗಳು ಸಭೆಗೆ ತಿಳಿಸಿದರು.

### ಯೋಜನೆಗಳು, ಸೌಲಭ್ಯಗಳ ಬಗ್ಗೆ ಅರಿವು ಮೂಡಿಸಿ

ಕನ್ನಡ ಸಾಹಿತ್ಯ ಸಮ್ಮೇಳನದಲ್ಲಿ ವಸ್ತು ಪ್ರದರ್ಶನ ಮಳಿಗೆಗಳು ವಿನೂತನರೀತಿಯಲ್ಲಿಜನರನ್ನುಆಕ ’ರ್ಷಿಸುವಂತಹ ವೈವಿಧ್ಯಮಯ ಮಳಿಗೆಗಳನ್ನು ಏರ್ಪಡಿಸಬೇಕುಎಂದು ವಿಧಾನಪರಿಷತ್ ಶಾಸಕ ಮಧು ಜಿ. ಮಾದೇಗೌಡಅವರು ತಿಳಿಸಿದರು. ಜಿಲ್ಲಾಧಿಕಾರಿಗಳ ಕಚೇರಿಯ ಸಭಾಂಗಣದಲ್ಲಿ ವಸ್ತು ಪ್ರದರ್ಶನ ಸಮಿತಿ ಸಭೆ ನಡೆಸಿ ಮಾತನಾಡಿದರು. ಕನ್ನಡ ಸಾಹಿತ್ಯ ಸಮ್ಮೇಳನಕ್ಕೆ ಬರುವಜನರಿಗೆಆಹಾರ ಮಳಿಗೆ ಜೊತೆಗೆ ಸರ್ಕಾರಿಕಾರ್ಯಕ್ರಮದ ಯೋಜನೆಗಳು, ಸೌಲಭ್ಯಗಳು ಹಾಗೂ ಆಯಾ ಇಲಾಖೆಗೆ ಸಂಬಂಧಿಸಿದ ಇನ್ನಿತರೆ ವಿಷಯಗಳ ಬಗ್ಗೆ ಅರಿವು ಮೂಡಿಸಿ ಎಂದು ವಿವಿಧ ಇಲಾಖೆಗಳ ಅಧಿಕಾರಿಗಳಿಗೆ ತಿಳಿಸಿದರು. ವಸ್ತು ಪ್ರದರ್ಶನ ಸಮಿತಿಗೆ ಸಂಬಂಧಿಸಿದಂತೆ ಮಳಿಗೆಗಳನ್ನು ಸ್ಥಾಪಿಸಲು ಯಾವ ಇಲಾಖೆಗೆ ಎಷ್ಟು ವಿಸ್ತೀರ್ಣವುಳ್ಳ ಜಾಗಬೇಕುಎಂಬುದರ ಬಗ್ಗೆ ಚರ್ಚಿಸಿದರು. ಸಮ್ಮೇಳನದಲ್ಲಿ ವಸ್ತು ಪ್ರದರ್ಶನದಲ್ಲಿಎಷ್ಟು ಮಳಿಗೆಗಳನ್ನು ಹಾಕಬಹುದುಎಂದುತಾತ್ಕಾಲಿಕವ ಾಗಿಕ್ರಿಯಾಯೋಜನೆಯನ್ನು ಸಿದ್ಧಪಡಿಸಲಾಗಿದೆ. ಮುಂದಿನ ದಿನಗಳಲ್ಲಿ ನಿಖರ ಹಾಗೂ ಸ್ಪಷ್ಟವಾಗಿಯೋಜನೆ ರೂಪಿಸಿ ಅದರಂತೆಕಾರ್ಯ ನಿರ್ವಹಿಸಲಾಗುವುದುಎಂದು ತಿಳಿಸಿದರು. ಕನ್ನಡ ಸಾಹಿತ್ಯ, ಕಲೆಗೆ ಸಂಬಂಧಿಸಿದಂತೆ ಜಿಲ್ಲೆಯಲ್ಲಿ ಸಿಕ್ಕಿರುವ ಶಾಸನ, ಜಿಲ್ಲೆಯ ಸಾಹಿತಿಗಳ ಪರಿಚಯ, ಅವರಕೃತಿ ಹಾಗೂ ಪ್ರಶಸ್ತಿ, ರೈತ ಚಳುವಳಿ, ಕನ್ನಡ ಬಾವುಟ, ಕನ್ನಡ ಸಾಹಿತ್ಯಕ್ಕೆ ಮುದ್ರಣ ಸಂಸ್ಥೆಗಳು ಹಾಗೂ ಪ್ರಕಾಶಕರುಗಳು ಸಾಹಿತ್ಯಕ್ಕೆ ನೀಡಿರುವ ಕೊಡುಗೆಗಳ ಬಗ್ಗೆ ಪ್ರದರ್ಶನವನ್ನುಏರ್ಪಡಿಸುವುದುಅವಶ್ಯ ಎಂದ ು ಸಭೆಯಲ್ಲಿದ್ದವರುಅಭಿಪ್ರಾಯ ವ್ಯಕ್ತಪಡಿಸಿದರು. ಸಭೆಯಲ್ಲಿಕನ್ನಡ ಸಾಹಿತ್ಯ ಪರಿಷತ್ತಿನ ಸಂಚಾಲಕಿ ಡಾ.ಮೀರಾಶಿವಲಿಂಗಯ್ಯ, ಕೃಷಿ ಇಲಾಖೆಯಜಂಟಿ ನಿರ್ದೇಶಕರಾದಅಶೋಕ್, ಜಿಲ್ಲಾಆರೋಗ್ಯ ಮತ್ತುಕುಟುಂಬ ಕಲ್ಯಾಣಾಧಿಕಾರಿಡಾ.ಮೋಹನ್, ಸಾರ್ವಜನಿಕ ಶಿಕ್ಷಣ ಇಲಾಖೆ ಉಪನಿರ್ದೇಶಕಎಚ್. ಶಿವರಾಮೇಗೌಡ, ಪ್ರವಾಸೋದ್ಯಮ ಇಲಾಖೆ ಉಪನಿರ್ದೇಶಕರಾಘವೇಂದ್ರ, ಸಮಾಜಕಲ್ಯಾಣಇಲಾ ಖೆಯಉಪನಿರ್ದೇಶಕಡಾ.ಸಿದ್ದಲಿಂಗೇಶ್, ನಬಾರ್ಡ್ ನ ಜಿಲ್ಲಾ ವ್ಯವಸ್ಥಾಪಕಿ ಹರ್ಷಿತಾ, ಲೀಡ್ ಬ್ಯಾಂಕ್ ವ್ಯವಸ್ಥಾಪಕಅರುಣ್‌ಕುಮಾರ್, ಕೆಂಪರಾಜು ಮಹೇಶ್ ಚಂದ್ರಗುರು, ಸತೀಶ್‌ಜವರೇಗೌಡ ಉಪಸ್ಥಿತರಿದ್ದರು.

## ಕುವೆಂಪು ಭಾಷಾ ಭಾರತಿ ಪ್ರಾಧಿಕಾರದ ಗೌರವ ಪ್ರಶಸ್ತಿ ಹಾಗೂ ಪುಸ್ತಕ ಬಹುಮಾನಗಳ ಪ್ರಕಟ

**ಬೆಂಗಳೂರು:** ಕನ್ನಡ ಹಾಗೂ ಇತರ ಭಾಷೆಗಳ ನಡುವೆ ಭಾಷಾಂತರದಲ್ಲಿ ವಿಶೇಷ ಸಾಧನೆ ಮಾಡಿರುವ ವಿದ್ವಾಂಸರಿಗೆ ಕುವೆಂಪು ಭಾಷಾ ಭಾರತಿ ಪ್ರಾಧಿಕಾರವು 2023 ಹಾಗೂ 2024ನೇ ಸಾಲಿನ ಗೌರವ ಪ್ರಶಸ್ತಿಯನ್ನು ಘೋಷಣೆ ಮಾಡಿದ್ದು, 2023 ನೇ ಸಾಲಿಗೆ ಪ್ರೊ.ಹೆಚ್.ಎಸ್.ರಾಘವೇಂದ್ರರಾವ್, ವಿನಯ್ ಚೈತನ್ಯ, ಡಾ.ನಟರಾಜ್ ಹುಳಿಯಾರ್, ಡಾ.ದು. ಸರಸ್ವತಿ, ಡಾ.ಹೆಚ್.ಎಂ.ಕುಮಾರಸ್ವಾಮಿ ಹಾಗೂ 2024 ನೇ ಸಾಲಿಗೆ ಡಾ.ಆರ್.ಕೆ.ಕುಲಕರ್ಣಿ, ಡಾ.ಕರೀಗೌಡ ಬೀಚನಹಳ್ಳಿ, ಡಾ.ರಾಜೇಂದ್ರ ಚೆನ್ನಿ, ಡಾ.ಬೋಡೇ ರಿಯಾಜ್ ಅಹಮದ್ ಮತ್ತು ಡಾ.ಬಸು ಬೇವಿನಗಿಡದ ಅವರು ಗೌರವ ಪ್ರಶಸ್ತಿಗೆ ಆಯ್ಕೆಯಾಗಿದ್ದಾರೆ. ಗೌರವ ಪ್ರಶಸ್ತಿಯ ಮೊತ್ತ ರೂ.50,000/- ಆಗಿರುತ್ತದೆ. 2022ನೇ ಸಾಲಿನ ಪುಸ್ತಕ ಬಹುಮಾನಕ್ಕೆ Tejo Tungabhadra - ಅನುವಾದಕರು ಮೈತ್ರೇಯಿ ಕರ್ನೂರು ಮೂಲ ಲೇಖಕರು ವಸುಧೇಂದ್ರ, ದಿ ಚಾಯ್ಸ್ - ಅನುವಾದಕರು ಜಯಶ್ರೀ ಭಟ್ ಮೂಲ ಲೇಖಕರು ಈಡಿತ್ ಎಗರ್, ಹೆಣ ಹೊರುವವನ ವೃತ್ತಾಂತ - ಅನುವಾದಕರು ಜಯರಾಮರಾಜ ಅರಸ್ ಮೂಲ ಲೇಖಕರು ಸೈರಸ್ ಮಿಸ್ತ್ರಿ, ದೇಹವೇ ದೇಶ - ಅನುವಾದಕರು ವಿಕ್ರಮವಿಸಾಜಿ ಮೂಲ ಲೇಖಕರು ಗರಿಮಾ ಶ್ರೀವಾಸ್ತವ, ಜಾಲ - ಅನುವಾದಕರು, ಶುಭಮಂಗಳ ಎಂ.ಜಿ, ಮೂಲ ಲೇಖಕರು ಪೆದ್ದಿಂಟಿ ಅಶೋಕ್ ಕುಮಾರ್ ಹಾಗೂ 2023 ನೇ ಸಾಲಿಗೆ Love and water flow together ಅನುವಾದಕರು ಶ್ರೀಮತಿ ಸುಕನ್ಯಾ ಕನರಳ್ಳಿ, ಮೂಲ ಲೇಖಕರು ಡಾ. ಅಗ್ರಹಾರ ಕೃಷ್ಣಮೂರ್ತಿ, ಪಾತ್ರ ಪ್ರವೇಶ ಅನುವಾದಕರು ಶ್ರೀಧರ್ ಹೆಗ್ಗೋಡು ಮೂಲ ಲೇಖಕರು ಕೋನ್ ಸ್ತಂತಿನ್ ಸ್ತಾನಿಸ್ಲಾವಸ್ಕಿ, ಅಂಬೇಡ್ಕರ್ ಜಗತ್ತು ಅನುವಾದಕರು ವಿಕಾಸ್ ಆರ್.ಮೌರ್ಯ ಮೂಲ ಲೇಖಕರು ಎಲೀನರ್ ಜೆಲಿಯಟ್, ನನ್ನ ಪಿತಾಮಹ : ಮಹಾತ್ಮಗಾಂಧಿ ಅನುವಾದಕರು ಎಸ್.ಜಿ ಭಾಗ್ವತ್ ಮೂಲ ಲೇಖಕರು ಸುಮಿತ್ರಾ, ಗಾಂಧಿ ಕುಲಕರ್ಣಿ ಮತ್ತು ತೌಲನಿಕ ಧರ್ಮ ದರ್ಶನ ಅನುವಾದಕರು ಡಾ.ತೋಂಟದ ಸಿದ್ದರಾಮ ಸ್ವಾಮಿಗಳು ಮೂಲ ಲೇಖಕರು ಯಾಕೂಬ್ ಮಸೀಹ ಕೃತಿಗಳು ಪುಸ್ತಕ ಬಹುಮಾನಕ್ಕೆ ಆಯ್ಕೆಯಾಗಿರುತ್ತದೆ. ಬಹುಮಾನದ ಮೊತ್ತ ರೂ. 25,000/- ಗಳಾಗಿರುತ್ತದೆ ಎಂದು ಕುವೆಂಪು ಭಾಷಾ ಭಾರತಿ ಪ್ರಾಧಿಕಾರದ ರಿಜಿಸ್ಟ್ರಾರ್ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಎಂ.ಇಡಿ ಸ್ನಾತಕೋತ್ತರ ಕೋರ್ಸುಗಳಿಗೆ ಪ್ರವೇಶಾತಿಗೆ ಅರ್ಜಿ

**ಬೆಂಗಳೂರು:** ಬೆಂಗಳೂರು ನಗರ ವಿಶ್ವವಿದ್ಯಾನಿಲಯದ ವ್ಯಾಪ್ತಿಯಲ್ಲಿರುವ ಸಂಯೋಜಿತ ಕಾಲೇಜುಗಳಲ್ಲಿ 2024-25ನೇ ಶೈಕ್ಷಣಿಕ ಸಾಲಿನ ಎಂ.ಎಡ್ ಕೋರ್ಸು ಪ್ರವೇಶಾತಿ ಸೀಟುಗಳಿಗೆ ಅರ್ಹ ಅಭ್ಯರ್ಥಿಗಳಿಂದ ಆನ್‌ಲೈನ್ ಮೂಲಕ ಅರ್ಜಿಗಳನ್ನು ಅಹ್ವಾನಿಸಲಾಗಿದೆ. ಅರ್ಜಿಗಳನ್ನು ಯುಯುಸಿಎಂಎಸ್ ಪೋರ್ಟಲ್ ವೆಬ್‌ಸೈಟ್ https://uucms.karnataka.gov.in/Login/Index ಮುಖಾಂತರ ಸಲ್ಲಿಸಬಹುದಾಗಿದೆ. ಆನ್ ಲೈನ್‌ನಲ್ಲಿ ನವೆಂಬರ್ 20 ರಿಂದ ಅರ್ಜಿ ಸಲ್ಲಿಸಬಹುದಾಗಿದೆ. ನವೆಂಬರ್ 27 ದಂಡ ಶುಲ್ಕವಿಲ್ಲದೆ ಅರ್ಜಿಗಳನ್ನು ಸಲ್ಲಿಸಲು ಕೊನೆಯ ದಿನಾಂಕವಾಗಿದೆ. ದಂಡ ಶುಲ್ಕ ಸಹಿತ ರೂ.200/- ಅರ್ಜಿ ಸಲ್ಲಿಸಲು ನವೆಂಬರ್ 30 ಕೊನೆಯ ದಿನಾಂಕವಾಗಿದೆ, ಡಿಸೆಂಬರ್ 03 ರಂದು ಜೇಷ್ಠತಾ ಪಟ್ಟಿ ಪ್ರಕಟಿಸಲಾಗುವುದು. ಡಿಸೆಂಬರ್ 05 ರಂದು ಸಮಾಲೋಚನೆ ನಡೆಯಲಿದೆ. ಯುಯುಸಿಎಂಎಸ್ ಪೋರ್ಟಲ್‌ನಲ್ಲಿ ದಂಡ ಶುಲ್ಕ ರಹಿತ ಪ್ರವೇಶಾತಿ ಶುಲ್ಕ ಪಾವತಿಸಲು ಡಿಸೆಂಬರ್ 10 ಹಾಗೂ ದಂಡ ಶುಲ್ಕ ಸಹಿತ ರೂ.500/- ದೊಂದಿಗೆ ಪಾವತಿಸಲು ಡಿಸೆಂಬರ್ 12 ಕೊನೆಯ ದಿನಾಂಕವಾಗಿದೆ. ಪ್ರವೇಶಾತಿ ಶುಲ್ಕ ಸಾಮಾನ್ಯ ವರ್ಗದವರಿಗೆ ರೂ.600/- ಹಾಗೂ ಪ.ಜಾ/ಪ.ಪಂ/ವರ್ಗ-1 ಮತ್ತು ತೃತೀಯ ಲಿಂಗದ ಅಭ್ಯರ್ಥಿಗಳಿಗೆ ರೂ.300/- ಅರ್ಜಿ ಶುಲ್ಕವನ್ನು ನಿಗದಿಪಡಿಸಿದ್ದು, ಆನ್‌ಲೈನ್ ಮೂಲಕವೇ ಅರ್ಜಿ ಶುಲ್ಕವನ್ನು ಪಾವತಿಸಬೇಕು ಎಂದು ಬೆಂಗಳೂರು ನಗರ ವಿಶ್ವವಿದ್ಯಾನಿಲಯದ ಕುಲಸಚಿವರು ತಿಳಿಸಿದ್ದಾರೆ.

## ಶಾಸಕರಿಗೆ ಬೀಳ್ಕೊಡುಗೆ ಸಮಾರಂಭ

**ಬೆಂಗಳೂರು:** ಏಪ್ರಿಲ್ 2023 ರಿಂದ ಅಕ್ಟೋಬರ್ 2024ರ ಅವಧಿಯಲ್ಲಿ ನಿವೃತ್ತರಾಗಿರುವ ವಿಧಾನ ಪರಿಷತ್ತಿನ ಶಾಸಕರಿಗೆ, ವಿಧಾನ ಪರಿಷತ್ತು ಸಭಾಪತಿ ಬಸವರಾಜ್ ಹೊರಟ್ಟಿ ಅವರ ಅಧ್ಯಕ್ಷತೆಯಲ್ಲಿ ನವೆಂಬರ್ 27 ರಂದು ಬೆಳಗ್ಗೆ 11.30 ಗಂಟೆಗೆ ವಿಧಾನ ಸೌಧದ ಸಮ್ಮೇಳನ ಸಭಾಂಗಣದಲ್ಲಿ ಬೀಳ್ಕೊಡುಗೆ ಸಮಾರಂಭವನ್ನು ಹಮ್ಮಿಕೊಳ್ಳಲಾಗಿದೆ ಎಂದು ವಿಧಾನ ಪರಿಷತ್ತು ಸಚಿವಾಲಯದ ಕಚೇರಿ ಪ್ರಕಟಣೆ ತಿಳಿಸಿದೆ.

## 26ರಂದು ಸಂವಿಧಾನ ದಿನ ಆಚರಣೆ

**ಬೆಂಗಳೂರು:** ಪ್ರತಿ ವರ್ಷದಂತೆ ಪ್ರಸಕ್ತ ವರ್ಷ ನವೆಂಬರ್ 26, ರಂದು ಸಂವಿಧಾನ ದಿನ ವನ್ನು ಆಚರಿಸಲಾಗುವುದು. ಸಂವಿಧಾನ ದಿನ ಆಚರಣೆ ಸಂದರ್ಭದಲ್ಲಿ ಎಲ್ಲರಿಗೂ ನಮ್ಮ ಸಾಂವಿಧಾನಿಕ ಮೌಲ್ಯಗಳನ್ನು ಬಿತ್ತರಿಸುವುದು. ಈ ರಾಷ್ಟ್ರೀಯ ಅಚರಣೆಯಲ್ಲಿ ಹೆಚ್ಚಿನ ಜನರು ಭಾಗವಹಿಸುವುದು, ಹಾಗೂ ಎಲ್ಲಾ ಸರ್ಕಾರಿ ಕಚೇರಿಗಳು, ಶಾಲೆಗಳು/ಕಾಲೇಜುಗಳು/ ಸಂಸ್ಥೆಗಳು/ ಸ್ವಾಯತ್ತ ಸಂಸ್ಥೆಗಳು/ಕಖಗ ಗಳು ಸೇರಿದಂತೆ ಭಾರತದ ಸಂವಿಧಾನದ ಪೀಠಿಕೆಯನ್ನು ನವೆಂಬರ್ 26 ರಂದು ಸಾಮೂಹಿಕವಾಗಿ ಓದುವುದರ ಮೂಲಕ ಮತ್ತು ಸಂವಿಧಾನದ ಮೌಲ್ಯಗಳು/ ಮೂಲ ಆಶಯಗಳ ಬಗ್ಗೆ ಚರ್ಚೆ/ರಸಪ್ರಶ್ನೆ ಕಾರ್ಯಕ್ರಮಗಳನ್ನು ಮತ್ತು ವೆಬಿನಾರ್‌ಗಳನ್ನು ಆಯೋಜಿಸಬೇಕು.ಈ ವರ್ಷ 26 ನೇ ನವೆಂಬರ್ 2024ರಂದು ಸಂವಿಧಾನ ದಿನವನ್ನು ಅರ್ಥ ಪೂರ್ಣವಾಗಿ ಆಚರಿಸಲು ಸೂಕ್ತ ಕ್ರಮಕೈಗೊಳ್ಳುವಂತೆ ಸಿಬ್ಬಂದಿ ಮತ್ತು ಆಡಳಿತ ಸುಧಾರಣಾ ಇಲಾಖೆಯ (ಕಾರ್ಯಕಾರಿ) ಸರ್ಕಾರದ ಉಪ ಕಾರ್ಯದರ್ಶಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಸಹಾಯಧನಕ್ಕಾಗಿ ಅರ್ಜಿ

**ಮೈಸೂರು:** ಕರ್ನಾಟಕ ಕುರಿ ಮತ್ತು ಉಣ್ಣೆ ಅಭಿವೃದ್ಧಿ ನಿಗಮ ನಿಯಮಿತದ ವತಿಯಿಂದ 2024-25 ನೇ ಸಾಲಿನ ಗಿರಿಜನ ಉಪ ಯೋಜನೆ ಅಡಿಯಲ್ಲಿ ಪರಿಶಿಷ್ಟ ಪಂಗಡ-13 ಘಟಕಗಳಿಗೆ (10+10) ಕುರಿ, ಮೇಕೆ ಘಟಕಗಳ ಶೇಕಡ 90% ರೂ.59400 ಸಹಾಯಧನಕ್ಕಾಗಿ ಅರ್ಹರಿಂದ ಅರ್ಜಿ ಆಹ್ವಾನಿಸಲಾಗಿದೆ.

ಬೆಂಗಳೂರಿನ ಕರ್ನಾಟಕ ಕುರಿ ಮತ್ತು ಉಣ್ಣೆ ಅಭಿವೃದ್ಧಿ ನಿಗಮ ನಿಯಮಿತದ ಕಚೇರಿಯಲ್ಲಿ ನೋಂದಾಯಿಸಿರುವ ಕುರಿ ಮತ್ತು ಉಣ್ಣೆ ಉತ್ಪಾದಕರ ಸಹಕಾರ ಸಂಘಗಳಲ್ಲಿ ಸದಸ್ಯರಾಗಿರುವ ಹಾಗೂ ಈ ಹಿಂದಿನ ವರ್ಷಗಳಲ್ಲಿ ಮತ್ತು ಪಶು ವೈದ್ಯಕೀಯ ಸೇವಾ ಇಲಾಖೆಯಿಂದ ಅಥವಾ ಕರ್ನಾಟಕ ಕುರಿ ಮತ್ತು ಉಣ್ಣೆ ಅಭಿವೃದ್ಧಿ ನಿಗಮದಿಂದ ಇದೇ ಉದ್ದೇಶಕ್ಕಾಗಿ ಸಹಾಯಧನ ಸೌಲಭ್ಯ ಪಡೆಯದೆ ಇರುವ ಪರಿಶಿಷ್ಟ ಪಂಗಡ ವರ್ಗದ ಆಸಕ್ತ ಸದಸ್ಯರುಗಳು ಅರ್ಜಿಯನ್ನು ಸಲ್ಲಿಸಬಹುದು.

ಕುರಿ ಮತ್ತು ಉಣ್ಣೆ ಉತ್ಪಾದಕರ ಸಹಕಾರ ಸಂಘಗಳಲ್ಲಿ ಸದಸ್ಯತ್ವ ಹೊಂದಿರುವವರು ತಮ್ಮ ವ್ಯಾಪ್ತಿಯ ಅಧ್ಯಕ್ಷರು ಅಥವಾ ಕಾರ್ಯದರ್ಶಿಯವರಿಂದ ಅರ್ಜಿಗಳನ್ನು ಪಡೆದು, ಭರ್ತಿ ಮಾಡಿದ ಅರ್ಜಿಗಳನ್ನು ಚಾಮುಂಡಿಪುರಂನ ಕರ್ನಾಟಕ ಕುರಿ ಮತ್ತು ಉಣ್ಣೆ ಅಭಿವೃದ್ಧಿ ನಿಗಮ ನಿಯಮಿತದ ಸಹಾಯಕ ನಿರ್ದೇಶಕರ ಕಚೇರಿಗೆ ಡಿಸೆಂಬರ್ 5 ರ ಒಳಗೆ ಸಲ್ಲಿಸಬೇಕು.

ಹೆಚ್ಚಿನ ಮಾಹಿತಿಗಾಗಿ ಕರ್ನಾಟಕ ಕುರಿ ಮತ್ತು ಉಣ್ಣೆ ಅಭಿವೃದ್ಧಿ ನಿಗಮ ನಿಯಮಿತದ ಸಹಾಯಕ ನಿರ್ದೇಶಕರ ಮೊ. ಸಂ:9845623137 ಸಂಪರ್ಕಿಸಬಹುದು ಎಂದು ಕರ್ನಾಟಕ ಕುರಿ ಮತ್ತು ಉಣ್ಣೆ ಅಭಿವೃದ್ಧಿ ನಿಗಮ ನಿಯಮಿತದ ಸಹಾಯಕ ನಿರ್ದೇಶಕರು ಪ್ರಕಣೆಯಲ್ಲಿ ತಿಳಿಸಿದ್ದಾರೆ.

## ಜಿಲ್ಲೆಯ ಹೋಟೆಲ್, ರೆಸಾರ್ಟ್ಸ್, ಹೋಂಸ್ಟೇಗಳು ಪರವಾನಿಗೆ ಪಡೆದುಕೊಳ್ಳಲು ಸೂಚನೆ

**ರಾಮನಗರ:** ಬೆಂಗಳೂರಿಗೆ ತೀರ ಹತ್ತಿರವಿರುವುದರಿಂದ ರಾಮನಗರ ಜಿಲ್ಲೆಗೆಹೆಚ್ಚಿನ ಸಂಖ್ಯೆಯಲ್ಲಿ ಪ್ರವಾಸಿಗರು ಮನೋರಂಜನೆಗಾಗಿ ರೆಸಾರ್ಟ್ಸ್ ಹಾಗೂ ಹೋಂಸ್ಟೇಗಳಲ್ಲಿ ತಂಗಲು ಬರುತ್ತಿರುತ್ತಾರೆ. ಇದರಿಂದಾಗಿರೆಸಾರ್ಟ್ಸ್ ಹಾಗೂ ಹೋಂ ಸ್ಟೇಗಳ ಸಂಖ್ಯೆ ಹೆಚ್ಚುತ್ತಿವೆ. ಜಿಲ್ಲೆಯಲ್ಲಿ ಕಾರ್ಯಾಚರಣೆಯಲ್ಲಿರುವ ಎಲ್ಲಾ ಹೋಟೆಲ್, ರೆಸಾರ್ಟ್ಸ್ ಹಾಗೂ ಹೋಂಸ್ಟೇಗಳಲ್ಲಿ ಅಳವಡಿಸಲಾಗಿರುವ ಸಾಹಸ ಮನೋರಂಜನಾ ಚಟುವಟಿಕೆಗಳಿಗಾಗಿ ಬಳಸುವ ಉಪಕರಣಗಳನ್ನು ಸರಿಯಾದಕ್ರಮದಲ್ಲಿಅಳವಡಿಸಿ ಸಂಬಂಧಪಟ್ಟ ಇಲಾಖೆಗಳಿಂದ ಈ ಬಗ್ಗೆ ಪರವಾನಿಗೆ ಪಡೆದುದಕೊಳ್ಳಬೇಕು. ಎಲ್ಲಾ ಹೋಟೆಲ್, ರೆಸಾರ್ಟ್ಸ್‌ಹಾಗೂ ಹೋಂಸ್ಟೇಗಳಲ್ಲಿ ನಿರ್ಮಿಸಲಾಗಿರುವ ಈಜುಕೊಳ ನಿಯಮಾನುಸಾರ 4.5 ಅಡಿ ಆಳ ಮಾತ್ರಇರಬೇಕಾಗಿರುತ್ತದೆ.ಈ ಬಗ್ಗೆ ತಮ್ಮ ವ್ಯಾಪ್ತಿಗೆ ಬರುವಗ್ರಾಮ ಪಂಚಾಯಿತಿ, ನಗರಸಭೆಅಥವಾ ಪುರಸಭೆಗಳಿಂದ ಪರವಾನಿಗೆ ಪಡೆಯಬೇಕಾಗಿರುತ್ತದೆ ಹಾಗೂ ಈಜು ಕೊಳದ ಬಳಿ ಓರ್ವ ಸಿಬ್ಬಂದಿಯನ್ನು ನೇಮಿಸಿ ಜಾಗೃತಿ ಫಲಕಗಳನ್ನು ಅಳವಡಿಸಬೇಕಾಗಿರುತ್ತದೆ. 4.5 ಅಡಿಗಳಿಗಿಂತ ಹೆಚ್ಚು ಆಳ ಇರುವ ಈಜು ಕೊಳಗಳನ್ನು ನಿಷ್ಕ್ರೀಯಗೊಳಿಸಲು ತಿಳಿಸಿ ಈ ಸಂಬಂಧ ನಿಯಮಾನುಸಾರ ಕ್ರಮ ಕೈಗೊಳ್ಳುವಂತೆ ಜಿಲ್ಲಾ ಪ್ರವಾಸೋದ್ಯಮ ಇಲಾಖೆಯ ಸಹಾಯಕ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಕಂಬೈನ್ಸ್ ಹಾರ್ವೆಸ್ಟರ್ ಯಂತ್ರಗಳ ಬಾಡಿಗೆ ದರ ನಿಗಧಿ

**ಮೈಸೂರು:** ಮೈಸೂರು ಜಿಲ್ಲೆಯಲ್ಲಿ 2024-25 ನೇ ಸಾಲಿನ ಮುಂಗಾರು ಹಂಗಾಮಿನಲ್ಲಿ 91,735 ಹೆಕ್ಟೇರ್ ಪ್ರದೇಶದಲ್ಲಿ ಭತ್ತದ ಬೆಳೆ ಆವರಿಸಿದ್ದು, ಸದ್ಯದಲ್ಲೇ ಕಟಾವು ಕಾರ್ಯ ಪ್ರಾರಂಭವಾಗಬೇಕಾಗಿರುತ್ತದೆ. ಜಿಲ್ಲೆಯಲ್ಲಿ ಭತ್ತ ಹಾಗೂ ರಾಗಿ ಕಟಾವಿಗೆ ರೈತರು ಕಂಬೈನ್ಸ್ ಹಾರ್ವೆಸ್ಟರ್ ಯಂತ್ರಗಳನ್ನು ಬಾಡಿಗೆಗೆ ಪಡೆಯಲು ಕಂಬೈನ್ಸ್ ಹಾರ್ವೆಸ್ಟರ್ ಯಂತ್ರಗಳ ಬಾಡಿಗೆ ದರವನ್ನು ನಿಗಧಿ ಪಡಿಸಲಾಗಿರುತ್ತದೆ. ಅದರಂತೆ ಚೈನ್ ಮಾದರಿ ಭತ್ತದ ಕಟಾವು ಯಂತ್ರಕ್ಕೆ ಪ್ರತಿ ಗಂಟೆಗೆ ರೂ.2500, ಟೈರ್ (ಗ್ರಿಪ್) ಮಾದರಿ ಭತ್ತದ ಕಟಾವು ಯಂತ್ರಕ್ಕೆ ಪ್ರತಿ ಗಂಟೆಗೆ ರೂ.2000, ಟೈರ್ (ಸಾಮಾನ್ಯ) ಮಾದರಿ ಭತ್ತದ ಕಟಾವು ಯಂತ್ರಕ್ಕೆ ಪ್ರತಿ ಗಂಟೆಗೆ 1800 ಹಾಗೂ ರಾಗಿ ಕಟಾವು ಯಂತ್ರಕ್ಕೆ ಪ್ರತಿ ಗಂಟೆಗೆ ರೂ. 2900 ಅನ್ನು ನಿಗಧಿ ಪಡಿಸಲಾಗಿದೆ.

## ಮೈಸೂರು ಜಿಲ್ಲಾ ಮಟ್ಟದ ಕ್ರೀಡೆ ಹಾಗೂ ಸಾಂಸ್ಕೃತಿಕ ಸ್ಪರ್ಧೆ

**ಮೈಸೂರು:** ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಹಾಗೂ ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆ ವತಿಯಿಂದ 2024-25 ನೇ ಸಾಲಿನ ವಿಶ್ವ ವಿಕಲಚೇತನರ ದಿನಾಚರಣೆಯ ಅಂಗವಾಗಿ ನವೆಂಬರ್ 27 ರಂದು ನಜರ್ ಬಾದ್‌ನ ಚಾಮುಂಡಿ ವಿಹಾರ ಕ್ರೀಡಾಂಗಣದಲ್ಲಿ ಜಿಲ್ಲಾ ಮಟ್ಟದ ವಿಕಲಚೇತನರ ಕ್ರೀಡಾ ಸ್ಪರ್ಧೆಯನ್ನು ಹಾಗೂ ನವೆಂಬರ್ 29 ರಂದು ತಿಲಕ್ ನಗರದ ಅಂದ ಹಾಗೂ ಕಿವುಡ ಮಕ್ಕಳ ಸರ್ಕಾರಿ ಪಾಠಶಾಲೆಯಲ್ಲಿ ಸಾಂಸ್ಕೃತಿಕ ಸ್ಪರ್ಧೆಗಳನ್ನು ಹಮ್ಮಿಕೊಳ್ಳಲಾಗಿದೆ. ಆಸಕ್ತ ವಿಕಲಚೇತನರು ನವೆಂಬರ್ 26 ರೊಳಗೆ ತಮ್ಮ ಹೆಸರುಗಳನ್ನು ನೋಂದಾಯಿಸಿಕೊಳ್ಳಬಹುದು. ಹೆಚ್ಚಿನ ಮಾಹಿತಿಗಾಗಿ ದೂ.ಸಂ:0821-2490333 ಹಾಗೂ ಮೊ. ಸಂ:9731059098, 9164939204 ನ್ನು ಸಂಪರ್ಕಿಸಬಹುದು.

## ಯುವಜನೋತ್ಸವ: ನೋಂದಾಯಿಸಿ

**ರಾಮನಗರ:** ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಯುವ ಸಬಲೀಕರಣ ಮತ್ತುಕ್ರೀಡಾ ಇಲಾಖೆ ವತಿಯಿಂದಹಾಗೂ ನೆಹರುಯುವಕೇಂದ್ರ, ಮತ್ತುಎನ್.ಎಸ್.ಎಸ್‌ರವರ ಸಂಯುಕ್ತಾಶ್ರಯಲದಲ್ಲಿ2024-25ನೇ ಸಾಲಿನ ಜಿಲ್ಲಾ ಮಟ್ಟದಯುವಜನೋತ್ಸವಕಾರ್ಯಕ್ರಮವನ್ನುಇದೇ ನ. 29ರಂದು ಬಾಲಕರ ಸರ್ಕಾರಿ ಪದವಿ ಪೂರ್ವಕಾಲೇಜು ಮೈದಾನದಲ್ಲಿಆಯೋಜಿಸಲಾಗುತ್ತಿದೆ.

ಈ ಕಾರ್ಯಕ್ರಮದಲ್ಲಿಜನಪದ ನೃತ್ಯ (ತಂಡಕನ್ನಡ, ಇಂಗ್ಲೀಷ್, ಹಿಂದಿ ಭಾಷೆಗಳಲ್ಲಿ), (ಕ್ಯಾಸೆಟ್, ಪೆನ್‌ಡ್ರೈವ್ ಹಾಗೂ ಸಿಡಿ ಹಾಡುಗಳಿಗೆ ಅವಕಾಶವಿರುವುದಿಲ್ಲ).ಜನಪದಗೀತೆ(ತಂಡಕನ್ನಡ, ಇಂಗ್ಲೀಷ್, ಹಿಂದಿ ಭಾಷೆಗಳಲ್ಲಿ), ಜನಪದ ನೃತ್ಯ (ವೈಯಕ್ತಿಕಕನ್ನಡ, ಇಂಗ್ಲೀಷ್, ಹಿಂದಿ ಭಾಷೆಗಳಲ್ಲಿ), (ಕ್ಯಾಸೆಟ್, ಪೆನ್‌ಡ್ರೈವ್ ಹಾಗೂ ಸಿಡಿ ಹಾಡುಗಳಿಗೆ ಅವಕಾಶವಿರುವುದಿಲ್ಲ). ಜನಪದಗೀತೆ (ವೈಯಕ್ತಿಕಕನ್ನಡ, ಇಂಗ್ಲೀಷ್, ಹಿಂದಿ ಭಾಷೆಗಳಲ್ಲಿ), ಕಥೆ ಬರೆಯುವುದು (ವೈಯಕ್ತಿಕಕನ್ನಡ, ಇಂಗ್ಲೀಷ್, ಹಿಂದಿ ಭಾಷೆಗಳಲ್ಲಿ), ಘೋಷಣೆ (ಕನ್ನಡ,ಇಂಗ್ಲೀಷ್, ಹಿಂದಿ) ಡಿಕ್ಲಮೇಷನ್, ಚಿತ್ರಕಲೆ (ಪೈಂಟಿಂಗ್) ಪೋಸ್ಟರ್, ಕವಿತೆ ಬರೆಯುವುದು (ವೈಯಕ್ತಿಕ) ಕನ್ನಡ, ಇಂಗ್ಲೀಷ್, ಹಿಂದಿ ಭಾಷೆಗಳಲ್ಲಿ),ವಿಷಯಾಧಾರಿತ, ಗುಡಿಕೈಗಾರಿಕೆಯ ಕಲಾ ಪ್ರಕಾರ, ನೇಕಾರಿಗೆ, ಜವಳಿ, ಕೃಷಿ ಉತ್ಪನ್ನಗಳು, ಮೊಬೈಲ್‌ಛಾಯಾಚಿತ್ರಣ ವಿಭಾಗಗಳಲ್ಲಿ ಸ್ಪರ್ಧೆಗಳನ್ನು ಏರ್ಪಡಿಸಲಾಗಿದೆ.

ಜಿಲ್ಲೆಯ15 ರಿಂದ 29 ವರ್ಷ ವಯೋಮಿತಿಯಎಲ್ಲಾಯುವಕ, ಯುವತಿಯರು, ಯುವಕ, ಯುವತಿ ಮಂಡಳಿಗಳು ಮತ್ತು ಸಂಘ-ಸಂಸ್ಥೆಗಳುಈ ಕಾರ್ಯಕ್ರಮದಲ್ಲಿ ಭಾಗವಹಿಸಬಹುದಾಗಿದೆ. ಆಸಕ್ತರುನ. 27ರ ಸಂಜೆ 5.30ರೊಳಗೆ ಅಥವಾನ. 29ರ ಬೆಳಿಗ್ಗೆ 9.30ರೊಳಗೆ ತಮ್ಮ ಹೆಸರುಗಳನ್ನು ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಸಹಾಯಕ ನಿರ್ದೇಶಕರ ಕಚೇರಿಯಲ್ಲಿ ನೋಂದಾಯಿಸಿಕೊಳ್ಳಬೇಕು.

ಯುವಕ/ಯುವತಿಯರು ಆಧಾರ್‌ಕಾರ್ಡ್‌ಜೆರಾಕ್ಸ್ ಮತ್ತುಬ್ಯಾಂಕ್ ಖಾತೆ ವರದಿಯಜೆರಾಕ್ಸ್ ಪ್ರತಿ ಸಲ್ಲಿಸುವುದು ಕಡ್ಡಾಯವಾಗಿರುತ್ತದೆ. ಹೆಚ್ಚಿನ ಮಾಹಿತಿಗೆ ರಾಮನಗರ ಜಿಲ್ಲೆಯಯುವ ಸಬಲೀಕರಣ ಮತ್ತುಕ್ರೀಡಾ ಇಲಾಖೆಯ ಸಹಾಯಕ ನಿರ್ದೇಶಕರನು ್ನಖುದ್ದಾಗಿ ಅಥವಾಕಚೇರಿ ಅಧೀಕ್ಷಕರದೂ.ಸಂಖ್ಯೆ: 7338149456, 9448153308 ಅನ್ನು ಸಂಪರ್ಕಿಸುವಂತೆಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಸಹಾಯಕ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಮಕ್ಕಳ ಹಕ್ಕುಗಳ ರಕ್ಷಣೆಗೆ ಎಲ್ಲರ ಸಹಕಾರ ಮುಖ್ಯ

**ಚಾಮರಾಜನಗರ:** ಮಕ್ಕಳ ಹಕ್ಕುಗಳ ರಕ್ಷಣೆ ಮಾಡಿ ಸಮಾಜದ ಉತ್ತಮ ಪ್ರಜೆಯನ್ನಾಗಿ ಮಾಡುವುದು ಪ್ರತಿಯೊಬ್ಬರ ಜವಾಬ್ದಾರಿಯಾಗಿದ್ದು, ಮಕ್ಕಳ ಹಕ್ಕುಗಳ ರಕ್ಷಣೆಗೆ ಎಲ್ಲರ ಸಹಕಾರ ಮುಖ್ಯವಾಗಿದೆ ಎಂದು ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಹಾಗೂ ಹಿರಿಯ ಸಿವಿಲ್ ನ್ಯಾಯಾಧೀಶರಾದ ಈಶ್ವರ್ ಅವರು ತಿಳಿಸಿದರು.

ನಗರದ ಜೆ.ಎಸ್.ಎಸ್ ನರ್ಸಿಂಗ್ ಮಹಿಳಾ ಕಾಲೇಜು ಸಭಾಂಗಣದಲ್ಲಿಂದು ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗ, ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಜಿಲ್ಲಾ ಮಕ್ಕಳ ರಕ್ಷಣಾ ಘಟಕ, ಜೆ.ಎಸ್.ಎಸ್ ಶಿಕ್ಷಣ ಮಹಾವಿದ್ಯಾಲಯ, ಜೆ.ಎಸ್.ಎಸ್ ನರ್ಸಿಂಗ್ ಕಾಲೇಜು, ಬಿ.ಎಡ್ ಕಾಲೇಜು ಸಹಯೋಗದಲ್ಲಿ ಹಮ್ಮಿಕೊಳ್ಳಲಾಗಿದ್ದ ಬಾಲ್ಯ ವಿವಾಹ ನಿ?ಧ ಕಾಯ್ದೆ ಪೋಕ್ಸೋ ಕಾಯಿದೆ ಮತ್ತು ಮಾನವ ಕಳ್ಳ ಸಾಗಣಿಕೆ ತಡೆ ಕಾನೂನುಗಳ ಬಗ್ಗೆ ಅರಿವು ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ಮಕ್ಕಳ ಸರ್ವ ತೋಮುಖ ಬೆಳವಣಿಗೆಗೆ ಪೂರಕವಾಗಲು ದೊರೆಯಬೇಕಾದ ಸವಲತ್ತುಗಳು, ಅವಕಾಶಗಳು, ಕಾನೂನು ಮಾನ್ಯತೆ ಪಡೆದ ಹಕ್ಕುಗಳನ್ನು ಮಕ್ಕಳಿಗೆ ನೀಡಿ ಅವುಗಳನ್ನು ರಕ್ಷಿಸಬೇಕಾದದ್ದು ಪ್ರತಿಯೊಬ್ಬರ ಹೊಣೆಯಾಗಿದೆ. ಪ್ರಸ್ತುತ ಮಕ್ಕಳ ಮೇಲೆ ಅನೇಕ ರೀತಿಯಲ್ಲಿ ದೌರ್ಜನ್ಯ ನಡೆಯುತ್ತಿರುವುದು ಕಂಡುಬಂದಿದೆ. ಇದು ಸಮಾಜದಲ್ಲಿ ಮಕ್ಕಳ ಬಗ್ಗೆ ಇರುವ ನಿರ್ಲಕ್ಷ್ಯವನ್ನು ತೋರುತ್ತದೆ. 18 ವರ್ಷದೊಳಗಿನ ಮಕ್ಕಳ ರಕ್ಷಣೆಗೆ ಎಲ್ಲರೂ ಮುಂದಾಗಬೇಕು. ಮಕ್ಕಳಿಗೆ ದೌರ್ಜನ್ಯ ನೀಡಿದರೇ ಪೋಸ್ಕೋ ಕಾಯ್ದೆ ಅಡಿ ಕ್ರಮ ಕೈಗೊಳ್ಳಲಾಗುವುದು. ಈ ಬಗ್ಗೆ ಶಾಲಾ ಕಾಲೇಜುಗಳಲ್ಲಿ ಶಿಕ್ಷಕರು ಮಕ್ಕಳಿಗೆ ಜಾಗೃತಿ ಮೂಡಿಸುವ ಅಗತ್ಯವಿದೆ ಎಂದರು.

ಮಕ್ಕಳು ಮನೆಗಳಲ್ಲಿ ತಂದೆ ತಾಯಿ ಹಿರಿಯರ ಮಾತಿನಂತೆ ನೆಡೆದರೆ ಯಾರು ದಾರಿ ತಪ್ಪುವುದಿಲ್ಲ. ಗುರು ಹಿರಿಯರಿಗೆ ಗೌರವ ನೀಡಬೇಕು. ದೇಶದಲ್ಲಿ ಹಲವಾರು ಕಾನೂನುಗಳು ಮಕ್ಕಳ ರಕ್ಷಣೆಗೆ ಜಾರಿಯಲ್ಲಿದ್ದು, ಅದರ ಬಗ್ಗೆ ಮಾಹಿತಿ ಪಡೆದು ದೌರ್ಜನ್ಯದಿಂದ ಮುಕ್ತರಾಗಬೇಕು.



ಬಾಲ್ಯ ವಿವಾಹ ಮಕ್ಕಳ ಮೇಲೆ ದೌರ್ಜನ್ಯವಾದರೆ ಮಕ್ಕಳ ಸಹಾಯವಾಣಿ 1098 ಕರೆ ಮಾಡಿ ಮಾಹಿತಿ ನೀಡಬೇಕು. ವಿದ್ಯಾರ್ಥಿಗಳು ಓದುವ ಸಮಯದಲ್ಲಿ ಬೇರೆ ಯಾವುದೇ ಆಮಿಷಕ್ಕೆ ಬಲಿಯಾಗದೆ ಉತ್ತಮ ಶಿಕ್ಷಣ ಪಡೆಯಬೇಕು ಎಂದು ಈಶ್ವರ್ ಅವರು ತಿಳಿಸಿದರು.

ಅಧ್ಯಕ್ಷತೆ ವಹಿಸಿದ್ದ ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗದ ಸದಸ್ಯರಾದ ವೆಂಕಟೇಶ್ ಮಾತನಾಡಿ ಬಾಲ ನ್ಯಾಯ ಕಾಯ್ದೆ ಪ್ರಕಾರ 18 ವರ್ಷ ಒಳಗಿನ ಎಲ್ಲರೂ ಮಕ್ಕಳು. ಇಂತಹ ಮಕ್ಕಳಿಗೆ ಬದುಕಲು ಒಳ್ಳೆಯ ವಾತಾವರಣದ ಅವಶ್ಯಕತೆ ಇದೆ. ಕಾರಣ ಇತ್ತೀಚಿನ ದಿನಗಳಲ್ಲಿ ಮಕ್ಕಳ ಮೇಲೆ ಅನೇಕ ರೀತಿಯ ದೌರ್ಜನ್ಯಗಳು ನಡೆಯುತ್ತಿವೆ. ಅವರ ರಕ್ಷಣೆ ಪ್ರತಿಯೊಬ್ಬರ ಆದ್ಯ ಕರ್ತವ್ಯವಾಗಿದೆ ಎಂದರು.

ಮಕ್ಕಳ ಹಕ್ಕುಗಳಾದ 6 ರಿಂದ 14 ವರ್ಷಗಳ ವರೆಗಿನ ಎಲ್ಲಾ ಮಕ್ಕಳಿಗೆ ಉಚಿತ ಮತ್ತು ಕಡ್ಡಾಯ ಶಿಕ್ಷಣ ನೀಡುವುದು, ಮಕ್ಕಳು ತಮಗೆ ಅನಿಸಿದ ಭಾವನೆಯನ್ನು ಮುಕ್ತವಾಗಿ ವ್ಯಕ್ತಪಡಿಸುವದು, ತಮಗೆ ಸಂಬಂಧಿಸಿದ ವಿಷಯದ ಮಾಹಿತಿಯನ್ನು ಪಡೆಯುವದು, ಎಲ್ಲಾ ಮಕ್ಕಳು ಸದೃಢ ಆರೋಗ್ಯಕ್ಕಾಗಿ ಪೌಷ್ಠಿಕ ಆಹಾರವನ್ನು ಪಡೆಯುವುದು, ಆರೋಗ್ಯದ ಹಕ್ಕು, ಶೋಷಣೆಯ ವಿರುದ್ಧ ಹಕ್ಕು, ಸ್ವ-ರಕ್ಷಣೆಯ ಹಕ್ಕು, ತನಗೆ ಚ್ಯುತಿ ಬರದಂತೆ ಬದುಕುವ ಹಕ್ಕು, ಪ್ರತಿ ಮಗುವು ತನಗೆ ಇಷ್ಟವಾದ ಕ್ಷೇತ್ರ ಮತ್ತು ಕೆಲಸ ಮಾಡುವ ಹಕ್ಕು, ವಯೋಮಾನಕ್ಕೆ ತಕ್ಕಂತೆ ಆಟ, ಓಟ, ಒಳ್ಳೆಯ ಹವ್ಯಾಸಗಳು, ಮನಸ್ಸಿಗೆ ಮುದ ನೀಡುವ ಚಟುವಟಿಕೆಗಳಲ್ಲಿ ಭಾಗವಹಿಸುವುದು. ರಾಷ್ಟ್ರೀಯತೆ ಹಕ್ಕು, ಬದುಕುಳಿಯುವ ಹಕ್ಕನ್ನು ನಮ್ಮ ಸಂವಿಧಾನ ಕಾನೂನು ಮಕ್ಕಳಿಗೆ ನೀಡಿದೆ. ಇದರ ಉಲ್ಲಂಘನೆಯಾಗದಂತೆ ನೋಡಿಕೊಂಡು ಮಕ್ಕಳ ಸಮಗ್ರ ಬೆಳವಣಿಗೆಯಾಗುವಂತೆ ನೋಡಿಕೊಳ್ಳುವದು ತುಂಬಾ ಅಗತ್ಯವಾಗಿದೆ ಎಂದು ವೆಂಕಟೇಶ್ ತಿಳಿಸಿದರು.

ಬಾಲ ನ್ಯಾಯ ಮಂಡಳಿ ಸದಸ್ಯ ಟಿ. ಜೆ. ಸುರೇಶ್ ಮಾತನಾಡಿ ಬಾಲ್ಯ ವಿವಾಹ ತಡೆಗಟ್ಟಲು ಸರಕಾರ ಅನೇಕ ಕಾಯ್ದೆ ಕಾನೂನುಗಳನ್ನು ಜಾರಿಗೆ ತಂದರೂ ಬಾಲ್ಯವಿವಾಹ ನಿರಂತರವಾಗಿ ನಡೆಯುತ್ತಲಿದೆ. ಅದನ್ನು ಸಂಪೂರ್ಣ ತಡೆಗಟ್ಟಲು ಸಾರ್ವಜನಿಕರ ಸಹಕಾರ ಅಗತ್ಯ. ಸಾಮೂಹಿಕ ವಿವಾಹ ಆಯೋಜಕರಿಗೆ, ಪೂಜಾರಿಗೆ, ಕಲ್ಯಾಣ ಮಂಟಪ ವ್ಯವಸ್ಥಾಪಕರಿಗೆ, ಪ್ರಿಂಟಿಂಗ್ ಪ್ರೆಸ್ ಮಾಲೀಕರಿಗೆ, ಧಾರ್ಮಿಕ ಮುಖಂಡರು ಬಾಲ್ಯ ವಿವಾಹ ಮಾಡಿಸಿದರೆಂದು ಮಕ್ಕಳ ಇಲಾಖೆಗೆ ಗೊತ್ತಾದರೆ ವಿವಾಹದಲ್ಲಿ ಭಾಗವಹಿಸಿದ ಪ್ರತಿಯೊಬ್ಬರಿಗೂ 2 ವರ್ಷ ಜೈಲು ಶಿಕ್ಷೆ ಹಾಗೂ ಒಂದು ಲಕ್ಷ ರುಪಾಯಿ ದಂಡ ಮತ್ತು ಎರಡು ಶಿಕ್ಷೆ ಗ್ಯಾರಂಟಿ. ಮದುವೆಗೆ ಹುಡುಗಿಗೆ 18 ವರ್ಷ, ಹುಡುಗನಿಗೆ 21 ವರ್ಷ ಪೂರೈಸಿರಬೇಕು. ಬಾಲ್ಯ ವಿವಾಹ, ಬಿಕ್ಷೆ ಬೇಡುವ ಮಕ್ಕಳು, ಬೀದಿಯಲ್ಲಿ ವಾಸಿಸುವ ಮಕ್ಕಳು ಕಂಡು ಬಂದರೆ ಮಾಹಿತಿ ನೀಡಿ ಮಕ್ಕಳ ಭವಿಷ್ಯ ಕಾಪಾಡಿ ಎಂದರು. ಮಕ್ಕಳ ಕಲ್ಯಾಣ ಸಮಿತಿ ಅಧ್ಯಕ್ಷೆ ಸರಸ್ವತಿ ಪೋಕ್ಸೋ ಕಾಯಿದೆ ಬಗ್ಗೆ ಕಾರ್ಯಕ್ರಮದಲ್ಲಿ ಸವಿವರ ಮಾಹಿತಿ ನೀಡಿದರು.

ಜೆ.ಎಸ್.ಎಸ್ ಶಿಕ್ಷಣ ಮಹಾವಿದ್ಯಾಲಯ ಬಿ ಎಡ್ ಕಾಲೇಜಿನ ಪ್ರಾಂಶುಪಾಲ ಬಸವಣ್ಣ, ನರ್ಸಿಂಗ್ ಕಾಲೇಜಿನ ಪ್ರಾಂಶುಪಾಲ ಜಿ. ವಿನಯಕುಮಾರ್, ಅರಕ್ಷಕ ನಿರೀಕ್ಷಕ ಮಂಜುನಾಥ್, ಮಕ್ಕಳ ರಕ್ಷಣಾ ಅಧಿಕಾರಿ ಚೆಲುವರಾಜು, ತಾಲ್ಲೂಕು ಆರೋಗ್ಯಾಧಿಕಾರಿ ಶ್ರೀನಿವಾಸ್, ನರ್ಸಿಂಗ್ ಕಾಲೇಜಿನ ಉಪನ್ಯಾಸಕಿ ಮಧು, ಮಕ್ಕಳ ರಕ್ಷಣಾ ಘಟಕದ ಮೇಘ, ಜಯಮ್ಮ, ಕುಮಾರ್, ಅಶೋಕ್, ಪುಟ್ಟರಾಜು, ಮಕ್ಕಳ ಸಹಾಯವಾಣಿಯ ಮಹೇಶ್, ಸಿದ್ದರಾಜು, ಕಾಲೇಜಿನ ಉಪನ್ಯಾಸಕರು, ವಿದ್ಯಾರ್ಥಿಗಳು ಕಾರ್ಯಕ್ರಮದಲ್ಲಿ ಇದ್ದರು.

## ನ. 26ರಿಂದ 28ರವರೆಗೆ ನಗರದಲ್ಲಿ ಜಿಲ್ಲಾ ಪೊಲೀಸ್ ವಾರ್ಷಿಕ ಕ್ರೀಡಾಕೂಟ

**ಚಾಮರಾಜನಗರ:** ಚಾಮರಾಜನಗರ ಜಿಲ್ಲಾ ಪೊಲೀಸ್ ವಾರ್ಷಿಕ ಕ್ರೀಡಾಕೂಟ-2024 ಕಾರ್ಯಕ್ರಮವನ್ನು ನಗರದ ಜಿಲ್ಲಾ ಪೊಲೀಸ್ ಕವಾಯಿತು ಮೈದಾನದಲ್ಲಿ ನವೆಂಬರ್ 26 ರಿಂದ 28ರವರೆಗೆ 3 ದಿನಗಳ ಕಾಲ ಏರ್ಪಡಿಸಲಾಗಿದ್ದು, ನವೆಂಬರ್ 26ರಂದು ಕ್ರೀಡಾಕೂಟದ ಉದ್ಘಾಟನಾ ಸಮಾರಂಭ ಹಾಗೂ 28ರಂದು ಸಮಾರೋಪ ಸಮಾರಂಭ ನಡೆಯಲಿವೆ.

ನ. 26ರಂದು ಬೆಳಿಗ್ಗೆ 8 ಗಂಟೆಗೆ ಕ್ರೀಡಾಕೂಟವನ್ನು ಗೌರವಾನ್ವಿತ ಪ್ರಧಾನ ಜಿಲ್ಲಾ ಹಾಗೂ ಸೆಷನ್ಸ್ ನ್ಯಾಯಾಧೀಶರಾದ ಬಿ.ಎಸ್. ಭಾರತಿ ಅವರು ಉದ್ಘಾಟಿಸುವರು. ಜಿಲ್ಲಾಧಿಕಾರಿ ಶಿಲ್ಪಾ ನಾಗ್ ಹಾಗೂ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಮೋನಾ ರೋತ್ ಮುಖ್ಯ ಅತಿಥಿಗಳಾಗಿ ಭಾಗವಹಿಸುವರು. ನ. 28ರಂದು ಸಂಜೆ 4 ಗಂಟೆಗೆ ನಡೆಯಲಿರುವ ಸಮಾರೋಪ ಸಮಾರಂಭದಲ್ಲಿ ಮೈಸೂರಿನ ದಕ್ಷಿಣ ವಲಯ ಪೊಲೀಸ್ ಮಹಾ ನಿರೀಕ್ಷಕರಾದ ಡಾ. ಎಂ.ಟಿ. ಬೋರಲಿಂಗಯ್ಯ ಮುಖ್ಯ ಅತಿಥಿಗಳಾಗಿ ಭಾಗವಹಿಸಿ ಬಹುಮಾನ ವಿತರಿಸುವರು. ಚಾಮರಾಜನಗರ ವೃತ್ತದ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ ಟಿ. ಹೀರಾಲಾಲ್, ಬಂಡೀಪುರ ಹುಲಿ ಸಂರಕ್ಷಿತ ಪ್ರದೇಶದ ಕ್ಷೇತ್ರ ನಿರ್ದೇಶಕರು ಹಾಗೂ ಉಪ ಅರಣ್ಯ ಸಂರಕ್ಷಣಾಧಿಕಾರಿ ಎಸ್. ಪ್ರಭಾಕರನ್, ಕೊಳ್ಳೇಗಾಲ ಮಲೆ ಮಹದೇಶ್ವರ ವನ್ಯಜೀವಿ ವಿಭಾಗದ ಉಪ ಅರಣ್ಯ ಸಂರಕ್ಷಣಾಧಿಕಾರಿ ಡಾ. ಸಂತೋಷ್‌ಕುಮಾರ್, ಕೊಳ್ಳೇಗಾಲ ಕಾವೇರಿ ವನ್ಯಜೀವಿ ವಿಭಾಗದ ಉಪ ಅರಣ್ಯ ಸಂರಕ್ಷಣಾಧಿಕಾರಿ ಎಂ.ಸಿ. ಸುರೇಂದ್ರ, ಚಾಮರಾಜನಗರದ ಬಿ.ಆರ್.ಟಿ. ಹುಲಿ ಸಂರಕ್ಷಿತ ಪ್ರದೇಶದ ನಿರ್ದೇಶಕರು ಹಾಗೂ ಉಪ ಅರಣ್ಯ ಸಂರಕ್ಷಣಾಧಿಕಾರಿ ಬಿ.ಎಸ್. ಶ್ರೀಪತಿ ವಿಶೇಷ ಆಹ್ವಾನಿತರಾಗಿ ಭಾಗವಹಿಸಲಿದ್ದಾರೆ ಎಂದು ಪ್ರಕಟಣೆ ತಿಳಿಸಿದೆ.

## ಹಲವೆಡೆ ನಾಳೆ ವಿದ್ಯುತ್ ವ್ಯತ್ಯಯ

**ಮೈಸೂರು:** ನವೆಂಬರ್ 25 ರಂದು ಬೆಳಿಗ್ಗೆ 10 ರಿಂದ ಸಂಜೆ 6 ಗಂಟೆಯವರೆಗೆ ಸೌತ್ ವಿದ್ಯುತ್ ವಿತರಣಾ ಕೇಂದ್ರದಿಂದ ಹೊರಹೊಮ್ಮುವ ಜ್ವಾಲಾಮುಖಿ ಫೀಡರ್‌ನಲ್ಲಿ ತುರ್ತು ನಿರ್ವಹಣಾ ಕಾಮಗಾರಿಯನ್ನು ಹಮ್ಮಿಕೊಂಡಿರುವುದರಿಂದ ಬಂಡಿಪಾಳ್ಯ, ಹೊಸಹುಂಡಿ ಗ್ರಾಮ, ಏಳಿಗೆ ಹುಂಡಿ ಗ್ರಾಮ, ಗುಡುಮಾದನಹಳ್ಳಿ ಗ್ರಾಮ, ಹಡಜನ ಗ್ರಾಮ, ಂಕಂಲ, ಪ್ರಶಾಂತ್ ಛಾಯ ಲೇಔಟ್, ಹಾಲನಹಳ್ಳಿ ರಿಂಗ್ ರಸ್ತೆ ಹಾಗೂ ಸುತ್ತ-ಮುತ್ತಲಿನ ಪ್ರದೇಶಗಳಲ್ಲಿ ವಿದ್ಯುತ್ ಸರಬರಾಜಿನಲ್ಲಿ ನಿಲುಗಡೆಯಾಗಲಿದ್ದು, ಸಾರ್ವಜನಿಕರು ಹಾಗೂ ಕೈಗಾರಿಕೋಧ್ಯಮಿಗಳು ಸಹಕರಿಸಬೇಕೆಂದು ಚಾ.ವಿ.ಸ.ನಿ.ನಿ.ಯ ನ.ರಾ.ಮೊಹಲ್ಲಾ ವಿಭಾಗದ ಕಾರ್ಯ ಮತ್ತು ಪಾಲನೆಯ ಕಾರ್ಯನಿರ್ವಾಹಕ ಇಂಜಿನಿಯರ್(ವಿ) ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಜಿಲ್ಲೆಯಲ್ಲಿ ಅಮಾನತುಗೊಂಡ ಪಡಿತರ ಚೀಟಿಗಳು ಮರುಚಾಲನೆ

**ಚಾಮರಾಜನಗರ:** ಚಾಮರಾಜನಗರ ಜಿಲ್ಲೆಯಲ್ಲಿ ಅಮಾನತುಗೊಳಿಸಿರುವ ಪಡಿತರ ಚೀಟಿಗಳನ್ನು ಮರುಚಾಲನೆಗೊಳಿಸಲಾಗುತ್ತಿದೆ ಎಂದು ಆಹಾರ, ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಇಲಾಖೆ ತಿಳಿಸಿದೆ. ಆಹಾರ, ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಇಲಾಖೆಯ ಸರ್ಕಾರದ ಕಾರ್ಯದರ್ಶಿಗಳು ಹಾಗೂ ಆಯುಕ್ತರ ನಿರ್ದೇಶನದಂತೆ ಚಾಮರಾಜನಗರ ಜಿಲ್ಲಾ ವ್ಯಾಪ್ತಿಯಲ್ಲಿ ಈಗಾಗಲೇ ಅಮಾನತುಗೊಳಿಸಿರುವ 6 ತಿಂಗಳು ಪಡಿತರ ತೆಗೆದುಕೊಳ್ಳದವರ 7,522 ಪಡಿತರ ಚೀಟಿಗಳು, 1.20 ಲಕ್ಷ ರೂ.ಗಳಿಗಿಂತ ಹೆಚ್ಚಿನ ಆದಾಯ ಹೊಂದಿರುವವರಲ್ಲಿ ಅರ್ಹರಿರುವ 453 ಪಡಿತರ ಚೀಟಿಗಳು ಮತ್ತು ಆದಾಯ ತೆರಿಗೆ ಇಲಾಖೆಗೆ ಪಾನ್ ಮತ್ತು ಆಧಾರ್ ಕಾರ್ಡ್ ಲಿಂಕ್‌ಗಾಗಿ 1 ಸಾವಿರ ರೂ. ದಂಡ ಪಾವತಿಸಿರುವ ಪಡಿತರ ಚೀಟಿಗಳನ್ನು ಮರುಚಾಲನೆಗೊಳಿಸಲಾಗುತ್ತಿದೆ.

ಅಮಾನತುಗೊಂಡ ಪಡಿತರ ಚೀಟಿಗಳನ್ನು ಮರುಚಾಲನೆಗೊಳಿಸುವ ಕಾರ್ಯವನ್ನು ನವೆಂಬರ್ 23 ಹಾಗೂ 24ರಂದು ಪೂರ್ಣಗೊಳಿಸಲಾಗುವುದು ಮತ್ತು ಈ ತಿಂಗಳು ನವೆಂಬರ್ ಮಾಹೆಯ ಆಹಾರ ಧಾನ್ಯವನ್ನು ಹಂಚಿಕೆ ಮಾಡಲಾಗುವುದು ಎಂದು ಆಹಾರ, ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಇಲಾಖೆಯ ಉಪನಿರ್ದೇಶಕರಾದ ಯೋಗಾನಂದ ತಿಳಿಸಿದ್ದಾರೆ.

## ಕಲ್ಲಹಳ್ಳಿಯಲ್ಲಿ ಜಾತ್ರಾ ಮಹೋತ್ಸವ

**ತಿಪಟೂರು:** ತಾಲ್ಲೂಕಿನ ನೊಣವಿನಕೆರೆ ಹೋಬಳಿಯ ಕಲ್ಲಹಳ್ಳಿ ಗ್ರಾಮದಲ್ಲಿ ನವಂಬರ್ 24 ರಿಂದ 27 ರವರೆಗೆ 65ನೇ ವರ್ಷದ ಬೆಟ್ಟದ ರಾಮೇಶ್ವರ ಜಾತ್ರೆ, ಹಾಗೂ ದನಗಳ ಜಾತ್ರಾ ಮಹೋತ್ಸವ ನಡೆಯಲಿದೆ. ನ 24 ರಂದು ಗಂಗಾಸ್ನಾನ, ದೀಪೋತ್ಸವ ನ 25ರಂದು ರಥೋತ್ಸವ ಹಾಗೂ ಅನ್ನಸಂತರ್ಪಣೆ, ಸಂಜೆ ಹೊನಲು ಬೆಳಕಿನ ವಾಲಿಬಾಲ್ ಪಂದ್ಯಾವಳಿ, ನ 26ರಂದು ರಾತ್ರಿ, 9 ಗಂಟೆಗೆ ಕುರುಕ್ಷೇತ್ರ, ಅಥವಾ ಧರ್ಮರಾಜ್ಯ ಸ್ಥಾಪನೆ ಎಂಬ ಪೌರಾಣಿಕ ನಾಟಕ ನಡೆಯಲಿದ್ದು, ನ 27ರಂದು ಉತ್ತಮ ಜಾನುವಾರು ರಾಸುಗಳಿಗೆ ಬಹುಮಾನ ವಿತರಣಾ ಕಾರ್ಯಕ್ರಮ ನಡೆಯಲಿದೆ ಎಂದು ದೇವಸ್ಥಾನ ಜೀರ್ಣೋದ್ಧಾರ ಸಮಿತಿಯವರು ಪತ್ರಿಕಾ ಪ್ರಕಟಣೆಗೆ ತಿಳಿಸಿದ್ದಾರೆ.

## ವಿದ್ಯಾರ್ಥಿನಿಲಯ ಪ್ರವೇಶಕ್ಕೆ ಅರ್ಜಿ ಆಹ್ವಾನ

**ಕೋಲಾರ:** ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ವತಿಯಿಂದ ಕೆ.ಜಿ.ಎಫ್ ತಾಲ್ಲೂಕು ವ್ಯಾಪ್ತಿಯ ಬೇತಮಂಗಲದಲ್ಲಿ ಹೊಸದಾಗಿ ಪ್ರಾರಂಭಿಸಲಾಗಿರುವ ಮೆಟ್ರಿಕ್ ನಂತರ ಬಾಲಕಿಯರ ವಿದ್ಯಾರ್ಥಿನಿಲಯ ಬೇತಮಂಗಲ ನಿಲಯಕ್ಕೆ ಪ್ರಸಕ್ತ ಸಾಲಿನ ಹಿಂದುಳಿದ ವರ್ಗಗಳ ಮೀಸಲಾತಿಯಡಿ ಪ್ರವರ್ಗ-1 ವಾರ್ಷಿಕ ಆದಾಯ ಮಿತಿ ರೂ.2.50ಲಕ್ಷ ಹಾಗೂ 2ಎ, 2ಬಿ, 3ಎ, 3ಬಿ ರೂ.1.00 ಲಕ್ಷ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡ ಈ ಪ್ರವರ್ಗಗಳಿಗೆ ಸೇರಿದ ಪಿ.ಯು.ಸಿ ಪದವಿ ಇನ್ನಿತರ ಕೋರ್ಸುಗಳಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳಿಂದ ವಿದ್ಯಾರ್ಥಿನಿಲಯ ಪ್ರವೇಶಕ್ಕಾಗಿ ಅರ್ಜಿ ಆಹ್ವಾನಿಸಲಾಗಿದೆ. ಪ್ರವೇಶ ಕೋರಿ ಬಯಸುವ ವಿದ್ಯಾರ್ಥಿಗಳು ವ್ಯಾಸಂಗ ಮಾಡುತ್ತಿರುವ ಕಾಲೇಜು ಪ್ರಾಂಶುಪಾಲರ ಮುಖಾಂತರ ಅಗತ್ಯ ದಾಖಲೆಗಳನ್ನು ತಾಲ್ಲೂಕು ಕಲ್ಯಾಣಾಧಿಕಾರಿಗಳ ಕಛೇರಿಗೆ ನವೆಂಬರ್ 30 ರೊಳಗೆ ಸಲ್ಲಿಸಬಹುದು ಎಂದು ಬಂಗಾರಪೇಟೆ ತಾಲ್ಲೂಕು ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಡಾ.ಕೆ.ಎಸ್.ಪವಿತ್ರ ಭಾಷಣ ಪ್ರಸಾರ

**ಬೆಂಗಳೂರು:** ಅಂತರರಾಷ್ಟ್ರೀಯ ಮಹಿಳಾ ದೌರ್ಜನ್ಯ ವಿರೋಧಿ ದಿನದ ಅಂಗವಾಗಿ ನವೆಂಬರ್ 24 ರ ಭಾನುವಾರ ಮಧ್ಯಾಹ್ನ 1.20 ಕ್ಕೆ ಆಕಾಶವಾಣಿಯ ಎಲ್ಲಾ ಕೇಂದ್ರಗಳಿಂದ ಮನೋವೈದ್ಯೆ, ಕಲಾವಿದೆ, ಲೇಖಕಿ ಡಾ.ಕೆ.ಎಸ್.ಪವಿತ್ರ ಅವರ ಭಾಷಣ ಪ್ರಸಾರವಾಗಲಿದೆ. ಈ ಕಾರ್ಯಕ್ರಮ ಭದ್ರಾವತಿ ಆಕಾಶವಾಣಿಯ ನಿರ್ಮಾಣವಾಗಿದ್ದು ನ್ಯೂಸ್ ಆನ್ ಏರ್ ಆ್ಯಪ್‌ನಲ್ಲಿ ಆಸಕ್ತರು ಕೇಳಬಹುದು ಎಂದು ಪ್ರಕಟಣೆ ತಿಳಿಸಿದೆ.

# ಕಕಜ ವೇದಿಕೆಯಿಂದ ವೆಂಕಟೇಗೌಡರಿಗೆ ಶ್ರದ್ಧಾಂಜಲಿ



**ಚನ್ನಪಟ್ಟಣ:** ತಾಲೂಕಿನ ನೀರಾವರಿಗೆ ಇಂಜಿನಿಯರ್ ವೆಂಕಟೇಗೌಡರ ಕೊಡುಗೆ ಅಪಾರವಾಗಿದ್ದು, 1986 ರಿಂದ 2017 ರವರೆಗೆ ತಾಲೂಕಿನ ಗರಕಹಳ್ಳಿ ಏತನೀರಾವರಿ ಯೋಜನೆಯಿಂದ ಕಣ್ವ-ಶಿಂಷಾ ಯೋಜನೆ ಪೂರ್ಣವಾಗುವವರೆಗೆ 20 ವರ್ಷಗಳ ತಾಲೂಕಿನ ನೀರಾವರಿಗೆ ತಮ್ಮ ಸೇವೆಯನ್ನು ಮೀಸಲಿಟ್ಟು ತಾಲೂಕಿನ ಲಕ್ಷಾಂತರ ರೈತರ ಬದುಕು ಅಸನಾಗಲು ಶ್ರಮಿಸಿದ ಮಹನೀಯರಲ್ಲಿ ವೆಂಕಟೇಗೌಡರುಯ ಸಹ ಒಬ್ಬರಾಗಿದ್ದು ಅವರ ಅಕಾಲಿಕ ಮರಣದಿಂದ ತಾಲೂಕಿಗೆ ತುಂಬಲಾರದ ನಷ್ಟ ಉಂಟಾಗಿದೆ ಎಂದು ಕಕಜ ವೇದಿಕೆ ರಾಜ್ಯಾಧ್ಯಕ್ಷ ರಮೇಶ್ ಗೌಡರು ಸಂತಾಪ ಸೂಚಿಸಿದರು.

ಪಟ್ಟಣದ ಕಾವೇರಿ ಸರ್ಕಲ್‌ನಲ್ಲಿ ಕಕಜ ವೇದಿಕೆಯಿಂದ ಶುಕ್ರವಾರ ಹೃದಯಾಘಾತದಿಂದ ನಿಧನರಾದ ಇಂಜಿನಿಯರ್ ವೆಂಕಟೇಗೌಡರ ನಿಧನಕ್ಕೆ ಆಯೋಜಿಸಿದ್ದ ಶ್ರದ್ಧಾಂಜಲಿ ಸಭೆಯಲ್ಲಿ ಮಾತನಾಡಿದ ಅವರು, ಚುನಾವಣೆಯಲ್ಲಿ ಯಾರು ಭಗೀರತ ನೀರಾವರಿ ಯೋಜನೆಯ ಕ್ರೆಡಿಟ್ ವಾರ್ ನಡುವೆ ಆಗಮಿಸಿದ ವೆಂಕಟೇಗೌಡರು ನೀರಾವರಿ ಯೋಜನೆಯ ಬಗ್ಗೆ ಸಮಗ್ರ ದಾಖಲೆಗಳನ್ನು ಬಿಡುಗಡೆ ಮಾಢಿ ನೀರಾವರಿ ಯೋಜನೆಯನ್ನು ಸ್ವಾರ್ಥಕ್ಕೆ ಬಳಸಿಕೊಳ್ಳದೆ ಅದನ್ನು ಮುಂದುವರೆಸಿಕೊಂಡು ಹೋಗುವ ಕೆಲಸ ಮಾಡಬೇಕು ಎಂದು ಕಿವಿಮಾತು ಹೇಳಿದರು. ಜೊತೆಗೆ ಚುನಾವಣೆಯ ಬಳಿಕ ತಾಲೂಕಿನ 300 ರೈತರನ್ನು ಇಸ್ರೇಲ್ ಪ್ರವಾಸಕ್ಕೆ ಕರೆದೋಯ್ದು ಅವರಿಗೆ ನೀರಿನ ಸದ್ಬಳಕೆ ಮತ್ತು ಅಲ್ಲಿನ ಕೃಷಿಯ ಬಗ್ಗೆ ಅರಿವು ಮೂಡಿಸುವ ಚಿಂತನೆ ಹೊಂದಿದ್ದ ಬಗ್ಗೆ ಗುರುವಾರ ನನ್ನ ಜೊತೆ ದೂರವಾಣಿ ಮೂಲಕ ಚರ್ಚೆ ಮಾಡಿದ್ದರು. ಆದರೆ ದುರದೃಷ್ಠ ವಷಾತ್ ಹೃದಯಾಘಾತದಿಂದ ಅವರು ನಿಧನರಾಗಿದ್ದು, ಅವರನ್ನು ಸನ್ಮಾನಿಸಬೇಕು ಎಂದಿದ್ದ ವೇದಿಕೆಯಿಂದ ಅವರ ಶ್ರದ್ಧಾಂಜಲಿ ಸಭೆ ಮಾಡುವಂತಾಗಿದೆ ಎಂದು ವಿಷಾಧ ವ್ಯಕ್ತಪಡಿಸಿದರು.

ಇಂದು ತಾಲೂಕಿನ ಕರಾಳ ದಿನವಾಗಿದೆ ಎಂದು ನೀರಾವರಿ ಯೋಜನೆಗೆ ಶ್ರಮಿಸುವ ಜೊತೆಗೆ ಅವರನು ಕಿರುಕುಳ ನೀಡಿ ಎಲ್ಲಾ ಅವಮಾನಗಳನ್ನು ಎದುರಿಸಿ ನೀರಾವರಿ ಯೋಜನೆಯನ್ನು ಸಾಕಾರ ಮಾಡಿ ತಾಲೂಕಿನಲ್ಲಿ ಮುಂದಿನ ಪೀಳೀಗೆಗೆ ಶಾಶ್ವತ ನೀರಾವರಿ ಯೋಜನೆಯನ್ನು ನೀಡಿರುವ ಅವರನ್ನು ಸ್ಮರಿಸಿಕೊಳ್ಳುವ ನಿಟ್ಟಿನಲ್ಲಿ ಅವರ ಪುತ್ಥಳಿ ನಿರ್ಮಾಣ ಮಾಡುವ ನಿಟ್ಟಿನಲ್ಲಿ ಅವರನ್ನು ಗೌರವಿಸುವಂತಾಗಬೇಕು, ಅವರ ನೀರಾವರಿ ಸಾಧನೆಯ ಪುಸ್ತಕ ಮುದ್ರಣ ಮಾಡಬೇಕು ಎಂದು ರಮೇಶ್‌ಗೌಡರು ಆಗ್ರಹಿಸಿದರು.

ಚಿಂತಕ ತಿಮ್ಮೇಶ್‌ಪ್ರಭು ಮಾತನಾಡಿ, ಕಣ್ವ-ಶಿಂಷಾ ಯೋಜನೆಯ ಸಂಪೂರ್ಣ ರೂವಾರಿ ಇಂಜಿನಿಯರ್ ವೆಂಕಟೇಗೌಡರು, ಅವರಿಗೆ ಹಲವರು ಸಾಕಾರ ನೀಡಿದ್ದಾರೆ. ತಾಲೂಕಿನ ನಿಜವಾದ ಭಗೀರಥ ಎಂದರೆ ಅದು ವೆಂಕಟೇಗೌಡರು ಎಂದರೆ ತಪ್ಪಾಗಲಾರದು. ಅವರು ಅಕಾಲಿಕ ನಿಧನರಾಗಿರುವುದು ನಮ್ಮ ತಾಲೂಕಿಗೆ ತುಂಬಲಾರದ ನಷ್ಟ ಉಂಟಾಗಿದೆ. ಅವರ ಆತ್ಮಕ್ಕೆ ಶಾಂತಿ ಸಿಗಲಿ, ಅವರ ಕುಟುಂಬಕ್ಕೆ ದುಃಖ ಭರಿಸುವ ಶಕ್ತಿಯನ್ನು ದೇವರು ನೀಡಲಿ ಎಂದು ಪ್ರಾರ್ಥಿಸಿದರು.

ಬ್ರಹ್ಮಣೀಪುರ ಕೆಂಪರಾಜು ಮಾತನಾಡಿ, ವೆಂಕಟೇಗೌಡರು ತಾಲೂಕಿನ ನೀರಾವರಿ ಅಭಿವೃದ್ಧಿಗೆ ಶ್ರಮಿಸಿದ್ದು ಈ ಯೋಜನೆ ಸಾಕಾರ ಮಾಡುವ ವೇಳೆ ಯಾರು ಏನೇ ಮಾತನಾಡಿದರೂ ಅದನ್ನು ಗಿವಿಗೆ ಹಾಕಿಕೊಳ್ಳದೆ ನನಗೆ ತಾಲೂಕಿನ ನೀರಾವರಿ ಮುಖ್ಯ ಎಂದು ತನ್ನ ಕೆಲಸದ ಮೇಲೆ ಹೆಚ್ಚು ಗಮನ ನೀಡುತ್ತಿದ್ದರು. ಇಂದು ರೈತರು ಸ್ವಾವಲಂಬಿಗಳಾಗಿ ಜೀವನ ಮಾಡುತ್ತಿದ್ದಾರೆ ಎಂದರೆ ಅದಕ್ಕೆ ವೆಂಕಟೇಗೌಡರು ಪ್ರಮುಖರಾಗಿದ್ದಾರೆ ಎಂದು ಬಣ್ಣಿಸಿದರು.

### ಅಪರ ಜಿಲ್ಲಾಧಿಕಾರಿ ಮಂಗಳ ಸಲಹೆ

# ಸಿರಿಧಾನ್ಯ ಬಳಸಿ ಆರೋಗ್ಯ ಕಾಪಾಡಿಕೊಳ್ಳಿ



**ಕೋಲಾರ:** ಸಿರಿಧಾನ್ಯಗಳಾದ ರಾಗಿ,ಊರ್ಲು,ಹಾರಕ, ಬರಗು, ಆರ್ಕ ಮುಂತಾದ ಸಾವಯವ ಧಾನ್ಯಗಳ ನಿರಂತರ ಬಳಕೆಯಿಂದ ಉತ್ತಮ ಆರೋಗ್ಯ ಕಾಪಾಡಿಕೊಳ್ಳಬಹುದು ಸಿರಿಧಾನ್ಯಗಳಲ್ಲಿ ಅಗ್ರಸ್ಥಾನದ ಬಳಕೆಯಲ್ಲಿರುವ ರಾಗಿಯ ಧಾನ್ಯಗಳ ಬಳಕೆಯು ಮಧುಮೇಹ ಕಾಯಿಲೆ ಗುಣಪಡಿಸಲು ಸಹಕಾರಿಯಾಗಿದೆ ಎಂದು ಎಂದು ಅಪರ ಜಿಲ್ಲಾಧಿಕಾರಿ ಮಂಗಳ ತಿಳಿಸಿದರು.

ಜಿಲ್ಲಾಡಳಿತ ಜಿಲ್ಲಾ ಪಂಚಾಯತ್ ಕೃಷಿ ಇಲಾಖೆ, ಇವರ ಸಹಯೋಗದಲ್ಲಿ ಅಂತರಾಷ್ಟ್ರೀಯ ಸಿರಿಧಾನ್ಯ ಮತ್ತು ಸಾವಯವ ವಾಣಿಜ್ಯ ಮೇಳ ಇವರ ಸಂಯುಕ್ತ ಆಶಯದಲ್ಲಿ ಜಿಲ್ಲಾಮಟ್ಟದ ಸಿರಿಧಾನ್ಯ ಹಾಗೂ ಮರೆತು ಹೋದಖಾದ್ಯಗಳ ಪಾಕ ಸ್ಪರ್ಧೆಯನ್ನು ತೋಟಗಾರಿಕೆ ವಿಶ್ವವಿದ್ಯಾಲಯದಲ್ಲಿ ಹಮ್ಮಿಕೊಳ್ಳಲಾಗಿತ್ತು

ಕಾರ್ಯಕ್ರಮದಲ್ಲಿ ವಿಶೇಷ ಖಾದ್ಯಗಳೊಂದಿಗೆ ಅತ್ಯುತ್ಸಾಹದಿಂದ ಪಾಲ್ಗೊಂಡಿದ್ದರು, ವಿವಿಧ ಸಾವಯವ ಸಿರಿಧಾನ್ಯಗಳಿಂದ ತಯಾರಿಸಲಾದ ಖಾದ್ಯಗಳು ಮನಸೆಳೆದವು. ಅವುಗಳಲ್ಲಿ ನವಣೆಪಲಾವ್, ಚಿನ್ನಕುರುಳಿ, ಮಾಲ್ಟ್, ರಾಗಿ ಒತ್ತುಶಾವಿಗೆ, ರಾಗಿ ಹಲ್ವ, ಆರ್ಕದ ಅಕ್ಕಿ ಉಂಡೆ, ಸಿರಿಧಾನ್ಯ ಉಂಡೆ, ಒತ್ತುಶಾವಿಗೆ ಕಾಯಿರಸ, ಸಜ್ಜೆರೊಟ್ಟಿ, ಕುಂಬಳಕಾಯಿ ಕಡಬು, ರಾಗಿ ಕಿಚಡಿ, ನವಣೆ ಸಿಹಿ ಪೊಂಗಲ್, ಸಿರಿಧಾನ್ಯ ಹಲ್ವ, ರಾಗಿ ದೋಸೆ, ನವಣಕ್ಕಿ ತಂಬಿಟ್ಟು, ರಾಗಿ ಬೆಲ್ಲದ ಬರ್ಫಿ, ಸಾಮೆ ಬಿಸಿ ಬೇಳೆಬಾತ್, ನವಣಕ್ಕಿ ಚಕ್ಕುಲಿ, ಸಾಮೆ ಅಕ್ಕಿ ನಿಪ್ಪಟ್ಟು, ಸಜ್ಜೆ ಮಸಾಲೆ ರೊಟ್ಟಿ, ಸಾಮೆ ಅಕ್ಕಿಯ ಚಕ್ಕುಲಿ, ಹಾರಕ ಪಲಾವ್, ಬರಗು, ಆರ್ಕ, ಸಾವಯವ ಬೆಲ್ಲದಿಂದ ತಯಾರಿಸಿದ ಕೇಕ್ ಸೇರಿದಂತೆ ಸಿರಿಧಾನ್ಯಗಳಿಂದವಿವಿಧ ಖಾದ್ಯಗಳನ್ನು ತಯಾರಿಸಿಕೊಂಡು ಸ್ಪರ್ದೆಯಲ್ಲಿ ಪ್ರದರ್ಶನಕ್ಕಿಡಲಾಗಿತ್ತು. ಎಲ್ಲ ಖಾದ್ಯಗಳನ್ನು ರುಚಿ ನೋಡಿ ಧೀರ್ಘಕಾಲಿನ ಆರೋಗ್ಯಕ್ಕೆ ಇಂತಹ ಸಿರಿಧಾನ್ಯ ಬಳಕೆಯು ತುಂಬ ಸಹಕಾರಿಯಾಗಿದೆ ರಾಗಿ ಹಾಗೂ ಸಾವಯವ ಸಿರಿಧಾನ್ಯಗಳು ಮಧುಮೇಹದಂತಹ ಕಾಯಿಲೆ ಗುಣಪಡಿಸಲು ಅತ್ಯುತ್ತಮ ಆಹಾರ ಪದ್ದತಿಯಾಗಿದೆ. ಆದ್ದರಿಂದ ಮಧುಮೇಹಿಗಳು ಸಿರಿಧಾನ್ಯಗಳ ಉತ್ಪನ್ನಗಳಿಂದ ತಯಾರಿಸಿದ ಖಾದ್ಯಗಳನ್ನು ಹೆಚ್ಚಾಗಿ ಬಳಸಬೇಕು ಎಂದರು.

ನಂತರ ಜಿಲ್ಲಾ ಪಂಚಾಯತ್ ಉಪಕಾರ್ಯದರ್ಶಿ ಶಿವಕುಮಾರವರು ಮಾತನಾಡಿ ರಾಗಿ ತಿಂದವನು ನಿರೋಗಿ ಎಂಬ ಮಾತು ಹೆಚ್ಚು ಜನಜನಿತವಾಗಿದೆ. ಕೋಲಾರ ಭಾಗದಲ್ಲಿಯೂ ಸಿರಿಧಾನ್ಯಗಳನ್ನು ಹೆಚ್ಚಾಗಿ ಬೆಳೆಯಲು ರೈತರು ಮುಂದಾಗಬೇಕು. ಸಿರಿಧಾನ್ಯಗಳಿಂದ ತಯಾರಾಗುವ ಪಾಯಸ ಲಡ್ಡು, ರಾಗಿ ಮುದ್ದೆ, ಚಕ್ಕುಲಿ, ಶಾವಿಗೆ ಇನ್ನಿತರ ಖಾದ್ಯಗಳನ್ನು ಎಲ್ಲರು ಬಳಸುವ ಮೂಲಕ ಸ್ವಾಸ್ಥ್ಯ ಹಾಗೂ ಆರೋಗ್ಯಕರ ಸಮಾಜ ಸೃಷ್ಟಿಸಬೇಕು. ಇಂದು ಮರೆತು ಹೋದ ಖಾದ್ಯಗಳ ಪಾಕ ಸ್ಪರ್ಧೆಯನ್ನು ಏರ್ಪಡಿಸಲಾಗಿದೆ ಸಾರ್ವಜನಿಕರು ಇಂತಹ ಕಾರ್ಯಕ್ರಮಗಳ ಸದುಪಯೋಗ ಪಡೆದುಕೊಳ್ಳಬೇಕು ಎಂದು ತಿಳಿಸಿದರು. ಹಿಂದಿನ ಕಾಲದಲ್ಲಿ ಆಹಾರಪದ್ಧತಿಯಲ್ಲಿ ಸಿರಿಧಾನ್ಯಗಳ ಬಳಕೆ ಹೆಚ್ಚಿದ್ದರಿಂದ ಅವರು ದಷ್ಟಪುಷ್ಟರಾಗಿ ದೃಢಕಾಯರಾಗಿದ್ದರು. ಉತ್ತಮ ಆರೋಗ್ಯವನ್ನು ಹೊಂದಿದ್ದರು. ಆದರೆ ಕಾಲಾನಂತರದಲ್ಲಿ ಸಿರಿಧಾನ್ಯಗಳ ಬಳಕೆಯ ಆಹಾರದ ಕ್ರಮದಲ್ಲಿ ಕಡಿಮೆಯಾಯಿತು. ಒತ್ತಡದ ಆಧುನಿಕ ಜೀವನ ಶೈಲಿಯಿಂದ ಅನೇಕ ಕಾಯಿಲೆಗಳಿಂದ ತುತ್ತಾಗುತ್ತಿರುವ ಈ ಸಿರಿಧಾನ್ಯಗಳ ಬಳಕೆಯನ್ನು ಹೆಚ್ಚಿಸುವ ಅಗತ್ಯವಿದೆ ಎಂದರು.

ಸಿರಿಧಾನ್ಯಗಳ ಕೃಷಿ ಪದ್ಧತಿಯು ಅತಿ ಪ್ರಾಚೀನ ಪದ್ಧತಿಯಾಗಿದೆ. ಎಷ್ಟೋ ಸಿರಿಧಾನ್ಯಗಳ ಬಳಕೆಯು ಕಡಿಮೆಯಾಗಿದ್ದು, ಅಳಿವಿನಂಚಿಗೆ ಸಾಗುವಂತಾಗಿದೆ. ಸಿರಿಧಾನ್ಯಗಳಲ್ಲಿ ವಿಟಮಿನ್, ಪ್ರೋಟೀನುಗಳು ಹಾಗೂ ಇತರ ಪೋಷಕಾಂಶಗಳಿವೆ. ಈ ಬೆಳೆಗಳು ಪರಿಸರ ಸ್ನೇಹಿಯಾಗಿದ್ದು ಕಡಿಮೆ ಮಳೆ ಬರುವ ಹಾಗೂ ಕಡಿಮೆ ಫಲವತ್ತತೆಯುಳ್ಳ ಪ್ರದೇಶಗಳಲ್ಲಿ ಬೆಳೆಯಬಹುದು. ಈ ಸಿರಿ ಧಾನ್ಯಗಳ ಮಹತ್ವವನ್ನು ಎಲ್ಲರೂ ಅರಿತು ತಮ್ಮ ಆಹಾರ ಕ್ರಮದಲ್ಲಿ ಸಿರಿಧಾನ್ಯಗಳ ಖ್ಯಾದಗಳನ್ನು ಬಳಸುವಂತೆ ಕೃಷಿ ಇಲಾಖೆಯ ಜಂಟಿ ನಿರ್ದೇಶಕಿ ಸುಮ ಅವರು ತಿಳಿಸಿದರು.

ತೋಟಗಾರಿಕೆ ಇಲಾಖೆಯ ಉಪನಿರ್ದೇಶಕ ಕುಮಾರಸ್ವಾಮಿ, ರೇಷ್ಮೆ ಉಪನಿರ್ದೇಶಕರಾದ ಶ್ರೀನಿವಾಸ್, ಕೃಷಿ ಇಲಾಖೆಯ ಉಪನಿರ್ದೇಶಕಿ ಭವ್ಯರಾಣಿ, ಉಪ ನಿರ್ದೇಶಕ ನಾಗರಾಜ್, ಕೃಷಿ ವಿಜ್ಞಾನ ಕೇಂದ್ರದ ಮುಖ್ಯಸ್ಥರು ಹಾಗೂ ಹಿರಿಯ ವಿಜ್ಞಾನಿ ಶಿವಾನಂದ ಹೊಂಗಲ್ ವಿ.ವಿಯ ವಿದ್ಯಾರ್ಥಿಗಳು ಸಾರ್ವಜನಿಕರು ಸೇರಿದಂತೆ ಮತಿತ್ತರರು ಉಪಸ್ಥಿತರಿದರು.

## ವಸತಿ ಶಾಲೆಗಳಲ್ಲಿ ಗುಣಮಟ್ಟದ ದಿನಸಿ, ತರಕಾರಿಗಳನ್ನು ಬಳಸಲು ತಾಕೀತು

**ಕೋಲಾರ,:** ಹಾಸ್ಟಲ್‌ಗಳಲ್ಲಿ ಪ್ರಧಾನವಾಗಿ ಸ್ವಚ್ಛತೆಯನ್ನು ಕಾಪಾಡಬೇಕು. ಅಕ್ಕಿ, ಎಣ್ಣೆ ಹಾಗೂ ತರಕಾರಿಗಳ ಗುಣಮಟ್ಟವನ್ನು ಪರಿಶೀಲಿಸಿ ಅಡುಗೆಗೆ ಬಳಸುವುದರಿಂದ ಉತ್ತವಾದ ಆರೋಗ್ಯವನ್ನು ಕಾಪಾಡಬಹುದು ಎಂದು ಅಪರ ಜಿಲ್ಲಾಧಿಕಾರಿ ಮಂಗಳಾ ಹೇಳಿದರು.

ಇಂದು ಜಿಲ್ಲಾಧಿಕಾರಿಗಳ ಕಛೇರಿಯ ಆಡಿಟೋರಿಯಂನಲ್ಲಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಆಹಾರ ಸುರಕ್ಷತೆ ಮತ್ತು ಗುಣಮಟ್ಟ ಪ್ರಾಧಿಕಾರ, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಸಮಾಜ ಕಲ್ಯಾಣ ಇಲಾಖೆ ಹಾಗೂ ಅಲ್ಪ ಸಂಖ್ಯಾತರ ಕಲ್ಯಾಣ ಇಲಾಖೆಯ ಸಹಯೋಗದಲ್ಲಿ ವಸತಿ ನಿಲಯ ಮತ್ತು ವಸತಿ ಶಾಲೆಗಳ ಅಧಿಕಾರಿ ಮತ್ತು ಸಿಬ್ಬಂದಿಗಳಿಗೆ ಆಹಾರ ಸುರಕಷತೆ ಮತ್ತು ಗುಣಮಟ್ಟ ಹಾಗೂ ತಂಬಾಕು ನಿಯಂತ್ರಣ ಕಾಯ್ದೆಯ ಬಗ್ಗೆ ತರಬೇತಿ ಕಾರ್ಯಗಾರವನ್ನು ಉದ್ಘಾಟಿಸಿ ಮಾತನಾಡಿದ ಅವರು ಹಾಸ್ಟಲ್‌ಗಳಲ್ಲಿನ ಅಡುಗೆ ಕೋಣೆಗಳ ಸ್ವಚ್ಛತೆ, ಪಾತ್ರಗಳ ಸ್ವಚ್ಛತೆ ಕಡೆಗೆ ಗಮನಹರಿಸಬೇಕು, ಉತ್ತಮ ಗುಣಮಟ್ಟದ ಆಹಾರ ಪದಾರ್ಥಗಳನ್ನು ಅಡುಗೆಗೆ ಬಳಸಬೇಕು, ಅಡುಗೆ ಸಾಮಗ್ರಿಗಳನ್ನು ಸೂಕ್ತ ಸ್ಥಳಗಳಲ್ಲಿ ಶೇಖರಣೆ ಮಾಡಬೇಕು. ಸಲಕರಣೆಗಳನ್ನು ನಿರ್ದಿಷ್ಟ ಸಮಯಕ್ಕೆ ಸದುಪಯೋಗ ಪಡಿಸಿಕೊಂಡು ಅವುಗಳನ್ನು ಬಳಸಬೇಕು. ಅಡುಗೆ ಸಿಬ್ಬಂದಿಯವರು ಸ್ವಚ್ಛ ಉಡುಗೆ ತೊಡುಗೆಗಳನ್ನು ಧರಿಸಿಕೊಂಡು ಅಡುಗೆ ಮಾಡಬೇಕು ಎಂದರು. ಮಕ್ಕಳ ಚಿಕಿತ್ಸೆಗೆ ಪ್ರತ್ಯೇಕ ಕೊಠಡಿಗಳನ್ನು ಮೀಸಲಿಡಬೇಕು, ಯಾವುದೇ ಕಾರಣಕ್ಕೂ ಮಕ್ಕಳನ್ನು ಅಡುಗೆ ಮಾಡುವ ಕೆಲಸ ಕಾರ್ಯಗಳಲ್ಲಿ ತೊಡಗಿಸಿಕೊಳ್ಳಬಾರದು. ಶೌಚಾಲಯಗಳನ್ನು ಹಾಗೂ ಹಾಸ್ಟಲ್‌ಗಳ ಸುತ್ತ-ಮುತ್ತಲಿನ ವಾತಾವರಣ ಸ್ವಚ್ಛವಾಗಿ ಇಟ್ಟಿಕೊಳ್ಳಬೇಕು. ಈ ತರಬೇತಿ ಕಾರ್ಯಾಗಾರದಲ್ಲಿ ನಿಯಮಗಳು ಹಾಗೂ ಕಾಯ್ದೆಗಳ ಬಗ್ಗೆ ಸರಿಯಾಗಿ ಅರಿತುಕೊಂಡು ಕಾರ್ಯನಿರ್ವಹಿಸಬೇಕು ಎಂದು ಕಿವಿ ಮಾತು ಹೇಳಿದರು.

ಕಾರ್ಯಕ್ರಮದಲ್ಲಿ ಸಮಾಜ ಕಲ್ಯಾಣ ಇಲಾಖೆಯ ಜಂಟಿ ನಿರ್ದೇಶಕರಾದ ಶ್ರೀನಿವಾಸನ್ ರವರು ಮಾತನಾಡಿ ಕರ್ನಾಟಕದಲ್ಲಿಯೇ ಪ್ರಪ್ರಥಮವಾಗಿ ವಸತಿ ಶಾಲೆಗಳನ್ನು ಹೊಂದಿರುವ ಮೂರು ಇಲಾಖೆಗಳು ಜಂಟಿಯಾಗಿ ಈ ಕಾರ್ಯಕ್ರಮವನ್ನು ರೂಪಿಸಲಾಗಿದೆ. ಹಾಸ್ಟಲ್‌ಗಳ ಯಾವುದೇ ಸಮಸ್ಯೆಯನ್ನು ಸಂಬಂಧಪಟ್ಟ ಅಧಿಕಾರಿಗಳ ಗಮನಕ್ಕೆ ತಿಳಿಸಿ ಸೂಕ್ತ ಪರಿಹಾರವನ್ನು ಕಂಡುಕೊಳ್ಳಬೇಕು. ತಮ್ಮ-ತಮ್ಮ ಕರ್ತವ್ಯಗಳನ್ನು ಜವಾಬ್ದಾರಿಯುತವಾಗಿ ನಿರ್ವಹಿಸಬೇಕು ಎಂದರು. ಹಾಸ್ಟಲ್‌ಗಳಲ್ಲಿ ಶೌಚಾಲಯಗಳ ಅಸ್ವಚ್ಛತೆ, ಮಕ್ಕಳು ತಂಬಾಕು ಸೇವನೆಯಂತಹ ಘಟನೆಗಳು ಮರುಕಳಿಸದಂತೆ ಎಚ್ಚರ ವಹಿಸಬೇಕು. ಹಾಸ್ಟಲ್‌ಗಳಲ್ಲಿ ಮತ್ತು ವಸತಿ ಶಾಲೆಗಳಲ್ಲಿ ಹೆಚ್ಚಿನ ಅಂಕಗಳನ್ನು ಪಡೆದವರಿಗೆ ಪ್ರೋತ್ಸಾಹಕವಾಗಿ ಬಹುಮಾನಗಳನ್ನು ನೀಡಲಾಗುತ್ತದೆ. ಈ ವರ್ಷ ಹೆಚ್ಚು ಅಂಕಗಳಿಸಿದ ವಿದ್ಯಾರ್ಥಿಗಳಾದ ವಸಂತ ಕುಮಾರ್ ಆರ್.ಸಿ ಯವರಿಗೆ 45 ಸಾವಿರ ರೂಗಳ ನಗದು ಹಾಗೂ ಮೀತನ್‌ಗೆ 5 ಸಾವಿರ ರೂಗಳ ಬಹುಮಾನವನ್ನು ನೀಡಲಾಗಿದೆ. ಉತ್ತಮವಾದ ಸಾಧನೆಗಳನ್ನು ಮುಂದೆ ಮಾಡುವುದರಿಂದ ತಂದೆ-ತಾಯಿಯರಿಗೆ, ಶಾಲಾ-ಕಾಲೇಜುಗಳಿಗೆ ಹಾಗೂ ಹಾಸ್ಟಲ್‌ಗಳಿಗೆ ಉತ್ತಮ ಹೆಸರು ಬರುತ್ತದೆ ಎಂದರು. ಅಲ್ಪಸಂಖ್ಯಾತರ ಜಿಲ್ಲಾ ಅಧಿಕಾರಿ ಮೈಲಾರಪ್ಪ, ಉಪನ್ಯಾಸಕಾರರು ಮಹಮ್ಮದ್, ಜಿಲ್ಲಾ ಸುರಕ್ಷತಾ ಅಧಿಕಾರಿ ರಾಕೇಶ್ ಕುಮಾರ್, ಎಲ್ಲಾ ವಸತಿ ಶಾಲೆಗಳ ಪ್ರಾಂಶುಪಾಲರು, ವಾರ್ಡನ್‌ಗಳು ಹಾಗೂ ಅಡುಗೆ ಸಿಬ್ಬಂದಿ ಸೇರಿದಂತೆ ಮತ್ತಿತರರು ಉಪಸ್ಥಿತರಿದ್ದರು.



# ಶಿವಕುಮಾರ್ ಕಾಸರಗೋಡು ಕನ್ನಡ ಭವನದ ಕರ್ನಾಟಕ ರಾಜ್ಯ ಸಂಚಾಲಕ

**ಕಾಸರಗೋಡು:** ಬಿ ಶಿವಕುಮಾರ್ ಸಾರಥ್ಯದ ಸ್ವರ್ಣಭೂಮಿ ಫೌಂಡೇಷನ್ ಕೋಲಾರ ಹಾಗೂ ಕನ್ನಡ ಭವನ ಕಾಸರಗೋಡು, ಕನ್ನಡ ಭವನ ಪ್ರಕಾಶನ ಸಂಯುಕ್ತ ಆಶ್ರಯದಲ್ಲಿ ಕನ್ನಡ ಭವನ ಸಭಾ ಸದನದಲ್ಲಿ ಕನ್ನಡ ರಾಜ್ಯೋತ್ಸವ ಸವಿಸಂಭ್ರಮ ಕಾರ್ಯಕ್ರಮ ಕನ್ನಡ ಭವನ ಸ್ಥಾಪಕ ಅಧ್ಯಕ್ಷರಾದ ವಾಮನ್ ರಾವ್ ಬೇಕಲ್ ಅಧ್ಯಕ್ಷತೆಯಲ್ಲಿ ನಡೆಯಿತು.

ಸ್ವರ್ಣಭೂಮಿ ಫೌಂಡೇಷನ್ ಅಧ್ಯಕ್ಷ ಬಿ.ಶಿವಕುಮಾರ್ ಕಾರ್ಯಕ್ರಮ ಉದ್ಘಾಟಿಸಿ ಕಾಸರಗೋಡಿನ ಕನ್ನಡಿಗರ ಕನ್ನಡ ಪ್ರೇಮ ಕರ್ನಾಟಕದ ಎಲ್ಲ ಕನ್ನಡಿಗರಿಗೆ, ಕನ್ನಡ ಸಂಘ ಸಂಸ್ಥೆಗಳಿಗೆ ಮಾದರಿ, ಇಲ್ಲಿ ಎಂದಿಗೂ ಕನ್ನಡ ಶಾಶ್ವತವಾಗಿ ಉಳಿಯುತ್ತೆ, ಇಲ್ಲಿನ ಮನೆ ಮನೆಗಳನ್ನು ಕನ್ನಡಸಂಸ್ಥೆಗಳ ಕಾರ್ಯಕ್ರಮ ಗಳಿಗಾಗಿ ತೆರೆದಿಟ್ಟು ಕನ್ನಡ ಉಳಿಸುವ ಧಿಶೆಯಲ್ಲಿ ಕಾರ್ಯಪ್ರವಿತ್ತರಾಗಿರುವುದೇ ಇದಕ್ಕೆ ಸಾಕ್ಷಿ. ಇದರಿಂದಲೇ ಕನ್ನಡ ಭವನ ನಮಗೆ ಮಾದರಿಯಾಗಿರುವುದು. ಇಲ್ಲಿನ ಕನ್ನಡಿಗರ ಆತಿತ್ಯ, ಕೊಡುವ ಪ್ರೀತಿ, ಗೌರವ ನಮ್ಮನ್ನು ಕಾಸರಗೋಡು ಪ್ರದೇಶಕ್ಕೆ ಪದೇ ಪದೇ ಬರಲು ಪ್ರೇರಣೆ ಎಂದು ಕಾರ್ಯಕ್ರಮ ಉದ್ಘಾಟಿಸಿ ನುಡಿದರು.

ಮುಖ್ಯ ಅತಿಥಿಗಳಾಗಿ ಭಾಗವಹಿಸಿದ ಇಂಚರ ಸಾಹಿತ್ಯ ಕುಟೀರ ಅಧ್ಯಕ್ಷ ಡಾ.ಇಂಚರ ನಾರಾಯಣ ಸ್ವಾಮಿ, ಅಕ್ಷರ ವಿಜಯ ಮಾಸಪತ್ರಿಕೆಯ



ಸಂಪಾದಕರಾದ ಡಾ.ಪೋಸ್ಟ್ ನಾರಾಯಣಸ್ವಾಮಿ, ಕೋಲಾರ ತಾಲ್ಲೂಕು ಕನ್ನಡ ಸಾಹಿತ್ಯ ಪರಿಷತ್ ಗೌರವ ಅಧ್ಯಕ್ಷ ಟಿ ಸುಬ್ಬರಾಮಯ್ಯ, ಗಮನ ಮಹಿಳಾ ಸಮೂಹ ಸಮನ್ವಯಾಧಿಕಾರಿ ಶಾಂತಮ್ಮ, ಚುಟುಕು ಸಾಹಿತ್ಯ ಪರಿಷತ್ ಕಾರ್ಯದರ್ಶಿ ಡಾ ಶರಣಪ್ಪ ಗಬ್ಬೂರ್, ಸ್ವರ್ಣಭೂಮಿ ಉಪಾಧ್ಯಕ್ಷ ಸೈಯದ್ ತನವೀರ್, ಮುಂತಾದವರು ಕನ್ನಡ ಮನೆಮಾತು, ಸಾಹಿತ್ಯ, ಕಲೆಗಳ ಬಗ್ಗೆ ಸವಿಸ್ತಾರವಾಗಿ ಮಾತನಾಡಿದರು.

ನವೀನ್ ಎಂ, ವೆಂಕಟರಾಜಮ್ಮ, ವರ್ಷ , ರಂಗಭೂಮಿ ಕಲಾವಿದೆ ಲಕ್ಷ್ಮಿ ದೇವಿ ಕೋಲಾರ, ಬೃಂದಾ ಎಂ, ರಾಜಕುಮಾರ್, ನಂಜುಂಡಪ್ಪ ಬಿ.ವಿ ಕೋಲಾರ, ಹಿಬಾ ಸಯ್ಯದ್ ಮುಂತಾದವರು ಉಪಸ್ಥಿತರಿದ್ದು ವಿವಿಧ ಪ್ರಕಾರಗಳಲ್ಲಿ ನುಡಿ ಸೇವೆ ಸಲ್ಲಿಸಿದರು.

ಕನ್ನಡ ಭವನ ವತಿಯಿಂದ ಕೋಲಾರದಿಂದ ಬಂದ ಸಾಹಿತ್ಯ ಅತಿಥಿಗಳಿಗೆ ಪ್ರಮಾಣ ಪತ್ರ, ಪುಸ್ತಕ ಸ್ಮರಣಿಕೆ, ಶಾಲು ಹೊದಿಸಿ ಗೌರವಿಸಿತು. ಈ ವೇದಿಕೆಯಲ್ಲಿ ಕೋಲಾರದ ಬಿ ಶಿವಕುಮಾರ್‌ರನ್ನು ಕಾಸರಗೋಡು ಕನ್ನಡ ಭವನದ ಕರ್ನಾಟಕ ರಾಜ್ಯ ಸಂಚಾಲಕರನ್ನಾಗಿ ಆಯ್ಕೆ ಮಾಡಿ ಅಧಿಕಾರ ಪತ್ರ ಹಸ್ತಾಂತರಿಸಿತು. ವಾಮನ್ ರಾವ್ ಬೇಕಲ್ ಸ್ವಾಗತಿಸಿ, ಸಂಚಾಲಕಿ ಸಂಧ್ಯಾ ರಾಣಿ ಟೀಚರ್ ವಂದಿಸಿದರು. ಕೋಲಾರದ ಸಾಹಿತ್ಯ ತಂಡ ಕನ್ನಡ ಭವನ ವಾಚನಾಲಾಯ ವೀಕ್ಷಿಸಿ ಸಂತಸ ವ್ಯಕ್ತಪಡಿಸಿದರು.

### ರಾಜ್ಯ ಅಂಗವಿಕಲ ಅಧಿನಿಯಮದ ಮಾಜಿ ಆಯುಕ್ತ ರಾಜಣ್ಣ ಸಲಹೆ

# ಮಕ್ಕಳ ಬೆಳವಣಿಗೆಗೆ ಕ್ರೀಡೆ ಸಹಕಾರಿ

**ಚಾಮರಾಜನಗರ:** ಕ್ರೀಡೆಯು ವ್ಯಕ್ತಿಗಳಲ್ಲಿ ಸಹಜವಾಗಿ ಬಾಂಧವ್ಯ, ಆತ್ಮೀಯತೆ ಆತ್ಮವಿಶ್ವಾಸ ವೃದ್ಧಿಸುತ್ತದೆ ಹಾಗೂ ವಿಕಲಚೇತನ ಮಕ್ಕಳ ಬೆಳವಣಿಗೆಗೆ ಪೂರಕವಾಗಿದೆ ಎಂದು ರಾಜ್ಯ ಅಂಗವಿಕಲ ಅಧಿನಿಯಮದ ಮಾಜಿ ಆಯುಕ್ತರಾದ ರಾಜಣ್ಣ ಅವರು ತಿಳಿಸಿದರು.

ನಗರದ ಡಾ. ಬಿ.ಆರ್. ಅಂಬೇಡ್ಕರ್ ಜಿಲ್ಲಾ ಕ್ರೀಡಾಂಗಣದಲ್ಲಿಂದು ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಶಾಲಾ ಶಿಕ್ಷಣ ಇಲಾಖೆಯ ಸಂಯುಕ್ತಾಶ್ರಯದಲ್ಲಿ ಏರ್ಪಡಿಸಲಾಗಿದ್ದ ಜಿಲ್ಲಾಮಟ್ಟದ ಹಿರಿಯ ಪ್ರಾಥಮಿಕ ಮತ್ತು ಪ್ರೌಢಶಾಲಾ ವಿಶೇಷಚೇತನ ಮಕ್ಕಳ ಕ್ರೀಡಾಕೂಟವನ್ನು ಉದ್ಘಾಟಿಸಿ ಅವರು ಮಾತನಾಡಿದರು.



ವಿಕಲಚೇತನ ಮಕ್ಕಳಿಗೆ ಅವರಿಗಿರುವ ಅಂಗವೈಕಲ್ಯ ನ್ಯೂನತೆಯ ಕೀಳರಿಮೆಯಿಂದ ಮುಖ್ಯವಾಹಿನಿಗೆ ಬರಲು ಸಂಕೋಚವಿರುತ್ತದೆ. ಮಕ್ಕಳಲ್ಲಿ ಆತ್ಮವಿಶ್ವಾಸ ತುಂಬಲು ಈ ಕ್ರೀಡಾಕೂಟವನ್ನು ಹಮ್ಮಿಕೊಳ್ಳಲಾಗಿದೆ. ಸಮನ್ವಯ ಹಾಗೂ ಸಂಯೋಜಿತ ಶಿಕ್ಷಣದಿಂದ ಪೂರ್ಣ ಪ್ರಮಾಣದಲ್ಲಿ ವಿಕಲಚೇತನ ವಿದ್ಯಾರ್ಥಿಗಳು ಕ್ರೀಡೆಯಲ್ಲಿ ಹಾಗೂ ಇನ್ನಿತರ ಚಟುವಟಿಕೆಗಳಲ್ಲಿ ಭಾಗವಹಿಸಲು ಸಾಧ್ಯವಾಗಿದೆ ಎಂದರು.

ವಿಕಲಚೇತನ ವಿದ್ಯಾರ್ಥಿಗಳು ಯಾವುದೇ ಕ್ರೀಡೆಯಲ್ಲಿ ಭಾಗವಹಿಸದೆ ಹಿಂದೆ ಸರಿಯುತ್ತಿದ್ದರು. ಅವರಿಗೆ ಪ್ರತ್ಯೇಕವಾಗಿ ಕ್ರೀಡಾ ಚಟುವಟಿಕೆಯಲ್ಲಿ ಭಾಗವಹಿಸುವ ಅವಕಾಶವನ್ನು ಕಲ್ಪಿಸಲಾಗಿದೆ. ಈ ಅವಕಾಶವನ್ನು ಉಪಯೋಗಿಸಿಕೊಂಡು ತಾಲೂಕು, ಜಿಲ್ಲಾ, ರಾಜ್ಯ, ರಾಷ್ಟ್ರ, ಅಂತರಾಷ್ಟ್ರೀಯ ಮಟ್ಟದ ಕ್ರೀಡಾಕೂಟಗಳಲ್ಲಿ ಭಾಗವಹಿಸಿ ಕೀರ್ತಿ ತರಬೇಕು ಎಂದು ರಾಜ್ಯ ಅಂಗವಿಕಲ ಅಧಿನಿಯಮದ ಮಾಜಿ ಆಯುಕ್ತರಾದ ರಾಜಣ್ಣ ತಿಳಿಸಿದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡಿದ ಜಿಲ್ಲಾ ವಿಕಲಚೇತನ ಕ್ಷೇಮಾಭಿವೃದ್ಧಿ ಸಂಘದ ಅಧ್ಯಕ್ಷರಾದ ರಮೇಶ್ ಅವರು ಕಳೆದ ಬಾರಿ ಜಿಲ್ಲೆಯ ವಿಕಲಚೇತನ ಮಕ್ಕಳು ಮಧುಗಿರಿಯಲ್ಲಿ ನಡೆದ ಕ್ರೀಡಾಕೂಟಕ್ಕೆ ಆಯ್ಕೆಯಾಗಿದ್ದರು. ಪ್ರತಿಯೊಬ್ಬರೂ ಕ್ರೀಡಾ ಚಟುವಟಿಕೆಯಲ್ಲಿ ತೊಡಗಿಸಿಕೊಳ್ಳಬೇಕು. ಪ್ರತಿ ಹಂತದಲ್ಲಿಯೂ ವಿಕಲಚೇತನ ವಿದ್ಯಾರ್ಥಿಗಳ ಕ್ರೀಡಾ ಚಟುವಟಿಕೆಗಳಿಗೆ ಪ್ರೋತ್ಸಾಹ ನೀಡಲು ಜಿಲ್ಲಾ ಸಮಿತಿ ಮುಂದಿದೆ. ಮಕ್ಕಳ ಪ್ರತಿಭೆಗೆ ಪೋಷಕರು ಬೆಂಬಲ ನೀಡಬೇಕು ಎಂದರು.

ಉಪನಿರ್ದೇಶಕ ಕಚೇರಿಯ ಶಿಕ್ಷಣಾಧಿಕಾರಿ ಮಲ್ಲಿಕಾರ್ಜುನ್, ಜಿಲ್ಲಾ ದೈಹಿಕ ಶಿಕ್ಷಣಾಧಿಕಾರಿ ಶಂಕರ್, ದೈಹಿಕ ಶಿಕ್ಷಣ ಇಲಾಖೆಯ ತಾಲ್ಲೂಕು ಪರಿವೀಕ್ಷಕರಾದ ಮಹಾದೇವ, ಇತರರು ಕಾರ್ಯಕ್ರಮದಲ್ಲಿ ಉಪಸ್ಥಿತರಿದರು.

# ಕನ್ನಡ ಭಾಷೆ ಹೆಚ್ಚು ಮಾತನಾಡಿ ಶ್ರೀಮಂತಗೊಳಿಸಿ

**ಕೋಲಾರ:** ಕನ್ನಡಜ್ಯೋತಿ ಹೊತ್ತ ಕನ್ನಡ ರಥಯಾತ್ರೆಯು 87 ನೇ ಅಖಿಲ ಭಾರತ ಸಾಹಿತ್ಯ ಸಮ್ಮೇಳನದ ಅಂಗವಾಗಿ ದಿನಾಂಕ: 22-11-2024 ರಂದು ಕೋಲಾರ ನಗರದಿಂದ ಮೆರವಣಿಗೆಯ ಮೂಲಕ ಬಂಗಾರಪೇಟೆ ತಾಲ್ಲೂಕಿನ ಹಂಚಾಳಗೇಟ್ ಫೀಲ್ಡ್ ಮಾರ್ಷಲ್ ಕೆ.ಎಂ.ಕಾರ್ಯಪ್ಪ ಸಮೂಹ ಶಿಕ್ಷಣ ಸಂಸ್ಥೆಗಳ ಹೆಬ್ಬಾಗಿಲಿನಲ್ಲಿ ಸಂಸ್ಥೆಗಳ ಅಧ್ಯಕ್ಷ ಡಾ.ಎಂ. ಚಂದ್ರಶೇಖರ್, ಆಡಳಿತಾಧಿಕಾರಿಗಳು, ಶಾಲಾಭಿವೃದ್ಧಿ ಸಮಿತಿ ಉಪನ್ಯಾಸಕ ವೃಂದ ಮತ್ತು ಸುಮಾರು 2000 ವಿದ್ಯಾರ್ಥಿಗಳು ಕಳಶಗಳನ್ನು ಹೊತ್ತು ವಾದ್ಯಗೋಷ್ಠಿಯೊಂದಿಗೆ ಕನ್ನಡ ರಥವನ್ನು ಬರಮಾಡಿಕೊಂಡು, ಜಯಘೋಷಗಳೊಂದಿಗೆ ಕನ್ನಡಾಂಬೆ ಭುವನೇಶ್ವರಿಗೆ ಪುಷ್ಪ ನಮನವನ್ನು ಸಲ್ಲಿಸಿದರು.

ಈ ಸಂದರ್ಭದಲ್ಲಿ ಬಂಗಾರಪೇಟೆ ವಿಧಾನಸಭಾ ಕ್ಷೇತ್ರದ ಶಾಸಕ ಎಸ್.ಎನ್ .ನಾರಾಯಣಸ್ವಾಮಿ ಕೆ.ಎಂ.ರಥಯಾತ್ರೆಯ ಸಾರಥ್ಯವನ್ನು ವಹಿಸಿದ್ದರು.

ಈ ಸಂದರ್ಭದಲ್ಲಿ ಅಧ್ಯಕ್ಷ ಡಾ.ಎಂ. ಚಂದ್ರಶೇಖರ್ ಮಾತನಾಡಿ, ಕನ್ನಡಾಂಬೆಗೆ ಜಯಘೋಷಗಳನ್ನು ಕೂಗುವುದರೊಂದಿಗೆ ನೆರೆದಿದ್ದ ಜನಸಮೂಹಕ್ಕೆ ಕನ್ನಡದ ಕಂಪು, ಇತಿಹಾಸ, ಕನ್ನಡ ಕವಿಗಳು, ಕನ್ನಡ ಕವಿಗಳ ಕೊಡುಗೆ, ಭಾಷಾವಾರು ಪ್ರಾಂತ್ಯಗಳ ರಚನೆಯಿಂದಾಗಿ ಹೈದರಾಬಾದ್, ಮದ್ರಾಸ್ ಮತ್ತು ಮುಂಬೈ ಪ್ರಾಂತ್ಯಗಳಲ್ಲಿ ಹಂಚಿಹೋಗಿದ್ದ ಕನ್ನಡ ಭಾಷಿಕರ ಪ್ರದೇಶಗಳನ್ನು ಒಟ್ಟುಗೂಡಿಸಿ ಕರ್ನಾಟಕ ರಾಜ್ಯ ಉದಯವಾಗಿದ್ದು ಮತ್ತು ಹುಯಿಲಗೋಳ ನಾರಾಯಣರಾಯರ ಉದಯವಾಗಲಿ ನಮ್ಮ ಚೆಲುವ ಕನ್ನಡನಾಡು ಮುಂತಾದ ವಿಚಾರಗಳನ್ನು ಹಂಚಿಕೊಂಡರು.

ಕನ್ನಡ ಭಾಷೆ ಹೆಚ್ಚು-ಹೆಚ್ಚು ಮಾತನಾಡುತ್ತಾ, ಕನ್ನಡ ಭಾಷಾ ಪ್ರಪಂಚವನ್ನು ಶ್ರೀಮಂತಗೊಳಿಸಬೇಕೆಂದು ಕರೆ ನೀಡಿದರು.

ಕಾರ್ಯಕ್ರಮದಲ್ಲಿ ಬಂಗಾರಪೇಟೆ ತಾಲ್ಲೂಕು ತಹಶೀಲ್ದಾರ್ ಎನ್. ವೆಂಕಟೇಶಪ್ಪ, ತಾಲ್ಲೂಕು ಪಂಚಾಯಿತಿ ಕಾರ್ಯನಿರ್ವಹಣಾಧಿಕಾರಿ ರವಿಕುಮಾರ್, ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತಿನ ಅಧ್ಯಕ್ಷ ಎನ್.ಬಿ. ಗೋಪಾಲಗೌಡ, ಬಂಗಾರಪೇಟೆ ತಾಲ್ಲೂಕಿನ ಕ್ಷೇತ್ರ ಶಿಕ್ಷಣಾಧಿಕಾರಿ ಗುರುಮೂರ್ತಿ ಹಾಜರಿದ್ದು ಕನ್ನಡಾಂಬೆಯ ಮಕ್ಕಳಿಗೆ ಶುಭ ಹಾರೈಸಿ ಭುವನೇಶ್ವರಿ ದೇವಿಗೆ ಪುಷ್ಪ ನಮನವನ್ನು ಸಲ್ಲಿಸುವುದರ ಮುಖಾಂತರ ವಾದ್ಯಗೋಷ್ಠಿ ಮತ್ತು ಜಯಘೋಷಗಳೊಂದಿಗೆ ಬಂಗಾರಪೇಟೆ ನಗರಕ್ಕೆ ಬೀಳ್ಕೊಡಲಾಯಿತು.



## ಬೀದಿ ಬದಿ ವ್ಯಾಪಾರಿಗಳ ಸಿಂಧುತ್ವ ನವೀಕರಣಕ್ಕೆ ಸೂಚನೆ

**ಮೈಸೂರು:** 2018-19 ನೇ ಸಾಲಿನಲ್ಲಿ ಮೈಸೂರು ಮಹಾನಗರ ಪಾಲಿಕೆಯ ವ್ಯಾಪ್ತಿಯ 1896 ಬೀದಿ ಬದಿ ವ್ಯಾಪಾರಿಗಳನ್ನು ಸಮೀಕ್ಷೆ ಮೂಲಕ ಗುರುತಿಸಿ, ನಿಯಮಾನುಸಾರ ಅರ್ಹ 1856 ಬೀದಿ ಬದಿ ವ್ಯಾಪಾರಿಗಳಿಗೆ ಕ್ಯೂಆರ್ ಕೋಡ್ ಆಧಾರಿತ ಗುರುತಿನ ಪತ್ರ ಮತ್ತು ವ್ಯಾಪಾರ ಪ್ರಮಾಣ ಪತ್ರಗಳನ್ನು ನೀಡಲಾಗಿದೆ. ಮಹಾನಗರ ಪಾಲಿಕೆ ವ್ಯಾಪ್ತಿಯ 9 ವಲಯ ಕಛೇರಿಗಳಲ್ಲಿ ಗುರುತಿಸಿದ ಬೀದಿಬದಿ ವ್ಯಾಪಾರಿಗಳ ಒಟ್ಟು ಸಂಖ್ಯೆಯು 2198 ಆಗಿದ್ದು, 1856 ಜನರು ಗುರುತಿನ ಪತ್ರ ಮತ್ತು ವ್ಯಾಪಾರ ಪ್ರಮಾಣ ಪತ್ರವನ್ನು ಪಡೆದಿರುತ್ತಾರೆ. ಸದರಿ ಅವಧಿಯಲ್ಲಿ ನೀಡಲಾಗಿರುವ ಗುರುತಿನ ಪತ್ರ ಮತ್ತು ಪ್ರಮಾಣ ಪತ್ರದ ಸಿಂಧುತ್ವದ ಅವಧಿಯು 05 ವರ್ಷಗಳಾಗಿದ್ದು, 31 ಡಿಸೆಂಬರ್ ರಂದು ಮುಕ್ತಾಯಗೊಳ್ಳಲಿದೆ. ಆಯಾಯ ವಲಯ ಕಛೇರಿಗಳ ವ್ಯಾಪ್ತಿಯಲ್ಲಿ ಬರುವ ಬೀದಿ ಬದಿ ವ್ಯಾಪಾರಿಗಳು, ಸಂಬಂಧಿಸಿದ ವಲಯ ಆಯುಕ್ತರುಗಳಿಗೆ ಲಿಖಿತ ಮನವಿಯೊಂದಿಗೆ ಗುರುತಿನ ಪತ್ರ ಮತ್ತು ವ್ಯಾಪಾರ ಪ್ರಮಾಣ ಪತ್ರ ಆಧಾರ್ ಕಾರ್ಡ್, ರೇಷನ್ ಕಾರ್ಡ್, ಕುಟುಂಬದ ಭಾವಚಿತ್ರ ಪಿ.ಎಂ ಸ್ವ-ನಿಧಿ ಸೌಲಭ್ಯ ಪಡೆದಿರುವ ಅರ್ಜಿ ಮತ್ತು ಮತದಾರರ ಗುರುತಿನ ನಕಲು ಪ್ರತಿ ಇತ್ಯಾದಿ ದಾಖಲೆಗಳನ್ನು ಡಿಸೆಂಬರ್ 9 ರೊಳಗಾಗಿ ಸಲ್ಲಿಸಬಹುದು. ಹೆಚ್ಚಿನ ಮಾಹಿತಿಗಾಗಿ ಕಛೇರಿ ದೂ.ಸಂ: 9449841196 ಎಂದು ಪಾಲಿಕೆಯ ಹೆಚ್ಚುವರಿ ಆಯುಕ್ತರು ತಿಳಿಸಿದ್ದಾರೆ.

## ಸಂವಿಧಾನ ದಿನಾಚರಣೆ:ವಿವಿಧ ಸ್ಪರ್ಧೆಗಳ ಆಯೋಜನೆ

**ಮೈಸೂರು:** ರಾಜ್ಯ ಮುಕ್ತ ವಿಶ್ವವಿದ್ಯಾನಿಲಯದ ಡಾ.ಬಿ.ಆರ್.ಅಂಬೇಡ್ಕರ್ ಅಧ್ಯಯನ ಮತ್ತು ಸಂಶೋಧನಾ ಕೇಂದ್ರ, ಮತ್ತು ಮಹಾರಾಣಿ ಮಹಿಳಾ ಕಲಾ ಕಾಲೇಜು, ಮೈಸೂರು, ಇವರ ಸಂಯುಕ್ತ ಆಶ್ರಯದಲ್ಲಿ ನವೆಂಬರ್ 26 ರಂದು ಏರ್ಪಡಿಸಲಾಗಿರುವ ''ಸಂವಿಧಾನ ದಿನಾಚರಣೆ'' ಕಾರ್ಯಕ್ರಮದ ಅಂಗವಾಗಿ ಕರಾಮುವಿಯ ಸ್ನಾತಕ ಮತ್ತು ಸ್ನಾತಕೋತ್ತರ ವಿದ್ಯಾರ್ಥಿಗಳು, ಮಹಾರಾಣಿ ಮಹಿಳಾ ಕಲಾ ಕಾಲೇಜು ವಿದ್ಯಾರ್ಥಿಗಳು ಮತ್ತು ಇತರೆ ಕಾಲೇಜಿನ ವಿದ್ಯಾರ್ಥಿಗಳಿಗೆ ನವೆಂಬರ್ 26 ರಂದು ಬೆಳಿಗ್ಗೆ 10 ಗಂಟೆಗೆ ''ಭಾರತದ ಸಂವಿಧಾನ ರಚನೆಯಲ್ಲಿ ಡಾ.ಬಿ.ಆರ್. ಅಂಬೇಡ್ಕರ್ ರವರ ಪಾತ್ರ'' ಎಂಬ ವಿಷಯದ ಮೇಲೆ ಪ್ರಬಂಧ ಸ್ಪರ್ಧೆ ಮತ್ತು ಹಾಗೂ ''ಭಾರತದ ಸಮಗ್ರ ಪರಿವರ್ತನೆಯಲ್ಲಿ ಸಂವಿಧಾನದ ಪಾತ್ರ ಮತ್ತು ಮಹತ್ವ'' ಎಂಬ ವಿಷಯದ ಮೇಲೆ ಚರ್ಚಾ ಸ್ಪರ್ಧೆಯನ್ನು ಏರ್ಪಡಿಸಲಾಗಿದೆ. ಆಸಕ್ತಿಯುಳ್ಳ ವಿದ್ಯಾರ್ಥಿಗಳು ಸ್ಪರ್ಧೆಯ ನೊಂದಾವಣೆಗಾಗಿ ದೂ. ಸಂ: 7204819172 ಮತ್ತು 9686314012 ಅನ್ನು ಸಂಪರ್ಕಿಸಬಹುದು ಎಂದು ತಿಳಿಸಿದ್ದಾರೆ.



ಕರ್ನಾಟಕದ ಗೌರವಾನ್ವಿತ ರಾಜ್ಯಪಾಲರಾದ ಥಾವರ್ ಚಂದ್ ಗೆಹ್ಲೋಟ್ ಅವರು ಚಿಲ್ಡನ್ ಸ್ಪೇಸ್ ಕ್ಲಬ್ ಆಫ್ ಇಂಡಿಯಾ ಸಂಸ್ಥೆಯ ಮಕ್ಕಳನ್ನು ಶುಕ್ರವಾರ ರಾಜಭವನದಲ್ಲಿ ಭೇಟಿಯಾದರು. ಈ ಸಂದರ್ಭದಲ್ಲಿ ಸಂಸ್ಥೆಯ ವಾಸಂತಿ, ಮಕ್ಕಳ ಪೋಷರು ಉಪಸ್ಥಿತರಿದ್ದರು.

## ಮರು ಬಹಿರಂಗ ಹರಾಜು ಪ್ರಕ್ರಿಯೆ

**ಮೈಸೂರು:** ಪಿರಿಯಾಪಟ್ಟಣ ಹೊಸ ಪುರಸಭೆಯ ಕಛೇರಿ ಕಟ್ಟಡದ ಹತ್ತಿರ ಕೆ.ಇ.ಬಿ. ರಸ್ತೆಯಲ್ಲಿ ನೂತನವಾಗಿ ನಿರ್ಮಿಸಿರುವ 4 ವಾಣಿಜ್ಯ ಮಳಿಗೆಗಳ ಪೈಕಿ 02, 03 ಮತ್ತು 04 ಮಳಿಗೆಗಳನ್ನು ಡಿಸೆಂಬರ್ 10 ರಂದು ಬೆಳಿಗ್ಗೆ 11 ಗಂಟೆಗೆ ಪುರಸಭೆಯ ಆವರಣದಲ್ಲಿ ಮಾಸಿಕ ಬಾಡಿಗೆ ಆಧಾರದ ಮೇಲೆ ಏಲೇ ಮಾಡಲು ಕ್ರಮಕೈಗೊಳ್ಳಲಾಗಿದೆ. ಮರು ಬಹಿರಂಗ ಹರಾಜಿನಲ್ಲಿ ಭಾಗವಹಿಸಲು ಇಚ್ಛಿಸುವವರು ಪ್ರತಿ ಅಂಗಡಿ ಮಳಿಗೆಗಳಿಗೆ 50,000 ರೂ. ಗಳನ್ನು ಪಿರಿಯಾಪಟ್ಟಣ ಪುರಸಭೆಯ ಮುಖ್ಯಾಧಿಕಾರಿಯವರ ಹೆಸರಿನಲ್ಲಿ ಡಿ.ಡಿ. ಮುಖಾಂತರ ಡಿಸೆಂಬರ್ 09 ರ ಸಂಜೆ 5 ಗಂಟೆಯೊಳಗೆ ಡಿ.ಡಿ., ಆಧಾರ್ ಕಾರ್ಡ್, ಪ್ಯಾನ್ ಕಾರ್ಡ್, ಚುನಾವಣಾ ಗುರುತಿನ ಚೀಟಿ/ಇತರೇ ದಾಖಲೆಗಳೊಂದಿಗೆ ಕಛೇರಿಗೆ ಅರ್ಜಿ ಸಲ್ಲಿಸಿ ಸದರಿ ಹರಾಜಿನಲ್ಲಿ ಭಾಗವಹಿಸಬಹುದಾಗಿದೆ. ಹೆಚ್ಚಿನ ಮಾಹಿತಿಗಾಗಿ ಕಛೇರಿಯ ಕಂದಾಯ ಶಾಖೆ ಮತ್ತು www.periyapatnatown.mrc.gov.in ವೆಬ್‌ಸೈಟ್ ಅನ್ನು ಸಂಪರ್ಕಿಸಬಹುದು ಎಂದು ಪಿರಿಯಾಪಟ್ಟಣ ಪುರಸಭೆಯ ಮುಖ್ಯಾಧಿಕಾರಿ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಶಾಸಕ ಕೊತ್ತೂರು ಜಿ.ಮಂಜುನಾಥ್ ಭರವಸೆ

# ಸರ್ಕಾರಿ ನೌಕರರ ಭವನ, ಗುರುಭವನ ನಿರ್ಮಾಣಕ್ಕೆ ಬದ್ಧ

**ಕೋಲಾರ:** ನಗರದಲ್ಲಿ ಸರ್ಕಾರಿ ನೌಕರರ ಭವನ ಹಾಗೂ ಗುರುಭವನ ನಿರ್ಮಿಸಲು ಬದ್ಧನಾಗಿದ್ದು, ಅದು ನನ್ನ ಜವಾಬ್ದಾರಿಯಾಗಿದೆ ಜಿಲ್ಲೆಯ ವಿವಿಧ ಇಲಾಖೆಗಳಲ್ಲಿ ಸಿಬ್ಬಂದಿ ಕೊರತೆಯಿದ್ದು ಒಳಿದ ಸಿಬ್ಬಂದಿ ಮೇಲೆ ಒತ್ತಡ ಉಂಟಾಗುತ್ತಿರುವುದು ನಿಜ. ಮುಂದಿನ ದಿನಗಳಲ್ಲಿ ಭರ್ತಿಗೆ ಕ್ರಮ ವಹಿಸುತ್ತೇನೆ ಎಂದು ಶಾಸಕ ಕೊತ್ತೂರು ಜಿ.ಮಂಜುನಾಥ್ ಭರವಸೆ ನೀಡಿದರು.



ಜಿಲ್ಲಾ ಸರ್ಕಾರಿ ನೌಕರರ ಸಂಘಕ್ಕೆ ಹೊಸದಾಗಿ ಆಯ್ಕೆಯಾಗಿರುವ ನೂತನ ನಿರ್ದೇಶಕರಿಗೆ ನಗರ ಹೊರವಲಯದಲ್ಲಿರುವ ತಮ್ಮ ಅತಿಥಿಗೃಹದಲ್ಲಿ ಶುಕ್ರವಾರ ಏರ್ಪಡಿಸಿದ್ದ ಅಭಿನಂದನೆ ಹಾಗೂ ಔತಣಕೂಟ ಕಾರ್ಯಕ್ರಮದಲ್ಲಿ ಅವರು ಮಾತನಾಡಿ, ಜಿಲ್ಲೆಯ ಹಾಗೂ ತಾಲ್ಲೂಕಿನಲ್ಲಿ ಭಾರಿ ಬದಲಾವಣೆ ಆಗಬೇಕಿದೆ. ಕೋಲಾರಕ್ಕೆ ವೈದ್ಯಕೀಯ ಕಾಲೇಜು ಸಿಕ್ಕಿದ್ದು, ಅದನ್ನು ಉತ್ತಮವಾಗಿ ಹಾಗೂ ಸೂಕ್ತ ಸ್ಥಳದಲ್ಲಿ ನಿರ್ಮಿಸಬೇಕೆಂಬುದು ನನ್ನ ಗುರಿ. ಈ ನಿಟ್ಟಿನಲ್ಲಿ ಚರ್ಚೆಗಳು ನಡೆಯುತ್ತಿವೆ. ಅಧಿಕಾರಿಗಳು ಕೂಡ ಸ್ಥಳ ನೋಡಿಕೊಂಡು ಹೋಗುತ್ತಿದ್ದಾರೆ. ಎಸ್‌ಎನ್‌ಆರ್ ಜಿಲ್ಲಾಸ್ಪತ್ರೆ ಸ್ಥಳ ಕೂಡ ಪರಿಶೀಲನೆಯಲ್ಲಿದೆ ಎಂದರು.

ಸಂಘಕ್ಕೆ ಹೊಸದಾಗಿ ಆಯ್ಕೆಯಾಗಿರುವ ಎಲ್ಲಾ ನಿರ್ದೇಶಕರು, ತಾಲ್ಲೂಕು ಅಧ್ಯಕ್ಷರಿಗೆ ಅಭಿನಂದನೆಗಳು. ಪರಸ್ಪರ ಸಹಕಾರದಿಂದ ತಾಲ್ಲೂಕು ಹಾಗೂ ಜಿಲ್ಲೆಯ ಅಭಿವೃದ್ಧಿಗೆ ಎಲ್ಲರೂ ಶ್ರಮಿಸಬೇಕು. ನಾನು ರೋಲ್ ಕಾಲ್ ಗಿರಾಕಿ ಅಲ್ಲ, ಅಧಿಕಾರಿಗಳು ಸೇರಿದಂತೆ ಯಾರಿಗೂ ಫೋನ್ ಮಾಡಿ ಕಾಟ ಕೊಡಲ್ಲ ಸೇಡು ತೀರಿಸಿಕೊಳ್ಳುವ ವ್ಯಕ್ತಿಯೂ ಅಲ್ಲ. ನೌಕರರ ಸಹಾಯಕ್ಕೆ ನಾನು ಸದಾ ಬದ್ಧ ಆದರೆ, ಕೆಲಸ ಸರಿಯಾಗಿ ನಡೆಯಬೇಕು. ಸಾರ್ವಜನಿಕರಿಗೆ ರೈತರಿಗೆ ತೊಂದರೆ ಆಗದಂತೆ ಕೆಲಸ ಮಾಡಬೇಕು ಸರ್ಕಾರದ ಯೋಜನೆ ಜಾರಿ ಮಾಡಬೇಕು ಜನರಿಗೆ ತಲುಪಿಸಬೇಕು ಎಂದು ಹೇಳಿದರು. ನಾನು ಪದಾಧಿಕಾರಿಗಳ ಚುನಾವಣೆಯಲ್ಲಿ ಇಂಥವರನ್ನೇ ಅಧ್ಯಕ್ಷರನ್ನಾಗಿ ಮಾಡಿ ಪದಾಧಿಕಾರಿಗಳಾಗಿ ಮಾಡಿ ಎಂದು ನಾನು ಹೇಳಲ್ಲ ಆ ವಿಚಾರ ತಮ್ಮ ಜವಾಬ್ದಾರಿಗೆ ಬಿಡುತ್ತೇನೆ. ಅವಿರೋಧವಾಗಿ ಆಯ್ಕೆ ಮಾಡಿಕೊಂಡರೆ ಒಳ್ಳೆಯದು ಎಂಬುದು ನನ್ನ ಭಾವನೆ ಕೆಲ ನೌಕರರು ತಮ್ಮ ಸಹೋದ್ಯೋಗಿಗಳನ್ನೇ ಲೋಕಾಯುಕ್ತಕ್ಕೆ ಹಿಡಿದುಕೊಟ್ಟಿರುವುದು ನನಗೆ ಗೊತ್ತು. ಮಾಲೂರಿನಲ್ಲಿ ಈಚೆಗೆ ಏನಾಯಿತು ಎಂಬುದು ಗೊತ್ತು. ಪಾಪ ಮಹಿಳಾ ಉದ್ಯೋಗಿ ಕಣ್ಣೀರಿಟ್ಟರು ತಮ್ಮ ಉದ್ದೇಶ ಈಡೇರಿಸಿಕೊಳ್ಳಲು ಕಿತಾಪತಿ ಮಾಡುವವರನ್ನು ನಾನು ಸುಮ್ಮನೇ ಬಿಡಲ್ಲ, ಸಹಿಸಿಕೊಳ್ಳುವುದಿಲ್ಲ. ಎಲ್ಲಿ ಮುಳಗಿಸಬೇಕು ಎಂಬುದು ಗೊತ್ತು ಎಂದು ಎಚ್ಚರಿಕೆ ನೀಡಿದರು. ರಾಜ್ಯಮಟ್ಟದಲ್ಲಿ ಜಿಲ್ಲೆಯ ನೌಕರರು ಉತ್ತಮ ಹೆಸರು ಮಾಡಬೇಕು. ಯಾರೇ ಆಯ್ಕೆಯಾದರೂ ಜಿಲ್ಲೆಯ ನೌಕರರ ಶ್ರೇಯೋಭಿವೃದ್ಧಿಗೆ ಶ್ರಮಿಸಬೇಕು ಎಂದು ಕಿವಿಮಾತು ಹೇಳಿದರು.

ಈ ಸಂದರ್ಭದಲ್ಲಿ ವಿಧಾನ ಪರಿಷತ್ ಸದಸ್ಯ ಎಂ.ಎಲ್. ಅನಿಲ್ ಕುಮಾರ್ ಮಾತನಾಡಿ, ಈಗ ಗೆದ್ದು ನಿರ್ದೇಶಕರಾಗಿ ಆಯ್ಕೆಯಾದವರು ತಮ್ಮ ಇಲಾಖೆಯಲ್ಲಿನ ಸರ್ಕಾರಿ ನೌಕರರ ಪ್ರತಿನಿಧಿಗಳು. ಸರ್ಕಾರಿ ನೌಕರರ ಧ್ವನಿಯಾಗಿ ಕೆಲಸ ಮಾಡಬೇಕು. ತಮ್ಮ ಮೇಲೆ ವಿಶ್ವಾಸವಿಟ್ಟು ಆಯ್ಕೆ ಮಾಡಿದ್ದಾರೆ. ವ್ಯವಸ್ಥೆಯಲ್ಲಿನ ಕಲುಷಿತ ವಾತಾವರಣವನ್ನು ತಾವೆಲ್ಲಾ ಸೇರಿ ಶುದ್ಧ ಮಾಡಬೇಕು ಇದು ಎಲ್ಲರ ಮೇಲೆ ಜವಾಬ್ದಾರಿ ಇದೆ ಎಂದರು. ರಾಜ್ಯಾಂಗ ಹಾಗೂ ಕಾರ್ಯಾಂಗ ಒಟ್ಟಿಗೆ ಕೆಲಸ ಮಾಡಬೇಕು. ಯೋಜನೆ ಜಾರಿ ಮಾಡುವವರು ತಾವು. ಸರ್ಕಾರ ಕೈಗೊಂಡ ತೀರ್ಮಾನ ಜಾರಿ ಮಾಡಬೇಕು ಎಲ್ಲರೂ ಸೇರಿ ನೌಕರರ ಸಂಘಕ್ಕೆ ಉತ್ತಮರನ್ನು ಆಯ್ಕೆ ಮಾಡಿ. ಸಾಮಾಜಿಕವಾಗಿ ಎಲ್ಲಾ ವರ್ಗದವರಿಗೆ ಅವಕಾಶ ಸಿಗಬೇಕು. ಮಹಿಳೆಯರಿಗೂ ಜವಾಬ್ದಾರಿ ಮಾಡಿಕೊಡಬೇಕು ಎಂದರು.

ಈ ಸಂದರ್ಭದಲ್ಲಿ ಸಿಂಡಿಕೇಟ್ ಸದಸ್ಯ ಸೀಸಂದ್ರ ಗೋಪಾಲಗೌಡ, ಕೆಪಿಸಿಸಿ ಸದಸ್ಯ ನಂದಿನಿ ಪ್ರವೀಣ್, ಪಿಎಲ್ಡಿ ಬ್ಯಾಂಕ್ ಮಾಜಿ ಅಧ್ಯಕ್ಷ ಜಂಜಿಮಲೆ ರಮೇಶ್, ಗ್ಯಾರಂಟಿ ಪ್ರಾಧಿಕಾರದ ಅಧ್ಯಕ್ಷ ವೈ ಶಿವಕುಮಾರ್, ನರಸಾಪುರ ಸೊಸೈಟಿ ಅಧ್ಯಕ್ಷ ಖಾಜಿಕಲ್ಲಹಳ್ಳಿ ಮುನಿರಾಜು, ಗ್ರಾಪಂ ಮಾಜಿ ಅಧ್ಯಕ್ಷ ಮೈಲಾಂಡಹಳ್ಳಿ ಮುರಳಿ, ಮಾಲೂರು ಸರ್ಕಾರಿ ನೌಕರರ ಸಂಘದ ಅಧ್ಯಕ್ಷ ಮುನೇಗೌಡ, ಮುಳಬಾಗಿಲು ಅಧ್ಯಕ್ಷ ಅರವಿಂದ್, ಕಂದಾಯ ನೌಕರರ ಸಂಘದ ಅಧ್ಯಕ್ಷ ರಾಜೇಂದ್ರ ಕುಮಾರ್ ಜಿಲ್ಲಾ ಚಾಲಕರ ನೌಕರರ ಸಂಘದ ಅಧ್ಯಕ್ಷ ಮಾರುತಿ ಕುಮಾರ್ ಮುಂತಾದವರು ಇದ್ದರು.

ಸಂಘಕ್ಕೆ ಹೊಸದಾಗಿ ಆಯ್ಕೆಯಾಗಿರುವ ಮಾಜಿ ಅಧ್ಯಕ್ಷ ಕೆ.ಎನ್.ಮಂಜುನಾಥ್, ಕಂದಾಯ ಇಲಾಖೆ ಎಫ್‌ಡಿಎ ಅಜಯಕುಮಾರ್, ಎನ್.ಶ್ರೀನಿವಾಸ್, ತಬ್ಬುಮ್, ನಾಗವೇಣಿ, ಮಂಜುಳಾ, ನೀಲಮ್ಮ, ನಂದಿನಿ ಎಚ್.ಎ., ಸೌಮ್ಯಾ, ಮಂಜುನಾಥ್, ಮಂಜುನಾಥ್ ಕೆ., ಶ್ರೀನಿವಾಸಮೂರ್ತಿ, ಹೇಮಂತಕುಮಾರ್, ಅನಿಲ್ ಕುಮಾರ್, ಶಿವಪ್ರಕಾಶ್, ಕೇಶವರೆಡ್ಡಿ, ನಾರಾಯಣಸ್ವಾಮಿ, ಸೋಮಶೇಖರ್ ಆರ್, ರಾಮಮೂರ್ತಿ, ವೆಂಕಟೇಶ, ಚೌಡಪ್ಪ, ಡಾ.ಪ್ರಶಾಂತ್, ವೆಂಕಟೇಶ್ ಬಾಬು, ಮುರಳಿ ಮೋಹನ್, ರತ್ನಪ್ಪ, ಮೊಹಮ್ಮದ್ ಹಿದಾಯತುಲ್ಲಾ, ಮಧು, ಪುರುಷೋತ್ತಮ, ಸುಬ್ರಮಣಿ, ಕೆ.ಕಿರಣ್ ಕುಮಾರ್, ಕೆ.ಶ್ರೀನಿವಾಸ್ , ಮಂಜೇಶ್, ಮಂಜುನಾಥ್, ಸುಬ್ರಮಣ್ಯ, ಯದುನಂದನ್, ರಾಘವೇಂದ್ರ, ಸತೀಶ್ ಕುಮಾರ್, ಬಂಗಾರಪೇಟೆಯ ಅಪ್ಪೇಗೌಡ, ಅಜಯ್, ಪ್ರಭುಕರ್ ರೆಡ್ಡಿ, ಕೆ.ಟಿ.ನಾಗರಾಜ್, ಪ್ರೇಮಾ ಮುಂತಾದವರು ಇದ್ದರು.

### ಸುರೇಶ್ ಬಾಬು ವಿರೋಧಿ ಬಣಕ್ಕೆ ರವಿಚಂದ್ರ ರೆಡ್ಡಿ!

**ಜಿಲ್ಲಾ ಸರ್ಕಾರಿ ನೌಕರರ ಸಂಘದ ಅಧ್ಯಕ್ಷ ಸ್ಥಾನಕ್ಕೆ ನಡೆಯಲಿರುವ ಚುನಾವಣೆ ಕುತೂಹಲ ಮೂಡಿಸಿದ್ದು, ಹಾಲಿ ಅಧ್ಯಕ್ಷ ಸುರೇಶ್ ಬಾಬು ಅವರ ವಿರೋಧಿ ಬಣಕ್ಕೆ ಮಾಜಿ ಗೌರವ ಅಧ್ಯಕ್ಷ ರವಿಚಂದ್ರರೆಡ್ಡಿ ಜಾರಿದ್ದಾರೆ. ಈವರೆಗೆ ಅವರು ಜೊತೆಯಲ್ಲಿದ್ದರು ಇದು ಸಂಘದ ಚುನಾವಣೆಗೆ ಸಂಬಂಧಿಸಿದಂತೆ ಮಹತ್ವದ ಬೆಳವಣಿಗೆಯಾಗಿದೆ.**

# ಜಾನಪದ ಅಧ್ಯಯನಕ್ಕೆ ಸಮಯ ಮೀಸಲಿಡಿ

**ಬೆಂಗಳೂರು:** ಯುವಕರು ಜಾನಪದ ಅಧ್ಯಯನಕ್ಕೆ ಸಮಯವನ್ನು ಮೀಸಲಿಡಬೇಕು. ಜಾನಪದವನ್ನು ಉಳಿಸಿ ಬೆಳಸಬೇಕು ಎಂದು ಲೇಖಕರಾದ ನಾಡೋಜ ಹಂಪ ನಾಗರಾಜಯ್ಯ ಕರೆ ನೀಡಿದರು.

ಇಂದು ರವೀಂದ್ರ ಕಲಾಕ್ಷೇತ್ರದಲ್ಲಿ ಕರ್ನಾಟಕ ಜಾನಪದ ಪರಿಷತ್ತು ವತಿಯಿಂದ ''ನಾಡೋಜ ಎಚ್.ಎಲ್. ನಾಗೇಗೌಡ ರಾಷ್ಟ್ರೀಯ ಪ್ರಶಸ್ತಿ'' ಸಮಾರಂಭ ಉದ್ಘಾಟಿಸಿ ಮಾತನಾಡಿದ ಅವರು, ನಾಡೋಜ ಎಚ್.ಎಲ್. ನಾಗೇಗೌಡ ಅವರು ಕರ್ನಾಟಕ ಜಾನಪದ ಪರಿಷತ್ ನ್ನು ಪ್ರಾರಂಭಿಸಿದ ನಂತರ ಜಾನಪದ ಲೋಕವನ್ನು ಪ್ರಾರಂಭಿಸಿದರು. ರಾಮನಗರ ಜಿಲ್ಲೆಯ ಬೆಂಗಳೂರು-ಮೈಸೂರು ಹೆದ್ದಾರಿಯಲ್ಲಿ ''ಜಾನಪದ ಲೋಕ''ವಿದೆ. ಇದು ರಾಜ್ಯದ ಹಳ್ಳಿಯ ಜಾನಪದ ವಸ್ತುಸಂಗ್ರಹಾಲಯವಾಗಿದೆ. ವಸ್ತು ಸಂಗ್ರಹಾಲಯವು ಯುನೆಸ್ಕೊ ವಿಶ್ವಸಂಸ್ಥೆಯಿಂದ ಮಾನ್ಯತೆ ಪಡೆದಿರುವುದು ಪ್ರಶಂಸನೀಯವಾದದ್ದು ಎಂದು ತಿಳಿಸಿದರು.

ಕನ್ನಡ ಅಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರಾದ ಪುರುಷೋತ್ತಮ ಬಿಳಿಮಲೆ ಅವರು ಮಾತನಾಡಿ ನಾಡೋಜ ಎಚ್. ಎಲ್. ನಾಗೇಗೌಡ ಅವರು 90 ವರ್ಷಗಳ ಕಾಲ ಜೀವಿಸಿದ್ದು, 1960ರಲ್ಲಿ ಭಾರತೀಯ ಆಡಳಿತ ಸೇವೆಯ ಅಧಿಕಾರಿಯಾಗಿ ಕರ್ತವ್ಯ ನಿರ್ವಹಿಸಿದರು. 1970 ದಶಕದಿಂದ ಪ್ರಾರಂಭಿಸಿ, ಕನ್ನಡದಲ್ಲಿ ಹಲವಾರು ಸಾಹಿತ್ಯ ಕೃತಿಗಳನ್ನು ಬರೆದರು. ದೊಡ್ಡಮನೆ ದಕ್ಷಿಣ ಕರ್ನಾಟಕದ ಗ್ರಾಮೀಣ ಸಂಸ್ಕೃತಿಯ ಚಿತ್ರಣಕ್ಕಾಗಿ ವಿಮರ್ಶಾತ್ಮಕ



ಮೆಚ್ಚುಗೆಯನ್ನು ಗಳಿಸಿತು. ಕಾದಂಬರಿಗಳು, ಕವನಸಂಕಲನಗಳು, ಸಣ್ಣ ಕಥೆಗಳು, ಪ್ರಬಂಧಗಳ ಸಂಗ್ರಹಗಳು ಮತ್ತು ಪ್ರವಾಸ ಕಥನವನ್ನು, ಪ್ರವಾಸಿ ಕಂಡ ಇಂಡಿಯಾ 8 ಸಂಪುಟ ಅನುವಾದ ಮಾಡಿದ್ದಾರೆ. ಇದಲ್ಲದೆ ಮೈಲಾರ ಲಿಂಗಯ್ಯ ಹಾಡನ್ನು ಸಂಗ್ರಹಿಸಿದ ಕೀರ್ತಿ ಅವರದು. ಜಾನಪದ ಕ್ಷೇತ್ರದಲ್ಲಿ ಅತ್ಯುತ್ತಮ ಕೆಲಸ ಮಾಡಿದ್ದಾರೆ ಎಂದು ತಿಳಿಸಿದರು.

ಜಾನಪದ ಸಂಗ್ರಹ ಕಾರ್ಯಗಳು ಮುಂದುವರೆಯಬೇಕು. ಜಾನಪದವನ್ನು ಡಿಜಿಟಲೀಕರಣಗೊಳಿಸಲು ಸರ್ಕಾರವು ಸಹಕಾರ ನೀಡಬೇಕು ಎಂದು ತಿಳಿಸಿದರು. ಶಿವಮೊಗ್ಗ ಜಿಲ್ಲೆಯ ಕಿನ್ನರಿ ಜೋಗಿ ಕಲಾವಿದ ಗುಡ್ಡಪ್ಪ ಜೋಗಿ ಅವರಿಗೆ ನಾಡೋಜ ಎಚ್. ಎಲ್.ನಾಗೇಗೌಡ ರಾಷ್ಟ್ರೀಯ ಪ್ರಶಸ್ತಿ -2024 ಪ್ರದಾನ ಮಾಡಲಾಯಿತು. ನಗದು ಮೊತ್ತ ಒಂದು ಲಕ್ಷ ಪ್ರಶಸ್ತಿ ನೀಡಿ ಗೌರವಿಸಲಾಯಿತು.

ಪ್ರಶಸ್ತಿ ಪುರಸ್ಕೃತ ಶಿವಮೊಗ್ಗ ಜಿಲ್ಲೆಯ ಕಿನ್ನರಿ ಜೋಗಿ ಕಲಾವಿದ ಗುಡ್ಡಪ್ಪ ಜೋಗಿ ಅವರು ಮಾತನಾಡಿ ನಾಡೋಜ ಎಚ್. ಎಲ್. ನಾಗೇಗೌಡ ಅವರ ಜೊತೆಯಲ್ಲಿ ಒಂದೆರೆಡು ದಿನ ಸಮಯ ಕಳೆಯುವ ಅವಕಾಶ ಸಿಕ್ಕಿತ್ತು. ನನಗೆ ದೊರೆತಿರುವ ಪ್ರಶಸ್ತಿಯು ನಿಜವಾಗಿಯೂ ಜೋಗಿ ಸಮುದಾಯಕ್ಕೆ ದೊರೆತಿದೆ. ಜೋಗಿ ಸಮುದಾಯವು ಅಲೆಮಾರಿ ಸಮುದಾಯ. ರಾಜ್ಯದಲ್ಲಿ ಎರಡೂವರೆ ಲಕ್ಷದಿಂದ 3 ಲಕ್ಷ ಜನಸಂಖ್ಯೆ ಇದೆ. ಸರ್ಕಾರದಿಂದ ಸೌಲಭ್ಯ ನಮ್ಮ ಸಮುದಾಯಕ್ಕೆ ಸಿಗಬೇಕು ಎಂದು ತಿಳಿಸಿದರು.

ಜಾನಪದ ಉಳಿಸಬೇಕು ಎಂಬ ಉದ್ದೇಶದಿಂದ ಯುವಕರು ರವೀಂದ್ರ ಕಲಾಕ್ಷೇತ್ರಕ್ಕೆ ಬಂದಿರುವುದಕ್ಕೆ ಅಭಿನಂದನೆ ಸಲ್ಲಿಸಿದ ಅವರು ಯುವಕರು ಜಾನಪದಕ್ಕೆ ಪ್ರಾಶಸ್ತ್ಯ ನೀಡಿ ಉಳಿಸಿ ಬೆಳಸಬೇಕು. ಆರೋಗ್ಯ, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ, ಅರಣ್ಯ ಇಲಾಖೆ ವಿವಿಧ ಸರ್ಕಾರದ ಕಾರ್ಯಕ್ರಮಗಳನ್ನು ಹಳ್ಳಿಗಳಲ್ಲಿ ಮಾಡಲಾಗಿದೆ ಎಂದು ತಿಳಿಸಿದರು.

ಕರ್ನಾಟಕ ಜಾನಪದ ಪರಿಷತ್ತು ಅಧ್ಯಕ್ಷರಾದ ಪ್ರೊ.ಹಿ.ಚಿ. ಬೋರಲಿಂಗಯ್ಯ ಮಾತನಾಡಿ ಜನಪದ ಲೋಕಕ್ಕೆ ಎಲ್ಲ ವಿದ್ಯಾರ್ಥಿಗಳು ಬನ್ನಿ ಎಲ್ಲರಿಗೂ ಹೊಸ ಅನುಭವವಾಗುತ್ತದೆ ಎಂದು ವಿದ್ಯಾರ್ಥಿಗಳಿಗೆ ಕರೆ ನೀಡಿದರು. 172 ಜನಪದ ಕಲೆಯಿದೆ. ಈ ಬಾರಿ ಅರ್ಜುನ ಜೋಗಿ ಕಥೆ ಹೇಳುವವರಿಗೆ ಪ್ರಶಸ್ತಿ ನೀಡಲಾಗಿದೆ ಎಂದರು. ಕಾರ್ಯಕ್ರಮದಲ್ಲಿ ಹಿರಿಯ ಗಣ್ಯರು, ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

## ಭಾರತೀಯ ಆಡಳಿತ ಫೆಲೋಶಿಪ್ ಕೆಎ/25 ಸಮೂಹವನ್ನು ಪ್ರಾರಂಭಿಸಲು ಅರ್ಜಿ ಆಹ್ವಾನ

**ಬೆಂಗಳೂರು:** ಕರ್ನಾಟಕ ಸರ್ಕಾರವು ರಾಜ್ಯದಲ್ಲಿ ಇಂಡಿಯನ್ ಅಡ್ಮಿನಿಸ್ಟ್ರೇಟಿವ್ ಫೆಲೋಶಿಪ್ ಕೆಎ/25 ಸಮೂಹವನ್ನು ಪ್ರಾರಂಭಿಸಲು ಅರ್ಜಿ ಆಹ್ವಾನಿಸಲಾಗಿದೆ.

ಇಂಡಿಯನ್ ಅಡ್ಮಿನಿಸ್ಟ್ರೇಟಿವ್ ಫೆಲೋಶಿಪ್ 18-ತಿಂಗಳಪೂರ್ಣಾವಧಿಯಫೆಲೋಶಿಪ್ ಆಗಿದ್ದು, ಇದು ಹಿರಿಯ ಖಾಸಗಿ ವಲಯದ ವೃತ್ತಿಪರರಿಗೆ ದೂರದೃಷ್ಟಿಯ ನಾಗರಿಕ ಸೇವಕರೊಂದಿಗೆ ಸಹಕರಿಸಲು ಅನನ್ಯ ಅವಕಾಶವನ್ನು ಒದಗಿಸುತ್ತದೆ. ನೈಜ-ಪ್ರಪಂಚದ ಸವಾಲುಗಳನ್ನು ಪರಿಹರಿಸುತ್ತದೆ ಮತ್ತು ಶಾಶ್ವತವಾದ ಪರಿಹಾರಗಳನ್ನು ಅಭಿವೃದ್ಧಿಪಡಿಸುತ್ತದೆ. ಕರ್ನಾಟಕದ ಮುಖ್ಯಮಂತ್ರಿಗಳಾದ ಸಿದ್ದರಾಮಯ್ಯನವರು ಕಾರ್ಯಕ್ರಮದ ಬಗ್ಗೆ ತಮ್ಮ ದೃಷ್ಟಿಕೋನವನ್ನು ಎಕ್ಸ್ ಖಾತೆಯಲ್ಲಿ ಹಂಚಿಕೊಂಡಿದ್ದಾರೆ. ಸಾರ್ವಜನಿಕ-ಖಾಸಗಿ ಸಹಯೋಗವನ್ನು ಬೆಳೆಸುವಲ್ಲಿ ಮುಂಚೂಣಿಯಲ್ಲಿರುವ ಕರ್ನಾಟಕ ಸರ್ಕಾರವು ದಿ/ನಡ್ಜ್ ಇನ್‌ಸ್ಟಿಟ್ಯೂಟ್ ಸಹಭಾಗಿತ್ವದಲ್ಲಿ ಇಂಡಿಯನ್ ಅಡ್ಮಿನಿಸ್ಟ್ರೇಟಿವ್ ಫೆಲೋಶಿಪ್ ಯಶಸ್ಸಿನ ಬಗ್ಗೆ ಹೆಮ್ಮೆಪಡುತ್ತದೆ. ರಾಜ್ಯದ ಅಭಿವೃದ್ಧಿಗಾಗಿ ಈ ಸಹಯೋಗವನ್ನು ಮುಂದುವರಿಸಲಾಗುವುದು.

ಆಯ್ದ ಸರ್ಕಾರಿ ಇಲಾಖೆಗಳಲ್ಲಿ ಪ್ರಮುಖ ಉಪಕ್ರಮಗಳಿಗೆ ಕೊಡುಗೆ ನೀಡಿದ ಮೊದಲ ಎರಡು ಸಮೂಹಗಳ ಯಶಸ್ಸಿನ ಮೇಲೆ ನಿರ್ಮಾಣ, ಇಂಡಿಯನ್ ಅಡ್ಮಿನಿಸ್ಟ್ರೇಟಿವ್ ಫೆಲೋಶಿಪ್ ಕರ್ನಾಟಕದಲ್ಲಿ ದೊಡ್ಡ ಪ್ರಮಾಣದ ಪರಿವರ್ತನೆಗಾಗಿ ಸಾರ್ವಜನಿಕ-ಖಾಸಗಿ ಸಹಯೋಗವನ್ನು ಉತ್ತೇಜಿಸಲು ಬದ್ಧವಾಗಿದೆ.

ಕರ್ನಾಟಕ ಸರ್ಕಾರದ ಮುಖ್ಯ ಕಾರ್ಯದರ್ಶಿ



ಡಾ. ಶಾಲಿನಿ ರಜನೀಶ್, ಕರ್ನಾಟಕದಲ್ಲಿ ಭಾರತೀಯ ಆಡಳಿತಾತ್ಮಕ ಫೆಲೋಶಿಪ್ ತನ್ನ ಮೂರನೇ ಸಮೂಹವನ್ನು ಪ್ರವೇಶಿಸುವುದನ್ನು ವೀಕ್ಷಿಸಲು ನನಗೆ ಅಪಾರ ಸಂತೋಷವಾಗಿದೆ. ಕರ್ನಾಟಕದಲ್ಲಿ ಪ್ರವರ್ತಕರಾಗಿರುವ ಈ ಫೆಲೋಶಿಪ್ ಹಿರಿಯ ಕಾರ್ಪೊರೇಟ್ ನಾಯಕರಿಗೆ ಕೊಡುಗೆ ನೀಡಲು ಅನನ್ಯ ಅವಕಾಶವನ್ನು ನೀಡುತ್ತದೆ. ಖಾಸಗಿ ವಲಯದ ಪ್ರತಿಭೆಗಳ ಪರಿಣತಿಯನ್ನು ಬಳಸಿಕೊಳ್ಳಲು ಸರ್ಕಾರಕ್ಕೆ ಅನುವು ಮಾಡಿಕೊಡುವ ಮೂಲಕ ಸಾರ್ವಜನಿಕ ಸೇವೆಯಲ್ಲಿ ದೊಡ್ಡ ಪ್ರಮಾಣದ ಪ್ರಭಾವವನ್ನು ಉಂಟುಮಾಡುತ್ತದೆ ಎಂದು ತಿಳಿಸಿದ್ದಾರೆ. ಈಗ ನಡೆಯುತ್ತಿರುವ ಸಹಯೋಗವು ಸಮಗ್ರ, ಅಂತರ್ಗತ ಮತ್ತು ಸುಸ್ಥಿರ ಅಭಿವೃದ್ಧಿಯನ್ನು ಸಾಧಿಸಲು ಕರ್ನಾಟಕದ ಬದ್ಧತೆಯನ್ನು ಪ್ರತಿಬಿಂಬಿಸುತ್ತದೆ, ರಾಜ್ಯವನ್ನು ನಾವೀನ್ಯತೆ ಮತ್ತು ಆಡಳಿತದಲ್ಲಿ ನಾಯಕನಾಗಿ ಇರಿಸುತ್ತದೆ. ಮೂರನೇ ಗುಂಪಿನ ಅರ್ಜಿಗಳನ್ನು ಈಗ ತೆರೆಯಲಾಗಿದ್ದು, ಡಿಸೆಂಬರ್ ಮೊದಲ ವಾರದವರೆಗೆ ಅರ್ಜಿಗಳನ್ನು ಸ್ವೀಕರಿಸಲಾಗುತ್ತದೆ ಎಂದು ತಿಳಿಸಿದ್ದಾರೆ.

## ಕವನ ಸಂಕಲನ ಪ್ರಕೃತಿಗಳ ಬಿಡುಗಡೆ

**ಬೆಂಗಳೂರು:** ಬೆಂಗಳೂರಿನ ಪ್ರಗತಿ ಗ್ರಾಫಿಕ್ಸ್ ಪ್ರಕಟಿಸಿರುವ ಸಾಹಿತಿ ಚಿಕ್ಕಹನಸೋಗೆ ರುದ್ರಪ್ಪ ಅವರ ಕಾದಂಬರಿ ಬುದ್ಧಿ, ಕವನ ಸಂಕಲನ ಪ್ರಕೃತಿಗಳ ಬಿಡುಗಡೆ ಕಾರ್ಯಕ್ರಮ ಹಮ್ಮಿಕೊಂಡಿದೆ. ನ.27ರಂದು ಬೆಳಗ್ಗೆ 10.30ಕ್ಕೆ ಕೆಂಗಲ್ ಬಳಿಯ ಕುವೆಂಪು ಕಾಲೇಜು ಆವರಣದಲ್ಲಿ ಕಾರ್ಯಕ್ರಮ ಜರುಗುವುದು. ಸಂಸ್ಕೃತಿ ಚಿಂತಕ ಪ್ರೊ. ಬರಗೂರು ರಾಮಚಂದ್ರಪ್ಪ ಕೃತಿಗಳ ಬಿಡುಗಡೆ ಮಾಡುವರು. ಬಿಎಂಶ್ರೀ ಪ್ರತಿಷ್ಠಾನದ ಅಧ್ಯಕ್ಷ ಸಾಹಿತಿ ಬೈರಮಂಗಲ ರಾಮೇಗೌಡ ಕೃತಿಗಳ ಪರಿಚಯ ಮಾಡುವರು. ಜಸನಪದ ವಿದ್ವಾಂಸ ಹಾಗೂ ಪ್ರಕಾಶಕ ಡಾ. ಎಂ. ಬೈರೇಗೌಡ ಪ್ರಾಸ್ತಾವಿಕವಾಗಿ ಮಾತನಾಡುವರು. ವಿಧಾನ ಪರಿಷತ್ತು ಸದಸ್ಯ ಪುಟ್ಟಣ್ಣ ಅತಿಥಿಗಳಾಗಿ ಪಾಲ್ಗೊಳ್ಳುವ ಕಾರ್ಯಕ್ರಮದ ಅಧ್ಯಕ್ಷತೆಯನ್ನ ಕುವೆಂಕು ಕಾಲೇಜು ಕಾರ್ಯದರ್ಶಿ ಹಾಗೂ ದಾನಿಗಳಾದ ಮಹೇಶಚಂದ್ರ ಅಧ್ಯಕ್ಷತೆ ವಹಿಸುವರು. ಲೇಖಕ ಚಿಕ್ಕ ಹನಸೋಗೆ ರುದ್ರಪ್ಪ ಉಪಸ್ಥಿತರಿರುವರೆಂದು ಪ್ರಗತಿ ಗ್ರಾಫಿಕ್ಸ್ ಪ್ರಕಟಣೆಯಲ್ಲಿ ತಿಳಿಸಿದೆ.

## ಸೀತಾಲಕ್ಷ್ಮಿ ಬೆಹೆಂಜೀ ನಿಧನ

**ಮೈಸೂರು:** ಅಂತಾರಾಷ್ಟ್ರೀಯ ಆಧ್ಯಾತ್ಮಿಕ ಸಂಸ್ಥೆ ಪ್ರಜಾಪಿತ ಬ್ರಹ್ಮಾಕುಮಾರಿ ಈಶ್ವರೀಯ ವಿಶ್ವ ವಿದ್ಯಾಲಯ ಗಾಯತ್ರಿಪುರಂ ಸೇವಾಕೇಂದ್ರದ ಮುಖ್ಯ ಸಂಚಾಲಕಿ ರಾಜಯೋಗಿನಿ ಬ್ರಹ್ಮಾಕುಮಾರಿ ಸೀತಾಲಕ್ಷ್ಮಿಬೆಹೆಂಜೀ (75) ನೆನ್ನೆ ರಾತ್ರಿ ನಿಧನ ಹೊಂದಿದರು. ಇವರು ಈಶ್ವರೀಯ



ವಿಶ್ವವಿದ್ಯಾಲದಲ್ಲಿ 50 ವರ್ಷಗಳಿಂದ ಸಮರ್ಪಿತರಾಗಿ ರಾಜಯೋಗ ಶಿಕ್ಷಕಿಯಾಗಿ ಸಂಚಾಲಕರಾಗಿ ಮೈಸೂರು ಮಂಡ್ಯ, ಹಾಸನ ಮಡಕೇರಿ ಚಾಮರಾಜನಗರ ಜಿಲ್ಲೆಗಳ ಸೇವಾ ಕೇಂದ್ರಗಳಲ್ಲಿ ಯಾವುದೇ ಸಂಭಾವನೆ ಇಲ್ಲದೆ ಗೌರವನ್ವಿತಾರಾಗಿ ಸೇವೆ ಸಲ್ಲಿಸಿ ಅಪಾರ ರಾಜಯೋಗ ವಿದ್ಯಾರ್ಥಿಗಳನ್ನು ಹೊಂದಿದ್ದರು. ಇವರ ಪಾರ್ಥಿವ ಶರೀರವನ್ನು ಹುಣಸೂರು ರಸ್ತೆಯಲ್ಲಿರುವ ಓಂಶಾಂತಿ ರಿಟ್ರೀಟ್ ಸೆಂಟರ್ ನಲ್ಲಿ ದರ್ಶನಕ್ಕಾಗಿ ಇಡಲಾಗಿದೆ. ಮೃತರ ಅಂತ್ಯಕ್ರಿಯೆಯನ್ನು ಹೂಟಗಳ್ಳಿಯಲ್ಲಿರುವ ವಿದ್ಯುತ್ ಚಿತಾಗಾರದಲ್ಲಿ ನೆರವೇರಿಸಲಾಗುವುದು ಎಂದು ಸಂಸ್ಥೆ ಪ್ರಕಟಣೆಯಲ್ಲಿ ತಿಳಿಸಿದೆ. ಉಪವಲಯದ ಮುಖ್ಯಸಂಚಾಲಕಿ ರಾಜಯೋಗಿನಿ ಬ್ರಹ್ಮಾಕುಮಾರಿ ಲಕ್ಷ್ಮೀಜೀ, ಪ್ರಭಾಮಣೀಜೀ, ರಾಜಯೋಗಿನಿ ಬ್ರಹ್ಮಾಕುಮಾರೀ ದಾನೇಶ್ವರೀಜೀ, ಪ್ರಾಂಶುಪಾಲರಾದ ಬಿಕೆ ರಂಗನಾಥ ಶಾಸ್ತ್ರೀಜೀ, ಗಾಯತ್ರೀಜೀ, ಶಾರದಾಜೀ, ರತ್ನಾಜೀ ಸೇರಿದಂತೆ ಸಮಸ್ತ ರಾಜಯೋಗ ಶಿಕ್ಷಕಿಯರು, ರಾಜಯೋಗ ವಿದ್ಯಾರ್ಥಿಗಳು ಸಂತಾಪ ಸೂಚಿಸಿದ್ದಾರೆ.

## ಸಂಗಮೇಶ್ವರ ಮಹಾರಾಜರು ಸಿನಿಮಾದ ಹಾಡು ಬಿಡುಗಡೆ

**ಬಾಗಲಕೋಟೆ:** ಸಮರ್ಥ ಸದ್ಗುರು ಶ್ರೀ ಸಂಗಮೇಶ್ವರ ಮಹಾರಾಜರು ಚಲನಚಿತ್ರದ ಲಿರಿಕಲ್ ವಿಡಿಯೋ ಹಾಡು ನವೆಂಬರ್ 21ರಂದು ಶ್ರೀ ಸದ್ಗುರು ಸಂಗಮೇಶ್ವರ ಮಹಾರಾಜರ 93ನೇ ಪುಣ್ಯಸ್ಮರಣೆಯಂದು ಲಕ್ಷಾಂತರ ಭಕ್ತರ ಸಮ್ಮುಖದಲ್ಲಿ ಬಾಗಲಕೋಟೆ ಜಿಲ್ಲೆಯ ಜಮಖಂಡಿ ತಾಲೂಕಿನ ಹಿಪ್ಪರಗಿಯಲ್ಲಿ ಶ್ರೀ ಸದ್ಗುರು ಪ್ರಭುಜಿ ಮಹಾರಾಜರಿಂದ ಸ್ವರೂಪ ಸಂದರ್ಶನ ಯೂಟ್ಯೂಬ್ ಮೂಲಕ ಬಿಡುಗಡೆಯಾಗಿದೆ. ಶ್ರೀ ಗಿರಿಮಲ್ಲೇಶ್ವರ ಕಂಬೈನ್ಸ್ ಬ್ಯಾನರ್ ಅಡಿಯಲ್ಲಿ ಶ್ರೀ ಸದ್ಗುರು ಪ್ರಭುಜೀ ಮಹಾರಾಜರ ಮಾರ್ಗದರ್ಶನದಲ್ಲಿ ಮಾಧವಾನಂದ ಯೋ ಶೇಗುಣಸಿ ಈ ಸಿನಿಮಾ ನಿರ್ಮಾಣ ಮಾಡುತ್ತಿದ್ದು ಇಂಚಗೇರಿ ಅಧ್ಯಾತ್ಮ ಸಾಂಪ್ರದಾಯ ಗುರುಲಿಂಗ ಜಂಗಮ ಮಹಾರಾಜ ಭಕ್ತಿಯ ಸಾಲುಗಳನ್ನು ನಿರ್ದೇಶಕ ರಾಜರವಿಶಂಕರ್ (ವಿ ರವಿ) ಬರೆದಿದ್ದು, ಈ ಹಾಡನ್ನು ರವೀಂದ್ರ ಸೊರಗಾವಿ ಹಾಡಿದ್ದಾರೆ. ಎ ಟಿ ರವೀಶ್ ಸಂಗೀತ ನೀಡಿದ್ದಾರೆ. ಲಕ್ಷಾಂತರ ಭಕ್ತರ ಸಮ್ಮುಖದಲ್ಲಿ ಲಿರಿಕಲ್ ವಿಡಿಯೋ ವೀಕ್ಷಿಸಿದ ಸುದರ್ಶನ ಮಹಾರಾಜ ಕಡಕಿ, ಆನಂದಸಿದ್ಧ ಮಹಾರಾಜ ಅಸುರ್ಲೆ, ಮಹಾದೇವ ಮಹಾರಾಜ ನಂದಗಾಂವ, ಸಿದ್ಧಾರೂಢ ಶರಣರು ಹಿಪ್ಪರಗಿ,ಸಿದ್ದಲಿಂಗ ಮಹಾರಾಜರು ಹಿಪ್ಪರಗಿ, ಶಾಸಕ ಸಿದ್ದು ಸವದಿ, ಸಿದ್ದು ಕೊಣ್ಣೂರ, ಗಿರೀಶ್ ಜಿಡ್ಡಿಮನಿ,ಭಾವುರಾಜ ಜಿಡ್ಡಿಮನಿ, ನಟ ವಿಶ್ವಪ್ರಕಾಶ್ ಟಿ ಮಲಗೊಂಡ ಸೇರಿದಂತೆ ಸಾಧು ಸತ್ಪುರುಷರು ಗಣ್ಯರು ಉಪಸ್ಥಿತರಿದ್ದರು. ವಿಶೇಷವಾಗಿ ಸಂಗಮೇಶ್ವರರ ಅಭಿನಯ ಮಾಡುತ್ತಿರುವ ರವಿನಾರಾಯಣ್ ರವರು ಲಕ್ಷಾಂತರ ಜನರ ಸಮ್ಮುಖದಲ್ಲಿ ಸಂಗಮೇಶ್ವರ ಮಹಾರಾಜರ ವೇಷದಲ್ಲಿ ಈ ಆಡಿಯೋ ಬಿಡುಗಡೆಯ ಸಂದರ್ಭದಲ್ಲಿ ವೇದಿಕೆಯ ಮೇಲೆ ಬಂದಿದ್ದು ವಿಶೇಷವಾಗಿತ್ತು. ವಿಶೇಷವೆಂದರೆ ಅಲ್ಲಿ ಉಪಸ್ಥಿತರಿದ್ದ ಭಕ್ತರೆಲ್ಲರೂ ಪಾತ್ರಧಾರಿ ರವಿ ನಾರಾಯಣ್ ರವರನ್ನು ನೋಡಿ ನಿಜವಾದ ಸಂಗಮೇಶ್ವರ ಮಹಾರಾಜರೆಂದು ತಿಳಿದು ಅವರ ಪಾದಕ್ಕೆ ನಮಸ್ಕರಿಸಿ ನಿಜವಾದ ಸಂಗಮೇಶ್ವರ ಮಹಾರಾಜರ ದರ್ಶನವಾಯಿತೆಂದು ಅವರ ಜೊತೆ ಪ್ರತಿಯೊಬ್ಬರೂ ಮೊಬೈಲ್ಗಳ ಮೂಲಕ ಫೋಟೋ ಕ್ಲಿಕ್ಕಿಸಿದರು. ರಾಜರವಿಶಂಕರ್ (ವಿ ರವಿ) ಬರೆದಿರುವ, ಗಾಯಕ ರವೀಂದ್ರ ಸೊರಗಾವಿ ಅವರ ಕಂಠಸಿರಿಯಲ್ಲಿ ಇಂಚಗೇರಿ ಆಧ್ಯಾತ್ಮಿಕ ಸಂಪ್ರದಾಯ ಗುರುಲಿಂಗ ಜಂಗಮ ಮಹಾರಾಜ ಭಕ್ತಿ ಪ್ರಧಾನ ಹಾಡಿನ್ನು ಎಲ್ಲರೂ ಪ್ರಶಂಸಿಸಿದರು. ಹೊಸ ಪ್ರತಿಭೆ ರವಿ ನಾರಾಯಣ್ ಶ್ರೀಸಂಗಮೇಶ್ವರರ ಪಾತ್ರದಲ್ಲಿ ಕಾಣಿಸಿಕೊಂಡಿದ್ದಾರೆ. ಹಿರಿಯ ನಟರಾದ ರಾಮಕೃಷ್ಣ, ವಿಜಯಕಾಶಿ, ವಿನಯಪ್ರಸಾದ್, ಸಂದೀಪ್ ಮಲಾನಿ, ನಾರಾಯಣ ಸ್ವಾಮಿ, ವಿಶ್ವಪ್ರಕಾಶ್ ಟಿ ಮಲಗೊಂಡ, ಭವ್ಯಶ್ರೀ ರೈ ಈ ಚಿತ್ರದ ತಾರಾಬಳಗದಲ್ಲಿದ್ದಾರೆ. ರಾಜಾ ರವಿಶಂಕರ್ (ವಿ ರವಿ) ನಿರ್ದೇಶನ, ಸಿ ನಾರಾಯಣ್ ಛಾಯಾಗ್ರಹಣ, ಎ.ಟಿ. ರವೀಶ್ ಸಂಗೀತ, ಡಿ. ರವಿ ಸಂಕಲನ, ಕುಮಾರ್ ನೊಣವಿನಕೆರೆ ಪ್ರಸಾದನ ಈ ಚಿತ್ರಕ್ಕಿದೆ. ಸಮರ್ಥ ಸದ್ಗುರು ಶ್ರೀ ಸಂಗಮೇಶ್ವರ ಮಹಾರಾಜರು ಚಿತ್ರದ ಮೊದಲ ಹಾಡು ಕೃಷ್ಣಾ ನದಿತೀರದಲ್ಲಿ ಲಕ್ಷಾಂತರ ಭಕ್ತರ ಸಮ್ಮುಖದಲ್ಲಿ ಶ್ರೀ ಸದ್ಗುರು ಪ್ರಭುಜೀ ಮಹಾರಾಜರಿಂದ ಬಿಡುಗಡೆಗೊಂಡಿದೆ.

# ಕ್ರಿಯಾಶೀಲ ಬದುಕು ಶ್ರೇಯಸ್ಸಿಗೆ ಅಡಿಪಾಯ

**ತರೀಕೆರೆ:** ಮಾನವಜೀವನನಿಂತನೀರಾಗಬಾರದು. ಸದಾ ಹರಿಯುವ ಪವಿತ್ರ ಗಂಗಾಜಲವಾಗಬೇಕು. ಕಷ್ಟದ ಜೀವನ ಶಿಸ್ತನ್ನು ಕಲಿಸುವ ಪಾಠಶಾಲೆ. ಕ್ರಿಯಾಶೀಲ ಬದುಕು ಜೀವನದ ಶ್ರೇಯಸ್ಸಿಗೆ ಅಡಿಪಾಯವೆಂದು ಬಾಳೆಹೊನ್ನೂರು ಶ್ರೀ ರಂಭಾಪುರಿ ಡಾ.ವೀರಸೋಮೇಶ್ವರ ಜಗದ್ಗುರುಗಳು ಅಭಿಪ್ರಾಯಪಟ್ಟರು.

ಅವರು ಶುಕ್ರವಾರ ತಾಲೂಕಿನ ಹುಣಸಘಟ್ಟ ಹಾಲುಸ್ವಾಮಿ ಮಠದಲ್ಲಿ ಕಾರ್ತೀಕ ದೀಪೋತ್ಸವ ಹಾಗೂ ಗುರುಮೂರ್ತಿ ಶಿವಾಚಾರ್ಯರ 62ನೇ ಜನ್ಮ ದಿನೋತ್ಸವದ ಅಂಗವಾಗಿ ಜರುಗಿದ ಧರ್ಮ ಜಾಗೃತಿ ಸಮಾರಂಭದ ಸಾನ್ನಿಧ್ಯ ವಹಿಸಿ ಆಶೀರ್ವಚನ ನೀಡುತ್ತಿದ್ದರು.

ಬದುಕಿಗೆ ಭಗವಂತ ಕೊಟ್ಟ ಕೊಡುಗೆ ಅಪಾರ. ಸಾರ್ಥಕ ಬದುಕಿಗೆ ಧರ್ಮಾಚರಣೆಯ ಮೌಲ್ಯಗಳು ಅವಶ್ಯಕ. ಧರ್ಮದ ದಿಕ್ಸೂಚಿ ಇಲ್ಲದೆ ಇದ್ದರೆ ಜೀವನ ಬೆಳೆಯಲಾಗದು. ಧರ್ಮ ಅರ್ಥ ಕಾಮ ಮೋಕ್ಷ ಇವುಗಳಲ್ಲಿ ಒಂದನ್ನಾದರೂ ಸಾಧಿಸದಿದ್ದಲ್ಲಿ ಜೀವನ ಸಾರ್ಥಕಗೊಳ್ಳುವುದಿಲ್ಲ. ಶ್ರೀ ಜಗದ್ಗುರು ರೇಣುಕಾಚಾರ್ಯರು ಮಾನವ ಜೀವನ ವಿಕಾಸಕ್ಕಾಗಿ ನಿರೂಪಿಸಿದ ಅಹಿಂಸಾ ಸತ್ಯ ಅಸ್ತೇಯ ಬ್ರಹ್ಮಚರ್ಯ ದಯಾ ಕ್ಷಮಾ ದಾನ ಪೂಜಾ ಜಪ ಮತ್ತು ಧ್ಯಾನ ಎಂಬ ದಶವಿಧ ಸೂತ್ರಗಳ ಪರಿಪಾಲನೆ ಬಹಳಷ್ಟು ಮುಖ್ಯ. ಬಾಳಿಗೆ ಬೆಳಕು ಬೇಕು. ಬೆಳಕಿಲ್ಲದಿದ್ದರೆ ಬಾಳಲ್ಲಿ



ಕತ್ತಲು ಆವರಿಸುತ್ತದೆ. ಹೊರಗಿನ ಕತ್ತಲೆಯನ್ನು ದೀಪದಿಂದ ಕಳೆಯಬಹುದು. ಒಳಗಿರುವ ಅಜ್ಞಾನ ಅನ್ನುವ ಕತ್ತಲೆಯನ್ನು ಕಳೆಯಲು ಗುರು ಮಾತ್ರ ಸಮರ್ಥನಾಗಿದ್ದಾನೆ. ಹಾಲುಸ್ವಾಮಿ ಮಠದ ಗುರುಮೂರ್ತಿ ಶಿವಾಚಾರ್ಯ ಸ್ವಾಮಿಗಳು 62ನೇ ವರ್ಷದಲ್ಲಿ ಪಾದಾರ್ಪಣೆ ಮಾಡಿದ್ದಾರೆ. ಶ್ರೀಗಳವರ ಚಲನಶೀಲ ವ್ಯಕ್ತಿತ್ವ ಮಠದ ಅಭಿವೃದ್ಧಿಗೆ ಸಹಕಾರಿಯಾಗಿದೆ. ಹಲವಾರು ಅಭಿವೃದ್ಧಿ ಕಾರ್ಯಗಳನ್ನು ಮಾಡಿ ಭಕ್ತ ಸಂಕುಲದ ಪ್ರೀತ್ಯಾದರಗಳಿಗೆ ಪಾತ್ರರಾಗಿದ್ದಾರೆ ಎಂದು ಹರುಷ ವ್ಯಕ್ತಪಡಿಸಿ ಶ್ರೀ ಪೀಠದಿಂದ ರೇಶ್ಮೆ ಮಡಿ ಸ್ಮರಣಿಕೆ ಫಲ ಪುಷ್ಪವಿತ್ತು ಶುಭ ಹಾರೈಸಿದರು.

ನೇತೃತ್ವ ವಹಿಸಿದ ಎಡೆಯೂರು ಕ್ಷೇತ್ರದ ರೇಣುಕ ಶಿವಾಚಾರ್ಯ ಸ್ವಾಮಿಗಳು ಮಾತನಾಡಿ ಜೀವನ ಮೌಲ್ಯಗಳನ್ನು ಸಂರಕ್ಷಿಸಿಕೊಂಡು ಬರುವ ಜವಾಬ್ದಾರಿ ಎಲ್ಲರ ಮೇಲೂ ಇದೆ. ಧಾರ್ಮಿಕ ಮೌಲ್ಯಗಳನ್ನು ನಿರ್ಲಕ್ಷ್ಯ ಮಾಡುವ ಕಾರಣ ಜನ ಸಮುದಾಯದಲ್ಲಿ ಹಲವಾರು ಸಮಸ್ಯೆಗಳು ತಲೆದೋರುತ್ತಿವೆ. ಗುರುಮೂರ್ತಿ ಶ್ರೀಗಳು ಶಿವಾಚಾರ್ಯ ಸಂಕುಲದಲ್ಲಿ ತನ್ನದೇ ಆದ ಸ್ಥಾನವನ್ನು ಹೊಂದಿ ಭಕ್ತರ ಬಾಳಿಗೆ ಬೆಳಕು ತೋರಿದ್ದಾರೆ. ಭಗವಂತ ಅವರಿಗೆ ಆರೋಗ್ಯ ಭಾಗ್ಯ ಕರುಣಿಸಲೆಂದರು. ಪ್ರಾಸ್ತಾವಿಕವಾಗಿ ಮಾತನಾಡಿದ ಗುರುಮೂರ್ತಿ ಶಿವಾಚಾರ್ಯ ಸ್ವಾಮಿಗಳು ಪ್ರತಿಯೊಬ್ಬರ ಬಾಳಿನಲ್ಲಿ ಜ್ಞಾನದ ಬೆಳಕು ಮೂಡಬೇಕು. ಯತಾರ್ಥವಾದ ಅರಿವನ್ನು ಹೊಂದಿ ಮಾನವ ಜೀವನ ಸಾರ್ಥಕಪಡಿಸಿಕೊಳ್ಳಬೇಕಾಗಿದೆ. ಇಂದು 62ನೇ ವರ್ಷದಲ್ಲಿ ಪಾದಾರ್ಪಣೆ ಮಾಡಿದ ಸಂದರ್ಭದಲ್ಲಿ ಬಾಳೆಹೊನ್ನೂರು ಶ್ರೀಮದ್ ರಂಭಾಪುರಿ ಜಗದ್ಗುರುಗಳು ದಯಮಾಡಿಸಿ ಆಶೀರ್ವದಿಸಿದ್ದು ನಮ್ಮ ಭಾಗ್ಯ ಸೌಭಾಗ್ಯ. ಮಹಾಗುರುವಿನ ಕೃಪಾಶೀರ್ವಾದದಿಂದ ಬಾಳ ಬದುಕು ವಿಕಾಸಗೊಳ್ಳಲೆಂದು ನುಡಿದರು.

ಈ ಪವಿತ್ರ ಸಮಾರಂಭದಲ್ಲಿ ಹುಲಿಕೆರೆ ದೊಡ್ಡಮಠದ ವಿರೂಪಾಕ್ಷಲಿಂಗ ಶ್ರೀಗಳು, ಹಣ್ಣೆ ಮಠದ ಮರುಳಸಿದ್ಧ ಪಂಡಿತಾರಾಧ್ಯ ಶ್ರೀಗಳು, ನಂದಿಪುರ ನಂದೀಶ್ವರ ಶ್ರೀಗಳು, ಬೀರೂರಿನ ರುದ್ರಮುನಿ ಶ್ರೀಗಳು, ಶಂಕರದೇವರ ಮಠದ ಚಂದ್ರಶೇಖರ ಶ್ರೀಗಳು, ಬಿಳಕಿ ಹಿರೇಮಠದ ರಾಚೋಟೇಶ್ವರ ಶ್ರೀಗಳು, ಕೆ.ಬಿದರೆ ದೊಡ್ಡಮಠದ ಪ್ರಭುಕುಮಾರ ಶ್ರೀಗಳು, ತಾವರೆಕೆರೆ ಶಿಲಾಮಠದ ಡಾ.ಅಭಿನವ ಸಿದ್ಧಲಿಂಗ ಶ್ರೀಗಳು, ಹಾರನಹಳ್ಳಿ ಶಿವಯೋಗಿ ಶ್ರೀಗಳು ಪಾಲ್ಗೊಂಡು ನುಡಿ ನಮನ ಸಲ್ಲಿಸಿದರು. 62ನೇ ವರ್ಷದಲ್ಲಿ ಪಾದಾರ್ಪಣೆ ಮಾಡಿದ ಸಂದರ್ಭದಲ್ಲಿ ಶ್ರೀ ರಂಭಾಪುರಿ ಜಗದ್ಗುರುಗಳ ಸಾನ್ನಿಧ್ಯದಲ್ಲಿ ಮಂಗಲ ಸ್ನಾನ ನಂತರ ಶ್ರೀ ಜಗದ್ಗುರು ರೇಣುಕಾಚಾರ್ಯ-ಶ್ರೀ ವೀರಭದ್ರಸ್ವಾಮಿ ದೇವಾಲಯದಲ್ಲಿ ಕಾರ್ತೀಕ ದೀಪೋತ್ಸವ ಸಂಭ್ರಮದಿಂದ ಜರುಗಿತು. ಸಹಸ್ರಾರು ಭಕ್ತರು ಪಾಲ್ಗೊಂಡಿದ್ದರು.

## ನಾಳೆ ಹಲವೆಡೆ ವಿದ್ಯುತ್ ವ್ಯತ್ಯಯ

**ಮಂಡ್ಯ:** 66/11 ಕೆ.ವಿ ಕೆ.ಐ.ಎ.ಡಿ.ಬಿ, ತೂಬಿನಕೆರೆ ಮತ್ತುತುಂಬಕೆರೆವಿದ್ಯುತ್ ವಿತರಣಾಕೇಂದ್ರದಲ್ಲಿ ತ್ರೈಮಾಸಿಕ ಕಾರ್ಯ ನಿರ್ವಹಣೆಯನ್ನು ನವೆಂಬರ್25 ರಂದು ಹಮ್ಮಿಕೊಂಡಿರುವುದರಿಂದಬೆಳಿಗ್ಗೆ 9-00 ರಿಂದ ಸಂಜೆ 5-00 ಗಂಟೆಯವರೆಗೆವಿದ್ಯುತ್ ವ್ಯತ್ಯಯವಾಗಲಿದೆ. ಕೆ.ಐ.ಎ.ಡಿ.ಬಿ ವಿದ್ಯುತ್ ವಿತರಣಾಕೇಂದ್ರದನಗರ ಪ್ರದೇಶ : ಗುತ್ತಲು, ಫ್ಯಾಕ್ಟರಿ ವೃತ್ತ, ಕೈಗಾರಿಕ ಬಡಾವಣೆಗಳು, ಎಂ.ಸಿ.ರಸ್ತೆ, ತಾವರೆಗೆರೆ, ನೆಹರು ನಗರ, ಉದಯಗಿರಿ, ಸಾದತ್ ಮೊಹಲ್ಲ, ಚನ್ನಯ್ಯ ಬಡಾವಣೆ, ಸಿದ್ಧಾರ್ಥ ಬಡಾವಣೆ, ಬೆಂಗಳೂರು ಮುಖ್ಯರಸ್ತೆಯ ಹೆಬ್ಬಾಳ,ಗ್ರಾಮಾಂತರ ಪ್ರದೇಶಗಳಾದ ಶ್ರೀನಿವಾಸಪುರಗೇಟ್, ಹನಕೆರೆ ಐ.ಪಿ ವ್ಯಾಪ್ತಿ, ಕೀಲಾರ ಐ.ಪಿ ವ್ಯಾಪ್ತಿ, ಬಸವನಪುರ ಐ.ಪಿ. ವ್ಯಾಪ್ತಿ, ಬೂದನೂರು, ಭೂತನ ಹೊಸೂರು, ಚನ್ನಪ್ಪನದೊಡ್ಡಿ, ಹಂಬರಹಳ್ಳಿ ತೂಬಿನಕೆರೆ ವಿದ್ಯುತ್ ವಿತರಣಾಕೇಂದ್ರದತೂಬಿನಕೆರೆ, ತೂಬಿನಕೆರೆ ಇಂಡಸ್ಟ್ರಿಯಲ್ ಏರಿಯಾ, ಉರಮಾರಕಸಲಗೆರೆ, ಯಲಿಯೂರು, ಕಾಳೇನಹಳ್ಳಿ, ಎಲೆಚಾಕನಹಳ್ಳಿ, ರಾಗಿಮುದ್ದನಹಳ್ಳಿ, ಸುಂಡಹಳ್ಳಿ, ಪೀಹಳ್ಳಿ, ಕೊಡಿಯಾಲ ಆಲಗೂಡು ಹಾಗೂ ಸುತ್ತಮುತ್ತಲಿನ ಗ್ರಾಮಗಳು. ಗ್ರಾಮಾಂತರ ಪ್ರದೇಶಗಳಾದ ಕಾರಸವಾಡಿ, ಮಂಗಲ, ಹನಿಯಂಬಾಡಿ, ಚೀರನಹಳ್ಳಿ, ಹೆಬ್ಬಕವಾಡಿ, ಕೊತ್ತತ್ತಿ, ಮೊತ್ತಹಳ್ಳಿ, ಬೇವಿನಹಳ್ಳಿ, ಹುಲ್ಲುಕೆರೆ, ಎ. ಹುಲಿಕೆರೆ, ಬಿ.ಹುಲಿಕೆರೆ. ಮತ್ತು ಐ.ಪಿ ಮಾರ್ಗಗಳು ಹಾಗೂ ತುಂಬಕೆರೆ ವಿದ್ಯುತ್ ವಿತರಣಾಕೇಂದ್ರಗ್ರಾಮಾಂತರ ಪ್ರದೇಶ : ಹೊಡಾಘಟ್ಟ, ಕೀಲಾರ, ಹನಕೆರೆ, ಹಳೆ ಬೂದನೂರು, ಹೊಸಬೂದನೂರು, ಈಚಗೆರೆ, ಹಂಬರಹಳ್ಳಿ, ಆಲಕೆರೆ, ನಲ್ಲಹಳ್ಳಿ, ಕಚ್ಚಿಗೆರೆ, ಶ್ರೀನಿವಾಸಪುರಗೇಟ್, ಹೊನಗಾನಹಳ್ಳಿಮಠ, ತುಂಬಕೆರೆ, ಚಾಮಲಾಪುರ, ಉಮ್ಮಡಹಳ್ಳಿ, ಬಸವನಪುರ ಹಾಗೂ ಸುತ್ತಮುತ್ತಲಿನ ಗ್ರಾಮಗಳಲ್ಲಿ ವಿದ್ಯುತ್‌ನಲ್ಲಿ ವ್ಯತ್ಯಯಉಂಟಾಗಲಿದೆಎಂದು ಮಂಡ್ಯ ಕಾ ಮತ್ತು ಪಾ ವಿಭಾಗದಚಾಮುಂಡೇಶ್ವರಿ ವಿದ್ಯುತ್ ಸರಬರಾಜು ನಿಗಮ ನಿಯಮಿತದಕಾರ್ಯ ನಿರ್ವಾಹಕಅಭಿಯಂತರರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ನವೆಂಬರ್ 25 ರಂದುಉದ್ಯೋಗ ಮೇಳ

**ಮಂಡ್ಯ:** ಜಿಲ್ಲಾಉದ್ಯೋಗ ವಿನಿಮಯಕಛೇರಿ ಹಾಗೂ ಮೆ|| ಇಸಫ್ ಸ್ಮಾಲ್ ಫೈನಾನ್ಸ್ ಬ್ಯಾಂಕ್ ಸಂಸ್ಥೆಯ ಸಹಯೋಗದಲ್ಲಿ ನೇರಸಂದರ್ಶನ ನಡೆಯಲಿದ್ದು, ತಮ್ಮ ಸಂಸ್ಥೆಯಲ್ಲಿ ಖಾಲಿಯಿರುವ ''ಫೀಲ್ಡ್‌ಎಕ್ಸಿಕ್ಯೂಟಿವ್'' ಹುದ್ದೆಗಳಿಗೆ ಪಿ.ಯು.ಸಿ ಯಾವುದೇ ಪದವಿ ಉತ್ತೀರ್ಣರಾದ 18 ರಿಂದ 23 ವರ್ಷದೊಳಗಿನ ಅಭ್ಯರ್ಥಿಗಳು ನವೆಂಬರ್ 25 ರಂದು ಬೆಳಿಗ್ಗೆ 10.30 ಗಂಟೆಗೆ ಮಂಡ್ಯ ಅಶೋಕ ನಗರದಲ್ಲಿರುವಇಸಫ್ ಸ್ಮಾಲ್ ಫೈನಾನ್ಸ್ ಬ್ಯಾಂಕ್ (ಮಂಡ್ಯ ಶಾಖೆ)ನಲ್ಲಿತಮ್ಮರೆಸ್ಯೂಮೆ/ ಬಯೋಡೇಟಾಗಳೊಂದಿಗೆ ನೇರ ಸಂದರ್ಶನದಲ್ಲಿ ಹಾಜರಾಗಿಉದ್ಯೋಗ ಪಡೆಯಬಹುದಾಗಿದೆ. ಹೆಚ್ಚಿನ ಮಾಹಿತಿಗಾಗಿದೂ.ಸಂ: 08232-295124, 9164642684, 8660061488 ಮತ್ತು8970646629 ಎಂದುಜಿಲ್ಲಾಉದ್ಯೋಗ ವಿನಿಮಯಕಚೇರಿಯ ಉದ್ಯೋಗಾಧಿಕಾರಿಗಳು ತಿಳಿಸಿದ್ದಾರೆ.

# ಸಂಜೆ ಟಿಪ್ಸ್

## ಜಾಗತಿಕಗೊಂಡ ಪೇಟಿಎಮ್ ಯುಪಿಐ




ಭಾರತದ ಮುಂಚೂಣಿ ಪಾವತಿಗಳು, ಹಣಕಾಸು ಸೇವೆಗಳ ವಿತರಣಾ ಸಂಸ್ಥೆಯಾದ ಪೇಟಿಎಮ್‌ಆಯ್ದ ಅಂತರರಾಷ್ಟ್ರೀಯ ಪ್ರದೇಶಗಳಲ್ಲಿ ಯುಪಿಐ ಪಾವತಿಗಳನ್ನು ಮಾಡಲು ತನ್ನ ಬಳಕೆದಾರರಿಗೆ ನೆರವಾಗಿದೆ. ಪ್ರಯಾಣಿಕರು, ಯುಎಇ, ಸಿಂಗಾಪೂರ್, ಫ್ರಾನ್ಸ್, ಮಾರಿಶಿಯಸ್, ಭೂತಾನ್ ಹಾಗೂ ನೇಪಾಳ ಒಳಗೊಂಡಂತೆ, ಸುಪ್ರಸಿದ್ಧ ಜಾಗಗಳಲ್ಲಿ ಹಣರಹಿತ ಅನುಕೂಲತೆ ಆನಂದಿಸಬಹುದು. ಪೇಟಿಎಮ್ ಆಪ್ ಮೂಲಕ ನೇರವಾಗಿ ಶಾಪಿಂಗ್, ಡೈನಿಂಗ್ ಹಾಗೂ ಸ್ಥಳೀಯ ಅನುಭವಗಳಿಗಾಗಿ ಪಾವತಿಗಳಿಗೆ ಅವಕಾಶ ನೀಡುವ ಮೂಲಕ ಇದು ರಜೆಯ ಋತುವಿನಲ್ಲಿ ಅಂತರರಾಷ್ಟ್ರೀಯ ಪ್ರಯಾಣವನ್ನು ಇನ್ನಷ್ಟು ಆರಾಮಗೊಳಿಸಿದೆ. ವ್ಯವಹಾರಗಳನ್ನು ಪೂರ್ಣಗೊಳಿಸುವ ಮುನ್ನ ಪ್ರದರ್ಶಿಸಲಾಗುವ ಅಪ್ಫಂಟ್ ವಿದೇಶೀ ವಿನಿಮಯ ದರಗಳು ಹಾಗೂ ಪರಿವರ್ತನಾ ಶುಲ್ಕಗಳೊಂದಿಗೆ ಬಳಕೆದಾರರು ಪಾರದರ್ಶಕತೆಯ ಸಂಪೂರ್ಣ ಪ್ರಯೋಜನ ಪಡೆದುಕೊಳ್ಳಬಹುದು. ಪೇಟಿಎಮ್ನ ಯುಪಿಐ ಇಂಟರ್ನ್ಯಾಷನಲ್ ಸ್ಥಾಪನೆ ಕ್ಷಿಪ್ರ ಹಾಗೂ ಸುಭದ್ರವಾಗಿದ್ದು, ಬಳಕೆದಾರರ ಬ್ಯಾಂಕ್ ಖಾತೆಗೆ ಕೇವಲ ಒಂದು-ಬಾರಿಯ ಕ್ರಿಯಾಶೀಲತೆ ಸಂಪರ್ಕ ಸಾಕು. ಪ್ರಯಾಣಿಕರು ಬಳಕೆಯ ಅವಧಿಯನ್ನು ಆಯ್ಕೆ ಮಾಡಿಕೊಳ್ಳಬಹುದು, ಬಳಕೆಯಲ್ಲಿಲ್ಲದಾಗ ಸೇವೆಯನ್ನು ನಿಷ್ಕ್ರಿಯಗೊಳಿಸಿಕೊಳ್ಳಬಹುದು ಮತ್ತು ವಿದೇಶದಲ್ಲಿರುವ ಗಕಖ-ಚಾಲಿತ ಕಿಖ ಕೋಡ್ಗಳ ಮೂಲಕ ಪಾವತಿಗಳನ್ನು ಮಾಡಬಹುದು.

ಪೇಟಿಎಮ್ ಬಾತ್ಮೀದಾರರೊಬ್ಬರು, ''ಭಾರತದಲ್ಲಿ ಮೊಬೈಲ್ ಪಾವತಿಗಳ ಪ್ರಥಮಾನ್ವೇಷಕರಾಗಿ ನಾವು, ನಮ್ಮ ಬಳಕೆದಾರರಿಗೆ ಇನ್ನೂ ಹೆಚ್ಚಿನ ಅನುಕೂಲತೆ ತರಲು ನಿರಂತರವಾಗಿ ಆವಿಷ್ಕಾರ ಮಾಡುತ್ತಲೇ ಇರುತ್ತೇವೆ. ಯುಪಿಐ ಇಂಟರ್ನ್ಯಾಷನಲ್ನೊಂದಿಗೆ. ಯುಎಇ, ಸಿಂಗಾಪೂರ್, ಫ್ರಾನ್ಸ್, ಮಾರಿಶಿಯಸ್, ಭೂತಾನ್ ಹಾಗೂ ನೇಪಾಳ ಮುಂತಾದ ದೇಶಗಳಲ್ಲಿ ಸುಭದ್ರವಾದ, ಹಣರಹಿತ ಪಾವತಿಗಳಿಗೆ ಅನುವು ಮಾಡಿಕೊಡುವ ಈ ಅನುಕೂಲತೆಯನ್ನ ಭಾರತೀಯ ಪ್ರಯಾಣಿಕರಿಗೆ ವಿಸ್ತರಿಸಲು ನಮಗೆ ಅತೀವ ಹರ್ಷವಾಗಿದೆ. ಮುಂಬರುತ್ತಿರುವ ರಜಾ ಋತುವಿನ ಸಂದರ್ಭದಲ್ಲಿ, ಬಳಕೆದಾರರಿಗೆ ಈ ಪರಿಚಯವು ವಿದೇಶೀ ಪ್ರಯಾಣವನ್ನು ಇನ್ನಷ್ಟು ಸುಲಭಗೊಳಿಸಲಿದೆ ಎಂದು ನಮಗೆ ಖಾತರಿ ಇದೆ. ಈ ವಿಸ್ತರಣೆಯು, ನಮ್ಮ ಬಳಕೆದಾರರು ಜಗತ್ತಿನಲ್ಲಿ ಎಲ್ಲೇ ಇದ್ದರೂ ಅವರಿಗೆ ಬಲನೀಡುವ ತಂತ್ರಜ್ಞಾನವನ್ನು ವರ್ಧಿಸಬೇಕೆನ್ನುವ ನಮ್ಮ ಬದ್ಧತೆಯನ್ನು ಪ್ರತಿಫಲಿಸುತ್ತದೆ.'' ಎಂದು ಹೇಳಿದರು.

# ಮೆಣಸಿನ ಬಜ್ಜಿ

## ಪಾಕ ಶಾಲೆ



### ಬೇಕಿರುವ ಸಾಮಗ್ರಿ

ಕಡಲೆ ಹಿಟ್ಟು- 1 1/2 ಕಪ್ ಅಕ್ಕಿ ಹಿಟ್ಟು - ಅರ್ಧ ಕಪ್ ಬಜ್ಜಿ ಮಿರ್ಚಿ -10 ರಿಂದ 15 ಅರಿಶಿನ ಪುಡಿ - 1/2 ಟೀಸ್ಪೂನ್ ಕೆಂಪು ಮೆಣಸಿನ ಪುಡಿ - 1 ಟೀಸ್ಪೂನ್ ಜೀರಿಗೆ ಪುಡಿ - 1/2 ಣಠಿ 1/4 ಣಠಿ ದನಿಯಾ ಪುಡಿ - 1/2 ಟೀಸ್ಪೂನ್ ಓಂಕಾಳು - 1/4 ಟೀಸ್ಪೂನ್ ಅಡುಗೆ ಸೋಡಾ - 2 ಪಿಂಚ್ ನೀರು ರುಚಿಗೆ ಉಪ್ಪು ಅಡುಗೆ

### ಮಾಡುವ ವಿಧಾನ

ಮೊದಲು ಒಂದು ಬೌಲ್ನಲ್ಲಿ ಕಡಲೆಹಿಟ್ಟು ಹಾಗೂ ಅಕ್ಕಿ ಹಿಟ್ಟು ಹಾಕಿಕೊಳ್ಳಿ, ಅರಶಿನ, ಖಾರದ ಪುಡಿ, ಉಪ್ಪು, ಓಂಕಾಳು, ಜೀರಿಗೆ ಪುಡಿ, ದನಿಯಾ ಪುಡಿ, ಕೊತ್ತಂಬರಿ ಸೊಪ್ಪು ಚಿಕ್ಕದಾಗಿ ಕತ್ತರಿಸಿದ್ದು, ಸೋಡಾ ಹಾಕಿ ಚೆನ್ನಾಗಿ ಮಿಕ್ಸ್ ಮಾಡಿಕೊಳ್ಳಿ. ಮಿಕ್ಸ್ ಮಾಡುವಾಗ ಸ್ವಲ್ಪ ಸ್ವಲ್ಪವೇ ನೀರು ಹಾಕಿಕೊಂಡು ಮಿಕ್ಸ್ ಮಾಡುತ್ತಾ ಹೋಗಬೇಕು. ಈ ಹಿಟ್ಟು ಮಾಡುವಾಗ ಎಚ್ಚರ ವಹಿಸಬೇಕು. ಹಿಟ್ಟು ತೆಳುವಾದರೆ ಬಜ್ಜಿ ಮಾಡಲು ಸಾಧ್ಯವಾಗುವುದಿಲ್ಲ. ಹೀಗಾಗಿ ಸ್ವಲ್ಪ ಸ್ವಲ್ಪ ನೀರು ಹಾಕಿಕೊಳ್ಳುತ್ತಾ ಹಿಟ್ಟು ಗಂಟಾಗದಂತೆ ಮಿಕ್ಸ್ ಮಾಡಿಕೊಳ್ಳಬೇಕು. ಹಿಟ್ಟು ಗಂಟಾದರೆ ಬಜ್ಜಿ ಚೆನ್ನಾಗಿ ಬರುವುದಿಲ್ಲ ಹೀಗಾಗಿ ನೀರನ್ನು ನಿಧಾನವಾಗಿ ಹಾಕಿಕೊಂಡು ಹಿಟ್ಟು ರೆಡಿ ಮಾಡಿಕೊಳ್ಳಿ. ಈಗ ಇನ್ನೊಂದು ಬೌಲ್ನಲ್ಲಿ ಸ್ವಲ್ಪ ದನಿಯಾ, ಜೀರಿಗೆ ಪುಡಿ, ಉಪ್ಪು, ಓಂಕಾಳು ಹಾಕಿಕೊಂಡು ಮಿಕ್ಸ್ ಮಾಡಿ. ಬಳಿಕ ಮೆಣಸಿನಕಾಯಿಯನ್ನು ಮಧ್ಯದಲ್ಲಿ ಸಿಗಿದುಕೊಂಡು ಅದರಲ್ಲಿರುವ ಬೀಜ ತೆಗೆದುಕೊಳ್ಳಿ. ತೆಗೆದ ಬಳಿಕ ಈ ಮಸಾಲವನ್ನು ಅದಕ್ಕೆ ಹಚ್ಚಿಕೊಳ್ಳಿ. ಈಗ ಈ ಮೆಣಸನ್ನು ಹಿಟ್ಟಿನಲ್ಲಿ ಅದ್ದಿಕೊಳ್ಳಿ, ಬಳಿಕ ಮೆಣಸನ್ನು ಕಾದ ಎಣ್ಣೆಯೊಳಗೆ ಬಿಡಿ. ಉರಿಯನ್ನು ನಿಧಾನವಾಗಿ ಇಟ್ಟುಕೊಳ್ಳಿ. ಮೆಣಸನ್ನು ಎರಡೂ ಕಡೆಗಳಲ್ಲಿ ಚೆನ್ನಾಗಿ ಕಾಯಿಸಿಕೊಳ್ಳಿ. 5ರಿಂದ 6 ನಿಮಿಷಗಳ ಕಾಲ ಕಾಯಿಸಿದರೆ ಮೆಣಸಿನಕಾಯಿ ಬಜ್ಜಿ ನಿಮ್ಮ ಮುಂದೆ ರೆಡಿಯಾಗಿರುತ್ತದೆ. ಮಧ್ಯಮ ಉರಿಯಲ್ಲಿಟ್ಟು ಕಾಯಿಸುವುದರಿಂದ ಬಜ್ಜಿ ಹೆಚ್ಚು ಎಣ್ಣೆ ಕುಡಿಯುವುದಿಲ್ಲ. ಇಷ್ಟಾದರೆ ನಿಮ್ಮ ಮುಂದೆ ಬಜ್ಜಿ ರೆಡಿಯಾಗುತ್ತದೆ. ಇದನ್ನು ಟೀ-ಕಾಫಿ ಜೊತೆ ಸವಿಯಲು ನೀಡಬಹುದು.

# ಗಂಟಲು ನೋವು, ಶೀತ, ಕೆಮ್ಮು ಮನೆಮದ್ದು

## ಹೆಲ್ತ್ ಟಿಪ್ಸ್



ಮಳೆಗಾಲ ಬಂದರೆ ಸಾಕು. ಅನೇಕ ರೋಗಗಳು ನಮ್ಮನ್ನು ಸುತ್ತುವರೆದಿವೆ. ಒದ್ದೆಯಾದ ಹವಾಮಾನವು ನಮ್ಮ ಆರೋಗ್ಯದ ಮೇಲೆ ಪರಿಣಾಮ ಬೀರುವ ಸಾಧ್ಯತೆಯಿದೆ.

ಮಳೆಗಾಲದಲ್ಲಿ, ಬ್ಯಾಕ್ಟೀರಿಯಾಗಳು ನೀರು, ಗಾಳಿ ಮತ್ತು ಆಹಾರದ ಮೂಲಕ ನಮ್ಮ ದೇಹವನ್ನ ತಲುಪುತ್ತವೆ. ಇದು ಜ್ವರ, ಶೀತ, ಕೆಮ್ಮು, ಗಂಟಲು ನೋವು ಮುಂತಾದ ಸಮಸ್ಯೆಗಳನ್ನ ಉಂಟು ಮಾಡುತ್ತದೆ, ಇದು ನಮ್ಮನ್ನು ಅನೇಕ ರೀತಿಯಲ್ಲಿ ಕಾಡುತ್ತದೆ. ಈ ಋತುವಿನಲ್ಲಿ ನಾವು ಅಂತಹ ಸಮಸ್ಯೆಗಳನ್ನು ತೊಡೆದುಹಾಕಲು ಬಯಸಿದ್ರೆ, ಅದ್ಭುತ ಮನೆಮದ್ದುಗಳು ನಮಗೆ ಸಾಕಷ್ಟು ಸಹಾಯ ಮಾಡುತ್ತವೆ. ಮನೆಯಲ್ಲಿ ಅತ್ಯಂತ ಕೈಗೆಟುಕುವ ವಸ್ತುಗಳೊಂದಿಗೆ ನಾವು ನಮ್ಮ ಆರೋಗ್ಯ ಸಮಸ್ಯೆಗಳನ್ನು ಪರಿಶೀಲಿಸಬಹುದು. ಶೀತ, ಕೆಮ್ಮು ಮತ್ತು ಗಂಟಲು ನೋವಿನಂತಹ ಸಮಸ್ಯೆಗಳನ್ನ ಕಡಿಮೆ ಮಾಡಲು ಕೆಲವು ಅದ್ಭುತ ಸಲಹೆಗಳನ್ನು ನೋಡೋಣ.

ಒಲೆಯ ಮೇಲೆ ದಪ್ಪ ಬಟ್ಟಲನ್ನ ಇರಿಸಿ ಮತ್ತು ಅದರಲ್ಲಿ 5 ಚಮಚ ಸಕ್ಕರೆಯನ್ನ ಸೇರಿಸಿ ಮತ್ತು ಮಧ್ಯಮ ಶಾಖದಲ್ಲಿ ಸಕ್ಕರೆಯೊಂದಿಗೆ ಚೆನ್ನಾಗಿ ಬೆರೆಸಿ ಕ್ಯಾರಮೆಲ್ ತಯಾರಿಸಿ. ಅದರಲ್ಲಿ ಒಂದು ಲೋಟ ನೀರನ್ನು ಹಾಕಿ ಮತ್ತು ನಂತರ 2 ಬಿರಿಯಾನಿ ಎಲೆಗಳನ್ನ ಸಣ್ಣ ತುಂಡುಗಳಾಗಿ ಕತ್ತರಿಸಿ. ಬಿರಿಯಾನಿ ಎಲೆಗಳಲ್ಲಿರುವ ಔಷಧೀಯ ಗುಣಗಳು ಶೀತ, ಕೆಮ್ಮು ಮತ್ತು ಕಫವನ್ನ ಕಡಿಮೆ ಮಾಡಲು ಸಹಾಯ ಮಾಡುತ್ತದೆ. ನಂತರ 10 ಮೆಣಸು, 10 ಲವಂಗ, 10 ತುಳಸಿ ಎಲೆಗಳು, ಒಂದು ಸಣ್ಣ ತುಂಡು ಶುಂಠಿ, ಒಂದು ಸಣ್ಣ ತುಂಡು ಬೆಲ್ಲವನ್ನು ಸೇರಿಸಿ ಐದರಿಂದ ಹತ್ತು ನಿಮಿಷಗಳ ಕಾಲ ಕುದಿಸಿ.

ನೀರು ಚೆನ್ನಾಗಿ ಕುದಿಸಿದ ನಂತರ, ಒಲೆಯನ್ನ ಆಫ್ ಮಾಡಿ ಮತ್ತು ನೀರನ್ನು ಸೋಸಿ. ಈ ಫಿಲ್ಟರ್ ಮಾಡಿದ ನೀರನ್ನು ಸಂಗ್ರಹಿಸಬಹುದು. ಈ ಮಿಶ್ರಣವನ್ನ ಪ್ರತಿದಿನ 2 ಟೀಸ್ಪೂನ್ ಮತ್ತು ಮಕ್ಕಳಿಗಾದ್ರೆ 1 ಟೀಸ್ಪೂನ್ ಕೊಡಿ. ಈ ದ್ರವವನ್ನ ದಿನಕ್ಕೆ ಮೂರು ಬಾರಿ ಬೆಳಿಗ್ಗೆ, ಮಧ್ಯಾಹ್ನ ಮತ್ತು ಸಂಜೆ ತೆಗೆದುಕೊಳ್ಳುವುದರಿಂದ ಗಂಟಲು ಸೋಂಕು ಕಡಿಮೆಯಾಗುತ್ತದೆ ಮತ್ತು ಕೆಮ್ಮು ಮತ್ತು ಶೀತವನ್ನ ತ್ವರಿತವಾಗಿ ಗುಣಪಡಿಸುತ್ತದೆ.

# ಪುದೀನಾ ಸೊಪ್ಪು ಫೇಸ್ ಪ್ಯಾಕ್

## ಬ್ಯೂಟಿ ಟಿಪ್ಸ್

ಮುಖದಲ್ಲಿ ಕಾಣುವ ಸಣ್ಣ ಕಲೆಗಳು ನಮ್ಮ ಸೌಂದರ್ಯ ಹಾಳು ಮಾಡುತ್ತದೆ. ಹಾಗಿದ್ದರೆ ಪುದೀನಾ ಎಲೆ ಬಳಸಿ ಮಾಡುವ ಒಂದು ಸಿಂಪಲ್ ಫೇಸ್ ಪ್ಯಾಕ್ ನಿಂದ ಕಲೆ ನಿವಾರಿಸಬಹುದು.

ನಿಮ್ಮ ಸೌಂದರ್ಯದ ರೊಟೀನ್ ಗೆ ಪುದೀನಾ ಸೊಪ್ಪನ್ನು ಪರಿಣಾಮಕಾರಿಯಾಗಿ ಬಳಸಬಹುದು. ಪುದೀನಾ ಸೊಪ್ಪು ವಿಟಮಿನ್ ಸಿ, ಆಂಟಿ ಆಕ್ಸಿಡೆಂಟ್ ಗಳನ್ನು ಹೇರಳವಾಗಿ ಹೊಂದಿದ್ದು ಇದು ಕಲೆ ನಿವಾರಣೆ, ಮೊಡವೆ ಸಮಸ್ಯೆ ನಿವಾರಣೆ ಮಾಡಿ ಮುಖದ ಕಾಂತಿ ಹೆಚ್ಚಾಗುವಂತೆ ಮಾಡುತ್ತದೆ. ಪುದೀನಾ ಸೊಪ್ಪು ಮತ್ತು ಹಳದಿ ಬಳಸಿ ಮಾಡುವ ಫೇಸ್ ಪ್ಯಾಕ್ ವಿಧಾನ ನೋಡೋಣ.

### ಬೇಕಾಗುವ ಸಾಮಗ್ರಿಗಳು

- ಪುದೀನಾ ಸೊಪ್ಪು10-15 ಎಲೆಗಳು
- ಚಿಟಿಕೆ ಅರಶಿನ

### ಮಾಡುವ ವಿಧಾನ

**ಸ್ವಲ್ಪವೇ ಸ್ವಲ್ಪ ನೀರು ಸೇರಿಸಿ ಪುದೀನಾ ಎಲೆಗಳನ್ನು ನುಣ್ಣಗೆ ಪೇಸ್ಟ್ ಮಾಡಿಕೊಳ್ಳಿ. ಈ ಪೇಸ್ಟ್ ಗೆ ಅರಶಿನವನ್ನು ಮಿಕ್ಸ್ ಮಾಡಿ ಚೆನ್ನಾಗಿ ಕಲಕಿ ಹದಗೊಳಿಸಿ ನಂತರ ಈ ಮಿಶ್ರಣವನ್ನು ನಿಮ್ಮ ಮುಖಕ್ಕೆ ಹಚ್ಚಿ ಕೆಲವು ಹೊತ್ತು ಹಾಗೇ ಬಿಡಿ. ಬಳಿಕ ಕೂಲ್ ನೀರಿನಿಂದ ಮುಖವನ್ನು ಚೆನ್ನಾಗಿ ತೊಳೆದುಕೊಳ್ಳಿ. ಈ ರೀತಿ ನಿಯಮಿತವಾಗಿ ಮಾಡುತ್ತಿದ್ದರೆ ಮುಖದಲ್ಲಿ ಮೊಡವೆ ಸಮಸ್ಯೆ, ವಯಸ್ಸಾದಂತೆ ಬರುವ ಕಲೆ ಸಮಸ್ಯೆ ಇತ್ಯಾದಿಗಳನ್ನು ಹೋಗಲಾಡಿಸಿ ಮುಖ ಕಾಂತಿಯುತವಾಗಿರುವಂತೆ ನೋಡಿಕೊಳ್ಳುತ್ತದೆ. ಇದೇ ರೀತಿ ಪುದೀನಾ ಎಲೆ ಜೊತೆ ಅರಶಿನದ ಬದಲು ಸೌತೆಕಾಯಿಯನ್ನು ಪೇಸ್ಟ್ ಮಾಡಿ ಫೇಸ್ ಪ್ಯಾಕ್ ಮಾಡಿಕೊಳ್ಳಬಹುದು. ಇದೂ ಕೂಡಾ ಪರಿಣಾಮಕಾರಿ ಹೋಂ ಮೇಡ್ ಫೇಸ್ ಪ್ಯಾಕ್ ಆಗಿದೆ.**



# ಯೂಟ್ಯೂಬರ್‌ಗಳಿಗೆ ನೋಟಿಸ್ ಕೊಟ್ಟ ಎಆರ್ ರೆಹಮಾನ್!





ಎಆರ್ ರೆಹಮಾನ್ ಪತ್ನಿಗೆ ವಿಚ್ಛೇದನ ನೀಡಲು ಕಾರಣಗಳೇನು ಎಂದೆಲ್ಲಾ ಸೋಶಿಯಲ್ ಮೀಡಿಯಾದಲ್ಲಿ ವೈರಲ್ ಆಗಿತ್ತು. ಸುಳ್ಳು ಸುದ್ದಿಗಳನ್ನು ಹರಡಿದ್ದ, ಶೇರ್ ಮಾಡಿದ ವಿಡಿಯೋಗಳು ಹಾಗೂ ಲೇಖನಗಳನ್ನು ಕೂಡಲೇ ಡಿಲೀಟ್ ಮಾಡುವಂತೆ ಎಆರ್ ರೆಹಮಾನ್ ಪರವಾಗಿ ಅವರ ಟೀಮ್ ನವರು ಯೂಟ್ಯೂಬರ್ ಗಳಿಗೆ ನೋಟಿಸ್ ಕಳುಹಿಸಿದ್ದಾರೆ ಎನ್ನಲಾಗ್ತಿದೆ.

ಎಆರ್ ರೆಹಮಾನ್ ಪರವಾಗಿ ಅವರ ವಕೀಲ ನರ್ಮದಾ ಸಂಪತ್ ಅವರು ಎಆರ್ ರೆಹಮಾನ್ -ಸೈರಾ ಬಾನು ಭಿನ್ನಾಭಿಪ್ರಾಯಕ್ಕೆ ಸಂಬಂಧಿಸಿದಂತೆ ವಿವಿಧ ಸೋಶಿಯಲ್ ಮೀಡಿಯಾದ ಸೈಟ್ ಗಳಲ್ಲಿ ಮಾತಾಡಿದ್ದು, ಎಆರ್ ರೆಹಮಾನ್ ಅವರನ್ನು ನಿಂದಿಸುವ ವಿಡಿಯೋಗಳನ್ನು ಪ್ರಕಟಿಸಲಾಗಿದೆ ಎನ್ನಲಾಗ್ತಿದೆ. ಹೀಗಾಗಿ ಕೆಲ ಯೂಟ್ಯೂಬರ್ ಗಳಿಗೆ ನೋಟಿಸ್ ಜಾರಿ ಮಾಡಿದ್ದಾರೆ. ವಿಡಿಯೋವನ್ನ ಡಿಲೀಟ್ ಮಾಡುವಂತೆ ಸೂಚಿಸಲಾಗಿದೆ.

ಮಾನಹಾನಿ ಮಾಡಲೆಂದೇ ಕೆಲವರು ಸುಳ್ಳು ಮಾಹಿತಿ ಹಬ್ಬಿತ್ತು. ಕಾಲ್ಪನಿಕ ಸಂದರ್ಶನಗಳಂತಹ ಮಾನಹಾನಿ ಮಾಡುವ ವಿಡಿಯೊಗಳನ್ನು ಪ್ರಕಟಿಸಿದ್ದಾರೆ ಎಂದು ನೋಟಿಸ್ ನಲ್ಲಿ ತಿಳಿಸಲಾಗಿದೆ. ಈ ಅವಹೇಳನಕಾರಿ ವಿಡಿಯೋಗಳು ಮತ್ತು ಲೇಖನಗಳನ್ನು ತಕ್ಷಣವೇ ತೆಗೆದುಹಾಕದಿದ್ದರೆ, 2 ವರ್ಷಗಳವರೆಗೆ ಜೈಲು ಶಿಕ್ಷೆ ವಿಧಿಸುವ ಕಾನೂನಿನ ನಿಬಂಧನೆಗಳ ಅಡಿಯಲ್ಲಿ ಮಾನನಷ್ಟ ಮೊಕದ್ದಮೆಯನ್ನು ದಾಖಲಿಸಲಾಗುವುದು ಎಂದು ವಾರ್ನಿಂಗ್ ಕೊಟ್ಟಿದ್ದಾರೆ..

ಎಆರ್ ರೆಹಮಾನ್ ಭಾರತದ ಜನಪ್ರಿಯ ಮ್ಯೂಸಿಕ್ ಡೈರೆಕ್ಟರ್ ಆಗಿದ್ದಾರೆ. 57 ವರ್ಷದಲ್ಲಿ ರೆಹಮಾನ್ ಪತ್ನಿಯಿಂದ ವಿಚ್ಛೇದನ ಪಡೆದಿದ್ದಾರೆ. ರೆಹಮಾನ್ ಹಾಗೂ ಸೈರಾ 1995 ರಲ್ಲಿ ವಿವಾಹವಾದ್ರು. 29 ವರ್ಷಗಳ ಬಳಿಕ ದಾಂಪತ್ಯಕ್ಕೆ ತೆರೆ ಎಳೆದಿದ್ದಾರೆ. ಈ ದಂಪತಿಗೆ ಮೂವರು ಮಕ್ಕಳಿದ್ದಾರೆ. ಹೆಣ್ಣು ಮಕ್ಕಳ ಹೆಸರು ಖತೀಜಾ ಮತ್ತು ರಹೀಮಾ. ಮಗನ ಹೆಸರು ಅಮೀನ್ ರೆಹಮಾನ್.

ರೆಹಮಾನ್ ಹಾಗೂ ಸೈರಾ ಬಾನು ವಿಚ್ಛೇದನ ಘೋಷಣೆ ಮಾಡ್ತಿದ್ದಂತೆ ಎನ್ ಆರ್ ರೆಹಮಾನ್ ತಂಡದವರಾದ ಮೋಹಿನಿ ಡೇ ಕೂಡ ಡಿವೋರ್ಸ್ ಅನೌನ್ಸ್ ಮಾಡಿದ್ರು. ಇಬ್ಬರ ವಿಚ್ಛೇದನವನ್ನು ಲಿಂಕ್ ಮಾಡಿ ಅನೇಕ ರೂಮರ್ಸ್ ಹರಿದಾಡಿತ್ತು. ರೆಹಮಾನ್ ವಿಚ್ಛೇದನಕ್ಕೆ ಅವರದ್ದೇ ತಂಡದ ಮೋಹಿನಿ ಎಂಬ ಹುಡುಗಿ ಕಾರಣನಾ ಎನ್ನುವ ಪ್ರಶ್ನೆಯನ್ನು ಹುಟ್ಟು ಹಾಕಿತ್ತು. ಇದೆಲ್ಲಾ ರೂಮರ್ಸ್ ಎನ್ನಲಾಗ್ತಿದೆ.

ಸೈರಾ ಬಾನು ಪತ್ರಿಕಾ ಪ್ರಕಟನೆ ಬಿಡುಗಡೆ ಮಾಡುವ ಮೂಲಕ ಡಿವೋರ್ಸ್ ಪಡೆಯುವ ವಿಚಾರವನ್ನು ಜನರಿಗೆ ತಿಳಿಸಿದ್ದಾರೆ. ಎಆರ್ ರೆಹಮಾನ್ ಶ್ರೀಮಂತ ವ್ಯಕ್ತಿ ಆಗಿದ್ದಾರೆ. ಕೋಟ್ಯಂತರ ರೂಪಾಯಿ ಆಸ್ತಿ ಹೊಂದಿದ್ದಾರೆ. ಭಾರತ ಚಿತ್ರರಂಗದಲ್ಲಿ ಬಹುಬೇಡಿಕೆ ಮ್ಯೂಸಿಕ್ ಡೈರೆಕ್ಟರ್ ಆಗಿರುವ ಎ. ಆರ್ ರೆಹಮಾನ್ ಗಾಯಕರು ಕೂಡ ಆಗಿದ್ದಾರೆ. ಒಂದು ಹಾಡಿಗೆ ಸುಮಾರು 3 ಕೋಟಿಗೂ ಹೆಚ್ಚು ಸಂಭಾವನೆ ಪಡೆಯುತ್ತಾರೆ. ರೆಹಮಾನ್ ಕೆಲವೇ ಹಾಡುಗಳಿಗೆ ಹಾಡಿದ್ದಾರೆ. ಅನೇಕ ಸಿನಿಮಾಗಳಿಗೆ ಮ್ಯೂಸಿಕ್ ನೀಡಿದ್ದಾರೆ.

ಎಆರ್ ರೆಹಮಾನ್ ಅವರ ಒಟ್ಟು ಸಂಪತ್ತು 2100 ಕೋಟಿ ಎನ್ನಲಾಗ್ತಿದೆ. ಸ್ಟಾರ್ಟಪ್ಸ್ ಮೀಡಿಯಾದ ಇನ್ ಸ್ಟಾಗ್ರಾಮ್ ಪೋಸ್ಟ್ ನಲ್ಲಿ ರೆಹಮಾನ್ ಅತ್ಯಂತ ಭಾರತದ ಅತ್ಯಂತ ಶ್ರೀಮಂತ ಮ್ಯೂಸಿಕ್ ಡೈರೆಕ್ಟರ್ ಎಂದು ವರದಿ ಮಾಡಿದೆ. 1 ಹಾಡು ಹಾಡಲು ಮೂರು ಕೋಟಿ ರೂಪಾಯಿ ತೆಗೆದುಕೊಳ್ತಾರೆ. ಶ್ರೀಮಂತ ಗಾಯಕರ ಪಟ್ಟಿಯಲ್ಲಿ ಅರಿಜಿತ್ ಸಿಂಗ್ ಎರಡನೇ ಸ್ಥಾನದಲ್ಲಿದ್ದಾರೆ. 414 ಕೋಟಿ ಮೌಲ್ಯದ ಆಸ್ತಿ ಹೊಂದಿದ್ದಾರೆ ಎನ್ನಲಾಗಿದೆ. ಸೋನು ನಿಗಮ್ 400 ಕೋಟಿ ರೂಪಾಯಿ ಆಸ್ತಿ ಹೊಂದಿದ್ದಾರೆ.

ಸಿಆರ್ಪಿಸಿಯ ಸೆಕ್ಷನ್ 125 ರ ಆಧಾರದ ಮೇಲೆ, ಪತ್ನಿ, ಮಕ್ಕಳು ಮತ್ತು ಪೋಷಕರಿಗೆ ಸಹ ನಿರ್ವಹಣೆ ಭತ್ಯೆಯನ್ನು ನಿರ್ಧರಿಸುವ ಅಧಿಕಾರ ಮ್ಯಾಜಿಸ್ಟ್ರೇಟ್ಗೆ ಇದೆ ಎಂದು ಸುಪ್ರೀಂ ಕೋರ್ಟ್ ಹೇಳಿದೆ. ಸೈರಾ ಎಆರ್ ರೆಹಮಾನ್ ಅವರಿಂದ ಜೀವನಾಂಶ ಪಡೆಯಲಿದ್ದಾರೆ ಎನ್ನಲಾಗ್ತಿದೆ. ರೆಹಮಾನ್ ಸೈರಾಗೆ ಕೋಟಿ ಕೋಟಿ ಜೀವನಾಂಶ ನೀಡಲಿದ್ದಾರೆ ಎನ್ನಲಾಗ್ತಿದೆ.

# ಟಾಟಾ ಮೋಟಾರ್ಸ್, ಮೆಜೆಂಟಾ ಮೊಬಿಲಿಟಿ ಸಾಗಣಿಕಾ ಕ್ಷೇತ್ರದಲ್ಲಿ ಸಂಚಲನ



TATA MOTORS
Connecting Aspirations
magenta

ವಿತರಣಾ ಕೇಂದ್ರದಿಂದ ಗ್ರಾಹಕನಿಗೆ ಸಾಮಾಗ್ರಿಗಳನ್ನು ತಲುಪಿಸುವ ಭಾರತದ ಕೊನೆಯ ಹಂತದ ಸಾಗಾಣಿಕಾ ಕ್ಷೇತ್ರದಲ್ಲಿ ಭಾರಿ ಬದಲಾವಣೆ ಉಂಟಾಗುತ್ತಿದೆ. ದಕ್ಷ, ಕಡಿಮೆ ವೆಚ್ಚದಲ್ಲಿ ಕಾರ್ಯ ನಿರ್ವಹಿಸುವ ಮತ್ತು ಸುಸ್ಥಿರ ಉತ್ಪನ್ನಗಳಿಗೆ ಬೇಡಿಕೆ ಹೆಚ್ಚುತ್ತಿರುವುದರಿಂದ ಈ ಬದಲಾವಣೆ ಉಂಟಾಗುತ್ತಿದೆ. ಈ ಬದಲಾವಣೆಯ ಮುಂಚೂಣಿಯಲ್ಲಿ ಇಂಟಿಗ್ರೇಟೆಡ್ ಎಲೆಕ್ಟ್ರಿಕ್ ಮೊಬಿಲಿಟಿ ಸೊಲ್ಯೂಶನ್ಸ್ ಪ್ರೊವೈಡರ್ ಆಗಿರುವ ಮೆಜೆಂಟಾ ಮೊಬಿಲಿಟಿ ಸಂಸ್ಥೆಯು ನಿಂತಿದೆ. ಈ ಸಂಸ್ಥೆಯು ಟಾಟಾ ಮೋಟಾರ್ಸ್ ನ ಅತ್ಯಂತ ಜನಪ್ರಿಯ, ಹೆಚ್ಚು ಗಳಿಕೆ ಒದಗಿಸುವ ಸಾಮರ್ಥ್ಯ ಹೊಂದಿರುವ, ಕಡಿಮೆ ಮಾಲೀಕತ್ವ ವೆಚ್ಚ ಹೊಂದಿರುವ, ಭಾರತದ ಅತ್ಯಾಧುನಿಕ, ಝೀರೋ ಎಮಿಷನ್, ಫೋರ್ ವೀಲ್ ಸಣ್ಣ ವಾಣಿಜ್ಯ ವಾಹನವಾಗಿರುವ ಟಾಟಾ ಏಸ್ ಇವಿಯನ್ನು ಬಳಸಿಕೊಂಡು ಈ ಬದಲಾವಣೆಯಲ್ಲಿ ಮುಂಚೂಣಿಯಲ್ಲಿ ನಿಂತಿದೆ. ಟಾಟಾ ಏಸ್ ಇವಿಯನ್ನು ತಮ್ಮ ವಾಹನ ಬಳಗಕ್ಕೆ ಸೇರಿಸುವ ಮೂಲಕ ಮೆಜೆಂಟಾ ಮೊಬಿಲಿಟಿಯು ಕಾರ್ಯಾಚರಣೆಯ ದಕ್ಷತೆ ಮತ್ತು ಸುಸ್ಥಿರತೆಯಲ್ಲಿ ಯಶಸ್ಸು ಸಾಧಿಸುವ ಮೂಲಕ ಕೊನೆಯ ಹಂತದ ಸಾಗಾಣಿಕಾ ಕ್ಷೇತ್ರವನ್ನೇ ಬದಲಿಸುತ್ತಿದೆ.

ಟಾಟಾ ಏಸ್ ಇವಿ ಹೆಚ್ಚಿನ ಕಾರ್ಯಕ್ಷಮತೆ ಮತ್ತು ವಿಶ್ವಾಸಾರ್ಹತೆಯನ್ನು ಕಾಪಾಡಿಕೊಳ್ಳುತ್ತಲೇ ತನ್ನ ಕಾರ್ಯಾಚರಣೆಗಳಲ್ಲಿ ಇಂಗಾಲದ ಹೆಜ್ಜೆಗುರುತುಗಳನ್ನು ಕಡಿಮೆ ಮಾಡುತ್ತಾ ಕಾರ್ಯ ನಿರ್ವಹಿಸುತ್ತಿದ್ದು ಮೆಜೆಂಟಾ ಮೊಬಿಲಿಟಿ ಸಂಸ್ಥೆಗೆ ಬಲ ತುಂಬಿದೆ. ಎಲ್ಲಾ ರೀತಿಯ ಮಾರ್ಗಗಳಲ್ಲಿ ಸ್ಥಿರವಾದ, ವೆಚ್ಚ ಪರಿಣಾಮಕಾರಿ ಮತ್ತು ಸಮಯಕ್ಕೆ ಸರಿಯಾಗಿ ವಿತರಣೆಗಳನ್ನು ಮಾಡುವ ಕೊನೆಯ ಹಂತದ ಸಾಗಾಣಿಕಾ ವಲಯದ ಬೇಡಿಕೆಗಳನ್ನು ಸೂಕ್ತವಾಗಿ ನಿರ್ವಹಿಸಲು ಏಸ್ ಇವಿ ಸೂಕ್ತವಾಗಿದೆ.

ಈ ಕುರಿತು ಮೆಜೆಂಟಾ ಮೊಬಿಲಿಟಿಯ ಸಂಸ್ಥಾಪಕ ಮತ್ತು ಸಿಇಓ ಶ್ರೀ ಮ್ಯಾಕ್ಸನ್ ಲೆವಿಸ್ ಅವರು, ಬಹಳ ಹಿಂದಿನಿಂದಲೇ ಸಾಮಾಗ್ರಿ ಸಾಗಾಣಿಕಾ ಕ್ಷೇತ್ರದಲ್ಲಿ ಎಲೆಕ್ಟ್ರಿಕ್ ವಾಹನಗಳನ್ನು ಬಳಸುವ ನಾವು ಈ ಮಾರುಕಟ್ಟೆಯಲ್ಲಿ ಸಂಚಲನ ಸೃಷ್ಟಿಸಲು ಸರಿಯಾದ ವಾಹನಕ್ಕಾಗಿ ಕಾಯುತ್ತಿದ್ದೆವು. ಈ ಸಂದರ್ಭದಲ್ಲಿ ಟಾಟಾ ಏಸ್ ಇವಿ ನಮ್ಮ ಅಗತ್ಯಕ್ಕೆ ಸಂಪೂರ್ಣವಾಗಿ ಸರಿಹೊಂದುತ್ತದೆ. ಹೆಚ್ಚು ಪೇಲೋಡ್ ಸಾಮರ್ಥ್ಯವನ್ನು ಹೊಂದಿದೆ ಮತ್ತು 4 ಚಕ್ರದ ಎಲೆಕ್ಟ್ರಿಕ್ ವಿಭಾಗಕ್ಕೆ ಅವಶ್ಯವಾಗಿ ಬೇಕಾಗಿದ್ದ ಹೆಚ್ಚಿನ ರೇಂಜ್ ಅನ್ನು ಒದಗಿಸುತ್ತದೆ. ಆ ಮೂಲಕ ನಮ್ಮ ಕಾರ್ಯಾಚರಣೆಯನ್ನು ಜಾಸ್ತಿ ಮಾಡಿದೆ. ಟಾಟಾ ಏಸ್ ಇವಿ ಸುಸ್ಥಿರ ಉತ್ಪನ್ನವಾಗಿದ್ದು, ಹೆಚ್ಚು ಪೇಲೋಡ್ ಸಾಮರ್ಥ್ಯ, ಅತ್ಯುತ್ತಮ ದಕ್ಷತೆ, ಹೆಚ್ಚಿನ ಸಮಯ ಕಾರ್ಯನಿರ್ವಹಿಸುವ ಸಾಮರ್ಥ್ಯ, ಅತಿ ಹೆಚ್ಚು ರೇಂಜ್ ಮತ್ತು ಹೆಚ್ಚು ಲಾಭದಾಯಕತೆ ಒದಗಿಸುತ್ತದೆ. ಆದ್ದರಿಂದ ಟಾಟಾ ಏಸ್ ಇವಿ ಬಳಸುವ ಮೂಲಕ ನಾವು ನಮ್ಮ ವ್ಯಾಪಾರವನ್ನು ಉತ್ತಮಗೊಳಿಸುವುದರಲ್ಲಿ ಯಶಸ್ಸು ಸಾಧಿಸಿದ್ದೇವೆ. ಸಾಗಾಣಿಕಾ ಕ್ಷೇತ್ರದಲ್ಲಿ ಇಂಗಾಲದ ಹೊರಸೂಸುವಿಕೆಯನ್ನು ಕಡಿಮೆ ಮಾಡುವುದರಿಂದ ಸುಸ್ಥಿರತೆ ಕಾಪಾಡಿಕೊಳ್ಳುತ್ತಿದ್ದೇವೆ. ಟಾಟಾ ಮೋಟಾರ್ಸ್ ಜೊತೆಗಿನ ಈ ಸಹಯೋಗವು ಭವಿಷ್ಯದಲ್ಲಿ ಇಂಗಾಲ ಮುಕ್ತವನ್ನಾಗಿ ಮಾಡಬೇಕು ಎಂಬ ಉದ್ಯಮ ಗುರಿಗೆ ಸೂಕ್ತವಾಗಿ ಸರಿಹೊಂದುತ್ತದೆ ಎಂದು ಹೇಳಿದರು.

ಟಾಟಾ ಏಸ್ ಇವಿಯನ್ನು ಅದರ ಗ್ರಾಹಕರ ಸಹಯೋಗದೊಂದಿಗೆ ಅಭಿವೃದ್ಧಿಪಡಿಸಲಾಗಿದ್ದು, ಹೊಸತನ ಒದಗಿಸುವ, ಶೂನ್ಯ ಇಂಗಾಲದ ಹೊರಸೂಸುವಿಕೆ ಸಾಧಿಸುವ ಮತ್ತು ಆಧುನಿಕ ಉದ್ದಿಮೆಗಳ ಅಗತ್ಯವನ್ನು ಪೂರೈಸುವ ಸೂಕ್ತ ರೀತಿಯ ಉತ್ಪನ್ನಗಳನ್ನು ಒದಗಿಸುವ ಟಾಟಾ ಮೋಟಾರ್ಸ್ ನ ಬದ್ಧತೆಗೆ ಪುರಾವೆಯಾಗಿದೆ. ರಾಷ್ಟ್ರವ್ಯಾಪಿ 200ಕ್ಕೂ ಹೆಚ್ಚು ಮೀಸಲಾದ ಎಲೆಕ್ಟ್ರಿಕ್ ವಾಹನ ಸರ್ವೀಸ್ ಸೆಂಟರ್ ಗಳನ್ನು ಹೊಂದಿರುವ ಟಾಟಾ ಏಸ್ ಇವಿ ಅತ್ಯಾಧುನಿಕ ಬ್ಯಾಟರಿ ನಿರ್ವಹಣಾ ವ್ಯವಸ್ಥೆ ಮತ್ತು 'ಫ್ಲೀಟ್ ಎಡ್ಜ್' ಟೆಲಿಮ್ಯಾಟಿಕ್ಸ್ ಅನ್ನು ಹೊಂದಿದೆ. ವಾಹನದ ಸ್ಟೇಟಸ್, ಆರೋಗ್ಯ, ಲೊಕೇಷನ್ ಮತ್ತು ಚಾಲಕರಿಗೆ ವಾಸ್ತವ ಸಮಯದ ಒಳನೋಟಗಳನ್ನು ಒದಗಿಸುವ ಮೂಲಕ ವಾಹನದ ಕಾರ್ಯ ನಿರ್ವಹಣೆ ಹೆಚ್ಚಿಸಲು ಮತ್ತು ರಸ್ತೆಯಲ್ಲಿ ಸುರಕ್ಷಿತವಾಗಿ ಕಾರ್ಯ ನಿರ್ವಹಣೆ ಮಾಡುವಂತೆ ಮಾಡಲು ಅತ್ಯಾಧುನಿಕ ಸ್ಮಾರ್ಟ್ ತಂತ್ರಜ್ಞಾನಗಳನ್ನು ಬಳಸುತ್ತದೆ. ಟಾಟಾ ಏಸ್ ಇವಿಗಳು ಇದುವರೆಗೂ ಶೇ.99ರಷ್ಟು ಅಪ್ ಟೈಮ್ ನೊಂದಿಗೆ 5 ಕೋಟಿ ಕಿಮೀಗಿಂತ ಹೆಚ್ಚು ದೂರವನ್ನು ಕ್ರಮಿಸಿದ ಸಾಧನೆ ಮಾಡಿದ್ದು, ವಾಸ್ತವ ಜಗತ್ತಿನ ಕಾರ್ಯಾಚರಣೆಗಳಲ್ಲಿ ಅವುಗಳ ವಿಶ್ವಾಸಾರ್ಹತೆ ಮತ್ತು ದಕ್ಷತೆಯನ್ನು ಪ್ರದರ್ಶಿಸಿವೆ. ಏಸ್ ಇವಿ 600 ಕೆಜಿ ಮತ್ತು 1000 ಕೆಜಿ ಪೇಲೋಡ್ ಆಯ್ಕೆಗಳಲ್ಲಿ ಲಭ್ಯವಿದ್ದು, ಗ್ರಾಹಕರ ವೈವಿಧ್ಯಮಯ ಅಗತ್ಯತೆಗಳು ಮತ್ತು ಕಾರ್ಯ ನಿರ್ವಹಣೆಗಳಿಗಾಗಿ ವಿನ್ಯಾಸಗೊಳಿಸಲಾಗಿದೆ. ಟಾಟಾ ಏಸ್ ಇವಿ ತನ್ನ ಗ್ರಾಹಕರಿಂದ ಗಮನಾರ್ಹ ಮೆಚ್ಚುಗೆ ಪಡೆದುಕೊಂಡಿದೆ ಮತ್ತು ಯಶಸ್ಸು ಸಾಧಿಸಿದೆ. ವಿಶೇಷವಾಗಿ ಭಾರತದ ಅತ್ಯಂತ ಪ್ರೀತಿಯ ಎಲೆಕ್ಟ್ರಿಕ್ ಎಸ್ ಸಿ ವಿ ಆಗಿ ಉಳಿದಿದೆ.

# ರಾಶಿ ಭವಿಷ್ಯ



ಜಯಶ್ರೀ.ಬಿ.ಆರ್
ಖ್ಯಾತ ಜ್ಯೋತಿಷಿ
ದೂರವಾಣಿ-9964739507
www.jyotishyavaastu.com

**ಮೇಷ:** ಆದಾಯವು ನಿರೀಕ್ಷೆಯಷ್ಟಿರುತ್ತದೆ, ದಾಂಪತ್ಯದಲ್ಲಿ ಕಲಹ, ಹಿರಿಯರಿಂದ ಮಾರ್ಗದರ್ಶನ.

**ವೃಷಭ:** ಮಾತಿಗೆ ಮನ್ನಣೆ ದೊರೆಯುತ್ತದೆ, ತಾಂತ್ರಿಕ ಕ್ಷೇತ್ರದ ಪರಿಣಿತರಿಗೆ ಶುಭ, ಉದ್ಯೋಗ ಸ್ಥಳದಲ್ಲಿ ಕಿರಿಕಿರಿ.

**ಮಿಥುನ:** ಮಿತ್ರ ವರ್ಗದವರಿಂದ ಅನುಕೂಲ, ವ್ಯವಹಾರದಲ್ಲಿ ಬುದ್ಧಿವಂತಿಕೆಯಿಂದ ನಡೆದುಕೊಳ್ಳುವಿರಿ, ವಿದ್ಯಾಭ್ಯಾಸದಲ್ಲಿ ನಿರಾಸಕ್ತಿ.

**ಕರ್ಕಾಟಕ:** ಒಡಹುಟ್ಟಿದವರಲ್ಲಿ ಭಿನ್ನಾಭಿಪ್ರಾಯ, ಕುಟುಂಬದಲ್ಲಿ ಹೆಚ್ಚಿನ ಜವಾಬ್ದಾರಿ,

**ಸಿಂಹ:** ಅಧ್ಯಾಪಕ ವೃತ್ತಿಯವರಿಗೆ ಶುಭದಾಯಕ, ನೀರಿನಿಂದ ಅಪಾಯ, ಜಾಗ್ರತೆ, ಕ್ರೀಡಾಪಟುಗಳಿಗೆ ಗೌರವ ಪ್ರಾಪ್ತಿ.

**ಕನ್ಯಾ:** ಆರ್ಥಿಕ ನಿರ್ವಹಣೆಯಲ್ಲಿ ಎಚ್ಚರ, ಪೀಠೋಪಕರಣ ವ್ಯಾಪಾರದಲ್ಲಿ ಲಾಭ, ಆಧ್ಯಾತ್ಮ ಸಾಧನೆಗೆ ಮನಸ್ಸು.

**ತುಲಾ:** ಆಸ್ತಿ ವಿಚಾರದಲ್ಲಿ ಗೊಂದಲ, ಕಿರುಚಿತ್ರ ನಟರಿಗೆ ಅವಕಾಶಗಳ ಮಹಾಪೂರ, ಗಿರವಿ ಅಂಗಡಿಯವರಿಗೆ ನಷ್ಟ ಸಾಧ್ಯತೆ.

**ವೃಶ್ಚಿಕ:** ಕೃಷಿ ಚಟುವಟಿಕೆಯಿಂದ ಲಾಭ, ಕಟ್ಟಡ ನಿರ್ಮಾಣದಲ್ಲಿ ಅಡೆತಡೆ, ಜವಾಬ್ದಾರಿಗಳನ್ನು ಜಾಣ್ಮೆಯಿಂದ ನಿಭಾಯಿಸಿ.

**ಧನಸ್ಸು:** ವಿದೇಶದಲ್ಲಿರುವ ಮಕ್ಕಳಿಂದ ಶುಭವಾರ್ತೆ, ಕೆಲಸಗಳಲ್ಲಿ ಮೇಲುಗೈ ಸಾಧಿಸುವ ಯತ್ನ, ಸಹೋದ್ಯೋಗಿಗಳೊಂದಿಗೆ ವಿರೋಧ.

**ಮಕರ:** ಉಸಿರಾಟದ ತೊಂದರೆ, ಸಾಹಿತ್ಯ ಕ್ಷೇತ್ರದವರಿಗೆ ಗೌರವಾದಿಗಳು ಪ್ರಾಪ್ತಿ, ಮುದ್ರಣ ಉದ್ಯಮಿಗಳಿಗೆ ಲಾಭ.

**ಕುಂಭ:** ಧಾರ್ಮಿಕ ಕಾರ್ಯಗಳಲ್ಲಿ ಭಾಗಿ, ವ್ಯವಹಾರಗಳಲ್ಲಿ ಶ್ರದ್ಧೆ ವಹಿಸುವಿರಿ, ಸಂಗಾತಿಯಿಂದ ಸಹಾಯ ದೊರೆಯುತ್ತದೆ.

**ಮೀನ:** ರಾಜಕೀಯದಲ್ಲಿರುವವರಿಗೆ ಶುಭ, ಕಾನೂನು ವಿದ್ಯಾರ್ಥಿಗಳಿಗೆ ಶುಭ, ಉದ್ಯೋಗದಲ್ಲಿ ಏರಿಳಿತ.

# ದೇವ್ ದೀಪಾವಳಿ

ದೇವ್ ದೀಪಾವಳಿಯು ಹಿಂದೂ ತಿಂಗಳ ಕಾರ್ತಿಕದ ಹುಣ್ಣಿಮೆಯ ರಾತ್ರಿ ನಡೆಯುತ್ತದೆ. ಇದು ಈ ವರ್ಷ ನವೆಂಬರ್ 24 ರಂದು ನಡೆಯುತ್ತದೆ. ಇದು ದೀಪಾವಳಿಯ 15 ದಿನಗಳ ನಂತರ ನಡೆಯುವ ಆಚರಣೆಯಾಗಿದೆ - ಹಿಂದೂ ದೀಪಗಳ ಹಬ್ಬ. ದೇವ್ ದೀಪಾವಳಿಯು ದೀಪಾವಳಿಗಿಂತ ಭಿನ್ನವಾಗಿರುವುದೇನು? ದೀಪಾವಳಿ ಕೇವಲ ಮನುಷ್ಯರಿಗೆ; ದೇವ್ ದೀಪಾವಳಿಯು ದೇವರುಗಳ ಹಬ್ಬವಾಗಿದೆ. ಇದು ವಾರಣಾಸಿಯಲ್ಲಿ ನಡೆಯುತ್ತದೆ - ಹಿಂದೂ ಪುರಾಣಗಳಲ್ಲಿ ಪವಿತ್ರ ನಗರಗಳಲ್ಲಿ ಒಂದಾಗಿದೆ.

ಈ ದಿನದಂದು ದೇವರುಗಳು ತ್ರಿಪುರಾಸುರನ ಮೇಲೆ ಶಿವನ ವಿಜಯವನ್ನು ಆಚರಿಸುತ್ತಾರೆ ಎಂದು ಹಿಂದೂಗಳು ನಂಬುತ್ತಾರೆ. ಭಕ್ತರು ವಾರಣಾಸಿಯ ಘಾಟ್ಗಳನ್ನು (ಹೆಜ್ಜೆಗಳು) ಮಿಲಿಯನ್ ಮಣ್ಣಿನ ದೀಪಗಳಿಂದ ಬೆಳಗಿಸುತ್ತಾರೆ. ಆದರೆ ದೀಪಗಳಿಗೆ ಚಂದ್ರನ ಹೊಳಪಿನ ಮೇಲೆ ಏನೂ ಇಲ್ಲ. ಪ್ರತಿ ವರ್ಷ, ದೇವ್ ದೀಪಾವಳಿಯು ಹಿಂದೂ ತಿಂಗಳ ಕಾರ್ತಿಕದ ಹುಣ್ಣಿಮೆಯ ರಾತ್ರಿ ಬರುತ್ತದೆ.

ಭಾರತದಲ್ಲಿ ಹಿಂದೂ ಸಮುದಾಯಗಳು ಆಚರಿಸುವ ಹಬ್ಬವಾದ ದೀಪಾವಳಿಯ ಬಗ್ಗೆ ಹೆಚ್ಚಿನ ಜನರಿಗೆ ತಿಳಿದಿದೆ. 14 ವರ್ಷಗಳ ವನವಾಸದ ನಂತರ ಭಗವಾನ್ ರಾಮನು ತನ್ನ ಪತ್ನಿ ಸೀತೆ ಮತ್ತು ಸಹೋದರ ಲಕ್ಷ್ಮಣನೊಂದಿಗೆ ಹಿಂದಿರುಗಿದ ದಿನವನ್ನು ದೀಪಾವಳಿ ಸೂಚಿಸುತ್ತದೆ. ಅವರು ರಾಕ್ಷಸ ರಾವಣನನ್ನು ಸಂಹರಿಸಿ ವಿಜಯಶಾಲಿಯಾಗಿ ಹಿಂತಿರುಗುತ್ತಾರೆ. ದೀಪಾವಳಿಯು ಭಾರತದ ಅತಿ ದೊಡ್ಡ ಹಬ್ಬಗಳಲ್ಲಿ ಒಂದಾಗಿದೆ. ಜನರು ತಮ್ಮ ಮನೆಗಳನ್ನು ದಿಯಾಗಳು (ಮಣ್ಣಿನ ದೀಪಗಳು) ಮತ್ತು ದೀಪಗಳಿಂದ ಬೆಳಗಿಸುತ್ತಾರೆ. ಮಿಠಾಯಿ ಅಥವಾ ಸಿಹಿತಿಂಡಿಗಳನ್ನು ತಿನ್ನುವುದು ದಿನದ ಕ್ರಮವಾಗಿದೆ

ಆಚರಣೆಗಳು ನಿಲ್ಲುವುದಿಲ್ಲ, ಏಕೆಂದರೆ ದೇವ್ ದೀಪಾವಳಿಯು 15 ದಿನಗಳ ನಂತರ ನಡೆಯುತ್ತದೆ. ಇದು ದೇವರ ದೀಪಾವಳಿ ಮತ್ತು ಇದನ್ನು 'ಕಾರ್ತಿಕ ಪೂರ್ಣಿಮಾ' ಎಂದೂ ಕರೆಯಲಾಗುತ್ತದೆ. ಹಬ್ಬದ ಪ್ರಶಾಂತತೆಯನ್ನು ಅನುಭವಿಸಲು, ವಾರಣಾಸಿಯ ಘಾಟ್ಗಳಿಗೆ ಭೇಟಿ ನೀಡಬೇಕು. ಸಾವಿರಾರು ದೀಪಗಳು ಮೆಟ್ಟಿಲುಗಳನ್ನು ಬೆಳಗಿಸುತ್ತವೆ, ಅವುಗಳ ಬೆಳಕು ನದಿಯ ಮಿನುಗುವ ನೀರಿನಲ್ಲಿ ಪ್ರತಿಫಲಿಸುತ್ತದೆ. ಸುತ್ತಲೂ ಸ್ತೋತ್ರ ಪಠಣ, ಶಂಖ ಊದುವಿಕೆ ಮತ್ತು ಲಯಬದ್ಧ ಡ್ರಮ್ ಬಾರಿಸುವಿಕೆ ಇದೆ. ದೈವಿಕ ಶಕ್ತಿಗಳ ಉಪಸ್ಥಿತಿಯನ್ನು ಅನುಭವಿಸದಿರುವುದು ಕಷ್ಟ. ಸಾವಿರಾರು ಭಕ್ತರು ಗಂಗಾನದಿಯ ಪವಿತ್ರ ನೀರಿನಲ್ಲಿ ಸ್ನಾನ ಮಾಡುತ್ತಾರೆ. ನೀರಿನಲ್ಲಿ ಸ್ನಾನ ಮಾಡುವುದರಿಂದ ನಿಮ್ಮ ಪಾಪಗಳು ತೊಲಗುತ್ತವೆ ಮತ್ತು ನಿಮ್ಮನ್ನು ದೇವರುಗಳಿಗೆ ಹತ್ತಿರವಾಗಿಸುತ್ತದೆ ಎಂದು ಜನರು ದೇವ್ ದೀಪಾವಳಿಯು ಮೂರು ಶಕ್ತಿಶಾಲಿ ರಾಕ್ಷಸರನ್ನು ಸೋಲಿಸಿ ಕೊಂದ ಭಗವಾನ್ ಶಿವನನ್ನು ಗೌರವಿಸುತ್ತದೆ: ವಿದ್ಯುನ್ಮಾಲಿ, ತಾರಕಾಕ್ಷ ಮತ್ತು ವೀರವನ, ಒಟ್ಟಾಗಿ ತ್ರಿಪುರಾಸುರ ಎಂದು ಕರೆಯಲ್ಪಡುತ್ತದೆ. ಅಂತಹ ಸಾಧನೆಯು ದೈವಿಕ ಆಚರಣೆಗೆ ಕರೆ ನೀಡಿತು, ಕಡಿಮೆಯಿಲ್ಲ, ಅದಕ್ಕಾಗಿಯೇ ದೇವರುಗಳು ಪ್ರತಿ ವರ್ಷ ಶಿವನ ವಿಜಯದಲ್ಲಿ ಆನಂದಿಸುತ್ತಾರೆ. ಬಹಳ ಹಿಂದಿನಿಂದಲೂ ಶಿವನ ನಗರವೆಂದು ಪರಿಗಣಿಸಲ್ಪಟ್ಟ ವಾರಣಾಸಿಯಲ್ಲಿ ಆಚರಣೆಗಳು ನಡೆಯುವುದು ಸೂಕ್ತವಾಗಿದೆ.

## ಇಂಡಿ ಕೂಟದ ನಕಾರಾತ್ಮಕ ರಾಜಕೀಯ, ಸುಳ್ಳು ಮತ್ತು ದ್ರೋಹ ಸೋತಿದೆ: ಪ್ರಧಾನಿ ಮೋದಿ

# ಮಹಾರಾಷ್ಟ್ರದಲ್ಲಿ ಮಹಾಯುತಿಗೆ 'ಪ್ರಚಂಡ ಗೆಲುವು'

**ಮಹಾರಾಷ್ಟ್ರ:** ಮಹಾರಾಷ್ಟ್ರದಲ್ಲಿ 'ಮಹಾಯುತಿ' ವಿಜಯವನ್ನು ನಾವು ಆಚರಿಸುತ್ತಿದ್ದೇವೆ. ಇಂದು ಮಹಾರಾಷ್ಟ್ರದಲ್ಲಿ 'ವಿಕಾಸವಾದ' ಗೆದ್ದಿದೆ, ನಿಜವಾದ ಸಾಮಾಜಿಕ ಮೌಲ್ಯಗಳು ಗೆದ್ದಿವೆ, ಇಂದು ರಾಜ್ಯದಲ್ಲಿ ಸುಳ್ಳು, ದ್ರೋಹ ಸೋತಿದೆ ಎಂದು ಪ್ರಧಾನಿ ಹೇಳಿದರು.

ಮಹಾರಾಷ್ಟ್ರ ವಿಧಾನಸಭೆ ಚುನಾವಣೆಯಲ್ಲಿ ಬಿಜೆಪಿ ನೇತೃತ್ವದ ಮಹಾಯುತಿ ಪ್ರಚಂಡ ಬಹುಮತ ಸಾಧಿಸುತ್ತಿದ್ದಂತೆ ವಿಜಯೋತ್ಸವ ಭಾಷಣ ಮಾಡಿದ ಪ್ರಧಾನಿ ನರೇಂದ್ರ ಮೋದಿ ಅವರು, ಮಹಾರಾಷ್ಟ್ರದಲ್ಲಿ ನಕಾರಾತ್ಮಕತೆಯ ರಾಜಕಾರಣ ಕಳೆದುಹೋಗಿದ್ದು ಸುಳ್ಳು ಮತ್ತು ದ್ರೋಹ ಸೋತಿದೆ ಎಂದು ಹೇಳಿದರು.

ಮಹಾರಾಷ್ಟ್ರದಲ್ಲಿ 'ಮಹಾಯುತಿ' ವಿಜಯವನ್ನು ನಾವು ಆಚರಿಸುತ್ತಿದ್ದೇವೆ. ಇಂದು ಮಹಾರಾಷ್ಟ್ರದಲ್ಲಿ 'ವಿಕಾಸವಾದ' ಗೆದ್ದಿದೆ, ನಿಜವಾದ ಸಾಮಾಜಿಕ ಮೌಲ್ಯಗಳು ಗೆದ್ದಿವೆ, ಇಂದು ರಾಜ್ಯದಲ್ಲಿ ಸುಳ್ಳು, ದ್ರೋಹ ಸೋತಿದೆ ಎಂದು ಪ್ರಧಾನಿ ಹೇಳಿದರು. ಈ ಗೆಲುವಿನೊಂದಿಗೆ ಮಹಾರಾಷ್ಟ್ರ, ಭಾರತದ ಅಭಿವೃದ್ಧಿಯ ದಿಕ್ಕಿನಲ್ಲಿ ಒಂದು ಹೆಜ್ಜೆ ಮುಂದಿಟ್ಟಿದೆ ಎಂದು ಹೇಳಿದರು.

ವಿರೋಧ ಪಕ್ಷ ಇಂಡಿಯಾ ಕೂಟವನ್ನು ತರಾಟೆಗೆ ತೆಗೆದುಕೊಂಡ ಮೋದಿ, ಮಹಾರಾಷ್ಟ್ರದಲ್ಲಿ ಮತದಾರರು ವಿಭಜಕ ಶಕ್ತಿಗಳಿಗಿಂತ ಅಭಿವೃದ್ಧಿಯುತ ಪಕ್ಷವನ್ನು ಆರಿಸುವ ಮೂಲಕ ಸ್ಪಷ್ಟ ತೀರ್ಪು ನೀಡಿದ್ದಾರೆ ಎಂದು ಹೇಳಿದರು. 'ಏಕ್ ಹೈ ತೋ ಸೇಫ್ ಹೈ' (ಒಂದಾಗಿದ್ದರೆ ಸುರಕ್ಷಿತವಾಗಿರುತ್ತೀವಿ) ಎಂಬ ಸಂದೇಶವನ್ನು ಮಹಾರಾಷ್ಟ್ರ ಸ್ಪಷ್ಟವಾಗಿ ನೀಡಿದೆ. ಕಾಂಗ್ರೆಸ್ ಸಂವಿಧಾನದ ಹೆಸರಲ್ಲಿ ಸುಳ್ಳು ಹೇಳುತ್ತಾ ಎಸ್‌ಸಿ, ಎಸ್‌ಟಿ ಮತ್ತು ಒಬಿಸಿಯನ್ನು ವಿಭಜಿಸಬಹುದು ಎಂದು ಭಾವಿಸಿತ್ತು ಎಂದು ಮೋದಿ ಹೇಳಿದರು. ಭಾರತದ ವಾಣಿಜ್ಯ ರಾಜ್ಯದಲ್ಲಿ ಎನ್‌ಡಿಎ ಬಣದ ಅದ್ಭುತ ಗೆಲುವಿನ ಕುರಿತು ಮಾತನಾಡಿದ ಮೋದಿ ಅವರು, ಕಳೆದ 50 ವರ್ಷಗಳಲ್ಲಿ, ಯಾವುದೇ ಪಕ್ಷ ಅಥವಾ ಚುನಾವಣಾ ಪೂರ್ವ ಮೈತ್ರಿಗೆ ಸಿಕ್ಕ ಅತಿದೊಡ್ಡ ವಿಜಯವಾಗಿದೆ. ಇದು ಸತತ ಮೂರನೇ ಬಾರಿಗೆ, ಮಹಾರಾಷ್ಟ್ರದಲ್ಲಿ ಬಿಜೆಪಿ ದೊಡ್ಡ ಪಕ್ಷವಾಗಿ ಹೊರಹೊಮ್ಮಿದೆ. ಇದು ಬಿಜೆಪಿಯ ಆಡಳಿತ ಮಾದರಿಯನ್ನು ಮಾನ್ಯ ಮಾಡುತ್ತದೆ. ಮಹಾರಾಷ್ಟ್ರದಲ್ಲಿ ಮೂರನೇ ಬಾರಿಗೆ ಬಿಜೆಪಿ ನೇತೃತ್ವದ ಎನ್ ಡಿಎ ಸರ್ಕಾರ ರಚನೆಗೆ ಮಾಡಲಿದೆ ಎಂದರು.

### ಮಹಾ' ಗೆಲುವು ಶ್ಲಾಘಿಸಿದ 'ಪ್ರಧಾನಿ ಮೋದಿ'

ಮಹಾರಾಷ್ಟ್ರ ವಿಧಾನಸಭಾ ಚುನಾವಣೆಯಲ್ಲಿ ಭರ್ಜರಿ ಗೆಲುವು ಸಾಧಿಸಿದ ನಂತರ ಪ್ರಧಾನಿ ನರೇಂದ್ರ ಮೋದಿ ಶನಿವಾರ ನವದೆಹಲಿಯ ಬಿಜೆಪಿ ಪ್ರಧಾನ ಕಚೇರಿಗೆ ಆಗಮಿಸಿದರು. ಪಕ್ಷದ ಕಾರ್ಯಕರ್ತರನ್ನುದ್ದೇಶಿಸಿ ಮಾತನಾಡಿದ ಮೋದಿ, ಮಹಾರಾಷ್ಟ್ರದಲ್ಲಿ ಅಭಿವೃದ್ಧಿ, ಉತ್ತಮ ಆಡಳಿತ ಮತ್ತು ನಿಜವಾದ ಸಾಮಾಜಿಕ ನ್ಯಾಯ ಗೆದ್ದಿದೆ. ಇನ್ನು ಸುಳ್ಳು ಮತ್ತು ಮೋಸವನ್ನ ಕೆಟ್ಟದಾಗಿ ಸೋಲಿಸಲಾಗಿದೆ'' ಎಂದರು. ಉಪಚುನಾವಣೆಗಳು ಸೇರಿದಂತೆ ಇತರ ರಾಜ್ಯಗಳ ಚುನಾವಣಾ ಫಲಿತಾಂಶಗಳನ್ನ ಪ್ರಧಾನಿ ಮೋದಿ ನೆನಪಿಸಿಕೊಂಡರು, ಅಲ್ಲಿ ಬಿಜೆಪಿ ಪ್ರತಿಪಕ್ಷಗಳನ್ನ ಮೀರಿಸಿದೆ. ''ಇಂದು ಅನೇಕ ರಾಜ್ಯಗಳ ಉಪಚುನಾವಣೆಗಳ ಫಲಿತಾಂಶಗಳು ಸಹ ಬಂದಿವೆ. ಉತ್ತರ ಪ್ರದೇಶ, ಉತ್ತರಾಖಂಡ ಮತ್ತು ರಾಜಸ್ಥಾನಗಳು ಬಿಜೆಪಿಗೆ ಬಲವಾದ ಬೆಂಬಲ ನೀಡಿವೆ. ಅಸ್ಸಾಂನ ಜನರು ಮತ್ತೊಮ್ಮೆ ಬಿಜೆಪಿ ಮೇಲೆ ವಿಶ್ವಾಸ ವ್ಯಕ್ತಪಡಿಸಿದ್ದಾರೆ. ಮಧ್ಯಪ್ರದೇಶದಲ್ಲೂ ನಮಗೆ ಯಶಸ್ಸು ಸಿಕ್ಕಿದೆ. ಬಿಹಾರದಲ್ಲಿ ಎನ್ಡಿಎಗೆ ಬೆಂಬಲ ಹೆಚ್ಚಾಗಿದೆ. ದೇಶವು ಈಗ ಅಭಿವೃದ್ಧಿಯನ್ನ ಮಾತ್ರ ಬಯಸುತ್ತದೆ ಎಂದು ಇದು ತೋರಿಸುತ್ತದೆ'' ಎಂದು ಪ್ರಧಾನಿ ಹೇಳಿದರು.



### ನಡ್ಡಾ, ಜನಾದೇಶವನ್ನು ಒಪ್ಪಿಕೊಂಡಿದ್ದೇವೆ

**ಜಾರ್ಖಂಡ್ ರಾಜ್ಯದಲ್ಲಿ ನಮ್ಮ ಪಕ್ಷವು ರಚನಾತ್ಮಕ ವಿರೋಧ ಪಕ್ಷದ ಪಾತ್ರವನ್ನು ವಹಿಸುತ್ತದೆ ಎಂದು ಪ್ರತಿಪಾದಿಸಿದ್ದಾರೆ. ಚುನಾವಣಾ ಫಲಿತಾಂಶದ ನಂತರ ಬಿಜೆಪಿ ಪ್ರಧಾನ ಕಚೇರಿಯಲ್ಲಿ ಆಯೋಜಿಸಲಾದ ಕಾರ್ಯಕ್ರಮವನ್ನು ಉದ್ದೇಶಿಸಿ ಮಾತನಾಡಿದ ಜೆ.ಪಿ. ನಡ್ಡಾ, ಜಾರ್ಖಂಡ್ನಲ್ಲಿ ಜನಾದೇಶವನ್ನು ಒಪ್ಪಿಕೊಂಡಿದ್ದೇವೆ. ತಮ್ಮ ಪಕ್ಷವು ರಾಜ್ಯದಲ್ಲಿ ರಚನಾತ್ಮಕ ವಿರೋಧ ಪಕ್ಷದ ಪಾತ್ರವನ್ನು ವಹಿಸುತ್ತದೆ. ಕೊನೆಯ ಉಸಿರು ಇರುವವರೆಗೂ ನಾವು ಬಾಂಗ್ಲಾದೇಶದ ಒಳನುಸುಳುವಿಕೆಯ ವಿರುದ್ಧ ಹೋರಾಡುತ್ತೇವೆ ಎಂದು ಪ್ರತಿಪಾದಿಸಿದರು. ಇತ್ತೀಚಿನ ಸುತ್ತಿನ ಚುನಾವಣೆಗಳಲ್ಲಿ, ಮಹಾರಾಷ್ಟ್ರ ಮತ್ತು ಇತರ ರಾಜ್ಯಗಳ ಜನರು ಮೋದಿಯವರ ಅಭಿವೃದ್ಧಿಯ ಕಾರ್ಯಸೂಚಿ ಮತ್ತು ರಾಷ್ಟ್ರಕ್ಕೆ ಸೇವೆ ಸಲ್ಲಿಸುವ ಅವರ ಸಂಕಲ್ಪಕ್ಕೆ ತಮ್ಮ ಮತ ಹಾಕಿದ್ದಾರೆ. ಜನರು ಮತ್ತೊಮ್ಮೆ ಪ್ರಧಾನಿ ನರೇಂದ್ರ, ಮೋದಿಯವರ ನಾಯಕತ್ವ ಮತ್ತು ವಿಕಾಸವಾದವನ್ನು ಅನುಮೋದಿಸಿದ್ದಾರೆ ಮತ್ತು ಜಾತಿಯ ಆಧಾರದ ಮೇಲೆ ದೇಶವನ್ನು ವಿಭಜಿಸಿ ಜನರನ್ನು ದಾರಿ ತಪ್ಪಿಸುತ್ತಿರುವವರು ಈ ಚುನಾವಣೆಯಲ್ಲಿ ಮುಖಭಂಗಕ್ಕೀಡಾಗಿದ್ದಾರೆ ಎಂದು ಅವರು ಹೇಳಿದರು. ತುಷ್ಟೀಕರಣ ರಾಜಕಾರಣ ಮಾಡಿ, ಜಾತಿ ಮತ್ತು ಧರ್ಮದ ಆಧಾರದ ಮೇಲೆ ಜನರನ್ನು ವಿಭಜಿಸುವ ಮೂಲಕ ಅಧಿಕಾರಕ್ಕೆ ಬರುತ್ತೇವೆ ಎಂಬ ಭ್ರಮೆಯಲ್ಲಿ ಬದುಕುತ್ತಿದ್ದ ಭಾರತದ ಮೈತ್ರಿಕೂಟದವರಿಗೆ ಈ ಚುನಾವಣೆಯ ಫಲಿತಾಂಶ ಮತ್ತು ಹರಿಯಾಣದಲ್ಲಿ ಇತ್ತೀಚೆಗೆ ನಡೆದ ಫಲಿತಾಂಶ ಉತ್ತರ ನೀಡಿದೆ ಎಂದು ಜೆ.ಪಿ. ನಡ್ಡಾ ಹೇಳಿದ್ದಾರೆ.**



### ಪಶ್ಚಿಮ ಬಂಗಾಳದ ಉಪ ಚುನಾವಣೆಯಲ್ಲಿ ಟಿಎಂಸಿ ಭರ್ಜರಿ ಬೇಟೆ

**ನವದೆಹಲಿ:** ಪಶ್ಚಿಮ ಬಂಗಾಳ ವಿಧಾನಸಭಾ ಉಪಚುನಾವಣೆಯಲ್ಲಿ ಅಖಿಲ ಭಾರತ ತೃಣಮೂಲ ಕಾಂಗ್ರೆಸ್ (ಟಿಎಂಸಿ) ಭಾರಿ ಗೆಲುವಿನತ್ತ ಸಾಗುತ್ತಿದೆ. ಟಿಎಂಸಿ ಇಲ್ಲಿಯವರೆಗೆ 4 ಸ್ಥಾನಗಳನ್ನು ಗೆದ್ದು ಎರಡು ಸ್ಥಾನಗಳಲ್ಲಿ ಮುನ್ನಡೆ ಸಾಧಿಸಿದೆ. ಟಿಎಂಸಿ ಸಿತಾಯಿ, ಮದರಿಹತ್, ನೈಹಟಿ, ಹರೋವಾ ಗೆದ್ದು ಮೇದಿನಿಪುರ, ತಲ್ದಂಗ್ರಾದಲ್ಲಿ ಮುನ್ನಡೆ ಸಾಧಿಸಿದೆ. ಇಂದು ಬೆಳಗ್ಗೆ 8 ಗಂಟೆಗೆ ಮತ ಎಣಿಕೆ ಆರಂಭವಾಯಿತು. ಟಿಎಂಸಿ ಅಭ್ಯರ್ಥಿಗಳು ತಮ್ಮ 2 ಸ್ಥಾನಗಳಲ್ಲಿ ಬಹುಮತದೊಂದಿಗೆ ಮುನ್ನಡೆ ಸಾಧಿಸಿದ್ದು, ಬಿಜೆಪಿ ಅಭ್ಯರ್ಥಿಗಳು ಹಿಂದುಳಿದಿದ್ದಾರೆ. ಈ ವರ್ಷ ಜೂನ್ನಲ್ಲಿ ಲೋಕಸಭೆಗೆ ಆಯ್ಕೆಯಾದ ನಂತರ ಶಾಸಕರು ರಾಜೀನಾಮೆ ನೀಡಿದ ನಂತರ ತೆರವಾದ ಈ ಸ್ಥಾನಗಳಿಗೆ ಉಪಚುನಾವಣೆ ಅಗತ್ಯವಾಗಿತ್ತು. ಆರ್ಜಿ ಕರ್ ವೈದ್ಯಕೀಯ ಕಾಲೇಜು ಮತ್ತು ಆಸ್ಪತ್ರೆಯ ವಿದ್ಯಾರ್ಥಿನಿ ಮೇಲಿನ ಅತ್ಯಾಚಾರ ಮತ್ತು ಹತ್ಯೆಯ ಆರೋಪದ ಮೇಲೆ ಪಶ್ಚಿಮ ಬಂಗಾಳ ರಾಜ್ಯದಲ್ಲಿ ಆಕ್ರೋಶದ ನಡುವೆ ನಡೆದ ಪಶ್ಚಿಮ ಬಂಗಾಳದ ಉಪಚುನಾವಣೆಯು ಮಮತಾ ಬ್ಯಾನರ್ಜಿಗೆ ಪರೀಕ್ಷೆಯಾಗಿದೆ. ಈ ಘಟನೆ ರಾಜ್ಯದಲ್ಲಿ ವ್ಯಾಪಕ ಆಕ್ರೋಶಕ್ಕೆ ಕಾರಣವಾಗಿದ್ದು, ರಾಜ್ಯದ ವಿವಿಧೆಡೆ ಪ್ರತಿಭಟನೆಗೆ ಕಾರಣವಾಗಿತ್ತು.

2021 ಮತ್ತು 2016ರ ಚುನಾವಣೆಗಳಲ್ಲಿ ಬಿಜೆಪಿ ಪಾಲಾಗಿದ್ದ ಅಲಿಪುರ್ದೂರ್ ಜಿಲ್ಲೆಯ ಮದರಿಹತ್ ಕ್ಷೇತ್ರವನ್ನು ಟಿಎಂಸಿ ವಶಪಡಿಸಿಕೊಳ್ಳುವಲ್ಲಿ ಯಶಸ್ವಿಯಾಗಿದೆ. ಸಿತಾಯಿ, ಹರೋವಾ, ನೈಹತಿ, ತಲ್ದಂಗ್ರಾ, ಮತ್ತು ಮೇದಿನಿಪುರ್ ಕ್ಷೇತ್ರಗಳಲ್ಲಿ ತೃಣಮೂಲ ಅಭ್ಯರ್ಥಿಗಳು ಜಯಭೇರಿ ಬಾರಿಸಿದ್ದಾರೆ. ಈಗಾಗಲೇ ಟಿಎಂಸಿಯ ಸಂಗೀತಾ ರಾಯ್ ಅವರು ಸೀತಾಯಿ (ಪರಿಶಿಷ್ಟ ಜಾತಿ) 1 ಲಕ್ಷಕ್ಕೂ ಹೆಚ್ಚು ಮತಗಳ ಅಂತರದಿಂದ ಗೆದ್ದಿದ್ದಾರೆ. ಅವರು ಕೇವಲ 35,348 ಮತಗಳನ್ನು ಪಡೆದ ಬಿಜೆಪಿಯ ದೀಪಕ್ ಕುಮಾರ್ ರೇ ಅವರನ್ನು ಸೋಲಿಸಿದರು.



### ವಿಪಕ್ಷಗಳ ವಿರುದ್ಧ 'ಪ್ರಧಾನಿ ಮೋದಿ' ವಾಗ್ದಾಳಿ

**ನವದೆಹಲಿ :** ಪ್ರಧಾನಿ ನರೇಂದ್ರ ಮೋದಿ ಶನಿವಾರ ಕಾಂಗ್ರೆಸ್ ವಿರುದ್ಧ ತೀವ್ರ ವಾಗ್ದಾಳಿ ನಡೆಸಿದ್ದು, ''ಏಕ್ ಹೈ ತೋ ಸೇಫ್ ಹೈ'' (ಒಗ್ಗಟ್ಟಾಗಿ, ನಾವು ಸುರಕ್ಷಿತವಾಗಿದ್ದೇವೆ) ಎಂಬ ತಮ್ಮ ಘೋಷಣೆಯನ್ನು ಪುನರುಚ್ಚರಿಸಿದರು, ಇದು ರಾಷ್ಟ್ರದ 'ಮಹಾ-ಮಂತ್ರ' (ರಾಷ್ಟ್ರೀಯ ಮಂತ್ರ) ಎಂದು ಘೋಷಿಸಿದರು. ನವದೆಹಲಿಯ ಪಕ್ಷದ ಪ್ರಧಾನ ಕಚೇರಿಯಲ್ಲಿ ಬಿಜೆಪಿ ಕಾರ್ಯಕರ್ತರನ್ನುದ್ದೇಶಿಸಿ ಮಾತನಾಡಿದ ಪ್ರಧಾನಿ ಮೋದಿ, ''ಹರಿಯಾಣದ ನಂತರ, ಮಹಾರಾಷ್ಟ್ರ ಚುನಾವಣೆಯ ಅತಿದೊಡ್ಡ ಅಂಶವೆಂದರೆ ಏಕತೆಯ ಸಂದೇಶ. ಏಕ್ ಹೈ ತೋ ಸೇಫ್ ಹೈ' ಎಂಬುದು ರಾಷ್ಟ್ರದ 'ಮಹಾ ಮಂತ್ರ'ವಾಗಿ ಪ್ರತಿಧ್ವನಿಸಿದೆ. ಜಾತಿ, ಧರ್ಮ, ಭಾಷೆ ಮತ್ತು ಪ್ರದೇಶದ ಆಧಾರದ ಮೇಲೆ ರಾಷ್ಟ್ರವನ್ನು ವಿಭಜಿಸಲು ಪ್ರಯತ್ನಿಸುತ್ತಿರುವ ಶಕ್ತಿಗಳಿಗೆ ಏಕತೆಯ ಭಾವನೆಯು ಬಲವಾದ ಹೊಡೆತವನ್ನು ನೀಡಿದೆ ಎಂದು ಪ್ರಧಾನಿ ಗಮನಸೆಳೆದರು. ''ಈ ಮಂತ್ರವು ವಿಭಜನೆಯನ್ನು ಪ್ರಚಾರ ಮಾಡುವವರಿಗೆ ಪಾಠ ಕಲಿಸಿದೆ. ಅದು ಅವರಿಗೆ ಶಿಕ್ಷೆ ವಿಧಿಸಿದೆ. ಬುಡಕಟ್ಟು ಜನರು, ಒಬಿಸಿಗಳು, ದಲಿತರು ಮತ್ತು ಸಮಾಜದ ಪ್ರತಿಯೊಂದು ವರ್ಗವು ಬಿಜೆಪಿ-ಎನ್ಡಿಎ ಬೆನ್ನಿಗೆ ನಿಂತಿದೆ. ಇದು ಕಾಂಗ್ರೆಸ್ ಮತ್ತು ಇಂಡಿ ಮೈತ್ರಿಕೂಟದ ವಿಭಜಕ ಕಾರ್ಯಸೂಚಿಗೆ ಬಲವಾದ ವಿರೋಧವಾಗಿದೆ'' ಎಂದು ಅವರು ಹೇಳಿದರು.



### ಹಿಂಸಾಚಾರದ ನಡುವೆ ಕುಟುಂಬದ ಜೊತೆ ನೃತ್ಯ ಮಾಡಿದ ಪ್ರಧಾನಿ ಟ್ರುಡೊ

**ಮಾಂಟ್ರಿಯಲ್ :** ಶುಕ್ರವಾರ ಸಂಜೆ, ಕೆನಡಾದ ಮಾಂಟ್ರಿಯಲ್ 'ನ ಬೀದಿಗಳಲ್ಲಿ ಹಿಂಸಾಚಾರ ಭುಗಿಲೆದ್ದಿದ್ದು, ಇಸ್ರೇಲ್ ವಿರೋಧಿ, ಪ್ಯಾಲೆಸ್ತೀನ್ ಪರ ಕಾರ್ಯಕರ್ತರು ಪೊಲೀಸ್ ಅಧಿಕಾರಿಗಳೊಂದಿಗೆ ಘರ್ಷಣೆ ನಡೆಸಿದರು, ಕಿಟಕಿಗಳನ್ನು ಒಡೆದರು ಮತ್ತು ವಾಹನಗಳಿಗೆ ಬೆಂಕಿ ಹಚ್ಚಿದರು. ಸದ್ಯ ನಾಲ್ವರನ್ನು ಬಂಧಿಸಲಾಗಿದೆ. ಸಾಮಾಜಿಕ ಮಾಧ್ಯಮಗಳಲ್ಲಿ ಹರಿದಾಡುತ್ತಿರುವ ವೀಡಿಯೊಗಳಲ್ಲಿ ಪ್ರತಿಭಟನಾಕಾರರು ಫೆಲೆಸ್ತೀನ್ ಧ್ವಜಗಳನ್ನ ಬೀಸುತ್ತಿರುವುದನ್ನು ಮತ್ತು ''ಫ್ರೀ ಪ್ಯಾಲೆಸ್ಟೈನ್'' ಮತ್ತು ''ಇಸ್ರೇಲ್ ಭಯೋತ್ಪಾದಕ, ಕೆನಡಾ ಭಾಗಿಯಾಗಿದೆ'' ಎಂಬ ಘೋಷಣೆಗಳನ್ನು ಕೂಗುತ್ತಿರುವುದನ್ನು ತೋರಿಸಿದೆ. ಗಲಭೆಯ ಮಧ್ಯೆ, ಕೆನಡಾದ ಪ್ರಧಾನಿ ಜಸ್ಟಿನ್ ಟ್ರುಡೊ ಅವರು ಟೊರೊಂಟೊದಲ್ಲಿ ನಡೆದ ಅಮೆರಿಕದ ಪಾಪ್ ತಾರೆ ಟೇಲರ್ ಸ್ವಿಫ್ಟ್ ಅವರ ಸಂಗೀತ ಕಾರ್ಯಕ್ರಮದಲ್ಲಿ ತಮ್ಮ ಕುಟುಂಬದೊಂದಿಗೆ ಭಾಗವಹಿಸಿದ್ದರು. ಅವರು ರೋಜರ್ಸ್ ಕೇಂದ್ರದಲ್ಲಿ ಸ್ವಿಫ್ಟ್ ಅವರ ಹಾಡುಗಳನ್ನ ಆನಂದಿಸುತ್ತಿದ್ದು, ನೃತ್ಯ ಮಾಡಿದ್ದಾರೆ. ಸಂಗೀತ ಕಾರ್ಯಕ್ರಮದಲ್ಲಿ ಅಭಿಮಾನಿಯೊಬ್ಬರು ಪ್ರಧಾನಿ ನೃತ್ಯ ಮಾಡುತ್ತಿರುವ ವೀಡಿಯೊವನ್ನು ಎಕ್ಸ್ (ಹಿಂದೆ ಟ್ವಿಟರ್) ನಲ್ಲಿ ಹಂಚಿಕೊಂಡಿದ್ದಾರೆ.

### ಬೆಂಗಳೂರು, ಚೆನ್ನೈಗೆ ಆಸ್ಟ್ರೇಲಿಯನ್ ಡಿಜಿಟೆಕ್ ಟ್ರೇಡ್ ಮಿಷನ್ ಭೇಟಿ

**ಬೆಂಗಳೂರು:** ಆಸ್ಟ್ರೇಲಿಯನ್ ಡಿಜಿಟೆಕ್ ಟ್ರೇಡ್ ಮಿಷನ್ನ 19 ಸದಸ್ಯರ ತಂಡ ಭಾರತಕ್ಕೆ ಭೇಟಿ ನೀಡಿ ಬೆಂಗಳೂರು ಮತ್ತು ಚೆನ್ನೈನ ಸಶಕ್ತ ತಂತ್ರಜ್ಞಾನ ಡೊಮೇನ್ಗಳಲ್ಲಿ ಆಸ್ಟ್ರೇಲಿಯಾದ ನವೀನ ಪರಿಹಾರಗಳನ್ನು ಪ್ರದರ್ಶಿಸಿತು. ಭಾರತ ಮತ್ತು ಆಸ್ಟ್ರೇಲಿಯಾದ ವಿವಿಧ ಟೆಕ್ ವಲಯಗಳಲ್ಲಿನ ಉದ್ಯಮ ಮತ್ತು ಪ್ರಮುಖ ಅಭಿಪ್ರಾಯ ನಾಯಕರನ್ನು ಮಿಷನ್ ಒಟ್ಟುಗೂಡಿಸಿತು. ಆಸ್ಟ್ರೇಲಿಯನ್ ಟ್ರೇಡ್ ಅಂಡ್ ಇನ್ವೆಸ್ಟ್ಮೆಂಟ್ ಕಮಿಷನ್ (ಆಸ್ಟ್ರೇಡ್) ಈ ಮಿಷನ್ ಅನ್ನು ಸೆಂಟರ್ ಫಾರ್ ಆಸ್ಟ್ರೇಲಿಯಾ-ಇಂಡಿಯಾ ರಿಲೇಶನ್ಸ್ (ಸಿಎಐಆರ್), ವಿದೇಶಾಂಗ ವ್ಯವಹಾರ ಮತ್ತು ವ್ಯಾಪಾರ ಇಲಾಖೆ (ಡಿಎಫ್ಎ?ಟಿ), ಇನ್ವೆಸ್ಟ್ಮೆಂಟ್ ನ್ಯೂ ಸೌತ್ ವೇಲ್ಸ್ ಮತ್ತು ಪಶ್ಚಿಮ ಆಸ್ಟ್ರೇಲಿಯಾ ಸರ್ಕಾರದ ಉದ್ಯೋಗಗಳು, ಪ್ರವಾಸೋದ್ಯಮ, ನಾವೀನ್ಯತೆ ಮತ್ತು ವಿಜ್ಞಾನ ಇಲಾಖೆ ಸಹಯೋಗದಲ್ಲಿ ಇದನ್ನು ಆಯೋಜಿಸಲಾಗಿತ್ತು.

ಕರ್ನಾಟಕ ಸರ್ಕಾರದ ಇಲೆಕ್ಟ್ರಾನಿಕ್ಸ್, ಐಟಿ ಮತ್ತು ಬಿಟಿ ಇಲಾಖೆಯು ಆಯೋಜಿಸಿರುವ ಬೆಂಗಳೂರು ಟೆಕ್ ಶೃಂಗಸಭೆ 2024 ರ 27 ನೇ ಆವೃತ್ತಿಯಲ್ಲಿ ಆಸ್ಟ್ರೇಲಿಯಾ ದೇಶ ಪಾಲುದಾರರಾಗಿ ಭಾಗವಹಿಸಿದೆ. ಆಸ್ಟ್ರೇಲಿಯನ್ ಡಿಜಿಟೆಕ್ ಮಿಷನ್ ಬೆಂಗಳೂರಿನ ಟೆಕ್ ಶೃಂಗಸಭೆಯಲ್ಲಿ ಆಸ್ಟ್ರೇಲಿಯಾ ಪೆವಿಲಿಯನ್ನದಲ್ಲಿ ತಮ್ಮ ಕೊಡುಗೆಗಳನ್ನು ಪ್ರದರ್ಶಿಸಿತು.

ಮೆಲ್ಬೋರ್ನ್ ಮೂಲದ ನೆಕ್ಸ್ಟ್ ಎಕ್ಸ್ಆ?ರ್ ಮತ್ತು ಬೆಂಗಳೂರು ಮೂಲದ ಎಸಿಸಿಪಿಎಲ್ ಭಾರತೀಯ ಯುವಕರಿಗೆ ಎಆರ್/ವಿಆರ್- ಆಧಾರಿತ ಕೌಶಲ್ಯ ತರಬೇತಿಯನ್ನು ನೀಡಲು ಕಾರ್ಯತಂತ್ರದ ಪಾಲುದಾರಿಕೆಯನ್ನು ಸೃಷ್ಟಿಸಿವೆ. ಇದು ಕರ್ನಾಟಕ ಮತ್ತು ಅದರಾಚೆಗಿನ ಭವಿಷ್ಯಕ್ಕೆ ಸಜ್ಜಾದ ಸಾಮರ್ಥ್ಯಗಳನ್ನು ಉತ್ತೇಜಿಸುವ ಗುರಿಯನ್ನು ಹೊಂದಿದೆ. ಮೆಲ್ಬೋರ್ನ್ ಮೂಲದ ನೆಕ್ಸ್ಟ್ ಎಕ್ಸ್ಆಗರ್ ಭಾರತದಲ್ಲಿ ತಮ್ಮ ವಿತರಣಾ ಚಾನೆಲ್ ಪಾಲುದಾರರಾಗಿ ದೆಹಲಿ ಮೂಲದ ಜಿಯಾನ್ ಟೆಕ್ನಾಲಜೀಸ್ನೊಂಎದಿಗೆ ಕಾರ್ಯತಂತ್ರದ ಪಾಲುದಾರಿಕೆಯನ್ನು ಪ್ರವೇಶಿಸಿದೆ. ನ್ಯೂ ಸೌತ್ ವೇಲ್ಸ್ ಮೂಲದ ರೆಸ್ಮೊಡ್ ತಮ್ಮ ಹೊಸ ಉತ್ಪನ್ನವನ್ನು ಸ್ಲೀಪ್ ಅಪ್ನಿಯ ಸಂಸ್ಕರಣೆಗಾಗಿ ಬಿಡುಗಡೆ ಮಾಡಿದೆ, ಏರ್ಸ?ನ್ಸ್ 11, ಸಿಪಿಎಪಿ ನ ಭವಿಷ್ಯದತ್ತ ಮುನ್ನಡೆಯುತ್ತಿದೆ. ಜಾಗತಿಕ ತಂತ್ರಜ್ಞಾನದ ಪರಿಸರದಲ್ಲಿ ಆಸ್ಟ್ರೇಲಿಯನ್ ಆವಿಷ್ಕಾರಗಳು ಮತ್ತು ಆಳವಾದ ತಂತ್ರಜ್ಞಾನದ ಪರಿಣತಿಯನ್ನು ಪ್ರದರ್ಶಿಸಲು ನಾವು ಉತ್ಸುಕರಾಗಿದ್ದೇವೆ. ಈ ಮಿಷನ್ ಮೂಲಕ, ನಾವು ಹೆಚ್ಚಿನ ಜಾಗೃತಿಯನ್ನು ಬೆಳೆಸುವ ಗುರಿಯನ್ನು ಹೊಂದಿದ್ದೇವೆ ಮತ್ತು ಆಸ್ಟ್ರೇಲಿಯನ್ ತಂತ್ರಜ್ಞಾನದೊಂದಿಗೆ ತೊಡಗಿಸಿಕೊಳ್ಳಲು ಭಾರತೀಯ ಟೆಕ್ ನಾಯಕರು, ಉದ್ಯಮಿಗಳು ಮತ್ತು ಉದ್ಯಮದ ಮಧ್ಯಸ್ಥಗಾರರಿಗೆ ಹೊಸ ಅವಕಾಶಗಳನ್ನು ಅನಾವರಣಗೊಳಿಸುವ ಗುರಿಯನ್ನು ಹೊಂದಿದ್ದೇವೆ, ಎರಡೂ ಮಾರುಕಟ್ಟೆಗಳಲ್ಲಿ ನಾವೀನ್ಯತೆ ಮತ್ತು ಪಾಲುದಾರಿಕೆಯನ್ನು ಮುನ್ನಡೆಸುತ್ತೇವೆ ಎಂದು ಆಸ್ಟ್ರೇಲಿಯನ್ ಟ್ರೇಡ್ ಮತ್ತು ಇನ್ವೆಸ್ಟ್ಮೆಂಟ್ ಕಮಿಷನ್ - ದಕ್ಷಿಣ ಏಷ್ಯಾದ ವ್ಯಾಪಾರ ಮತ್ತು ಹೂಡಿಕೆ ಕಮಿಷನರ್ ಶ್ರೀ ಅಬ್ದುಲ್ ಎಕ್ರಾಮ್, ಹೇಳಿದರು.

### ಇತಿಹಾಸ ಸೃಷ್ಟಿಸುತ್ತೇವೆ

**ರಾಂಚಿ(ಜಾರ್ಖಂಡ್ ):** ರಾಜ್ಯ ವಿಧಾನಸಭಾ ಚುನಾವಣೆಯಲ್ಲಿ ಜೆಎಂಎಂ ನೇತೃತ್ವದ ಇಂಡಿಯಾ ಮೈತ್ರಿಕೂಟ ನಿರ್ಣಾಯಕ ಗೆಲುವು ಸಾಧಿಸಿದ ಹಿನ್ನೆಲೆ ಸಿಎಂ ಹೇಮಂತ್ ಸೊರೆನ್ ರಾಜ್ಯದ ಜನತೆಗೆ ಧನ್ಯವಾದ ಅರ್ಪಿಸಿದರು. ಮಾಧ್ಯಮದವರೊಂದಿಗೆ ಮಾತನಾಡಿದ ಅವರು, ನಾವು ಜಾರ್ಖಂಡ್ನಲ್ಲಿ 'ಅಬುವಾ ರಾಜ್, ಅಬುವಾ ಸರ್ಕಾರ್' (ನಮ್ಮ ಆಡಳಿತ, ನಮ್ಮ ಸರ್ಕಾರ) ಮೂಲಕ ಇತಿಹಾಸ ಸೃಷ್ಟಿಸಲಿದ್ದೇವೆ ಎಂದು ಘೋಷಿಸಿದರು. ಇದು ಮಹತ್ವದ ಚುನಾವಣೆಯಾಗಿತ್ತು. ರಾಜ್ಯದ ಪ್ರಜಾಸತ್ತಾತ್ಮಕ ಪಯಣದಲ್ಲಿ ಇಂತಹ ಚುನಾವಣೆಯನ್ನು ಜನ ಎಂದಿಗೂ ನೋಡಿರಲಿಲ್ಲ. ನಾವು ಪ್ರಜಾಪ್ರಭುತ್ವದ ಪರೀಕ್ಷೆಯಲ್ಲಿ ಯಶಸ್ವಿಯಾಗಿ ಉತ್ತೀರ್ಣರಾಗಿದ್ದೇವೆ. ಜನರು ಪ್ರಜಾಸತ್ತಾತ್ಮಕ ಪ್ರಕ್ರಿಯೆಯನ್ನು ಉತ್ಸಾಹದಿಂದ ಸ್ವೀಕರಿಸಿದ್ದಾರೆ ಎಂದ ಸೊರೆನ್, ಪ್ರಧಾನಿ ನರೇಂದ್ರ, ಮೋದಿ ಅವರ ಅಭಿನಂದನಾ ಸಂದೇಶಕ್ಕೆ ಧನ್ಯವಾದಗಳನ್ನು ತಿಳಿಸಿದರು ಮತ್ತು ಚುನಾವಣೆಯಲ್ಲಿ ಮಹಿಳೆಯರು ಮತ್ತು ಯುವಕರ ಸಕ್ರಿಯವಾಗಿ ಭಾಗವಹಿಸಿದ್ದನ್ನು ಶ್ಲಾಘಿಸಿದರು. ಈ ವೇಳೆ ಉಪಸ್ಥಿತರಿದ್ದ ಕಾಂಗ್ರೆಸ್ನ ಜಾರ್ಖಂಡ್ ಉಸ್ತುವಾರಿ ಮತ್ತು ರಾಷ್ಟ್ರೀಯ ಪ್ರಧಾನ ಕಾರ್ಯದರ್ಶಿ ಗುಲಾಮ್ ಅಹ್ಮದ್ ಮಿರ್ ಮಾತನಾಡಿ, ರಾಜ್ಯದ ಮತದಾರರ ರಾಜಕೀಯ ಪ್ರಬುದ್ಧತೆಯನ್ನು ಶ್ಲಾಘಿಸಿದರು. ಒಂದೆಡೆ, ನಮ್ಮ ಮೈತ್ರಿಕೂಟವು ಐದು ವರ್ಷಗಳ ಸಾಧನೆಗಳನ್ನು ಮತ್ತು ಭವಿಷ್ಯದ ದೃಷ್ಟಿಕೋನವನ್ನು ಮತದಾರರ ಮುಂದಿಟ್ಟರೆ, ಮತ್ತೊಂದೆಡೆ, ಪ್ರತಿಪಕ್ಷಗಳು ತಮ್ಮ ಕಾರ್ಯಸೂಚಿಯ ಬಗ್ಗೆ ಮತದಾರರಿಗೆ ಮನವರಿಕೆ ಮಾಡಲು ವಿಫಲವಾಗಿವೆ ಎಂದರು.

## ಲೆಬನಾನ್ ರಾಜಧಾನಿ ಬೈರುತ್ ಮೇಲೆ ಇಸ್ರೇಲ್ ವೈಮಾನಿಕ ದಾಳಿ

# ಹನ್ನೊಂದು ಜನರ ಸಾವು

**ಬೈರುತ್(ಲೆಬನಾನ್):** ರಾಜಧಾನಿ ಬೈರುತ್ನಲ್ಲಿ ಇಸ್ರೇಲ್ ನಡೆಸಿದ ವೈಮಾನಿಕ ದಾಳಿಯಲ್ಲಿ ಕನಿಷ್ಠ 11 ಜನರು ಮೃತಪಟ್ಟಿದ್ದು, ಹಲವರು ಗಾಯಗೊಂಡಿದ್ದಾರೆ.

ಶನಿವಾರ ಮುಂಜಾನೆ 4 ಗಂಟೆಗೆ ನಡೆದ ದಾಳಿಯಲ್ಲಿ ಎಂಟು ಅಂತಸ್ತಿನ ಕಟ್ಟಡ ಕುಸಿದು ಬಿದ್ದಿದೆ. ಮತ್ತೊಂದೆಡೆ ಡ್ರೋನ್ ದಾಳಿಯಿಂದ ದಕ್ಷಿಣ ಬಂದರು ನಗರವಾದ ಟೈರ್‌ನಲ್ಲಿ ಓರ್ವ ವ್ಯಕ್ತಿ ಮೃತಪಟ್ಟಿದ್ದು, ಇಬ್ಬರು ಗಾಯಗೊಂಡಿದ್ದಾರೆ ಎಂದು ಸ್ಥಳೀಯ ಸುದ್ದಿ ಸಂಸ್ಥೆ ವರದಿ ಮಾಡಿದೆ.

ಲೆಬನಾನ್ನ ಸಿವಿಲ್ ಡಿಫೆನ್ಸ್, ಅವಶೇಷಗಳ ಅಡಿ ಸಿಲುಕಿರುವವರ ರಕ್ಷಣೆಗಾಗಿ ಕಾರ್ಯಾಚರಣೆ ನಡೆಸುತ್ತಿದೆ. ಒಂದು ವಾರದ ಅವಧಿಯಲ್ಲಿ ಬೈರುತ್ ಮೇಲೆ ಇಸ್ರೇಲ್ ನಡೆಸಿದ ನಾಲ್ಕನೇ ವೈಮಾನಿಕ ದಾಳಿ ಇದಾಗಿದೆ. ಇಸ್ರೇಲ್ ಮತ್ತು ಹಿಜ್ಬುಲ್ಲಾ ನಡುವೆ ಒಂದು ವರ್ಷಕ್ಕೂ ಹೆಚ್ಚು ಕಾಲ ನಡೆದ ಹೋರಾಟವನ್ನು ಕೊನೆಗೊಳಿಸಲು, ಕದನ ವಿರಾಮ ಒಪ್ಪಂದಕ್ಕೆ ಮಧ್ಯಸ್ಥಿಕೆ ವಹಿಸಲು ಅಮೆರಿಕ ರಾಯಭಾರಿ ಅಮೋಸ್ ಹೊಚ್ಸ್ಟೈನ್ ಇತ್ತೀಚಿಗೆ ಈ ಪ್ರದೇಶಕ್ಕೆ ಭೇಟಿ ನೀಡಿದ ಬಳಿಕ ಸಂಘರ್ಷ ಮತ್ತೆ ಉಲ್ಬಣಗೊಂಡಿದೆ. ಇಸ್ರೇಲ್ ಮತ್ತು ಹಿಜ್ಬುಲ್ಲಾ ನಡುವಿನ ಸಂಘರ್ಷ ಕಳೆದ ಎರಡು ತಿಂಗಳುಗಳಲ್ಲಿ ಪೂರ್ಣ ಪ್ರಮಾಣದ ಯುದ್ಧದ ಸ್ವರೂಪ ಪಡೆದು ಕೊಂಡಿದೆ.

ಲೆಬನಾನ್ನಲ್ಲಿ ಇಸ್ರೇಲ್ ನಡೆಸಿದ ಬಾಂಬ್ ದಾಳಿಯಲ್ಲಿ 3,500 ಕ್ಕೂ ಹೆಚ್ಚು ಜನರು ಸಾವನ್ನಪ್ಪಿದ್ದಾರೆ ಮತ್ತು 15,000 ಕ್ಕೂ ಹೆಚ್ಚು ಜನರು ಗಾಯಗೊಂಡಿದ್ದಾರೆ ಎಂದು ಲೆಬನಾನ್ ಆರೋಗ್ಯ ಸಚಿವಾಲಯ ತಿಳಿಸಿದೆ.

ಇಸ್ರೇಲ್ ದಾಳಿ ಪರಿಣಾಮ ಸುಮಾರು 1.2 ಮಿಲಿಯನ್ ಅಥವಾ ಲೆಬನಾನ್ ಜನಸಂಖ್ಯೆಯ ಕಾಲು ಭಾಗದಷ್ಟು ಜನ ಸುರಕ್ಷಿತ ಪ್ರದೇಶಕ್ಕೆ ಸ್ಥಳಾಂತರಗೊಂಡಿದ್ದಾರೆ. ಉತ್ತರ ಇಸ್ರೇಲ್ನಲ್ಲಿ ಮತ್ತು ಲೆಬನಾನ್ನಲ್ಲಿ ನಡೆದ ರಾಕೆಟ್, ಡ್ರೋನ್ ಮತ್ತು ಕ್ಷಿಪಣೆ ದಾಳಿಯಿಂದ ಸುಮಾರು 90 ಮಂದಿ ಸೈನಿಕರು ಮತ್ತು ಸುಮಾರು 50 ನಾಗರಿಕರು ಸಾವನ್ನಪ್ಪಿದ್ದಾರೆ.



### ಮಾಜಿ ಸಿಎಂ ಪೃಥ್ವಿರಾಜ್ ಚೌಹಾಣ್ಗೆ ಸೋಲುಣಿಸಿದ ಅತುಲ್ ಬಾಬಾ ಸುರೇಶ್ ಭೋಸ್ಲೆ

**ಸತಾರಾ (ಮಹಾರಾಷ್ಟ್ರ) :** 2024ರ ಮಹಾರಾಷ್ಟ್ರ ವಿಧಾನಸಭೆ ಚುನಾವಣೆಯಲ್ಲಿ ಕಾಂಗ್ರೆಸ್ಗೆ ಹಿನ್ನಡೆಯಾಗಿದ್ದು, ಪಕ್ಷದ ಹಿರಿಯ ನಾಯಕ ಮತ್ತು ಮಾಜಿ ಮುಖ್ಯಮಂತ್ರಿ ಪೃಥ್ವಿರಾಜ್ ಚೌಹಾಣ್ ಅವರು ಪ್ರತಿಷ್ಠಿತ ಕರಾದ್ ದಕ್ಷಿಣ ಕ್ಷೇತ್ರದಲ್ಲಿ ಬಿಜೆಪಿ ಅಭ್ಯರ್ಥಿ ಡಾ. ಅತುಲ್ ಬಾಬಾ ಸುರೇಶ್ ಭೋಸ್ಲೆ ವಿರುದ್ಧ 39,355 ಮತಗಳಿಂದ ಸೋತಿದ್ದಾರೆ. ಚುನಾವಣಾ ಆಯೋಗದ ಇತ್ತೀಚಿನ ಅಂಕಿ - ಅಂಶಗಳ ಪ್ರಕಾರ, 18 ಸುತ್ತಿನ ಮತ ಎಣಿಕೆಯ ನಂತರ ಭೋಸಲೆ 139505 ಮತಗಳನ್ನ ಪಡೆದಿದ್ದರೆ, ಚೌಹಾಣ್ 100150 ಮತಗಳನ್ನು ಗಳಿಸಿದ್ದಾರೆ. ಆ ಮೂಲಕ ಬಿಜೆಪಿ ಅಭ್ಯರ್ಥಿ 39,355 ಅಂತರದಲ್ಲಿ ಗೆಲುವು ಸಾಧಿಸಿದ್ದಾರೆ.

ಮಹಾರಾಷ್ಟ್ರದ ಪ್ರಮುಖ ಕ್ಷೇತ್ರಗಳಲ್ಲಿ ಒಂದಾದ ಕರಡ್ ದಕ್ಷಿಣ ಕ್ಷೇತ್ರದಿಂದ ಹಿರಿಯ ಕಾಂಗ್ರೆಸ್ ನಾಯಕ ಮತ್ತು ಮಹಾರಾಷ್ಟ್ರದ ಮಾಜಿ ಸಚಿವ ಪೃಥ್ವಿರಾಜ್ ಚೌಹಾಣ್ ಮರು ಆಯ್ಕೆ ಬಯಸಿದ್ದರು. ಪೃಥ್ವಿರಾಜ್, ಯುನೈಟೆಡ್ ಪ್ರಗತಿಪರ ಒಕ್ಕೂಟದ (ಯುಪಿಎ) ಆಡಳಿತದಲ್ಲಿ ಮಾಜಿ ಕೇಂದ್ರ ಸಚಿವರೂ ಆಗಿದ್ದು, ಬಿಜೆಪಿಯಿಂದ ಕಣಕ್ಕಿಳಿದ ಡಾ ಅತುಲ್ ಬಾಬಾ ಸುರೇಶ್ ಭೋಸ್ಲೆ ಅವರ ಸವಾಲು ಹಾಕಿ ಗೆಲುವು ಸಾಧಿಸಿದ್ದಾರೆ.

ಪೃಥ್ವಿರಾಜ್ ಅವರು ವಿಧಾನಸಭಾ ಚುನಾವಣೆಯಲ್ಲಿ ವ್ಯಾಪಕ ಪ್ರಚಾರ ನಡೆಸಿದ್ದರು. ಮಹಾ ವಿಕಾಸ್ ಅಘಾಡಿ (ಎಂವಿಎ) ಅಧಿಕಾರಕ್ಕೆ ಬಂದರೆ, ಅವರ ಕ್ಯಾಬಿನೆಟ್ನಲ್ಲಿ ಉತ್ತಮ ಸ್ಥಾನವನ್ನು ಪಡೆಯಬಹುದು. ಅವರು ಕಾಂಗ್ರೆಸ್ ಹೈಕಮಾಂಡ್, ವಿಶೇಷವಾಗಿ ಹಿರಿಯ ಕಾಂಗ್ರೆಸ್ ನಾಯಕ ರಾಹುಲ್ ಗಾಂಧಿ ಮತ್ತು ಪಕ್ಷದ ಮುಖ್ಯಸ್ಥ ಮಲ್ಲಿಕಾರ್ಜುನ ಖರ್ಗೆ ಅವರ ನಿಕಟವರ್ತಿಯಾಗಿದ್ದಾರೆ.



ಪೃಥ್ವಿರಾಜ್ ಅವರು ತಮ್ಮ ಪರಿಣಾಮಕಾರಿ ಆಡಳಿತಕ್ಕೆ ಹೆಸರುವಾಸಿಯಾಗಿದ್ದಾರೆ ಮತ್ತು ಪ್ರತಿಸ್ಪರ್ಧಿ ಎನ್ಸಿಪಿ ನಾಯಕ ಅಜಿತ್ ಪವಾರ್ ಅವರನ್ನು ಹೊಗಳಿದ್ದರು. ಪೃಥ್ವಿರಾಜ್ ಅವರು ಕೆಲಸ ಮಾಡಿದ ಅತ್ಯುತ್ತಮ ಮುಖ್ಯಮಂತ್ರಿ ಎಂದು ಅಜಿತ್ ಪವಾರ್ ಸಹ ಗುಣಗಾನ ಮಾಡಿದ್ದರು.

### ಮಗುವನ್ನೇ ಹತ್ಯೆ ಮಾಡಿದ ಮಹಾತಾಯಿ!

**ನವದೆಹಲಿ:** ಇನ್ಸ್ಟಾಗ್ರಾಮ್ ನಲ್ಲಿ ಪರಿಚಯವಾದ ವ್ಯಕ್ತಿಯೋರ್ವನನ್ನು ವಿವಾಹವಾಗುವುದಕ್ಕಾಗಿ ಮಹಿಳೆಯೊಬ್ಬರು ತನ್ನ 5 ವರ್ಷದ ಮಗುವನ್ನು ಹತ್ಯೆ ಮಾಡಿರುವ ಘಟನೆ ದೆಹಲಿಯಲ್ಲಿ ವರದಿಯಾಗಿದೆ. ಶುಕ್ರವಾರದಂದು ದೀಪ್ ಚಂದ್ ಬಂಧು ಆಸ್ಪತ್ರೆಯಿಂದ ಮಗುವನ್ನು ಆಸ್ಪತ್ರೆಗೆ ಕರೆತರುವ ವೇಳೆ ಮೃತಪಟ್ಟಿರುವ ಬಗ್ಗೆ ಮಾಹಿತಿ ಲಭಿಸಿದೆ ಎಂದು ಪೊಲೀಸರು ತಿಳಿಸಿದ್ದಾರೆ. ಹೆಚ್ಚಿನ ವಿಚಾರಣೆಯಲ್ಲಿ ಮಗುವಿನ ಕುತ್ತಿಗೆಯಲ್ಲಿ ಕತ್ತು ಹಿಸುಕಿದ ಗುರುತುಗಳು ಪತ್ತೆಯಾಗಿವೆ ಎಂದು ಅವರು ಹೇಳಿದರು. ಹೆಚ್ಚಿನ ವಿಚಾರಣೆಯಲ್ಲಿ ಮಗುವಿನ ಕುತ್ತಿಗೆಯಲ್ಲಿ ಕತ್ತು ಹಿಸುಕಿದ ಗುರುತುಗಳು ಪತ್ತೆಯಾಗಿವೆ ಎಂದು ಪೊಲೀಸ್ ಅಧಿಕಾರಿಗಳು ಹೇಳಿದರು. ತಕ್ಷಣವೇ ಪ್ರಕರಣ ದಾಖಲಿಸಿಕೊಳ್ಳಲಾಗಿದ್ದು, ತಾಯಿ ಸೇರಿದಂತೆ ಮಗುವಿನ ಸಂಬಂಧಿಕರನ್ನು ವಿಚಾರಣೆಗೆ ಒಳಪಡಿಸಲಾಗಿದೆ ಎಂದು ದೆಹಲಿ ಪೊಲೀಸರು ಹೇಳಿಕೆಯಲ್ಲಿ ತಿಳಿಸಿದ್ದಾರೆ. ನಿರಂತರ ವಿಚಾರಣೆಯ ನಂತರ, ತಾಯಿ ಕಣ್ಣೀರಿಡುತ್ತಾ ತನ್ನ ಮಗಳನ್ನು ಕತ್ತು ಹಿಸುಕಿ ಕೊಂದಿರುವುದಾಗಿ ಬಹಿರಂಗಪಡಿಸಿದ್ದಾಳೆ ಎಂದು ಪೊಲೀಸರು ತಿಳಿಸಿದ್ದಾರೆ.

### ರಾಹುಲ್ ಗಾಂಧಿಗೆ ಕೂಡಿಬಂತಾ ಕಂಕಣ ಭಾಗ್ಯ!

ಕರ್ನಾಟಕದ ಮೂರು ಮತ್ತು ಕೇರಳದ ಒಂದು ವಿಧಾನಸಭಾ ಕ್ಷೇತ್ರಕ್ಕೆ ಉಪ ಚುನಾವಣೆ ಹಾಗೂ ಮಹಾರಾಷ್ಟ್ರ ಮತ್ತು ಜಾರ್ಖಾಂಡ್ನ ಎಲ್ಲಾ ವಿಧಾನಸಭಾ ಕ್ಷೇತ್ರಗಳಿಗೆ ಮತದಾನ ನಡೆದಿದ್ದು ಈಗಷ್ಟೇ ಫಲಿತಾಂಶ ಹೊರಬಿದ್ದಿದೆ. ಈ ಬೆನ್ನಲೇ ಕಾಂಗ್ರೆಸ್ ನಾಯಕ ರಾಹುಲ್ ಗಾಂಧಿಯವರ ಮದುವೆ ವಿಚಾರ ಮುನ್ನೆಲೆಗೆ ಬಂದಿದೆ. ಕಾಂಗ್ರೆಸ್ ನಾಯಕ ರಾಹುಲ್ ಗಾಂಧಿ ಇತ್ತೀಚೆಗೆ ಶ್ರೀನಗರಕ್ಕೆ ಭೇಟಿ ನೀಡಿದ ಸಂದರ್ಭದಲ್ಲಿ ತಮ್ಮ ಮದುವೆ ಬಗ್ಗೆ ವಿದ್ಯಾರ್ಥಿನಿಯೊಬ್ಬಳು ಕೇಳಿದ ಪ್ರಶ್ನೆಗೆ ಉತ್ತರಿಸಿದ್ದಾರೆ,ಯೂಟ್ಯೂಬ್ ಚಾನೆಲ್‌ನಲ್ಲಿ ಈ ವಿಡಿಯೋ ಶೇರ್ ಆಗಿದ್ದು, ರಾಹುಲ್ ಗಾಂಧಿ ಮುಗುಳ್ನಗುತ್ತಾ, ನಾನು 20-30 ವರ್ಷಗಳ ಕಾಲ ಆ ಒತ್ತಡವನ್ನು ಸಹಿಸುತ್ತಿದ್ದೇನೆ ಎಂದು ಹೇಳಿದ್ದಾರೆ.ಕಳೆದ 20-30 ವರ್ಷಗಳಿಂದ ನನ್ನ ಮೇಲೆ ಮದುವೆಯಾಗಲು ಒತ್ತಡ ಹೇರಲಾಗುತ್ತಿದೆ. ಆದರೆ ನಾನು ಆ ಬಗ್ಗೆ ಯೋಚಿಸುತ್ತಿಲ್ಲವಾದರೂ, ಒಂದು ವೇಳೆ ಮದುವೆಯಾದರೆ... ಎನ್ನುತ್ತಾ ಮಾತನ್ನು ಅರ್ಧಕ್ಕೇ ನಿಲ್ಲಿಸಿದ್ದಾರೆ. ಇನ್ನು ಇದೇ ಸಂದರ್ಭದಲ್ಲಿ ನಿಮ್ಮ ಮದುವೆಗೆ ನಮಗೂ ಆಹ್ವಾನಿಸಿ ಎಂಬ ವಿದ್ಯಾರ್ಥಿನಿಯ ಮನವಿಗೆ ರಾಹುಲ್ ನಗುತ್ತಾ, ಖಂಡಿತ ಎಂದಿದ್ದಾರೆ.ಅಂದಹಾಗೆ ಕಾಂಗ್ರೆಸ್ ನಾಯಕ ರಾಹುಲ್ ಗಾಂಧಿಯವರ ಮದುವೆಯ ಅನೇಕ ವರ್ಷಗಳಿಂದ ಒಂದಲ್ಲ ಒಂದು ಊಹಾಪೋಹಗಳ ಹರಿದಾಡುತ್ತಲೇ ಬಂದಿವೆ. ಇತ್ತೀಚಿಗೆ ಸೋಲಾಪುರ ಸಂಸದೆಯೊಬ್ಬರ ಜೊತೆ ರಾಹುಲ್ ಮದುವೆಯಾಗಲಿದ್ದಾರೆ ಎಂದು ಸುದ್ದಿ ಹಬ್ಬಿತ್ತು. ಆದರೆ ಅವೆಲ್ಲಾ ವದಂತಿಯಷ್ಟೇ ಎಂದು ಆ ಸಂಸದೆಯ ತಂದೆ ಸಂದರ್ಶನವೊಂದರಲ್ಲಿ ಸ್ಪಷ್ಟನೆ ನೀಡಿದ್ದರು.



# ಬಿಹಾರ ಉಪ ಚುನಾವಣೆ: ನಾಲ್ಕು ಕ್ಷೇತ್ರಗಳಲ್ಲಿ ಒಆಂ ಗೆಲುವು, ಖಾತೆ ತೆರೆಯುವಲ್ಲಿ 'ಜನ ಸುರಾಜ್ 'ವಿಫಲ

**ಪಾಟ್ನಾ:** ಬಿಹಾರ ವಿಧಾನಸಭಾ ಚುನಾವಣೆಗೆ ಇನ್ನೂ ಒಂದು ವರ್ಷಕ್ಕಿಂತ ಕಡಿಮೆ ಇರುವಂತೆಯೇ, ನವೆಂಬರ್ 13 ರಂದು ಉಪ ಚುನಾವಣೆ ನಡೆದಿದ್ದ ಎಲ್ಲಾ ನಾಲ್ಕು ವಿಧಾನಸಭಾ ಕ್ಷೇತ್ರಗಳಲ್ಲಿ ಆಡಳಿತಾರೂಢ ಎನ್ ಡಿಎ ಗೆಲುವು ಸಾಧಿಸಿದ್ದು, ವಿಪಕ್ಷಗಳ ಋಓಆಋಂ ಮೈತ್ರಿಕೂಟಕ್ಕೆ ದೊಡ್ಡ ಹೊಡೆತ ಬಿದ್ದಿದೆ.

ಬೆಳಗಂಜ್, ಇಮಾಮ್‌ಗಂಜ್, ತರಾರಿ ಮತ್ತು ರಾಮಗಢ ಕ್ಷೇತ್ರಗಳ ಉಪ ಚುನಾವಣೆಯ ಫಲಿತಾಂಶ ಶನಿವಾರ ಪ್ರಕಟಗೊಂಡಿದ್ದು, ಕಳೆದ ಲೋಕಸಭೆ ಚುನಾವಣೆಯಲ್ಲಿ 40 ರಲ್ಲಿ 30 ಸ್ಥಾನಗಳನ್ನು ಗೆದಿದ್ದ ಒಆಂ ಬಿಹಾರದಲ್ಲಿ ತನ್ನ ಗೆಲುವಿನ ಓಟವನ್ನು ಉಳಿಸಿಕೊಂಡಿದೆ.

ಉಪ ಚುನಾವಣೆ ಗೆಲುವಿನೊಂದಿಗೆ ಬಿಹಾರ ಬಿಜೆಪಿಯು ಮತ್ತೊಮ್ಮೆ ಮುಖ್ಯಮಂತ್ರಿ ನಿತೀಶ್ ಕುಮಾರ್ ಅವರ ನಾಯಕತ್ವದ ಮೇಲೆ ನಂಬಿಕೆ ಇಟ್ಟಿದೆ ಎಂದು ಪಕ್ಷದ ರಾಜ್ಯಾಧ್ಯಕ್ಷ ದಿಲೀಪ್ ಜೈಸ್ವಾಲ್ ಹೇಳಿದ್ದಾರೆ.

ಉಪ ಮುಖ್ಯಮಂತ್ರಿ, ಸಾಮ್ರಾಟ್ ಚೌಧರಿ, ಬಿಜೆಪಿಯ ಹಿರಿಯ ನಾಯಕ ಮಂಗಲ್ ಪಾಂಡೆ ಅವರು ಸಿಎಂ ಅಧಿಕೃತ ನಿವಾಸಕ್ಕೆ ಭೇಟಿ ನೀಡಿ, ಉಪ ಚುನಾವಣೆಯಲ್ಲಿ ಮೈತ್ರಿ ಅಭ್ಯರ್ಥಿಗಳ ಗೆಲುವಿನ ಬಗ್ಗೆ ಸಂತಸ ವಿನಿಮಯ ಮಾಡಿಕೊಂಡರು.

ಚುನಾವಣಾ ರಾಜಕೀಯಕ್ಕೆ ಚೊಚ್ಚಲ ಪ್ರವೇಶವಾಗಿದ್ದ ಮಾಜಿ ಚುನಾವಣಾ ತಂತ್ರಗಾರ ಪ್ರಶಾಂತ್ ಕಿಶೋರ್ ಅವರ ಜನ ಸುರಾಜ್ ಪಕ್ಷ ಖಾತೆ ತೆರೆಯುವಲ್ಲಿ ವಿಫಲವಾಗಿದೆ. ವಿವಿಧ ಕಾರಣಾಂತರಗಳಿಂದ ಕೊನೆಯ ಕ್ಷಣದಲ್ಲಿ ಎರಡು ಸ್ಥಾನಗಳಲ್ಲಿ ತಮ್ಮ ಅಭ್ಯರ್ಥಿಗಳನ್ನು ಬದಲಾಯಿಸಬೇಕಾಗಿ ಬಂದ ಕಾರಣ ಕಿಶೋರ್ ಎಲ್ಲಾ ನಾಲ್ಕು ಸ್ಥಾನಗಳಲ್ಲಿ ತಮ್ಮ ಅಭ್ಯರ್ಥಿಗಳನ್ನು ಕಣಕ್ಕಿಳಿಸಿದ್ದರು.

ತರಾರಿ, ಬೆಳಗಂಜ್ ಮತ್ತು ಇಮಾಮ್ ಗಂಜ್‌ನಲ್ಲಿ ಜನ ಸೂರಾಜ್ ಪಕ್ಷದ ಅಭ್ಯರ್ಥಿಗಳು ಮೂರನೇ ಸ್ಥಾನದಲ್ಲಿದ್ದರೆ, ರಾಮಗಢದಲ್ಲಿ ನಾಲ್ಕನೇ ಸ್ಥಾನದಲ್ಲಿದೆ. ಜನ್ ಸೂರಾಜ್ ಪಕ್ಷದ ಅಭ್ಯರ್ಥಿಗಳಲ್ಲಿ ಅತ್ಯುತ್ತಮ ಪ್ರದರ್ಶನ ನೀಡಿದ ಇಮಾಮ್‌ಗಂಜ್‌ನ ಜಿತೇಂದ್ರ ಪಾಸ್ವಾನ್ ಅವರು 37,103 ಮತಗಳನ್ನು ಪಡೆದು ಮೂರನೇ ಸ್ಥಾನಕ್ಕೆ ಕುಸಿದಿದ್ದಾರೆ.



Postal Registration No.KA/BGW-1823/2019-2021, Posted at Patrika Channel, RMS Bhavan, Bengaluru PSO, Mysore Road, Bengaluru- 560020, RNI No.KARKAN/2002/08054

# ‘ಪುಷ್ಪ 2’ ಸಾಂಗ್ ರಿಲೀಸ್ ಗೂ ಮುನ್ನ ವಾರಣಾಸಿಗೆ ಶ್ರೀಲೀಲಾ ಭೇಟಿ



ಕನ್ನಡದ ನಟಿ ಶ್ರೀಲೀಲಾ ಅವರು ಅಲ್ಲು ಅರ್ಜುನ್ ಜೊತೆ ಹೆಜ್ಜೆ ಹಾಕಿರುವ ‘ಕಿಸ್ಸಿಕ್’ ಸಾಂಗ್ ನ.24ರಂದು ರಿಲೀಸ್ ಆಗಲಿದೆ. ‘ಪುಷ್ಪ 2’ ಸಾಂಗ್ ರಿಲೀಸ್‌ಗೂ ಮುನ್ನ ಅಮ್ಮನ ಜೊತೆ ಶ್ರೀಲೀಲಾ ವಾರಣಾಸಿಗೆ ಭೇಟಿ ನೀಡಿದ್ದಾರೆ. ಅಮ್ಮ ಸ್ವರ್ಣಲತಾ ಜೊತೆ ವಾರಣಾಸಿಗೆ ಶ್ರೀಲೀಲಾ ಭೇಟಿ ನೀಡಿ ವಿಶೇಷ ಪೂಜೆ ಸಲ್ಲಿಸಿದ್ದಾರೆ. ಅಲ್ಲಿ ಕೆಲ ಕಾಲ ಸಮಯ ಕಳೆದಿದ್ದಾರೆ.

ಇನ್ನೂ ಶ್ರೀಲೀಲಾ ಎಂತಹ ಡ್ಯಾನ್ಸರ್ ಎಂಬುದನ್ನು ಈಗಾಗಲೇ ಪ್ರೂವ್ ಮಾಡಿದ್ದಾರೆ. ಹಾಗಾಗಿ ‘ಪುಷ್ಪ 2’ ಚಿತ್ರದಲ್ಲಿ ಅಲ್ಲು ಅರ್ಜುನ್ ಜೊತೆ ಶ್ರೀಲೀಲಾ ಐಟಂ ಸಾಂಗ್ ಮೇಲೆ ಫ್ಯಾನ್ಸ್‌ಗೆ ಭಾರೀ ನಿರೀಕ್ಷೆಯಿದೆ.

ಅಂದಹಾಗೆ, ‘ಪುಷ್ಪ 2’ ಸಿನಿಮಾ ಇದೇ ಡಿ.5ಕ್ಕೆ ರಿಲೀಸ್ ಆಗಲಿದೆ. ಅಲ್ಲು ಅರ್ಜುನ್, ರಶ್ಮಿಕಾ ಮಂದಣ್ಣ, ಡಾಲಿ ಧನಂಜಯ, ಫಹಾದ್ ಫಾಸಿಲ್, ಅನಸೂಯ ಸೇರಿದಂತೆ ಅನೇಕರು ನಟಿಸಿದ್ದಾರೆ. ಈ ಚಿತ್ರವನ್ನು ಸುಕುಮಾರ್ ನಿರ್ದೇಶನ ಮಾಡಿದ್ದಾರೆ.

# ಪೌರಾಣಿಕ ಕಥೆ ಹೇಳಲು ಸಜ್ಜಾದ ನಾಗಚೈತನ್ಯ

ಟಾಲಿವುಡ್ ನಟ ನಾಗಚೈತನ್ಯ ಹುಟ್ಟುಹಬ್ಬದ ಸಂಭ್ರಮದಲ್ಲಿದ್ದಾರೆ. ಅವರ ಬರ್ತ್‌ಡೇಯಂದು ಪ್ಯಾನ್ ಇಂಡಿಯಾ ಪ್ರಾಜೆಕ್ಟ್ ಬಗ್ಗೆ ಬಿಗ್ ಅಪ್‌ಡೇಟ್‌ವೊಂದು ಸಿಕ್ಕಿದೆ. ಪೌರಾಣಿಕ ಸಿನಿಮಾ ಮಾಡಲು ನಟ ಗ್ರೀನ್ ಸಿಗ್ನಲ್ ಕೊಟ್ಟಿದ್ದಾರೆ.

ನಾಗಚೈತನ್ಯ ನಟನೆಯ ಪ್ಯಾನ್ ಇಂಡಿಯಾ ಸಿನಿಮಾ ‘ತಾಂಡೇಲ್’ ರಿಲೀಸ್‌ಗೆ ರೆಡಿಯಿದೆ. ಈ ಬೆನ್ನಲ್ಲೇ ಹೊಸ ಚಿತ್ರವನ್ನು ನಟ ಒಪ್ಪಿಕೊಂಡಿದ್ದಾರೆ. ನಿಗೂಢವಾಗಿರುವ ಕಣ್ಣಿನ ಚಿತ್ರವಿರುವ ಪೋಸ್ಟರ್‌ನಲ್ಲಿ ನಾಗಚೈತನ್ಯ ಲುಕ್ ನೋಡುಗರಲ್ಲಿ ಕುತೂಹಲ ಕೆರಳಿಸಿದೆ. ಈ ಚಿತ್ರವನ್ನು ‘ವಿರೂಪಾಕ್ಷ’ ಡೈರೆಕ್ಟರ್ ಕಾರ್ತಿಕ್ ದಂಡು ನಿರ್ದೇಶನ ಮಾಡಿದ್ದಾರೆ.

ಅಂದಹಾಗೆ, ನಾಗಚೈತನ್ಯ ಅವರು ಶೋಭಿತಾ ಜೊತೆ ಇದೇ ಡಿ.4ರಂದು ಹಸೆಮಣೆ ಏರೋಕೆ ರೆಡಿಯಾಗಿದ್ದಾರೆ. ತೆರೆಮರೆಯಲ್ಲಿ ಮದುವೆ ತಯಾರಿ ಕೂಡ ಜೋರಾಗಿದೆ. ಕುಟುಂಬಸ್ಥರು, ಆಪ್ತರ ಸಮ್ಮುಖದಲ್ಲಿ ಮದುವೆ ಹೈದರಾಬಾದ್‌ನಲ್ಲಿ ಸರಳವಾಗಿ ಜರುಗಲಿದೆ.




# ಸ್ಟೈಲೀಶ್ ಆದ ಸಂಜನಾ ಬುರ್ಲಿ ಲುಕ್‌ಗೆ ಪಡ್ಡೆಹುಡುಗರು ಫಿದಾ

‘ಪುಟ್ಟಕ್ಕನ ಮಕ್ಕಳು’ ಸೀರಿಯಲ್ ಖ್ಯಾತಿಯ ಸಂಜನಾ ಬುರ್ಲಿ ಅವರು ಬೋಲ್ಡ್ ಅವತಾರದಲ್ಲಿ ಕಾಣಿಕೊಂಡಿದ್ದಾರೆ. ನಟಿಯ ನಯಾ ಲುಕ್ ನೋಡಿ ಪಡ್ಡೆಹುಡುಗರು ಫಿದಾ ಆಗಿದ್ದಾರೆ.

ಕಂಠಿ ಮನದರಸಿ ಸ್ನೇಹಾ ಪಾತ್ರಕ್ಕೆ ಗುಡ್ ಬೈ ಹೇಳಿದ್ಮೇಲೆ ಸೋಶಿಯಲ್ ಮೀಡಿಯಾದಲ್ಲಿ ಸಂಜನಾ ಸಖತ್ ಆಕ್ಟೀವ್ ಆಗಿದ್ದಾರೆ. ಸದಾ ಹೊಸ ಫೋಟೋಶೂಟ್ ಮೂಲಕ ಗಮನ ಸೆಳೆಯೋ ಸಂಜನಾ ಇದೀಗ ಪಿಂಕ್ ಬಣ್ಣದ ಟಾಪ್ ಮತ್ತು ಕಪ್ಪು ಬಣ್ಣ ಸ್ಕರ್ಟ್ ಧರಿಸಿ ಮಿಂಚಿದ್ದಾರೆ. ನಟಿಯ ಬೋಲ್ಡ್ ಪೋಸ್‌ಗೆ ಫ್ಯಾನ್ಸ್ ಮೆಚ್ಚುಗೆ ಸೂಚಿಸಿದ್ದಾರೆ.

ಇತ್ತೀಚೆಗೆ ಸಂಜನಾ ಅವರು ಡಿಸಿ ಸ್ನೇಹಾ ಪಾತ್ರಕ್ಕೆ ಗುಡ್ ಬೈ ಹೇಳಿರೋದು ಫ್ಯಾನ್ಸ್‌ಗೆ ಬೇಸರ ಮೂಡಿಸಿದೆ. ಆದರೆ ಸೀರಿಯಲ್‌ನಲ್ಲಿ ಅವರ ಪಾತ್ರದ ಸಾವಿನ ಮೂಲಕ ಅಂತ್ಯವಾಗಿದೆ. ಸಂಜನಾ ಮತ್ತೆ ಸ್ನೇಹಾ ಪಾತ್ರದಲ್ಲಿ ನಟಿಸಬೇಕು ಎಂದು ಅಭಿಮಾನಿಗಳು ಬೇಡಿಕೆ ಇಟ್ಟಿದ್ದಾರೆ. ಅಷ್ಟರ ಮಟ್ಟಿಗೆ ಸ್ನೇಹಾ ಪಾತ್ರದಲ್ಲಿ ಸಂಜನಾ ಜೀವಿಸಿದ್ದರು. ಅವರ ಪಾತ್ರ ಅಂತ್ಯವಾದ್ಮೇಲೆ ನಟಿಯ ಭಾವನಾತ್ಮಕ ಪೋಸ್ಟ್ ನೋಡಿ ಅಭಿಮಾನಿಗಳು ಬೇಸರ ವ್ಯಕ್ತಪಡಿಸಿದ್ದರು.



ನಮಸ್ತೆ ಪ್ರಿಯರೇ, ಎಲ್ಲಾ ಫ್ಯಾನ್ಸ್‌ಗೆ ನಾನು ಒಂದು ಸುದ್ದಿಯನ್ನು ಹಂಚಿಕೊಳ್ಳಲು ಇಷ್ಟಪಡುತ್ತೇನೆ. ಪ್ರತಿಯೊಂದು ದೊಡ್ಡ ವಿಷಯವೂ ಕೊನೆಗೊಳ್ಳುತ್ತದೆ. ಅದರಂತೆ ಈ ಮಹತ್ವದ ಪಾತ್ರದೊಂದಿಗೆ ನನ್ನ ಪ್ರಯಾಣವೂ ಕೊನೆಗೊಂಡಿದೆ. ‘ಪುಟ್ಟಕ್ಕನ ಮಕ್ಕಳು’ ಸೀರಿಯಲ್‌ನ ಸ್ನೇಹಾ ಪಾತ್ರವು ಕೊನೆಯಾಗುತ್ತಿದೆ. ಕಳೆದ 3 ವರ್ಷಗಳಿಂದ ಸ್ನೇಹಾ ಪಾತ್ರವನ್ನು ನಿರ್ವಹಿಸುವುದು ನನ್ನ ನಟನಾ ವೃತ್ತಿಜೀವನದ ಅವಿಭಾಜ್ಯ ಅಂಗವಾಗಿತ್ತು. ಈ ಸಮಯ ಎಷ್ಟು ವೇಗವಾಗಿ ಮುಗಿಯಿತು ಅನ್ನೋದೇ ಗೊತ್ತಾಗಲಿಲ್ಲ. ಈ ಸೀರಿಯಲ್‌ನಲ್ಲಿ ನಾನು ಪ್ರಮುಖ ಪಾತ್ರವನ್ನು ನಿರ್ವಹಿಸಿದ್ದೆ. ಅದಕ್ಕಾಗಿ ನಾನು ಯಾವಾಗಲೂ ಕೃತಜ್ಞರಾಗಿರುತ್ತೇನೆ. ನನಗೆ ಈ ಉತ್ತಮ ಪಾತ್ರವನ್ನು ನೀಡಿದ್ದಕ್ಕಾಗಿ ಮತ್ತು ನನ್ನನ್ನು ಸ್ನೇಹಾ ಆಗಿ ಆಯ್ಕೆ ಮಾಡಿದ್ದಕ್ಕಾಗಿ ವಾಹಿನಿ ಮತ್ತು ಇಡೀ ತಂಡಕ್ಕೆ ಧನ್ಯವಾದಗಳನ್ನು ಹೇಳುತ್ತೇನೆ ಎಂದು ತಿಳಿಸಿದರು.

ಆದರೆ ಈಗ ನಾನು ಮುಂದುವರಿಯುವ ಸಮಯ ಬಂದಿದೆ. ಕೆಲವು ಅನಿವಾರ್ಯ ಸಂದರ್ಭಗಳು ಮತ್ತು ನನ್ನ ವೈಯಕ್ತಿಕ ಕಾರಣಗಳಿಂದಾಗಿ ನಾನು ಭಾರವಾದ ಹೃದಯದಿಂದ ಈ ಸೀರಿಯಲ್ ಅನ್ನು ತೊರೆಯುವ ಸ್ಥಿತಿ ನಿರ್ಮಾಣವಾಯಿತು. ನನ್ನ ಜೀವನದಲ್ಲಿ ಈ ಸಮಯದಲ್ಲಿ ಸಾಧಿಸಲು ನನಗೆ ಇತರ ಸವಾಲುಗಳಿವೆ. ಈ ಪ್ರಾಜೆಕ್ಟ್‌ನಲ್ಲಿನ ಈ ಪಾತ್ರಕ್ಕಾಗಿ ನಾನು ನಟಿನಾಗಿ ಪಡೆದ ಅಪಾರ ಪ್ರೀತಿ ಮತ್ತು ಮನ್ನಣೆಯು ನನ್ನ ದೊಡ್ಡ ಪ್ರಶಸ್ತಿ. ಅದು ನನ್ನೊಂದಿಗೆ ಶಾಶ್ವತವಾಗಿ ಉಳಿಯುತ್ತದೆ. ನಿಮ್ಮಲ್ಲಿ ಹೆಚ್ಚಿನವರು ಪಾತ್ರವು ಸಾಯುವುದನ್ನು ನೋಡಿ ದುಃಖಿತರಾಗಿದ್ದೀರಿ ಎಂದು ನನಗೆ ತಿಳಿದಿದೆ. ಆದರೆ, ನಾಯಕಿಯಾಗಿ ನಾನು ನಟಿಸಿದ್ದ ಪಾತ್ರವನ್ನು ಯಾರು ಬದಲಿಸಲು ಸಾಧ್ಯವಿಲ್ಲ ಎಂದು ಭಾವಿಸುತ್ತೇನೆ. ಅದನ್ನು ನಾವು ಪಾಸಿಟಿವ್ ಆಗಿ ತೆಗೆದುಕೊಳ್ಳೋಣ ಎಂದಿದ್ದರು.

ಸ್ವಲ್ಪ ಸಮಯದ ನಂತರ ವಿಭಿನ್ನ ಪಾತ್ರಗಳಲ್ಲಿ ನನ್ನ ಅಭಿಮಾನಿಗಳನ್ನು ಭೇಟಿಯಾಗಲು ಆಶಿಸುತ್ತಿದ್ದೇನೆ, ಆದರೆ, ಸದ್ಯದ ಮಟ್ಟಿಗೆ ನನ್ನ ಪಾತ್ರ ಅಂತ್ಯವಾಗಿದೆ. ಕಳೆದ 3 ವರ್ಷಗಳಲ್ಲಿ ಇಡೀ ಕರ್ನಾಟಕ ನನ್ನ ಮೇಲೆ ನೀಡಿದ ಪ್ರೀತಿ ಮತ್ತು ಬೆಂಬಲಕ್ಕೆ ಧನ್ಯವಾದಗಳು. ನನ್ನ ವೈಯಕ್ತಿಕ ಮತ್ತು ವೃತ್ತಿಪರ ಪ್ರಗತಿಗೆ ಸಂಬಂಧಿಸಿದಂತೆ ಹೆಚ್ಚಿನ ಅಪ್‌ಡೇಟ್‌ಗಳಿಗಾಗಿ ನನ್ನ ಸೋಶಿಯಲ್ ಮೀಡಿಯಾ ಫ್ಲಾಟ್‌ಫಾರ್ಮ್ ಅನ್ನು ನೋಡ್ತಾ ಇರಿ. ಈಗ ಪಾಸಿಟಿವ್ ನೋಟ್ ನೊಂದಿಗೆ ಮುಂದುವರಿಯೋಣ. ಏನಾಗಲಿ ಮುಂದೆ ಸಾಗು ನೀ.. ಮತ್ತೊಮ್ಮೆ ತೆರೆ ಮೇಲೆ ಭೇಟಿ ಆಗೋಣ ಬೇರೆ ವಿಭಿನ್ನ ಪಾತ್ರ ಜೊತೆಗೆ, ಶೀಘ್ರದಲ್ಲಿ ನನ್ನ ಅಭಿಮಾನಿಗಳೇ ನನ್ನ ಸ್ಫೂರ್ತಿ, ಶಕ್ತಿ. ಚಿಯರ್ಸ್ ಸಂಜನಾ ಬುರ್ಲಿ ಎಂದು ಅವರು ಬರೆದುಕೊಂಡಿದ್ದರು.



# ಬೃಹತ್ ಮೊತ್ತದತ್ತ ಭಾರತ

ಭಾರತ ಮತ್ತು ಆಸ್ಟ್ರೇಲಿಯಾ ನಡುವಣ ಬಾರ್ಡರ್-ಗವಾಸ್ಕರ್ ಟೆಸ್ಟ್ ಸರಣಿಯ ಮೊದಲ ಪಂದ್ಯವು ಮೂರನೇ ದಿನದಾಟಕ್ಕೆ ಕಾಲಿಟ್ಟಿದೆ. ಮೂರನೇ ದಿನದಾಟದ ಆರಂಭದಲ್ಲೇ ಭರ್ಜರಿ ಬ್ಯಾಟಿಂಗ್ ಪ್ರದರ್ಶಿಸಿರುವ ಯಶಸ್ವಿ ಜೈಸ್ವಾಲ್ ಶತಕ ಸಿಡಿಸಿ ಮಿಂಚಿದ್ದಾರೆ. ಈ ಶತಕದೊಂದಿಗೆ ಭಾರತ ತಂಡವು 304 ರನ್ ಗಳನ್ನು ಪೂರೈಸಿದೆ. ಅಲ್ಲದೆ ಮೊದಲ ಇನಿಂಗ್ಸ್ ನಲ್ಲಿನ 46 ರನ್ ಗಳ ಮುನ್ನಡೆಯೊಂದಿಗೆ ಟೀಮ್ ಇಂಡಿಯಾದ ಒಟ್ಟು ಸ್ಕೋರ್ 350 ದಾಟಿದೆ.

ಇತ್ತ ಭಾರತ ತಂಡದ ಸ್ಕೋರ್ 350ರ ಗಡಿದಾಟುತ್ತಿದ್ದಂತೆ ಅತ್ತ ಆಸ್ಟ್ರೇಲಿಯಾ ತಂಡಕ್ಕೆ ಸೋಲಿನ ಭೀತಿ ಎದುರಾಗಿರುವುದು ಸುಳ್ಳಲ್ಲ. ಏಕೆಂದರೆ ಟೆಸ್ಟ್ ಕ್ರಿಕೆಟ್ ನಲ್ಲಿ ಬಲಿಷ್ಠ ತಂಡ ಎನಿಸಿಕೊಂಡರೂ ಆಸೀಸ್ ಪಡೆ ತವರಿನಲ್ಲಿ ಬೃಹತ್ ಮೊತ್ತದ ಚೇಸಿಂಗ್ ವಿಷಯದಲ್ಲಿ ಈಗಲೂ ಹಿಂದುಳಿದಿದೆ. ಇದಕ್ಕೆ ಸಾಕ್ಷಿ ಈ ಅಂಕಿ ಅಂಶಗಳು

ಆಸ್ಟ್ರೇಲಿಯಾ ತಂಡವು ತವರಿನಲ್ಲಿ 15 ಟೆಸ್ಟ್ ಪಂದ್ಯಗಳಲ್ಲಿ 300+ ಸ್ಕೋರ್ ಗಳನ್ನು ಚೇಸ್ ಮಾಡಿದೆ.

ಈ ವೇಳೆ ಗೆದ್ದಿರುವುದು ಕೇವಲ 3 ಬಾರಿ ಮಾತ್ರ. ಅಂದರೆ 300+ ಸ್ಕೋರ್ ಬೆನ್ನತ್ತಿ ಮೂರು ಬಾರಿ ಮಾತ್ರ ಜಯ ಸಾಧಿಸುವಲ್ಲಿ ಯಶಸ್ವಿಯಾಗಿದೆ.

ಇನ್ನುಳಿದ 7 ಪಂದ್ಯಗಳಲ್ಲಿ ಆಸ್ಟ್ರೇಲಿಯಾ ತಂಡ ಸೋಲನುಭವಿಸಿದೆ. ಅಂದರೆ ಆಸೀಸ್ ಪಡೆಯು 300+ ಸ್ಕೋರ್ ಅನ್ನು ಚೇಸ್ ಮಾಡುವಲ್ಲಿ ಹಲವು ಬಾರಿ ಎಡವಿದೆ.





ಇದಾಗ್ಯೂ 300+ ಸ್ಕೋರ್ ಬೆನ್ನತ್ತಿ ಆ ಪಂದ್ಯವನ್ನು 5 ಬಾರಿ ಡ್ರಾ ಮಾಡಿಕೊಂಡಿದೆ. ಅಂದರೆ ಇಲ್ಲಿ ಆಸೀಸ್ ಪಡೆ ಸೋಲಿನ ಭೀತಿಯ ನಡುವೆ ಪಂದ್ಯವನ್ನು ಡ್ರಾನಲ್ಲಿ ಅಂತ್ಯಗೊಳಿಸಿದೆ ಎನ್ನಬಹುದು.

**ತವರಿನಲ್ಲಿ ಆಸ್ಟ್ರೇಲಿಯಾದ ಯಶಸ್ವಿ ಚೇಸಿಂಗ್:** ಆಸ್ಟ್ರೇಲಿಯಾ ತಂಡವು ತವರಿನಲ್ಲಿ ಚೇಸ್ ಮಾಡಿದ ಅತ್ಯಧಿಕ ಸ್ಕೋರ್ 404. ಅದು ಕೂಡ 1948 ರಲ್ಲಿ ಎಂಬುದು ಇಲ್ಲಿ ಉಲ್ಲೇಖಾರ್ಹ.

ಇದಾದ ಬಳಿಕ 1977 ರಲ್ಲಿ ಪರ್ತ್ ಟೆಸ್ಟ್ ನಲ್ಲಿ ಭಾರತದ ವಿರುದ್ಧ 342 ರನ್ ಚೇಸ್ ಮಾಡಿ 2 ವಿಕೆಟ್ ಗಳ ರೋಚಕ ಜಯ ಸಾಧಿಸಿತ್ತು.

ಹಾಗೆಯೇ 1999 ರಲ್ಲಿ ಅಡಿಲೇಡ್ ನಲ್ಲಿ ನಡೆದ ಪಾಕಿಸ್ತಾನ್ ವಿರುದ್ಧದ ಟೆಸ್ಟ್ ಪಂದ್ಯದಲ್ಲಿ 369 ರನ್ ಚೇಸ್ ಮಾಡಿ ಗೆಲುವು ದಾಖಲಿಸಿತ್ತು.

ಅಂದರೆ ಆಸ್ಟ್ರೇಲಿಯಾ ತಂಡವು ತವರಿನಲ್ಲಿ 350+ ರನ್ ಗಳನ್ನು ಚೇಸ್ ಮಾಡಿ ಗೆದ್ದು 25 ವರ್ಷಗಳೇ ಕಳೆದಿವೆ. ಇದೀಗ ಭಾರತದ ವಿರುದ್ಧ ಮೊದಲ ಇನಿಂಗ್ಸ್ ನಲ್ಲಿ ಕೇವಲ 104 ರನ್ ಗಳಿಗೆ ಮುಗ್ಗರಿಸಿರುವ ಆಸೀಸ್ ಪಡೆಗೆ ಟೀಮ್ ಇಂಡಿಯಾ 400+ ರನ್ ಗಳ ಬೃಹತ್ ಮೊತ್ತದ ಗುರಿ ನೀಡುವುದು ಖಚಿತ.

ಈ ಗುರಿಯೊಂದಿಗೆ ಭಾರತ ತಂಡವು ಕೊನೆಯ ಎರಡು ದಿನದಾಟಗಳಲ್ಲಿ ಪಂದ್ಯವನ್ನು ಗೆಲ್ಲಲು ಪ್ರಯತ್ನಿಸಿದರೆ, ಆಸ್ಟ್ರೇಲಿಯಾ ತಂಡವು ಡ್ರಾ ಮಾಡಿಕೊಳ್ಳಲು ಯತ್ನಿಸಲಿದೆ. ಈ ಯತ್ನ ಪ್ರಯತ್ನಗಳ ನಡುವೆ ಭರ್ಜರಿ ಬೌಲಿಂಗ್ ಸಂಘಟಿಸಿದರೆ ಟೀಮ್ ಇಂಡಿಯಾ ಗೆಲುವು ನಿಶ್ಚಿತ

# ಸಿಡಿಲಬ್ಬರದ ಶತಕ ಸಿಡಿಸಿದ ಶ್ರೇಯಸ್ ಅಯ್ಯರ್

ಸೈಯದ್ ಮುಷ್ತಾಕ್ ಅಲಿ ಟ್ರೋಫಿಯಲ್ಲಿ ಮುಂಬೈ ತಂಡವನ್ನು ಮುನ್ನಡೆಸುತ್ತಿರುವ ಶ್ರೇಯಸ್ ಅಯ್ಯರ್ ಸ್ಫೋಟಕ ಶತಕ ಸಿಡಿಸಿ ಮಿಂಚಿದ್ದಾರೆ. ಇಂದು ನಡೆದ ಗೋವಾ ವಿರುದ್ಧದ ಪಂದ್ಯದಲ್ಲಿ ಬೌಂಡರಿ ಹಾಗೂ ಸಿಕ್ಸರ್‌ಗಳ ಮಳೆಗರೆದ ಅಯ್ಯರ್ ಕೇವಲ 57 ಎಸೆತಗಳಲ್ಲಿ 11 ಬೌಂಡರಿ ಹಾಗೂ 10 ಭರ್ಜರಿ ಸಿಕ್ಸರ್‌ಗಳ ಸಹಿತ ಅಜೇಯ 130 ರನ್ ಕಲೆಹಾಕಿದರು. ಅಯ್ಯರ್ ಅವರ ಈ ಸ್ಫೋಟಕ ಇನ್ನಿಂಗ್ಸ್‌ನಿಂದಾಗಿ ಪಂದ್ಯದಲ್ಲಿ ಮೊದಲು ಬ್ಯಾಟ್ ಮಾಡಿದ ಮುಂಬೈ ತಂಡ 20 ಓವರ್‌ಗಳಲ್ಲಿ 4 ವಿಕೆಟ್ ನಷ್ಟಕ್ಕೆ 250 ರನ್ ಕಲೆಹಾಕಿತು. ಈ ಗುರಿ ಬೆನ್ನಟ್ಟಿದ ಗೋವಾ ತಂಡ ಗೆಲುವಿಗಾಗಿ ಹೋರಾಟ ನೀಡಿತ್ತಾದರೂ 26 ರನ್ ಗಳಿಂದ ಸೋಲೊಪ್ಪಿಕೊಳ್ಳಬೇಕಾಯಿತು.

**250 ರನ್ ಕಲೆಹಾಕಿದ ಮುಂಬೈ:** ಪಂದ್ಯದಲ್ಲಿ ಟಾಸ್ ಗೆದ್ದ ಗೋವಾ ಮೊದಲು ಬೌಲಿಂಗ್ ಆಯ್ಕೆ ಮಾಡಿಕೊಂಡಿತು. ಹೀಗಾಗಿ ಮೊದಲು ಬ್ಯಾಟಿಂಗ್ ಮಾಡಿದ ಮುಂಬೈ ತಂಡಕ್ಕೆ ಮೊದಲ ವಿಕೆಟ್‌ಗೆ ಕೇವಲ 9 ರನ್‌ಗಳ ಜೊತೆಯಾಟ ಸಿಕ್ಕಿತು. ಆಂಗ್ಕ್ರಿಶ್ ರಘುವಂಶಿ 6 ರನ್ ಬಾರಿಸಿ ಔಟಾದರು. ಆ ಬಳಿಕ ಜೊತೆಯಾದ ಪೃಥ್ವಿ ಶಾ ಹಾಗೂ ಶ್ರೇಯಸ್ ಉತ್ತಮ ಜೊತೆಯಾಟ ಕಟ್ಟಿದರು. ಈ ವೇಳೆ ಪೃಥ್ವಿ 33 ರನ್ ಕಲೆಹಾಕಿ ವಿಕೆಟ್ ಒಪ್ಪಿಸಿದರೆ, ನಾಯಕ ಶ್ರೇಯಸ್ ಮಾತ್ರ ಸ್ಫೋಟಕ ಬ್ಯಾಟಿಂಗ್ ಮಾಡಿದರು. ಅಯ್ಯರ್‌ಗೆ ಶಂಸ್ ಮುಲಾನಿ (42) ಅವರಿಂದ ಉತ್ತಮ ಜೊತೆಯಾಟವೂ ಸಿಕ್ಕಿತು. ಹೀಗಾಗಿ ತಂಡ 250 ರನ್ ಕಲೆಹಾಕಲು ಸಾಧ್ಯವಾಯಿತು.



**ಹೋರಾಟ ನೀಡಿದ ಗೋವಾ:** ಈ ಗುರಿ ಬೆನ್ನಟ್ಟಿದ ಗೋವಾ ಕೂಡ ಉತ್ತಮ ಹೋರಾಟ ನೀಡಿತು. ಆದಾಗ್ಯೂ ತಂಡಕ್ಕೆ ಮುಂಬೈ ನೀಡಿದ್ದ ಬೃಹತ್ ಮೊತ್ತ ಬೆನ್ನಟ್ಟಲು ಸಾಧ್ಯವಾಗಲಿಲ್ಲ. ತಂಡದ ಪರ ಆರಂಭಿಕ ಇಶಾನ್ ಗಡೇಕರ್ 16 ಎಸೆತಗಳಲ್ಲಿ 40 ರನ್ ಗಳ ಕಾಣಿಕೆ ನೀಡಿದರೆ, ಮಾಜಿ ಆರ್‌ಸಿಬಿ ಆಟಗಾರ ಸುಯಶ್ ಪ್ರಭುದೇಸಾಯಿ 52 ರನ್‌ಗಳ ಇನ್ನಿಂಗ್ಸ್ ಆಡಿದರು. ಕೊನೆಯಲ್ಲಿ ವಿಕಾಶ್ ಕನ್ವರ್ ಸಿಂಗ್ ಅಜೇಯ 47 ರನ್ ಬಾರಿಸಿದರಾದರೂ ತಂಡವನ್ನು ಗೆಲುವಿನ ದಡ ಮುಟ್ಟಿಸಲು ಸಾಧ್ಯವಾಗಲಿಲ್ಲ. ಅಂತಿಮವಾಗಿ ಗೋವಾ ತಂಡ 8 ವಿಕೆಟ್ ನಷ್ಟಕ್ಕೆ 224 ರನ್ ಕಲೆಹಾಕಲಷ್ಟೇ ಶಕ್ತವಾಯಿತು.

**ಸರಿಯಾದ ಸಮಯದಲ್ಲಿ ಸಿಡಿದ ಶತಕ:** ಐಪಿಎಲ್ ಹರಾಜಿಗೂ ಮುನ್ನ ಶ್ರೇಯಸ್ ಅಯ್ಯರ್ ಬಿರುಸಿನ ಶತಕ ಸಿಡಿಸಿರುವುದು ಅವರಿಗೆ ಭರ್ಜರಿ ಲಾಭ ತಂದುಕೊಟ್ಟಿದೆ. ಏಕೆಂದರೆ ನಾಯಕತ್ವ ಸ್ಥಾನದ ಪ್ರಮುಖ ಆಕಾಂಕ್ಷಿಯಾಗಿರುವ ಅಯ್ಯರ್ ಇದೀಗ ಯಾವ ತಂಡ ಸೇರಿದರೂ ಅವರಿಗೆ ನಾಯಕತ್ವ ಸಿಗುವುದು ಖಚಿತವಾಗಿದೆ. ಅಲ್ಲದೆ ಅವರ ನಾಯಕತ್ವದಲ್ಲಿ ಕಳೆದ ಬಾರಿ ಕೆಕೆಆರ್ ಪ್ರಶಸ್ತಿಯನ್ನು ಸಹ ಗೆದ್ದುಕೊಂಡಿತು. ಹೀಗಾಗಿ ಅಯ್ಯರ್ ಅವರನ್ನು ಖರೀದಿಸಲು ಹಲವು ತಂಡಗಳು ಜಿದ್ದಿಗೆ ಬೀಳುವುದು ಖಚಿತವಾಗಿದೆ.

# ಸಿಎಂಗೆ ಮುಹೂರ್ತ ಇಡ್ತಿದ್ರು

## ಈಗ ಯಾರು ಬದಲಾಗ್ತಾರೆ ನೋಡೋಣ

**ಶಿವಮೊಗ್ಗ:** ವಿಜಯೇಂದ್ರ ಸಿಎಂ ಬದಲಾವಣೆಗೆ ಮುಹೂರ್ತ ಇಡುತ್ತಿದ್ದರು. ಈಗ ಯಾರ ಬದಲಾವಣೆ ಆಗುತ್ತೆ ನೋಡೋಣ ಎಂದು ಶಿಕ್ಷಣ ಸಚಿವ ಮಧು ಬಂಗಾರಪ್ಪ ಬಿಜೆಪಿ ರಾಜ್ಯಾಧ್ಯಕ್ಷರ ಬದಲಾವಣೆಯ ಬಗ್ಗೆ ಭವಿಷ್ಯ ನುಡಿದಿದ್ದಾರೆ.

ಶಿವಮೊಗ್ಗದಲ್ಲಿ ಸುದ್ದಿಗಾರರೊಂದಿಗೆ ಅವರು ಮಾತನಾಡಿದರು. ಈ ವೇಳೆ, ವಿಜಯೇಂದ್ರ ಅವರು ಹೊಸ ವರ್ಷಕ್ಕೆ ಹೊಸ ಸಿಎಂ ಎನ್ನುತ್ತಿದ್ದರು. ಸೊಕ್ಕಿನ ಮಾತುಗಳನ್ನು ಆಡುತ್ತಿದ್ದರು. ಯಾರು ಯಾರಿಗೆ ಮುಹೂರ್ತ ಇಡುತ್ತಾರೆ ನೋಡೋಣ. ನಾನು ಯತ್ನಾಳ್ ಅವರಿಗೆ ಅಭಿನಂದನೆ ಹೇಳ್ತಿನಿ ಎಂದು ಅವರು ವ್ಯಂಗ್ಯವಾಡಿದ್ದಾರೆ.

ವಿಜಯೇಂದ್ರ ಅವರಿಗೆ ಭವಿಷ್ಯ ಹೇಳಿ ಅಭ್ಯಾಸ ಇದೆ. ಯಾವುದಾದರೂ ಬಸ್ಟ್ಯಾಂಡ್‌ನಲ್ಲಿ ಚೇರ್ ಹಾಕಿ ಕೊಡೋಣ, ಕುಳಿತುಕೊಂಡು ಭವಿಷ್ಯ ಹೇಳಲಿ. ಚುನಾವಣಾ ಪ್ರಚಾರದ ವೇಳೆ ಮುಡಾ ಹಗರಣ, ವಕ್ಫ್ ಹಗರಣ ಎಂದು ವಿಪಕ್ಷದವರು ಭಾಷಣ ಮಾಡಿದ್ದರು. ಅವರ ಭಾಷಣಕ್ಕೆ ಮತದಾರರು ಸೊಪ್ಪು ಹಾಕಲಿಲ್ಲ. ಬಿಜೆಪಿ ಹಾಗೂ ಜೆಡಿಎಸ್‌ನವರು ಸ್ವಾರ್ಥಕ್ಕೆ ಸ್ನೇಹ ಮಾಡುವವರು. ಅವರ ಸ್ವಾರ್ಥದ ಸ್ನೇಹ ಜನರಿಗೆ ಗೊತ್ತಾಗಿದೆ ಎಂದು ಕುಟುಕಿದ್ದಾರೆ.



ರಾಜ್ಯದ ಜನರು ಕಾಂಗ್ರೆಸ್ ಸರ್ಕಾರದ ಮೇಲೆ ವಿಶ್ವಾಸ ಇಟ್ಟು ಉಪಚುನಾವಣೆಯಲ್ಲಿ ಗೆಲ್ಲಿಸಿದ್ದಾರೆ. ಈ ಮೂಲಕ ಕಾರ್ಯಕರ್ತರು ಇತಿಹಾಸ ಸೃಷ್ಟಿ ಮಾಡಿದ್ದಾರೆ. ವಿಪಕ್ಷವನ್ನು ಮತದಾರರು ಕೆಳಮಟ್ಟಕ್ಕೆ ಕೂರಿಸಿದ್ದಾರೆ. ಮತದಾರರು ಒಳ್ಳೆಯ ರೀತಿಯಲ್ಲಿ ಉತ್ತರ ಕೊಟ್ಟಿದ್ದಾರೆ. ಮುಖ್ಯಮಂತ್ರಿಗಳಿಗೆ ಶುಭಾಶಯ ಕೋರುತ್ತೇನೆ ಎಂದಿದ್ದಾರೆ.

ಚನ್ನಪಟ್ಟಣ ಮತದಾರರು ಆಮಿಷಕ್ಕೆ ಒಳಗಾಗುವ ಮತದಾರರಲ್ಲ. ಯೋಗೇಶ್ವರ್ ಅವರು ಸ್ಥಳೀಯ ನಾಯಕರಾಗಿದ್ದು, ಗೆಲ್ಲುವ ವಿಶ್ವಾಸ ಇತ್ತು. ಸರ್ಕಾರ ನೂರಕ್ಕೆ ನೂರು ಜನರ ಜೊತೆ ಇದೆ ಎಂದಿದ್ದಾರೆ.

# ಇದು ಸಿದ್ದರಾಮಯ್ಯ ಆಡಳಿತಕ್ಕೆ ಜನ ಕೊಟ್ಟ ತೀರ್ಪಲ್ಲ

## ಹಗರಣ ಮುಚ್ಚಿ ಹೋಗಲ್ಲ

**ಮೈಸೂರು:** ಇದು ಸಿದ್ದರಾಮಯ್ಯ ಆಡಳಿತಕ್ಕೆ ಜನ ಕೊಟ್ಟ ತೀರ್ಪಲ್ಲ. ಈ ತೀರ್ಪಿನಿಂದ ಹಗರಣಗಳು ಮುಚ್ಚಿ ಹೋಗುವುದಿಲ್ಲ ಎಂದು ವಿಧಾನಪರಿಷತ್ ಸದಸ್ಯ ಹೆಚ್. ವಿಶ್ವನಾಥ್ ತಿಳಿಸಿದ್ದಾರೆ.

ಮೈಸೂರಿನಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ವಿಶ್ವನಾಥ್ ಉಪ ಚುನಾವಣೆಯಲ್ಲಿ ಮೂರು ಕ್ಷೇತ್ರಗಳಲ್ಲೂ ಕಾಂಗ್ರೆಸ್ ಗೆಲುವು ಸಾಧಿಸಿದ ಬಗ್ಗೆ ಅವರು ಪ್ರತಿಕ್ರಿಯೆ ನೀಡಿದ್ದಾರೆ. ಇದು ಸಿದ್ದರಾಮಯ್ಯ ಆಡಳಿತಕ್ಕೆ ಜನ ಕೊಟ್ಟ ತೀರ್ಪಲ್ಲ. ಈ ತೀರ್ಪಿನಿಂದ ಹಗರಣಗಳು ಮುಚ್ಚಿ ಹೋಗುವುದಿಲ್ಲ, ಗೆದ್ದವರು ಬೀಗುವ ಅಗತ್ಯವೂ ಇಲ್ಲ ಎಂದು ತಿವಿದಿದ್ದಾರೆ.

ಹಣ, ಹೆಂಡ, ಶಿಫಾರಸ್ಸು ಇಂತಹದರ ಮೇಲೆಯೆ ಚುನಾವಣೆ ನಡೆಯುವುದು. ಈ ಚುನಾವಣೆಯೂ ಅದೇ ರೀತಿ ನಡೆದಿದೆ. ಮುಡಾ ಹಗರಣ ಮೈಸೂರು ವ್ಯಾಪ್ತಿಯದ್ದು, ಹೀಗಾಗಿ ಅದು ಚನ್ನಪಟ್ಟಣದಲ್ಲಿ ವರ್ಕ್ ಆಗುತ್ತೆ ಅಂದುಕೊಳ್ಳುವುದು ಬೇಡ. ಸಿದ್ದರಾಮಯ್ಯ ಸರ್ಕಾರಕ್ಕೆ ಜನಕೊಟ್ಟ ತೀರ್ಪು ಇದಲ್ಲ. ಉಪಚುನಾವಣೆಗಳು ಯಾವ ರೀತಿ ನಡೆದಿದೆ ಎಂಬುದು ಎಲ್ಲರಿಗೂ ಗೊತ್ತಿದೆ ಎಂದು ಕಿಡಿಕಾರಿದ್ದಾರೆ.



**ಬಿಜೆಪಿ 4 ಗುಂಪು ಇರೋದು ಸತ್ಯ:** ಹಗರಣದ ಆರೋಪ ಹೊತ್ತವರು, ಈ ತೀರ್ಪುನಿಂದ ಖುಷಿ ಪಡುವ ಅಗತ್ಯ ಇಲ್ಲ. ನಿಖಿಲ್ ಸೋತಿದ್ದಾರೆ ಪ್ರಜಾತಂತ್ರ ವ್ಯವಸ್ಥೆಯಲ್ಲಿ ಇದೆಲ್ಲ ಸಾಮಾನ್ಯ. ಬಿಜೆಪಿಯವರು ಜೆಡಿಎಸ್ ಒಟ್ಟಾಗಿ ಕೆಲಸ ಮಾಡಿದರು, ಆದರೂ ಅದು ಫಲಕೊಟ್ಟಿಲ್ಲ. ಬಿಜೆಪಿ 4 ಗುಂಪು ಇರೋದು ಸತ್ಯ. ಅವಕಾಶ ಕೊಟ್ಟವರಿಗೆ ಮತ್ತೆ ಮತ್ತೆ ಅವಕಾಶ ಕೊಟ್ಟಿದ್ದಾರೆ ವಿಶ್ವನಾಥ್ ಹೇಳಿದ್ದಾರೆ.

# 2028ರ ಚುನಾವಣೆಯ ಗೆಲುವಿಗೆ ಮುನ್ನುಡಿ

**ಬೆಂಗಳೂರು:** ಸುಳ್ಳನ್ನು ಹೇಳಿ ಅಪ್ರಚಾರ ಮಾಡಿದ್ದಾರೆ. ಮತದಾರರು ಪ್ರಜ್ಞಾವಂತರಿದ್ದಾರೆ. ಉಪ ಚುನಾವಣೆಯ ಗೆಲುವು 2028ರ ವಿಧಾನಸಭೆ ಚುನಾವಣೆಗೆ ಗೆಲುವಿಗೆ ಮುನ್ನುಡಿ ಎಂದು ಡಿಸಿಎಂ ಡಿಕೆ ಶಿವಕುಮಾರ್ ಬಣ್ಣಿಸಿದ್ದಾರೆ.



ಚನ್ನಪಟ್ಟಣ, ಸಂಡೂರು, ಶಿಗ್ಗಾವಿ ಉಪಚುನಾವಣೆಯಲ್ಲಿ ಗೆಲುವು ಸಾಧಿಸಿದ ಬಳಿಕ ಕೆಪಿಸಿಸಿ ಕಚೇರಿಯಲ್ಲಿ ಸುದ್ದಿಗೋಷ್ಠಿ ನಡೆಸಿದ ಮಾತನಾಡಿದ ಅವರು, ಚನ್ನಪಟ್ಟಣದಲ್ಲಿ ನಿಖಿಲ್ ಸೋತಿದ್ದಾರೆ ಎಂದು ಹೇಳಲ್ಲ. ಕುಮಾರಸ್ವಾಮಿ ವಿರುದ್ಧ ಜನ ತೀರ್ಪು ನೀಡಿದ್ದಾರೆ. ಶಿಗ್ಗಾವಿಯಲ್ಲಿ ಭರತ್ ಬೊಮ್ಮಾಯಿ ಸೋಲು ಎಂದು ಹೇಳುವುದಿಲ್ಲ. ಅವರ ತಂದೆ ಬೊಮ್ಮಾಯಿ ಅವರದ್ದು ಎಂದು ಹೇಳುತ್ತೇನೆ ಎಂದರು.

ವಿಪಕ್ಷಗಳು ನಮ್ಮ ಗ್ಯಾರಂಟಿಯನ್ನು ಟೀಕೆ ಮಾಡಿದ್ದವು. ವಿಪಕ್ಷಗಳು ಟೀಕೆ ಮಾಡುವುದನ್ನು ಬಿಡಿ ಎಂದು ಜನ ತೀರ್ಪು ಕೊಟ್ಟಿದ್ದಾರೆ. ಜನರ ಬದುಕಿನ ಮೇಲೆ ರಾಜಕೀಯ ಮಾಡಬೇಡಿ ಅಂತ ಸಂದೇಶ ಜನ ಕೊಟ್ಟಿದ್ದಾರೆ. ಟೀಕೆಗಳು ಸಾಯ್ತುವೇ, ಕೆಲಸ ಉಳಿಯತ್ತವೆ. ಇದು ಮತ್ತೊಮ್ಮೆ ಸಾಬೀತಾಗಿದೆ ಎಂದು ಹೇಳಿದರು.

ಜನರಿಗೆ ಸರಿಯಾಗಿ ಗ್ಯಾರಂಟಿ ಹೋಗುತ್ತಿಲ್ಲ ಎಂದು ವಿಪಕ್ಷಗಳು ಟೀಕಿಸಿದ್ದವು. 56 ಸಾವಿರ ಕೋಟಿ ರೂ. ಗ್ಯಾರಂಟಿ ಗೆ ಕೊಟ್ಟಿದ್ದೇವೆ. ಪ್ರತಿ ಕ್ಷೇತ್ರಕ್ಕೆ 200 ಕೋಟಿ ರೂ. ಹಣ ಹೋಗಿದೆ. ಇದೆಲ್ಲವು ಅಭಿವೃದ್ಧಿ ಅಲ್ಲವೇ ಎಂದು ಪ್ರಶ್ನಿಸಿದರು.

Printed, Published & Owned by N.Venugopal Krishna, Printed at DASHAPRAMATHI MUDRANALAYA, No.433/1, Chikkavitalenahalli Village, Thagachagere Post, Kasaba Hobli, Channapatna Taluk, Ramanagar District, Pin-562160. Published at No.15, Ground Floor, 12th Block, 5th Main, Kumara Park (West), Behind BDA Head Office, Bengaluru-560020. Editor: N.Venugopal Krishna, Mobile No.+91 94835 89085, email: sanjemugilu@gmail.com